ಸಂಪುಟ: 05 ಸಂಚಿಕೆ: 308 ಪುಟಗಳು: 08 ಬುಧವಾರ 21 ಜನವರಿ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ದಿನಕ್ಕೆ ಒಮ್ಮೆಯಾದರೂ ನಿಮ್ಮೊಂದಿಗೆ ಮಾತನಾಡಿ. ಇಲ್ಲದಿದ್ದರೆ, ನೀವು ವಿಶ್ವದ ಅತ್ಯಂತ ಬುದ್ಧಿವಂತ ವ್ಯಕ್ತಿಯೊಂದಿಗೆ ಸಂವಹನ ಮಾಡುವುದನ್ನು ಬಿಟ್ಟುಬಿಡುತ್ತೀರಿ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 95 ಸಾವಿರ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಕೌಶಲ ಕಲಿಕೆ

• **ಉದಯವಾಹಿನಿ, ಬೆಂಗಳೂರು**

ಬ್ರಿಟಿಷ್ ಕೌನ್ಸಿಲ್, ಮೈಕ್ರೊಸಾಫ್ಟ್ ಸಹಯೋಗದಲ್ಲಿ 31 ಸರ್ಕಾರಿ ಪದವಿ, 29 ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಕೌಶಲ ಕಲಿಕೆ ಆರಂಭಿಸಲಾಗುತ್ತಿದ್ದು, 95,000 ವಿದ್ಯಾರ್ಥಿಗಳು ಪ್ರಯೋಜನ ಪಡೆಯಲಿದ್ದಾರೆ.

ಈ ಕುರಿತು ಮಂಗಳವಾರ ಒಪ್ಪಂದ ಮಾಡಿಕೊಂಡ ನಂತರ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, 'ಈಗಾಗಲೇ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಈ ಯೋಜನೆ ಜಾರಿಯಲ್ಲಿದ್ದು, ವಿದ್ಯಾರ್ಥಿಗಳಿಗೆ ಉನ್ನತ ಗುಣಮಟ್ಟದ ಅಧ್ಯಯನ ಸಂಪನ್ಮೂಲಗಳು, ಡಿಜಿಟಲ್ ಸಾಧನಗಳು ಮತ್ತು 'ಇಂಗ್ಲಿಷ್ ತರಬೇತಿ ಕ್ಲಬ್‌ಗಳ' ಮೂಲಕ ಇಂಗ್ಲಿಷ್ ಅಭ್ಯಾಸದ ಅವಕಾಶಗಳು ಲಭ್ಯವಾಗಲಿವೆ. ದೇಶ-ವಿದೇಶಗಳಲ್ಲಿ ಉದ್ಯೋಗ ಪಡೆಯುವ ಅರ್ಹತೆ ಹೆಚ್ಚಾಗಲಿದೆ' ಎಂದರು.

## ಜಿ ರಾಮ್ ಜಿ: ಇದೇ 26ಕ್ಕೆ ವಿಶೇಷ ಗ್ರಾಮಸಭೆ

• **ಉದಯವಾಹಿನಿ, ಬೆಂಗಳೂರು**

ನರೇಗಾ ಕುರಿತು ಚರ್ಚಿಸಲು ರಾಜ್ಯ ಸರ್ಕಾರ ಜ.22ರಿಂದ 31ರವರೆಗೆ ವಿಶೇಷ ಅಧಿವೇಶನ ಕರೆದಿದ್ದರೆ, ಅತ್ತ ಗ್ರಾಮೀಣಾಭಿವೃದ್ಧಿ ಇಲಾಖೆ ಆಯುಕ್ತರು, ಕೇಂದ್ರ ಸರ್ಕಾರ ಹೊಸದಾಗಿ ರೂಪಿಸಿದ 'ವಿಬಿ-ಜಿ ರಾಮ್ ಜಿ' ಕುರಿತು ಚರ್ಚಿಸಲು ಎಲ್ಲಾ ಗ್ರಾಮ ಪಂಚಾಯಿತಿಗಳು ಜ.26ರಂದು ವಿಶೇಷ ಗ್ರಾಮ ಸಭೆ ಆಯೋಜಿಸುವಂತೆ ಸುತ್ತೋಲೆ ಹೊರಡಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಆಯುಕ್ತರ ನಡೆಗೆ ಗ್ರಾಮೀಣ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ವಿವಿಧ ಸಂಘಟನೆಗಳ ಮುಖಂಡರು ಆಕ್ಷೇಪ ವ್ಯಕ್ತ ಪಡಿಸಿದ್ದಾರೆ. 'ನರೇಗಾ ರದ್ದು ಮಾಡಿ ಕೇಂದ್ರ ಸರ್ಕಾರ ಇತ್ತೀಚೆಗಷ್ಟೇ ಹೊಸ ಕಾಯ್ದೆ ತಂದಿದೆ. ನಿಯಮಗಳನ್ನೇ ರೂಪಿಸಿಲ್ಲ. ನಿಯಮ ರೂಪಿಸದೆ ಕಾಯ್ದೆಯ ಅನುಷ್ಠಾನ ಸಾಧ್ಯವಾಗದು. ಕರ್ನಾಟಕ ಸರ್ಕಾರ ಹೊಸ ಕಾಯ್ದೆಯನ್ನು ವಿರೋಧಿಸಿ, ವಿಶೇಷ ಅಧಿವೇಶನ ಕರೆದಿದೆ. ರಾಜ್ಯವ್ಯಾಪಿ ಹೋರಾಟ ನಡೆಸುವುದಾಗಿ ಕಾಂಗ್ರೆಸ್ ಹೇಳಿದೆ. ಇಂತಹ ಸಮಯದಲ್ಲಿ ಗ್ರಾಮೀಣಾಭಿವೃದ್ಧಿ ಆಯುಕ್ತರು ಹೊಸ ಕಾಯ್ದೆ ಕುರಿತು ಚರ್ಚಿಸಲು ವಿಶೇಷ ಗ್ರಾಮಸಭೆ ಆಯೋಜಿಸಲು ಸೂಚಿಸಿರುವುದು ಸರ್ಕಾರದ ದ್ವಂದ್ವ ನೀತಿಯಂತೆ ಕಾಣುತ್ತಿದೆ' ಎಂದು ಟೀಕಿಸಿದ್ದಾರೆ.

## ಶೇ 50ರ ಮೀಸಲು ಅನ್ವಯವೇ ನೇಮಕಾತಿ: ಹೈಕೋರ್ಟ್

• **ಉದಯವಾಹಿನಿ, ಬೆಂಗಳೂರು**

'ಚಾಲ್ತಿಯಲ್ಲಿರುವ ಶೇ 50ರ ಮೀಸಲಾತಿ ಅನ್ವಯ ಸರ್ಕಾರಿ ಹುದ್ದೆಗಳಿಗೆ ನೇಮಕಾತಿ ನಡೆಸುವ ವಿಚಾರದಲ್ಲಿ ಮಧ್ಯ ಪ್ರವೇಶಿಸುವುದಿಲ್ಲ. ಶೇ 56ಕ್ಕೆ ಮೀಸಲಾತಿ ಹೆಚ್ಚಿಸಿರುವ ಅನುಸಾರ ಹೊಸದಾಗಿ ಅಧಿಸೂಚನೆ ಹೊರಡಿಸಕೂಡದು' ಎಂದು ಪುನರುಚ್ಚರಿಸಿರುವ ಹೈಕೋರ್ಟ್, ಮಧ್ಯಂತರ ವ್ಯವಸ್ಥೆಗೆ ಸಂಬಂಧಿಸಿದಂತೆ ಮತ್ತು ಅಗತ್ಯಬಿದ್ದರೆ ಸೂಕ್ತ ಅರ್ಜಿ ಸಲ್ಲಿಸಲು ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿದೆ. ಶೇ 50ಕ್ಕೂ ಹೆಚ್ಚು ಪ್ರಮಾಣದ ಮೀಸಲಾತಿ ನೀಡುವುದನ್ನು ಆಕ್ಷೇಪಿಸಿ, 'ಡಾ.ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟ'ದ ರಾಜ್ಯ ಘಟಕದ ಅಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ, 'ಆಯ್ಕೆ ಪ್ರಕ್ರಿಯೆ ಮುಂದುವರಿಸಲು ಅವಕಾಶ ನೀಡಬೇಕು. ಹಾಲಿ ಅರ್ಜಿಗಳನ್ನು ನಿರ್ಧರಿಸುವತನಕ ಹೆಚ್ಚುವರಿ ಶೇ 6ರ ಮೀಸಲಾತಿ ಅನ್ವಯ ಮಾಡುವುದಿಲ್ಲ. ಶೇ 56ರ ಮೀಸಲಾತಿ ಪ್ರಕಾರ ನೇಮಕಾತಿ ನಡೆಸುತ್ತೇವೆ ಎಂದರು.


## ಮಹಿಳೆಯ ಬಗ್ಗೆ ಗೌರವವೇ ಇಲ್ಲವೇ: ಹೈಕೋರ್ಟ್ ತರಾಟೆ

• **ಉದಯವಾಹಿನಿ, ಬೆಂಗಳೂರು**

ಶಿಡ್ಲಘಟ್ಟ ಪೌರಾಯುಕ್ತ ಅಮೃತಾ ಗೌಡ ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಮತ್ತು ಬೆದರಿಕೆ ಒಡ್ಡಿದ ಆರೋಪ ಎದುರಿಸುತ್ತಿರುವ ಸ್ಥಳೀಯ ಕಾಂಗ್ರೆಸ್ ಮುಖಂಡ ಬಿ.ವಿ.ರಾಜೀವ್ ಗೌಡ ಅವರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿರುವ ಹೈಕೋರ್ಟ್, 'ನಾಲಗೆಯನ್ನು ಶುದ್ಧವಾಗಿ ಇಟ್ಟುಕೊಳ್ಳಬೇಕು. ಮಹಿಳೆ ಎಂದರೆ ಏನು ಗೌರವವೇ ಇಲ್ಲವೇ ಎಂದು ಕಿಡಿ ಕಾರಿದೆ. 'ನನ್ನ ವಿರುದ್ಧ ಶಿಡ್ಲಘಟ್ಟ ಟೌನ್ ಪೊಲೀಸ್ ಠಾಣೆಯಲ್ಲಿ ಜಿ.ಅಮೃತಾ ಗೌಡ ದಾಖಲಿಸಿರುವ ಎಫ್‌ಐಆರ್ ರದ್ದುಪಡಿಸಬೇಕು' ಎಂದು ಕೋರಿ ಬಿ.ವಿ.ರಾಜೀವ್ ಗೌಡ (46) ಸಲ್ಲಿಸಿರುವ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆಯಲ್ಲಿ ಅರ್ಜಿದಾರ ರಾಜೀವ್ ಗೌಡ ಪರ ವಾದ ಮಂಡಿಸಿದ ಪದಾಂಕಿತ ಹಿರಿಯ ವಕೀಲ ವಿವೇಕ್ ರೆಡ್ಡಿ ಅವರು, 'ಶಿಡ್ಲಘಟ್ಟದ ವ್ಯಕ್ತಿಯೊಬ್ಬರು 'ಕಲ್ಸ್' ಸಿನಿಮಾದಲ್ಲಿ ನಟಿಸಿದ್ದಾರೆ. ಆ ಕಲಾವಿದನನ್ನು ಬೆಂಬಲಿಸಿ ಬ್ಯಾನರ್ ಮತ್ತು ಕಟೌಟ್‌ಗಳನ್ನು ಅಳವಡಿಸಲಾಗಿತ್ತು.


## 45 ವರ್ಷಕ್ಕೆ ನಿತಿನ್ ನಬಿನ್‌ಗೆ ಅಧ್ಯಕ್ಷ ಪಟ್ಟ

# ಬಿಜೆಪಿ ಅಭಿವೃದ್ಧಿ ನೀತಿ ಹೊಸ ಸಾರಥಿ



### ಬಿಜೆಪಿ ಪಕ್ಷಕ್ಕೆ ಅಚ್ಚರಿ

ನಿರ್ಗಮಿತ ಬಿಜೆಪಿ ಮುಖ್ಯಸ್ಥ ಜೆ.ಪಿ. ನಡ್ಡಾ ಅವರು 2024ರ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಸಾಧನೆ ಸ್ಮರಿಸಿಕೊಂಡರು, ಅದು ನಿರಾಶಾದಾಯಕವಾಗಿತ್ತು. ಆದರೆ ಸಾರ್ವತ್ರಿಕ ಚುನಾವಣೆಯ ನಂತರ ಪಕ್ಷದ ಅದ್ಭುತ ಪುನರುಜ್ಜೀವನವನ್ನು ಎತ್ತಿ ತೋರಿಸಿತು. ನಿತಿನ್ ನಬಿನ್ ಪಕ್ಷದ ಹೊಸ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ನಡ್ಡಾ, 2024 ರ ಲೋಕಸಭಾ ಚುನಾವಣೆಯ ಫಲಿತಾಂಶಗಳು ನಮ್ಮ ನಿರೀಕ್ಷೆಗಳನ್ನು ಪೂರೈಸಲಿಲ್ಲ. ಈ ಫಲಿತಾಂಶಗಳು ಪಕ್ಷವನ್ನು ಮಾತ್ರವಲ್ಲದೆ ದೇಶದ ಸಾರ್ವಜನಿಕರನ್ನೂ ಅಚ್ಚರಿಗೊಳಿಸಿದವು. ದೇಶದ ಮತದಾರರ ಮನಸ್ಸಿನಲ್ಲಿ ನಿರಾಶೆಯ ಭಾವನೆ ಮೂಡಿತು. ಮತದಾರರಲ್ಲಿ ಅಸಮಾಧಾನದ ಭಾವನೆ ಬೆಳೆಯಿತು. ಮುಂಬರುವ ಯಾವುದೇ ಚುನಾವಣೆಯಲ್ಲಿ ಮೋದಿ ಜಿ ಅವರಿಗೆ ಸಂಪೂರ್ಣ ಆಶೀರ್ವಾದ ನೀಡುತ್ತಾರೆ.



ದೇಶದಲ್ಲಿ ಪಕ್ಷದ ಪ್ರಗತಿಗೆ ಕೆಲಸ ಮಾಡುತ್ತಾರೆ ಎಂದು ದೇಶದ ಮತದಾರರು ನಿರ್ಧರಿಸಿದ್ದಾರೆಂದು ನೀವು ನೋಡಿರಬೇಕು.2024ರ ಲೋಕಸಭಾ ಚುನಾವಣೆಯ ನಂತರ, ಪ್ರತಿಪಕ್ಷಗಳು ಹರಿಯಾಣ ಚುನಾವಣೆಯ ಬಗ್ಗೆ ಬಹಳ ವಿಶ್ವಾಸ ಹೊಂದಿದ್ದವು ಎಂದು ನನಗೆ ನೆನಪಿದೆ.

**ನಿತಿನ್ ನಬಿನ್ ಅವರಿಗೆ ಕರ್ನಾಟಕ ಬಿಜೆಪಿ ಅಭಿನಂದನೆ**



**ಬಿಜೆಪಿಗೆ ಹೊಸ ಯುಗ**

• **ಉದಯವಾಹಿನಿ, ನವದೆಹಲಿ**

ಬಿಜೆಪಿಯ ನೂತನ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಅಧಿಕಾರ ಸ್ವೀಕರಿಸಿದ್ದಾರೆ. 1980ರಲ್ಲಿ ಸ್ಥಾಪನೆಯಾದ ಬಿಜೆಪಿಯ 12ನೇ ರಾಷ್ಟ್ರೀಯ ಅಧ್ಯಕ್ಷರಾಗಿ ನಬಿನ್ ಅವರು ಅಧಿಕಾರ ವಹಿಸಿಕೊಂಡಿದ್ದು, 45ನೇ ವಯಸ್ಸಿಗೆ ಪಕ್ಷ ಮುನ್ನಡೆಸುವ ಜವಾಬ್ದಾರಿ ಹೊತ್ತಿದ್ದಾರೆ. ಕೇಂದ್ರ ಸಚಿವರೂ ಆಗಿರುವ ಜೆ.ಪಿ ನಡ್ಡಾ ಅವರ ಅಧಿಕಾರ ಅವಧಿ ಪೂರ್ಣಗೊಂಡ ಬೆನ್ನಲ್ಲೇ ಪಕ್ಷ ನಡೆಸಿದ ಚುನಾವಣೆಯಲ್ಲಿ ನಿತಿನ್ ಅವರು ಅವಿರೋಧವಾಗಿ ಆಯ್ಕೆಯಾದರು. ದೆಹಲಿಯಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ , ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಅವರ ಸಮ್ಮುಖದಲ್ಲಿ ನಬಿನ್, ನೂತನ ಅಧ್ಯಕ್ಷರಾಗಿ ಪ್ರಮಾಣ



### ಹೊಸ ತಲೆಮಾರಿನತ್ತ ಹೆಜ್ಜೆ ಹಾಕಿದ ಬಿಜೆಪಿ

ಸ್ವೀಕರಿಸಿದ್ದಾರೆ. ಬಳಿಕ ಗಣ್ಯರು ಶುಭ ಹಾರೈಸಿದ್ದಾರೆ. ಬಿಜೆಪಿ ಸಾಂಸ್ಥಿಕ ಚುನಾವಣೆಯ ಚುನಾವಣಾಧಿಕಾರಿ ಕೆ. ಲಕ್ಷ್ಮಣ್ ಅವರು ನಬಿನ್ ಅವರ ಆಯ್ಕೆಯನ್ನ ಘೋಷಿಸಿ, ಪ್ರಮಾಣಪತ್ರ ನೀಡಿದರು. ಈ ಮೊದಲು ನಬಿನ್ ಅವರನ್ನ ಪಕ್ಷದ ಕಾರ್ಯಾಧ್ಯಕ್ಷರಾಗಿ ಬಿಜೆಪಿ ನೇಮಿಸಿತ್ತು. ನೂತನ ಹುದ್ದೆಗೆ ಸ್ಪರ್ಧೆಗೂ ಮೊದಲ ಅವರು ಬಿಹಾರ ಸರ್ಕಾರದಲ್ಲಿ ಕಾನೂನು ಮತ್ತು ನ್ಯಾಯ, ವಸತಿ ಖಾತೆ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು.

**ನಿತಿನ್ ನಬಿನ್ ಯಾರು:** ಬಿಹಾರ ಬಿಜೆಪಿಯ ಹಿರಿಯ ನಾಯಕ, ಪಾಟ್ನಾದಿಂದ 4 ಬಾರಿ ಎಂಎಲ್‌ಎ ಆಗಿದ್ದ ದಿವಂಗತ ನಬಿನ್ ಕಿಶೋರ್ ಪ್ರಸಾದ್ ಸಿಂಹ ಅವರ ಮಗನಾಗಿರುವ ನಿತಿನ್, ತಂದೆಯ ನಿಧನದ ಬಳಿಕ ಬಿಹಾರದ ಬಿಜೆಪಿಯಲ್ಲಿ ಪ್ರಭಾವಿ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಆರ್‌ಎಸ್‌ಎಸ್ ಜೊತೆಗೂ ಅವಿನಾಭಾವ ಸಂಬಂಧ ಹೊಂದಿರುವ ನಬಿನ್, ಸಂಘಟನಾ ಚತುರ ಅಂತಲೇ ಗುರುತಿಸಿಕೊಂಡಿದ್ದಾರೆ.

**ಪ್ರಮಾಣಕ್ಕೂ ಮುನ್ನ ಟೆಂಪಲ್ ರನ್:** ಪ್ರಮಾಣವಚನಕ್ಕೂ ಮುನ್ನ ದೇವಾಲಯಗಳು ಮತ್ತು ಬಂಗಲಾ ಸಾಹಿಬ್ ಗುರುದ್ವಾರಕ್ಕೆ ಬೆಳಗ್ಗೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು. ದೆಹಲಿ ಘಟಕದ ಅಧ್ಯಕ್ಷ ವೀರೇಂದ್ರ ಸಚ್‌ದೇವ್ ಮತ್ತು ದೆಹಲಿ ಸಚಿವರಾದ ಪರ್ವೇಶ್ ಸಾಹೀಬ್ ಸಿಂಗ್ ಮತ್ತು ಮಂಜಿಂದರ್ ಸಿಂಗ್ ಸಿರ್ಸಾ ಇದ್ದರು. ಮೊದಲು ಜಂಡೇವಾಲ ದೇವಾಲಯದಲ್ಲಿ ನಿತಿನ್ ಅವರು ಪ್ರಾರ್ಥನೆ ಸಲ್ಲಿಸಿದರು. ನಂತರ ಮಂದಿರ್ ಮಾರ್ಗದಲ್ಲಿರುವ ವಾಲ್ಮೀಕಿ ದೇವಾಲಯದಲ್ಲಿ ಪೂಜೆ ಸಲ್ಲಿಸಿದರು. ಕನೌಟ್‌ನಲ್ಲಿರುವ ಪ್ರಾಚೀನ ಹನುಮಾನ್ ಮಂದಿರ,ಬಾಂಗ್ಲಾ ಸಾಹಿಬ್ ಗುರುದ್ವಾರಕ್ಕೆ ಭೇಟಿ ಪ್ರಾರ್ಥನೆ ಸಲ್ಲಿಸಿದರು ಎಂದು ಬಿಜೆಪಿ ಹೇಳಿದೆ.

### ಬಿಜೆಪಿಯಲ್ಲಿಗ ಹೊಸ ತಲೆಮಾರು ಶುರು

ರಾಜನಾಥ್‌ಸಿಂಗ್, ಗಡ್ಕರಿ, ಅಮಿತ್ ಶಾ, ನಡ್ಡಾ ಬಳಿಕ ಈಗ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಆಯ್ಕೆ ಆಗಿದ್ದಾರೆ. ಕೇವಲ 45 ವರ್ಷಕ್ಕೆ ಪಕ್ಷಕ್ಕೆ ಮುನ್ನಡೆಸುವ ಜವಾಬ್ದಾರಿ ನೀಡಲಾಗಿದೆ. ಅಧ್ಯಕ್ಷ ಸ್ಥಾನಕ್ಕೆ ಇವತ್ತು ನಿತಿನ್ ನಬಿನ್ ಒಬ್ಬರೇ ನಾಮಪತ್ರ ಸಲ್ಲಿಕೆ ಮಾಡಿದ್ದು, ಮೋದಿ , ಶಾ, ನಡ್ಡಾ ಸೇರಿದಂತೆ ಎಲ್ಲ ನಾಯಕರು ಅನುಮೋದಿಸಿದ್ದಾರೆ.ಬಿಹಾರ ಬಿಜೆಪಿಯ ಹಿರಿಯ ನಾಯಕ, ಪಾಟ್ನಾದಿಂದ 4 ಬಾರಿ ಎಂಎಲ್‌ಎ ಆಗಿದ್ದ ದಿವಂಗತ ನಬಿನ್ ಕಿಶೋರ್ ಪ್ರಸಾದ್ ಸಿಂಹ ಅವರ ಮಗನಾಗಿರುವ ನಿತಿನ್, ತಂದೆಯ ನಿಧನದ ಬಳಿಕ ಬಿಹಾರದ ಬಿಜೆಪಿಯಲ್ಲಿ ಪ್ರಭಾವಿ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಹಿರಿಯ ನಾಯಕರು ಕೂಡ ಸಾಕ್ಷಿಯಾಗಿದ್ದಾರೆ.ರ್‌ಎಸ್‌ಎಸ್ ಜೊತೆಗೂ ಅವಿನಾಭಾವ ಸಂಬಂಧ ಹೊಂದಿರುವ ನಬಿನ್, ಸಂಘಟನಾ ಚತುರ ಅಂತಲೇ ಗುರುತಿಸಿಕೊಂಡಿದ್ದಾರೆ. ಹಳೆತಲೆಮಾರಿನ ನಾಯಕರು ಹೊಸ ತಲೆಮಾರಿಗೆ ದಾರಿ ಮಾಡಿಕೊಡಬೇಕಿದೆ.

### ನಿತಿನ್ ನಬಿನ್ ನನ್ನ ಬಾಸ್

ನಬಿನ್ ನನ್ನ ಬಾಸ್, ನಾನು ಕೇವಲ ಪಕ್ಷದ ಕಾರ್ಯಕರ್ತ ಎಂದು ಹೇಳಿದ್ದಾರೆ. ಬಿಜೆಪಿ ಒಂದು ಸಂಸ್ಕೃತಿ. ಬಿಜೆಪಿ ಒಂದು ಕುಟುಂಬ. ಇಲ್ಲಿ, ನಮ್ಮ ಸಂಬಂಧಗಳು ಸದಸ್ಯತ್ವವನ್ನು ಮೀರಿವೆ. ನಮ್ಮ ಅಧ್ಯಕ್ಷರು ಬದಲಾಗುತ್ತಾರೆ, ಆದರೆ ನಮ್ಮ ಆದರ್ಶಗಳು ಬದಲಾಗುವುದಿಲ್ಲ. ನಾಯಕತ್ವ ಬದಲಾಗುತ್ತದೆ, ಆದರೆ ನಿರ್ದೇಶನ ಒಂದೇ ಆಗಿರುತ್ತದೆ. ದೇಶದ ಪ್ರತಿಯೊಂದು ಮೂಲೆಯ ಜನರು ಬಿಜೆಪಿಯೊಂದಿಗೆ ಇದ್ದಾರೆ, ಬಿಜೆಪಿಗೆ ಸೇರುತ್ತಿದ್ದಾರೆ. ನಿತಿನ್ ನಬಿನ್ ಅವರಿಗೆ ಯುವ ಶಕ್ತಿ ಮತ್ತು ಸಂಘಟನೆಯಲ್ಲಿ ಕೆಲಸ ಮಾಡುವ ದೀರ್ಘ ಅನುಭವವಿದೆ, ಇದು ಪ್ರತಿಯೊಬ್ಬ ಪಕ್ಷದ ಕಾರ್ಯಕರ್ತರಿಗೂ ಉಪಯುಕ್ತವಾಗಲಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಮುಂದಿನ 25 ವರ್ಷಗಳು ಬಹಳ ಮುಖ್ಯ. ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಬೇಕಾದ ಅವಧಿ ಇದು.

1. ಬಿಜೆಪಿ ನೂತನ ರಾಷ್ಟ್ರೀಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ನಿತಿನ್ ನಬಿನ್.
2. ನೂತನ ರಾಷ್ಟ್ರೀಯ ಅಧ್ಯಕ್ಷರಿಗೆ ಕರ್ನಾಟಕ ಬಿಜೆಪಿ ವತಿಯಿಂದ ಅಭಿನಂದನೆ.
3. ನೂತನ ಅಧ್ಯಕ್ಷರನ್ನು ಅಭಿನಂದಿಸುತ್ತಲೇ ಕಾಂಗ್ರೆಸ್‌ಗೆ ಟಾಂಗ್ ನೀಡಿದ ಬಿಜೆಪಿ.

### ನಿತಿನ್ ನಬಿನ್‌ಗೆ Z ಶ್ರೇಣಿಯ ಭದ್ರತೆ

ಬಿಜೆಪಿ ನೂತನ ಅಧ್ಯಕ್ಷ ನಿತಿನ್ ನಬಿನ್ ಅವರಿಗೆ ಕೇಂದ್ರ ಸರ್ಕಾರ ಉನ್ನತ ದರ್ಜೆಯ ವಿಐಪಿ ಭದ್ರತಾ ವ್ಯವಸ್ಥೆ ಒದಗಿಸಿದೆ. ಕೇಂದ್ರ ಮೀಸಲು ಪೊಲೀಸ್ ಪಡೆಯ ವಿಐಪಿ ಭದ್ರತಾ ವಿಭಾಗವು ನಬಿನ್ ಅವರಿಗೆ Z ಶ್ರೇಣಿಯ ಭದ್ರತೆಯನ್ನು ಒದಗಿಸಲಿದೆ. ಬಿಜೆಪಿಯ ನೂತನ ರಾಷ್ಟ್ರೀಯ ಅಧ್ಯಕ್ಷರಾಗಿ ಅವರ ಹೆಸರನ್ನು ಘೋಷಿಸಿದ ಬಳಿಕ ಅವರಿಗೆ ಭದ್ರತೆ ನೀಡುವಂತೆ ಕೇಂದ್ರ ಗೃಹ ಸಚಿವಾಲಯವು ಸಿಆರ್‌ಪಿಎಫ್‌ಗೆ ಸೂಚಿಸಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಿರ್ಗಮಿತ ಅಧ್ಯಕ್ಷ ಜೆ.ಪಿ ನಡ್ಡಾ ಅವರಿಗೂ ಸರ್ಕಾರ ಈ ಹಿಂದೆ ಇದೇ ರೀತಿಯ ಭದ್ರತೆ ಒದಗಿಸಿತ್ತು. ಐದು ಬಾರಿ ಬಿಹಾರ ಶಾಸಕರಾಗಿರುವ ನಬಿನ್ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಈ ಮೂಲಕ ಉನ್ನತ ಹುದ್ದೆಯನ್ನು ಅಲಂಕರಿಸಿದ ಅತ್ಯಂತ ಕಿರಿಯ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ನಿತಿನ್ ನಬಿನ್ ಅವರನ್ನು ಶ್ಲಾಘಿಸಿದ ಪ್ರಧಾನಿ, ಅವರು ಪಕ್ಷದ ಪರಂಪರೆಯನ್ನು ಮುಂದುವರಿಸುವ ಮಿಲೇನಿಯಲ್. ಅವರು ನನ್ನ ಬಾಸ್, ನಾನು ಬಿಜೆಪಿಯ ಕಾರ್ಯಕರ್ತ ಎಂದು ಬಣ್ಣಿಸಿದ್ದಾರೆ.

# ಅಧಿವೇಶನದಲ್ಲಿ ಕೇಂದ್ರಕ್ಕೆ ಠಕ್ಕರ್ ಕೊಡಲು ಕೈ ಪ್ಲ್ಯಾನ್

## ಜಿ ರಾಮ್ ಜಿ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿ ನಿರ್ಣಯ ಕೈಗೊಳ್ಳುವುದು ಸರ್ಕಾರದ ಉದ್ದೇಶ

• **ಉದಯವಾಹಿನಿ,ಬೆಂಗಳೂರು**

ಜನವರಿ 22 ರಿಂದ ವಿಧಾನಮಂಡಲ ಜಂಟಿ ಅಧಿವೇಶನ ಆರಂಭಗೊಳ್ಳಲಿದೆ. ಕೇಂದ್ರ ಸರ್ಕಾರ ಮನರೇಗಾ ಯೋಜನೆ ರದ್ದುಗೊಳಿಸಿ ಜಿ ರಾಮ್ ಜಿ ಯೋಜನೆಯನ್ನು ಜಾರಿಗೆ ತಂದಿರುವ ವಿರುದ್ಧವಾಗಿ ಜನಾಭಿಪ್ರಾಯ ರೂಪಿಸಲು ಸರ್ಕಾರ ಜಂಟಿ ಅಧಿವೇಶನವನ್ನು ಬಳಕೆ ಮಾಡಿಕೊಳ್ಳಲಿದೆ. ಮನರೇಗಾ ಸಾಧನಗಳು ಹಾಗೂ ಜಿ ರಾಮ್ ಜಿ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿ ನಿರ್ಣಯ ಕೈಗೊಳ್ಳುವುದು ಸರ್ಕಾರದ ಉದ್ದೇಶವಾಗಿದೆ. ಆದರೆ, ಸರ್ಕಾರದ ವಿರುದ್ಧ ವಿಪಕ್ಷ ಬಿಜೆಪಿಗೆ ಸದನದಲ್ಲಿ ಧ್ವನಿ ಎತ್ತಲು ನಾನಾ ಅಸ್ತ್ರಗಳಿದ್ದು, ಅದನ್ನು ಯಾವ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಲಿದೆ ಎಂಬುವುದು ಕುತೂಹಲ ಕೆರಳಿಸಿದೆ.

**ಜಿ ರಾಮ್ ಜಿ ಗೆ ಠಕ್ಕರ್:** ಜನವರಿ 22 ರಿಂದ ಆರಂಭಗೊಳ್ಳಲಿರುವ ಜಂಟಿ ಅಧಿವೇಶನದಲ್ಲಿ ಜಿ ರಾಮ್ ಜಿಗೆ ಠಕ್ಕರ್ ನೀಡುವುದು ಸರ್ಕಾರದ ಉದ್ದೇಶ. ರಾಜ್ಯಪಾಲರ ಭಾಷಣದಲ್ಲಿ ನರೇಗಾ ಮತ್ತು ಜಿ ರಾಮ್ ಜಿ ತುಲನೆ ಮಾಡಿ ವಿಪಕ್ಷ ಮತ್ತು ಕೇಂದ್ರ ಸರ್ಕಾರಕ್ಕೆ ತಿರುಗೇಟು ನೀಡುವುದು ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ಸಿದ್ದತೆಗಳನ್ನು ಮಾಡಿಕೊಂಡಿದೆ. ವಿಶೇಷ ಅಧಿವೇಶನದ




ಮಾದರಿಯಲ್ಲಿ ಜಂಟಿ ಅಧಿವೇಶನವನ್ನು ಬಳಸಿಕೊಳ್ಳುವುದು ಸರ್ಕಾರದ ಯೋಜನೆಯಾಗಿದೆ. ಈ ನಿಟ್ಟಿನಲ್ಲಿ ಆಡಳಿತ ಮತ್ತು ವಿಪಕ್ಷಗಳ ನಡುವೆ ನರೇಗಾ ಹಾಗೂ ಜಿ ರಾಮ್ ಜಿ ದೊಡ್ಡ ಮಟ್ಟದ ಚರ್ಚೆಗೆ ಆಸ್ಪದ ಕೊಡಬಹುದು.

**ಸರ್ಕಾರದ ವೈಫಲ್ಯಗಳೇ ಅಸ್ತ್ರ:** ಕೇಂದ್ರದ ವಿರುದ್ಧ ಜಿ ರಾಮ್ ಜಿ ಅಸ್ತ್ರಕ್ಕೆ ಪ್ರತ್ಯುತ್ತರವಾಗಿ ಸರ್ಕಾರದ ವೈಫಲ್ಯಗಳನ್ನು ಸದನದ ಮುಂದಿಡಲು ಬಿಜೆಪಿ ಮತ್ತು ಜೆಡಿಎಸ್ ಮುಂದಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ, ಪೊಲೀಸ್ ಇಲಾಖೆಯ ವಿರುದ್ಧದ ಆರೋಪಗಳು, ನಾಯಕತ್ವ ಬದಲಾವಣೆ , ಕಾಂಗ್ರೆಸ್ ಭಿನ್ನಮತ , ಬೆಂಗಳೂರಿನಲ್ಲಿ ಟ್ರಾಫಿಕ್ ಸಮಸ್ಯೆ, ರಸ್ತೆ ಗುಂಡಿಗಳ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟ ರೂಪಿಸಲು ಬಿಜೆಪಿ ಮತ್ತು ಜೆಡಿಎಸ್ ಮುಂದಾಗಿದೆ.

**ಕೋಗಿಲು ಅಸ್ತ್ರ:** ಈ ನಡುವೆ ಕೋಗಿಲು ವಿಚಾರವಾಗಿ ಸರ್ಕಾರದ ವಿರುದ್ಧ ಬ್ರಹ್ಮಾಸ್ತ್ರವನ್ನು ಪ್ರಯೋಗ ಮಾಡಲು ಬಿಜೆಪಿ ಸಿದ್ದತೆ ನಡೆಸುತ್ತಿದೆ. ಕೋಗಿಲು ಬಡಾವಣೆಯಲ್ಲಿ ಬಾಂಗ್ಲಾ ವಲಸಿಗರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಬೆಂಗಳೂರು ನಗರದಲ್ಲೇ ಬಾಂಗ್ಲಾ ವಲಸಿಗರು ಸೇರಿಕೊಂಡಿದ್ದಾರೆ ಎಂಬ ಆರೋಪಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲು ಬಿಜೆಪಿ ಮುಂದಾಗಿದೆ.

ಈಗಾಗಲೇ ಕೋಗಿಲು ಬಡಾವಣೆ ವಿಚಾರವಾಗಿ ಬಿಜೆಪಿ ಸತ್ಯಶೋಧನಾ ವರದಿಯನ್ನು ಸಿದ್ದಪಡಿಸಿಕೊಂಡಿದೆ. ಕೋಗಿಲುನಲ್ಲಿ ಬಾಂಗ್ಲಾ ವಲಸಿಗರು ಇದ್ದಾರೆ ಎಂದು ಆರೋಪ ಮಾಡಿದೆ. ಇದಕ್ಕೆ ಉತ್ತರ ನೀಡುವುದು ಕೂಡಾ ಸರ್ಕಾರಕ್ಕೆ ಸವಾಲಾಗಿದೆ.

ಇದಷ್ಟೇ ಅಲ್ಲ, ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪವನ್ನು ಮುಂದಿಟ್ಟುಕೊಂಡು ಅಬಕಾರಿ ಸಚಿವ ಆರ್ ಬಿ ತಿಮ್ಮಾಪೂರ ಅವರ ರಾಜೀನಾಮೆಗೆ ವಿಪಕ್ಷ ಆಗ್ರಹಿಸಬಹುದು. ಈಗಾಗಲೇ ದಾಖಲೆಗಳನ್ನು ಸಿದ್ದಪಡಿಸಿಕೊಂಡಿದೆ. ಹೀಗಾಗಿ ಸದನದಲ್ಲಿ ಈ ವಿಚಾರ ಸದ್ದು ಗದ್ದಲಕ್ಕೆ ಕಾರಣ ಆಗಬಹುದು.

# ವೀರಶೈವ ಲಿಂಗಾಯತ ಮಹಾಸಭಾ ನೂತನ ಅಧ್ಯಕ್ಷರಾಗಿ ಈಶ್ವರ ಖಂಡ್ರೆ

## ■ ಭೀಮಣ್ಣ ಖಂಡ್ರೆಯವರ ಮಾರ್ಗದಲ್ಲೇ ನಡೆದು, ಸಮುದಾಯದ ಏಳಿಗೆಗಾಗಿ ಶ್ರಮಿಸುತ್ತಿರುವ ಈಶ್ವರ ಬಿ ಖಂಡ್ರೆ

• **ಉದಯವಾಹಿನಿ, ಬೆಂಗಳೂರು**

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಸಭಾದ ರಾಜ್ಯಾಧ್ಯಕ್ಷ ಶಂಕರ ಮಹಾದೇವ ಬಿದರಿ ತಿಳಿಸಿದರು. ಬೆಂಗಳೂರಿನಲ್ಲಿಂದು ನಡೆದ ಸಭಾದ ಕಾರ್ಯಕಾರಿಣಿ ಸಭೆಯಲ್ಲಿ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಸಭಾದ ಮಹಾ ಪ್ರಧಾನ ಕಾರ್ಯದರ್ಶಿಯಾಗಿರುವ ಈಶ್ವರ ಬಿ ಖಂಡ್ರೆ ಅವರನ್ನು ಆಯ್ಕೆ ಮಾಡಲು ನಿರ್ಣಯ ಕೈಗೊಳ್ಳಲಾಯಿತು ಎಂದರು.

### ಕಾರ್ಯಕಾರಿ ಸಮಿತಿ ಸಭೆಯಲ್ಲಿ ಅವಿರೋಧ ಆಯ್ಕೆ

ಕಾರ್ಯಕಾರಿ ಸಮಿತಿ ಸಭೆಯಲ್ಲಿ ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ಈಶ್ವರ ಬಿ ಖಂಡ್ರೆ ಅವರನ್ನು ಆಯ್ಕೆ ಮಾಡಲು ಎಲ್ಲಾ ಸದಸ್ಯರೂ ಒಮ್ಮತ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ನಡೆಯಿತು. ಕಳೆದ 13 ವರ್ಷಗಳಿಂದ ಮಹಾಸಭಾದ ರಾಷ್ಟ್ರೀಯ ಮಹಾ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ ಈಶ್ವರ ಬಿ ಖಂಡ್ರೆ ಅವರು ಕಳೆದ ಒಂದು ವರ್ಷದಿಂದ ಹಿರಿಯ ಉಪಾಧ್ಯಕ್ಷರ ಪ್ರಭಾರ ಹೊಣೆಯನ್ನೂ ನಿಭಾಯಿಸಿದ್ದರು.

ತಮ್ಮ ಪೂಜ್ಯ ತಂದೆ ಭೀಮಣ್ಣ ಖಂಡ್ರೆಯವರ ಮಾರ್ಗದಲ್ಲೇ ನಡೆದು, ಸಮುದಾಯದ ಏಳಿಗೆಗಾಗಿ ಶ್ರಮಿಸುತ್ತಿರುವ ಈಶ್ವರ ಬಿ ಖಂಡ್ರೆ, ಈಗ ಮಹಾ ಸಭಾದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಸಮಾಜಕ್ಕೆ ಹೊಸ ಭರವಸೆ ಮೂಡಿಸಿದ್ದಾರೆ.

ತಮ್ಮನ್ನು ಮಹಾಸಭಾದ ನೂತನ ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದಕ್ಕಾಗಿ ಕಾರ್ಯಕಾರಿ ಸಮಿತಿಗೆ ಧನ್ಯವಾದ ಅರ್ಪಿಸಿದ ಅವರು, ವೀರಶೈವ ಮತ್ತು ಲಿಂಗಾಯತ ಬೇರೆ ಬೇರೆಯಲ್ಲ. ಹೀಗಾಗಿ ಸಮಾಜದ ಎಲ್ಲಾ ಒಳ ಪಂಗಡಗಳನ್ನು ಒಗ್ಗೂಡಿಸುವುದು ಅತ್ಯಂತ ಮುಖ್ಯವಾಗಿದ್ದು, ತಾವು ಈ ನಿಟ್ಟಿನಲ್ಲಿ ಶ್ರಮಿಸುವುದಾಗಿ ತಿಳಿಸಿದರು.



ವೀರಶೈವ ಲಿಂಗಾಯತ ಸಮಾಜ ಮತ್ತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಈ ನಾಡಿನ ಅಭಿವೃದ್ಧಿಗೆ ನೀಡಿರುವ ಕೊಡುಗೆ ಅನುಪಮವಾದ್ದು ಎಂದು ತಿಳಿಸಿದ ಅವರು, ನಮ್ಮ ಸಮಾಜದಲ್ಲೂ ಶೇ.40ರಿಂದ 50ರಷ್ಟು ಬಡವರಿದ್ದು, ಶೇ.30ಕ್ಕಿಂತ ಹೆಚ್ಚು ಜನರು ತೀವ್ರ ಹಿಂದುಳಿದಿದ್ದಾರೆ. ಸಾಮಾಜಿಕ ನ್ಯಾಯ ಎಲ್ಲರಿಗೂ ದೊರಕಬೇಕು. ಹೀಗಾಗಿ ಎಲ್ಲರಿಗೂ ಸಮಾನ ನ್ಯಾಯ ದೊರಕಿಸಲು ಸಭಾ ವತಿಯಿಂದ ನೂತನ ಅಧ್ಯಕ್ಷನಾಗಿ ಶ್ರಮಿಸುವುದಾಗಿ ಹೇಳಿದರು.

1904ರಲ್ಲಿ ಅಂದರೆ 122 ವರ್ಷಗಳ ಹಿಂದೆ ಪರಮಪೂಜ್ಯ ಹಾನಗಲ್ ಕುಮಾರೇಶ್ವರ ಮಹಾಸ್ವಾಮೀಜಿ ಅವರು, ನಮ್ಮ ಸಮಾಜದ ಎಲ್ಲರನ್ನೂ ಒಗ್ಗೂಡಿಸುವ ಪ್ರಯತ್ನ ಮಾಡಿದ ಫಲವಾಗಿ ಜನ್ಮ ತಾಳಿದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರುಗಳಾಗಿ ಸಿರಸಂಗಿ ಲಿಂಗರಾಜದೇಸಾಯರು, ರಾಜಾ ಲಖಮನಗೌಡರು, ಫ.ಗು. ಹಳಕಟ್ಟಿಯವರು, ಬಂಥನಾಳ ಸಂಗನ ಬಸವ ಸ್ವಾಮಿಗಳು, ಶತಾಯುಷಿ ಡಾ. ಶಿವಕುಮಾರ ಮಹಾಸ್ವಾಮೀಜಿ, ಭೀಮಣ್ಣ ಖಂಡ್ರೆ, ಶಾಮನೂರು ಶಿವಶಂಕರಪ್ಪ ಮೊದಲಾದವರು ಸೇವೆ ಸಲ್ಲಿಸಿದ್ದಾರೆ.

ಈ ಸ್ಥಾನದಲ್ಲಿ ಕಾರ್ಯ ನಿರ್ವಹಿಸುವ ಅವಕಾಶ ದೊರೆತಿರುವುದು ತಮ್ಮ ಸೌಭಾಗ್ಯ ಎಂದರು. ಸುದ್ದಿಗೋಷ್ಠಿಯಲ್ಲಿ ಗಣೇಶ್ ಶಾಮನೂರು, ಪ್ರಭಾಕರ ಕೋರೆ, ರಾಜಣ್ಣ, ವೀರಣ್ಣ ಚರಂತಿ ಮಠ, ಮಹಾರಾಷ್ಟ್ರ, ಕೇರಳ, ತಮಿಳುನಾಡು ಸೇರಿದಂತೆ ವಿವಿಧ ರಾಜ್ಯಗಳ ಘಟಕದ ಅಧ್ಯಕ್ಷರು, ಪ್ರತಿನಿಧಿಗಳು ಪಾಲ್ಗೊಂಡಿದ್ದರು.

### 1000 ವಿದ್ಯಾರ್ಥಿನಿಯರ ಹಾಸ್ಟೆಲ್ ನಿರ್ಮಿಸಲು ಬದ್ಧ

ನಗರದಲ್ಲಿ 1000 ವಿದ್ಯಾರ್ಥಿನಿಯರಿಗಾಗಿ ವಸತಿ ನಿಲಯ ನಿರ್ಮಾಣ ಮಾಡಲು ಮುಂದಿನ ಮಾರ್ಚ್ ತಿಂಗಳೊಳಗೆ ಶಂಕುಸ್ಥಾಪನೆ ನೆರವೇರಿಸಿ, ಒಂದೂವರೆ ವರ್ಷದಲ್ಲಿ ಪೂರ್ಣಗೊಳಿಸುವ ಸಂಕಲ್ಪ ಮಾಡಿರುವುದಾಗಿ ತಿಳಿಸಿದರು. ಈಗಾಗಲೇ ಹಲವು ಜಿಲ್ಲಾ ಕೇಂದ್ರಗಳಲ್ಲಿ ವೀರಶೈವ ಲಿಂಗಾಯತ ಭವನ ಇದ್ದು, ಭವನ ಇಲ್ಲದ ಜಿಲ್ಲೆಗಳಲ್ಲಿ ಭವನ ನಿರ್ಮಾಣ ಮಾಡಲೂ ಶ್ರಮಿಸುವುದಾಗಿ, ಈ ಭವನದಲ್ಲಿ ಸಮುದಾಯದ ಪ್ರತಿಭಾವಂತರಿಗೆ ಲೋಕಸೇವಾ ಆಯೋಗದ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ತರಬೇತಿ ನೀಡಲಾಗುವುದು ಎಂದರು.

| | | | | |
|---|---|---|---|---|
| ಈ ದಿನದ ದರ | ಪೆಟ್ರೋಲ್: 102.98 ₹/L | ಡೀಸೆಲ್ : 91.04 ₹/L | ಬಂಗಾರ: ₹14,978/Gram24ct ₹13,730/Gram22ct | ಬೆಳ್ಳಿ: ₹320.00/Gram |

## ಕೆಂಗೇರಿ ಉಪನಗರದಲ್ಲಿ ಜರುಗಿದ ಪುರಂದರದಾಸರ ಆರಾಧನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೆಂಗೇರಿ ಉಪನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಶ್ರೀಮಠದ ಅಧ್ಯಕ್ಷರಾದ ಶ್ರೀ ಸುಧೀಂದ್ರ ಕುಮಾರ್ ಅವರ ನೇತೃತ್ವದಲ್ಲಿ ಶ್ರೀ ಪುರಂದರದಾಸರ ಆರಾಧನೆಯ ಪ್ರಯುಕ್ತ ಬೆಳಗ್ಗೆ ವಿಶೇಷ ಪೂಜಾ ಕೈಂಕರ್ಯಗಳು, ರಥೋತ್ಸವ, ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ನಡೆಯಿತು. ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪುರಂದರ ನಮನ ಶೀರ್ಷಿಕೆಯಲ್ಲಿ ವಿದುಷಿ ಶ್ರೀಮತಿ ರಮ್ಯಾ ಸುಧೀರ್ ಅವರು ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನು ತಾರತಮ್ಯೋಕ್ತವಾಗಿ ಮತ್ತು ಸುಶ್ರಾವ್ಯವಾಗಿ ಪ್ರಸ್ತುತ ಪಡಿಸಿದರು. ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ವಿದ್ವಾನ್ ಟಿ.ಎಸ್. ರಮೇಶ್ ಮತ್ತು ತಬಲಾ ವಾದನದಲ್ಲಿ ವಿದ್ವಾನ್ ಕೇದಾರನಾಥ್ ಸಾಥ್ ನೀಡಿದರು. ಶ್ರೀಮಠದ ಜಂಟಿ ಕಾರ್ಯದರ್ಶಿಗಳಾದ ಶ್ರೀ ಜಯಸಿಂಹ ಅವರು ಕಲಾವಿದರಿಗೆ ಗುರುಗಳ ಪ್ರಸಾದ ಮತ್ತು ಶೇಷವಸ್ತ್ರ ನೀಡಿ ಗೌರವಿಸಿದರು.

## ಆಸ್ಪತ್ರೆಗೆ ಗಾಯಾಳು ದಾಖಲಿಸಲು ನೆರವಾದ ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ಅಪಘಾತದಲ್ಲಿ ಗಾಯಗೊಂಡು ರಸ್ತೆಬದಿಯಲ್ಲಿ ನರಳಾಡುತ್ತಿದ್ದ ವ್ಯಕ್ತಿಯನ್ನು ಸಚಿವ ಪ್ರಿಯಾಂಕ್ ಖರ್ಗೆ ಅವರು ಆಸ್ಪತ್ರೆಗೆ ದಾಖಲಿಸಲು ನೆರವಾದರು. ಬೈಕ್ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ವ್ಯಕ್ತಿ, ಸದಾಶಿವನಗರದ ರಸ್ತೆ ಬದಿಯಲ್ಲಿ ನರಳಾಡುತ್ತಿದ್ದರು. ಅದೇ ಮಾರ್ಗವಾಗಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಕಾರಿನಲ್ಲಿ ತೆರಳುತ್ತಿದ್ದರು. ರಸ್ತೆಬದಿಯಲ್ಲಿ ಒದ್ದಾಡುತ್ತಿದ್ದ ಗಾಯಾಳುವನ್ನು ಕಂಡು ತಕ್ಷಣ ಚಾಲಕನಿಗೆ ಕಾರು ನಿಲ್ಲಿಸುವಂತೆ ಸಚಿವರು ಸೂಚಿಸಿದರು. ಬಳಿಕ ಅಂಬುಲೆನ್ಸ್‌ಗೆ ಕಾಯದೇ ತಮ್ಮ ಕಾರಿನಲ್ಲಿಯೇ ಗಾಯಾಳುವನ್ನು ಕೂರಿಸಿಕೊಂಡು ಎಂ.ಎಸ್. ರಾಮಯ್ಯ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆಸ್ಪತ್ರೆಯ ವೈದ್ಯರು, ಸಿಬ್ಬಂದಿಯೊಂದಿಗೆ ಚರ್ಚಿಸಿ, ಗಾಯಗೊಂಡ ವ್ಯಕ್ತಿಗೆ ತುರ್ತು ಚಿಕಿತ್ಸೆ ನೀಡುವಂತೆ ಸಚಿವರು ಮನವಿ ಮಾಡಿಕೊಂಡಿದರು. ತಕ್ಷಣವೇ ಗಾಯಾಳುವಿಗೆ ಚಿಕಿತ್ಸೆ ನೀಡಲಾಯಿತು. ಅವರು ಚೇತರಿಸಿಕೊಂಡಿದ್ದಾರೆ ಎಂದು ಆಸ್ಪತ್ರೆಯ ಮೂಲಗಳು ತಿಳಿಸಿವೆ.

## ಉಚಿತ ಆ್ಯಂಬುಲೆನ್ಸ್ ವಾಹನ ಸೇವೆಗೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಪಟ್ಟಣದ 9ನೇ ವಾರ್ಡ್ ವಾಣಿಜ್ಯೋದ್ಯಮಿ ನಯಾಜ್ ಪಾಷಾ ಅವರು ತಮ್ಮ ತಾಯಿ ಹೆಸರಿನ ಶಹನಾಜ್ ಉನ್ನೀಸ್ ಟ್ರಸ್ಟ್ ವತಿಯಿಂದ ಉಚಿತ ಆ್ಯಂಬುಲೆನ್ಸ್ ಸೇವೆ ಆರಂಭಿಸಿದ್ದಾರೆ. ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್ ಉಚಿತ ಆ್ಯಂಬುಲೆನ್ಸ್ ಸೇವೆಗೆ ಚಾಲನೆ ನೀಡಿದರು. ತುರ್ತು ಸಂದರ್ಭದಲ್ಲಿ ರೋಗಿಗಳನ್ನು ಆಸ್ಪತ್ರೆಗೆ ಕರೆದೊಯ್ಯಲು ನಯಾಜ್ ಪಾಷಾ ಕುಟುಂಬ ಸ್ವಂತ ಹಣದಲ್ಲಿ ಆ್ಯಂಬುಲೆನ್ಸ್ ವಾಹನ ನೀಡುವ ಮೂಲಕ ಶ್ರೇಷ್ಠ ಕಾರ್ಯ ಮಾಡಿದ್ದಾರೆ ಎಂದರು.

ಸಮಾಜದಿಂದ ಪಡೆಯುವುದಷ್ಟೇ ಅಲ್ಲ, ನಾವು ಸಮಾಜಕ್ಕೆ ಹಿಂದಿರುಗಿಸುವ ಕೆಲಸ ಮಾಡಬೇಕಿದೆ. ಸಮಾಜಮುಖಿ ಕೆಲಸಗಳಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ ಎಂದು ವಾಣಿಜ್ಯೋದ್ಯಮಿ ನಯಾಜ್ ಪಾಷಾ ಹೇಳಿದರು. ಜಯಪುರ ಟೌನ್ ಕಾಂಗ್ರೆಸ್ ಅಧ್ಯಕ್ಷ ನಾಗರಾಜು, ಅಲ್ಪಸಂಖ್ಯಾತ ಜಿಲ್ಲಾಧ್ಯಕ್ಷ ಮುಬಾರಕ್, ಏಜಾಜ್, ಪುರಸಭೆ ಸದಸ್ಯರಾದ ರಾಜಣ್ಣ, ನಾರಾಯಣಸ್ವಾಮಿ, ಗ್ಯಾರಂಟಿ ತಾಲ್ಲೂಕು ಸದಸ್ಯ ಮಂಜುನಾಥ್, ಎಸ್ ಸಿ ಘಟಕದ ಅಧ್ಯಕ್ಷ ವೇಣುಗೋಪಾಲ್, ಹರೀಶ್, ಗಿರೀಶ್, ಸನಾವುಲ್ಲ, ರಮೇಶ್, ಮುನಿನಾರಾಯಣಪ್ಪ, ಚಾಂದ್ ಪಾಷಾ, ಹಬೀಬ್, ಸಮೀರ್, ಸುದರ್ಶನ, ಚೇತನ್ ಇದ್ದರು.

## ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಈಶ್ವರ ಬಿ ಖಂಡ್ರೆ, ಅವಿರೋಧ ಆಯ್ಕೆ



• ಉದಯವಾಹಿನಿ, ಬೆಂಗಳೂರು

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಸಭಾದ ರಾಜ್ಯಾಧ್ಯಕ್ಷ ಶಂಕರ ಮಹಾದೇವ ಬಿದರಿ ತಿಳಿಸಿದರು.

ಬೆಂಗಳೂರಿನಲ್ಲಿ ನಡೆದ ಕಾರ್ಯಕಾರಿಣಿ ಸಭೆಯಲ್ಲಿ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಸಭಾದ ಮಹಾ ಪ್ರಧಾನ ಕಾರ್ಯದರ್ಶಿಯಾಗಿರುವ ಈಶ್ವರ ಬಿ ಖಂಡ್ರೆ ಅವರನ್ನು ಆಯ್ಕೆ ಮಾಡಲು ನಿರ್ಣಯ ಕೈಗೊಳ್ಳಲಾಯಿತು ಎಂದರು. ಕಳೆದ 13 ವರ್ಷಗಳಿಂದ ಮಹಾಸಭಾದ ರಾಷ್ಟ್ರೀಯ ಮಹಾ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ ಈಶ್ವರ ಬಿ ಖಂಡ್ರೆ ಅವರು ಕಳೆದ ಒಂದು ವರ್ಷದಿಂದ ಹಿರಿಯ ಉಪಾಧ್ಯಕ್ಷರ ಪ್ರಭಾರ ಹೊಣೆಯನ್ನೂ ನಿಭಾಯಿಸಿದ್ದರು. ತಮ್ಮ ಪೂಜ್ಯ ತಂದೆ ಭೀಮಣ್ಣ ಖಂಡ್ರೆಯವರ ಮಾರ್ಗದಲ್ಲೇ ನಡೆದು, ಸಮುದಾಯದ ಏಳಿಗೆಗಾಗಿ ಶ್ರಮಿಸುತ್ತಿರುವ ಈಶ್ವರ ಬಿ ಖಂಡ್ರೆ ಈಗ ಮಹಾ ಸಭಾದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಸಮಾಜಕ್ಕೆ ಹೊಸ ಭರವಸೆ ಮೂಡಿಸಿದ್ದಾರೆ. ತಮ್ಮನ್ನು ಮಹಾಸಭಾದ ನೂತನ ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದಕ್ಕಾಗಿ ಕಾರ್ಯಕಾರಿ ಸಮಿತಿಗೆ ಧನ್ಯವಾದ ಅರ್ಪಿಸಿದ ಅವರು ವೀರಶೈವ ಮತ್ತು ಲಿಂಗಾಯತ ಬೇರೆ ಬೇರೆಯಲ್ಲ. ಹೀಗಾಗಿ ಸಮಾಜದ ಎಲ್ಲಾ ಒಳ ಪಂಗಡಗಳನ್ನು ಒಗ್ಗೂಡಿಸುವುದು ಅತ್ಯಂತ ಮುಖ್ಯವಾಗಿದ್ದು, ತಾವು ಈ ನಿಟ್ಟಿನಲ್ಲಿ ಶ್ರಮಿಸುವುದಾಗಿ ತಿಳಿಸಿದರು.

## ಮಾರಾಟ ಮಾಡುತ್ತಿದ್ದ ವಿದೇಶಿ ಪ್ರಜೆ ಬಂಧನ, ರೂ.5.15 ಕೋಟಿ ಮೌಲ್ಯದ ಡ್ರಗ್ಸ್ ವಶ!

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಮಾದಕ ದ್ರವ್ಯ ದಂಧೆಗೆ ಬಿಗಿ ಕಡಿವಾಣ ಹಾಕುತ್ತಿರುವ ಬೆಂಗಳೂರು ನಗರ ಪೊಲೀಸರು ಮತ್ತೊಂದು ದೊಡ್ಡ ಯಶಸ್ಸು ಸಾಧಿಸಿದ್ದಾರೆ. ಕೇಂದ್ರ ಅಪರಾಧ ವಿಭಾಗದ ಮಾದಕ ದ್ರವ್ಯ ವಿರೋಧಿ ಘಟಕ ನಡೆಸಿದ ಕಾರ್ಯಾಚರಣೆಯಲ್ಲಿ ಎಂಡಿಎಂಎ ಹಾಗೂ ಎಕ್ಸ್ಟಸಿ ಮಾತ್ರೆಗಳ ಅಕ್ರಮ ಮಾರಾಟ ನಡೆಸುತ್ತಿದ್ದ ಪ್ರಮುಖ ಜಾಲವನ್ನು ಪತ್ತೆಹಚ್ಚಲಾಗಿದೆ. ಖಚಿತ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿದ ಪೊಲೀಸರು, ಮಾರತ್ತಹಳ್ಳಿ ಠಾಣೆ ವ್ಯಾಪ್ತಿಯ ಮುನೆಕೊಳಲು ಪ್ರದೇಶದಲ್ಲಿರುವ ಬಾಡಿಗೆ ಮನೆಯಿಂದ ವಿದೇಶಿ ಪ್ರಜೆಯನ್ನು ಬಂಧಿಸಿದ್ದಾರೆ. ಅರ್ನೆಸ್ಟ್ ಒನ್ಯೆಕಾಚಿ ಉಗಾ (45) ಎಂಬ ಆರೋಪಿ, ಅಲ್ಲಿಂದಲೇ ಮಾದಕ ವಸ್ತುಗಳ ಮಾರಾಟ ನಡೆಸುತ್ತಿದ್ದನು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಪೊಲೀಸರ ದಾಳಿಯಲ್ಲಿ 2.5 ಕೆಜಿ ಎಂಡಿಎಂಎ ಮತ್ತು 300 ಎಕ್ಸ್ಟಸಿ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಇವುಗಳ ಅಂತಾರಾಷ್ಟ್ರೀಯ ಮಾರುಕಟ್ಟೆ ಮೌಲ್ಯ ಸುಮಾರು 5.15 ಕೋಟಿ ಎಂದು ಅಂದಾಜಿಸಲಾಗಿದೆ. ಬಂಧಿತನ ವಿರುದ್ಧ ಈ ಹಿಂದೆಯೂ ಹೆಣ್ಣೂರು ಹಾಗೂ ಕಾಡುಗೋಡಿ ಪೊಲೀಸ್ ಠಾಣೆಗಳಲ್ಲಿ ಮಾದಕ ವಸ್ತು ಸಂಬಂಧಿತ ಪ್ರಕರಣಗಳು ದಾಖಲಾಗಿದ್ದವು. ಜೈಲಿನಿಂದ ಬಿಡುಗಡೆಯಾದ ಬಳಿಕವೂ ಆತ ಮತ್ತೆ ದಂಧೆ ಆರಂಭಿಸಿದಾನೆ ಎನ್ನಲಾಗಿದೆ.

# ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮೇ 25ರ ನಂತರ ಚುನಾವಣೆ

### 369 ವಾರ್ಡ್‌ಗಳ ಮತದಾರರ ಕರಡು ಪಟ್ಟಿ ಪ್ರಕಟ: ಮಾರ್ಚ್ 16ರಂದು ಮತದಾರರ ಅಂತಿಮ ಪಟ್ಟಿ

• ಉದಯವಾಹಿನಿ, ಬೆಂಗಳೂರು

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಮೇ 25ರ ನಂತರ ಜೂನ್ 30ರೊಳಗೆ ಚುನಾವಣೆ ನಡೆಸಲಾಗುವುದು ಎಂದು ರಾಜ್ಯ ಚುನಾವಣಾ ಆಯೋಗದ ಆಯುಕ್ತ ಜಿ.ಎಸ್. ಸಂಗ್ರೇಶಿ ತಿಳಿಸಿದರು. ಐದು ನಗರ ಪಾಲಿಕೆಗಳ 369 ವಾರ್ಡ್‌ಗಳ ಮತದಾರರ ಕರಡು ಪಟ್ಟಿಯನ್ನು ಮಂಗಳವಾರ ಪ್ರಕಟಿಸಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಆದೇಶದಂತೆ ಚುನಾವಣೆ ನಡೆಯಲಿದೆ ಎಂದರು.

ಮತದಾರರ ಕರಡು ಪಟ್ಟಿಯಲ್ಲಿ ಹೆಸರಿದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಹೆಸರಿಲ್ಲದಿದ್ದರೆ ಕೂಡಲೇ ಅರ್ಜಿ ಸಲ್ಲಿಸಿ ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಕೊಳ್ಳುವ ಅವಕಾಶವಿದೆ. 18 ವರ್ಷ ತುಂಬಿದ ಎಲ್ಲರೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಬಹುದು' ಎಂದು ತಿಳಿಸಿದರು.



> ಜಿಬಿಎ ವ್ಯಾಪ್ತಿಯ ನಗರ ಪಾಲಿಕೆ ಚುನಾವಣೆಗಳಲ್ಲಿ ಮತ ಪತ್ರ ಬಳಸುವ ವಿಚಾರ ರಾಜ್ಯ ಚುನಾವಣಾ ಆಯೋಗಕ್ಕೆ ಬಿಟ್ಟದ್ದು. ಆಯೋಗವು ಸ್ವತಂತ್ರ ಸಂಸ್ಥೆಯಾಗಿದ್ದು ಅದನ್ನು ತೀರ್ಮಾನಿಸುವ ಅಧಿಕಾರ ಅವರಿಗಿದೆ' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಬಿಜೆಪಿ ಅಧಿಕಾರದಲ್ಲಿದ್ದಾಗಲೇ 2020ರಲ್ಲಿ ತಂದ ಕಾನೂನಿನಲ್ಲಿ ಮತ ಪತ್ರ ಬಳಸಲು ಅವಕಾಶ ನೀಡಲಾಗಿದೆ. ನಾವು ಅದನ್ನು ಮುಂದುವರಿಸುತ್ತಿದ್ದೇವೆ. ಮತ ಪತ್ರ ಬಳಸುವುದರಲ್ಲಿ ತಪ್ಪೇನೂ ಇಲ್ಲ. ಯಾವ ರೂಪದಲ್ಲಿ ಚುನಾವಣೆ ನಡೆಸಲಾಗುವುದು ಎಂಬುದಕ್ಕಿಂತ ಮತದಾನ ನಡೆಯುವುದು ಬಹಳ ಮುಖ್ಯ ಎಂದು ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದರು.

**ಮತ ಪತ್ರ ಬಳಕೆಗೆ ಕಾನೂನಿನಲ್ಲಿ ಅವಕಾಶ**

2025ರ ಅಕ್ಟೋಬರ್ 1ರ ಮಾಹಿತಿಯಂತೆ ಮತದಾರರ ಕರಡು ಪಟ್ಟಿ ತಯಾರಿಸಲಾಗಿದೆ. ಜ.20ರಿಂದ ಫೆಬ್ರುವರಿ 3ರವರೆಗೆ ಮತಗಟ್ಟೆ ಅಧಿಕಾರಿಗಳು (ಬಿಎಲ್‌ಒ) ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದು, ಈ ಅವಧಿಯಲ್ಲಿ ಹಕ್ಕು ಹಾಗೂ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹಕ್ಕು ಹಾಗೂ ಆಕ್ಷೇಪಣೆಗಳ ವಿಲೇವಾರಿಯು ಫೆ.4ರಿಂದ 18ರವರೆಗೆ ನಡೆಯಲಿದ್ದು, ಮಾರ್ಚ್ 16ರಂದು ಮತದಾರರ ಅಂತಿಮ ಪಟ್ಟಿ ಪ್ರಕಟಿಸಲಾಗುತ್ತದೆ' ಎಂದು ಮಾಹಿತಿ ನೀಡಿದರು.

**ವೆಬ್‌ಸೈಟ್‌ನಲ್ಲಿ ಮತದಾರರ ಪಟ್ಟಿ:** ವಾರ್ಡ್‌ವಾರು ಮತದಾರರ ಕರಡು ಪಟ್ಟಿಯನ್ನು ಜಿಬಿಎ ಅಧಿಕೃತ ಜಾಲತಾಣದಲ್ಲಿ (https://gba.karnataka.gov.in/home) 24 ಗೊಂದಲವಿದ್ದರೆ ನಗರ ಪಾಲಿಕೆವಾರು ಸಹಾಯವಾಣಿ ಸ್ಥಾಪಿಸಲಾಗಿದ್ದು, ಕರೆ ಮಾಡಿ ಪರಿಹರಿಸಿಕೊಳ್ಳಬಹುದು ಎಂದರು. ಗ್ರೇಟರ್ ಬೆಂಗಳೂರು ಆಡಳಿತ ಮತದಾರರ ನೋಂದಣಿ ನಿಯಮಗಳು, 2025ರಂತೆ ವಾರ್ಡ್‌ವಾರು ಮತದಾರರ ಪಟ್ಟಿ ಸಿದ್ಧತೆಗೆ, ಆಯೋಗದಿಂದ ನೇಮಕಗೊಂಡ ಮತದಾರರ ನೋಂದಣಾಧಿಕಾರಿ / ಸಹಾಯಕ ಮತದಾರರ ನೋಂದಣಾಧಿಕಾರಿ / ಬಿಎಲ್‌ಒ ಅವರ ಬಳಿ, ನಮೂನೆ 4 ಮತದಾರರ ಹೆಸರು ಸೇರ್ಪಡೆಗೆ, ನಮೂನೆ 5 ಹೆಸರು ಸೇರ್ಪಡೆಗೆ ಆಕ್ಷೇಪಣೆ, ನಮೂನೆ 6 ಹೆಸರು ತಿದ್ದುಪಡಿಗೆ, ನಮೂನೆ 7– ಸ್ಥಳ ಬದಲಾವಣೆಗೆ, ನಮೂನೆ 8 ಹೆಸರು ತೆಗೆದುಹಾಕಲು ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಮಾಹಿತಿ ನೀಡಿದರು.

**2001ರಲ್ಲಿ ಮತ ಪತ್ರ ಬಳಕೆ**

**ಬೆಂಗಳೂರು ಮಹಾನಗರ ಪಾಲಿಕೆಯ 100 ವಾರ್ಡ್‌ಗಳಿಗೆ 2001ರಲ್ಲಿ ನಡೆದಿದ್ದ ಚುನಾವಣೆಯಲ್ಲಿ ಮತ ಪತ್ರ ಬಳಸಲಾಯಿತು. 2004ರ ನಂತರ ರಾಜ್ಯದಲ್ಲಿ ಲೋಕಸಭೆ ವಿಧಾನಸಭೆ ಚುನಾವಣೆಗಳಿಗೆ ವಿದ್ಯುನ್ಮಾನ ಮತ ಯಂತ್ರಗಳನ್ನು (ಇವಿಎಂ) ಬಳಸಲಾಗಿತ್ತು. 2001ರ ನಂತರ ಬೆಂಗಳೂರು ಮಹಾನಗರ ಪಾಲಿಕೆಗೆ ನಿಗದಿತ ಅವಧಿಗೆ ಚುನಾವಣೆ ನಡೆಯಲಿಲ್ಲ. 2010ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 198 ವಾರ್ಡ್‌ಗಳಿಗೆ ಚುನಾವಣೆ ನಡೆದಾಗ ಇವಿಎಂ ಬಳಸಲಾಗಿತ್ತು. 2015ರಲ್ಲಿಯೂ ಇವಿಎಂ ಉಪಯೋಗಿಸಲಾಗಿತ್ತು. 2025ರಲ್ಲಿ ಜಿಬಿಎ ಐದು ನಗರ ಪಾಲಿಕೆಗಳು ರಚನೆಯಾಗಿದ್ದು ಈ ನಗರ ಪಾಲಿಕೆಗಳ ಚುನಾವಣೆಗೆ ಮತ ಪತ್ರವನ್ನು ಬಳಸಲು ರಾಜ್ಯ ಚುನಾವಣಾ ಆಯೋಗ ನಿರ್ಧರಿಸಿದೆ. 25 ವರ್ಷಗಳ ನಂತರ ಬೆಂಗಳೂರಿನಲ್ಲಿ ನಡೆಯುವ ಚುನಾವಣೆಗೆ ಮತ ಪತ್ರ ಬಳಕೆಯಾಗಲಿದೆ.**

## ಬಿಎಂಟಿಸಿ ನಿಗಮಕ್ಕೆ ಚಳ್ಳೆಹಣ್ಣು ತಿನ್ನಿಸುತ್ತಿರುವ ಕಂಡಕ್ಟರ್‌ಗಳು: ತನಿಖೆ ವೇಳೆ ಕಳ್ಳಾಟ ಬಯಲು

• ಉದಯವಾಹಿನಿ, ಬೆಂಗಳೂರು

ಶಕ್ತಿ ಇದು ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆ. ಈ ಯೋಜನೆಯ ಲಾಭವನ್ನು ರಾಜ್ಯದ ಕೋಟ್ಯಂತರ ಹೆಣ್ಣು ಮಕ್ಕಳು ಪಡೆಯುತ್ತಿದ್ದರೆ, ಇತ್ತ ಬಿಎಂಟಿಸಿಯ ಕೆಲ ಕಿಲಾಡಿ ಕಂಡಕ್ಟರ್‌ಗಳು ಮಾತ್ರ, ಅನ್ನ ತಿಂದ ಮನೆಗೆ ಕನ್ನ ಹಾಕುವ ಕೆಲಸ ಮಾಡಿ ನಿಗಮಕ್ಕೆ ಸೇರಬೇಕಿದ್ದ, ಲಕ್ಷ ಲಕ್ಷ ಹಣವನ್ನು ತಮ್ಮ ಜೇಬಿಗೆ ಹಾಕಿಕೊಳ್ಳಲು ಮುಂದಾಗುತ್ತಿದ್ದಾರೆ.

ಬಿಎಂಟಿಸಿ ಬಸ್‌ಗಳಲ್ಲಿ ಪ್ರಯಾಣಿಕರಿಗೆ ಸಹಾಯವಾಗಲಿ ಎಂದು ಬಿಎಂಟಿಸಿ ನಿಗಮ ಯುಪಿಐ ಸ್ಕ್ಯಾನರ್‌ಗಳನ್ನು ಹಾಕಿದೆ. ಆದರೆ ಕೆಲ ಕಿಲಾಡಿ ಕಂಡಕ್ಟರ್‌ಗಳು ಬಿಎಂಟಿಸಿ ಬಸ್‌ನಲ್ಲಿರುವ ಯುಪಿಐ ಸ್ಕ್ಯಾನರ್‌ಗಳನ್ನು ಕಿತ್ತು, ತಮ್ಮ ವೈಯಕ್ತಿಕ ಯುಪಿಐ ಸ್ಕ್ಯಾನರ್‌ಗಳನ್ನು ನೀಡಿ, ತಮ್ಮ ಬ್ಯಾಂಕ್ ಅಕೌಂಟ್‌ಗೆ ಲಕ್ಷಾಂತರ ರೂ ಹಣ ಹಾಕಿಸಿಕೊಳ್ಳುತ್ತಿದ್ದಾರೆ. ಅದರಲ್ಲೂ ಕನ್ನಡ ಬಾರದವರಿಗೆ ತಮ್ಮ ಮೊಬೈಲ್ ಯುಪಿಐ ಸ್ಕ್ಯಾನರ್ ನೀಡಿ ಹಣ ಹಾಕಿಸಿಕೊಳ್ಳುತ್ತಿದ್ದಾರಂತೆ.

ಇನ್ನು ತನಿಖೆಯಲ್ಲಿ ಈ ಕಂಡಕ್ಟರ್‌ಗಳ ಕಳ್ಳಾಟ ಕೂಡ ಬಯಲಾಗಿದೆ. ಪ್ರತಿಯೊಬ್ಬರ ಅಕೌಂಟ್‌ನಲ್ಲೂ ಸುಮಾರು 50 ಸಾವಿರಕ್ಕೂ ಹೆಚ್ಚು ಹಣ ಪ್ರಯಾಣಿಕರಿಂದ ಹಾಕಿಸಿಕೊಂಡಿರುವುದು ತನಿಖೆಯಿಂದ ಬಯಲಾಗಿದೆ.





ಉದಯವಾಹಿನಿ ಚಿತ್ರ

ಶಕ್ತಿ ಯೋಜನೆಯ ಉಚಿತ ಟಿಕೆಟ್ ಮೇಲೆ ಕನ್ನಡದಲ್ಲಿ ಉಚಿತ ಟಿಕೆಟ್ ಎಂದು ಮುದ್ರಿಸಲಾಗಿದೆ. ಇಂಗ್ಲಿಷ್‌ನಲ್ಲಿ ಉಚಿತ ಟಿಕೆಟ್ ಎಂದು ಮುದ್ರಿಸಿಲ್ಲ. ಇದನ್ನು ಬಂಡವಾಳ ಮಾಡಿಕೊಂಡು ಕನ್ನಡ ಬಾರದ ನಾರ್ತ್, ಸೌತ್ ಇಂಡಿಯನ್ಸ್‌ಗೆ ಶಕ್ತಿ ಯೋಜನೆಯ ಉಚಿತ ಟಿಕೆಟ್ ನೀಡುತ್ತಿದ್ದಾರೆ.

ಈ ಕಿಲಾಡಿ ಕಂಡಕ್ಟರ್‌ಗಳು ಡಿಪೋದಿಂದ ಬಸ್‌ಗಳು ಹೊರಗೆ ಬರ್ತಿದ್ದಂತೆ, ಬಿಎಂಟಿಸಿ ಬಸ್‌ನಲ್ಲಿರುವ ಬಿಎಂಟಿಸಿ ನಿಗಮದ ಯುಪಿಐ ಸ್ಕ್ಯಾನರ್‌ಗಳನ್ನು ಕಿತ್ತು ಇಟ್ಟುಕೊಳ್ಳುತ್ತಾರಂತೆ. ಪ್ರಯಾಣಿಕರು ಯುಪಿಐ ಮೂಲಕ ಪೇಮೆಂಟ್ ಮಾಡಿ ಟಿಕೆಟ್ ಖರೀದಿ ಮಾಡಬೇಕು ಎಂದು ಕಂಡಕ್ಟರ್‌ಗಳ ಬಳಿ ಕೇಳಿದಾಗ, ತಮ್ಮ ಮೊಬೈಲ್‌ನಲ್ಲಿರುವ ಸ್ವಂತ ಖಾತೆಯ ಸ್ಕ್ಯಾನರ್‌ಗಳನ್ನು ನೀಡಿ ಪ್ರಯಾಣಿಕರಿಂದ ತಮ್ಮ ಅಕೌಂಟ್‌ಗೆ ಹಣ ಹಾಕಿಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಆರೋಪ ಕೇಳಿ ಬಂದ ಹಿನ್ನೆಲೆ ಬಿಎಂಟಿಸಿಯ ಸೆಕ್ಯೂರಿಟಿ ಅಧಿಕಾರಿಗಳು ತಪಾಸಣೆ ಮಾಡಿದಾಗ ಹತ್ತಕ್ಕೂ ಹೆಚ್ಚು ಕಂಡಕ್ಟರ್‌ಗಳು ಸಿಕ್ಕಿಬಿದ್ದಿದ್ದಾರೆ.

**ಪ್ರಯಾಣಿಕರು ಹೇಳಿದ್ದಿಷ್ಟು**

**ಹೀಗೆ ಸಿಕ್ಕಿಬಿದ್ದ ಪ್ರತಿಯೊಬ್ಬ ಕಂಡಕ್ಟರ್ ಅಕೌಂಟ್‌ನಲ್ಲಿ 50 ಸಾವಿರ ರೂ. ಯುಪಿಐ ಮಾಡಿಸಿಕೊಂಡಿರುವುದು ಬಯಲಾಗಿದೆ. ಈಗಾಗಲೇ ಬಿಎಂಟಿಸಿ ಸೆಕ್ಯೂರಿಟಿ ಅಧಿಕಾರಿಗಳು ಈ ಬಗ್ಗೆ ಬಿಎಂಟಿಸಿ ಎಂಡಿ ಶಿವಕುಮಾರ್‌ಗೆ ವರದಿ ಸಲ್ಲಿಸಿದ್ದಾರೆ. ಇನ್ನು ಈ ಬಗ್ಗೆ ಮಾತನಾಡಿದ ಪ್ರಯಾಣಿಕ ಮಂಜುನಾಥ್, ಇಂತಹವರನ್ನು ಮೊದಲು ಕೆಲಸದಿಂದ ಕಿತ್ತು ಮನೆಗೆ ಕಳಿಸಬೇಕು ಎಂದಿದ್ದಾರೆ.**

## ಕ್ಲಬ್‌ಗಳ ನಿಯಂತ್ರಣಕ್ಕೆ ಮಸೂದೆ ತನ್ನಿ: ರಮೇಶ್ ಬಾಬು

• ಉದಯವಾಹಿನಿ, ಬೆಂಗಳೂರು

ಕ್ಲಬ್‌ಗಳಲ್ಲಿನ ಕಾನೂನುಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಸದನ ಸಮಿತಿ ನೀಡಿರುವ ವರದಿಯನ್ನು ಅನುಷ್ಠಾನಗೊಳಿಸಬೇಕು ಎಂದು ವಿಧಾನ ಪರಿಷತ್‌ನ ಕಾಂಗ್ರೆಸ್ ಸದಸ್ಯ ರಮೇಶ್ ಬಾಬು ಅವರು ಒತ್ತಾಯಿಸಿದ್ದಾರೆ. ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಪತ್ರ ಬರೆದಿರುವ ಅವರು, ಸದನ ಸಮಿತಿ ವರದಿ ಅನುಷ್ಠಾನಗೊಳಿಸಲು ಕಾಯ್ದೆ ಜಾರಿಗೊಳಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

14ನೇ ವಿಧಾನಸಭೆ ವೇಳೆ ರಚನೆಯಾಗಿದ್ದ ಸದನ ಸಮಿತಿಯು 180 ಪುಟಗಳ ಸಮಗ್ರ ವರದಿಯನ್ನು ಸಭಾಧ್ಯಕ್ಷರಿಗೆ ನೀಡಿದೆ. ಬೆಂಗಳೂರು ಸೇರಿದಂತೆ ರಾಜ್ಯದಲ್ಲಿನ ಕ್ಲಬ್‌ಗಳಲ್ಲಿ ನಡೆಯುತ್ತಿರುವ ಕಾನೂನುಬಾಹಿರ ಚಟುವಟಿಕೆಗಳು, ಬೈಲಾ ಉಲ್ಲಂಘನೆ, ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿರುವ ಬಗ್ಗೆ ಪ್ರಸ್ತಾಪಿಸಲಾಗಿದೆ ಎಂಬುದನ್ನು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ವರದಿ ನೀಡಿ ಎಂಟು ವರ್ಷವಾದರೂ ಅದರ ಅನುಷ್ಠಾನವಾಗಿಲ್ಲ. ರಾಜ್ಯದ ಹಿತರಕ್ಷಣೆ ಮತ್ತು ಕ್ಲಬ್‌ಗಳು ಪಾರದರ್ಶಕವಾಗಿ ನಡೆಯಬೇಕು ಎಂಬ ದೃಷ್ಟಿಯಿಂದ ವರದಿಯನ್ನು ಜಾರಿಗೊಳಿಸಬೇಕು. ಇದರಿಂದ ಸರ್ಕಾರಕ್ಕೂ ಅಧಿಕ ಆದಾಯ ಬರಲಿದೆ ಎಂದು ಅವರು ಮನವಿ ಮಾಡಿದ್ದಾರೆ.

## ಜಿಹಾದಿ ಕೃತ್ಯಗಳನ್ನು ಖಂಡಿಸಿ ಜ. 25ರಂದು ಫ್ರೀಡಮ್ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರು ಹಿಂದೂಗಳಿಗೆ ಸುರಕ್ಷಿತ ನಗರವಲ್ಲ ಎಂಬುದನ್ನು ಚಾಮರಾಜಪೇಟೆಯಲ್ಲಿ ನಡೆಯುತ್ತಿರುವ ನಿರಂತರ ದೌರ್ಜನ್ಯಗಳು ಸಾಬೀತುಪಡಿಸಿವೆ. ಹಿಂದೂ ಭಕ್ತರು, ಮಹಿಳೆಯರು, ವ್ರತಧಾರಿಗಳು ಮತ್ತು ದೇವಾಲಯಗಳ ಮೇಲೆ ನಡೆಯುತ್ತಿರುವ ದಾಳಿಗಳು ಈಗ ಸಹನೆಯ ಗಡಿ ದಾಟಿವೆ. ಇದು ಕೇವಲ ಕಾನೂನು ಸುವ್ಯವಸ್ಥೆಯ ವೈಫಲ್ಯವಲ್ಲ; ಹಿಂದೂ ವಿರೋಧಿ ಷಡ್ಯಂತ್ರವನ್ನು ಸರ್ಕಾರವೇ ಮೌನವಾಗಿ ಪೋಷಿಸುತ್ತಿರುವ ಭಯಾನಕ ಸ್ಥಿತಿಯಾಗಿದೆ.

ಓಂ ಶಕ್ತಿ ಮಾಲಧಾರಿಣಿ ಮಹಿಳಾ ಭಕ್ತರು ಶಾಂತಿಪೂರ್ಣವಾಗಿ ಭಜನಾ ಮೆರವಣಿಗೆ ನಡೆಸುತ್ತಿದ್ದಾಗ, ದುಷ್ಕರ್ಮಿಗಳು ಮಾರಣಾಂತಿಕ ಕಲ್ಲು ತೂರಾಟ ನಡೆಸಿ ಮಹಿಳೆಯರನ್ನು ಗಾಯಗೊಳಿಸಿದರು. ಮಹಿಳೆಯರ ಮೇಲೂ ದಾಳಿ ನಡೆಸುವಷ್ಟು ಕ್ರೂರ ಮನಸ್ಥಿತಿಯ ಈ ಶಕ್ತಿಗಳನ್ನು ಸರ್ಕಾರ ಕೇವಲ ''ಅಪ್ರಾಪ್ತರು ತಪ್ಪು ಮಾಡಿದ್ದಾರೆ'' ಎಂದು ಮೃದುವಾಗಿ ಸಂಬೋಧಿಸುತ್ತಿರುವುದು ಅಪರಾಧಿಗಳ ಮನೋಬಲ ಹೆಚ್ಚಿಸಿದೆ. ಈ ಹಿಂದೆ ಅಲ್ಲಿನ ನರಸಿಂಹ ದೇವಸ್ಥಾನದ ಉತ್ಸವ ಮೂರ್ತಿಯ ಮೇಲೆ ಅಶುದ್ಧ ನೀರು ಎರಚಿ ಅಪವಿತ್ರ ಮಾಡಿದ ಘಟನೆಯು ಜರುಗಿತ್ತು. ಕೆಲವು ದಿನಗಳ ಹಿಂದೆ ಆಕಳ ಕೆಚ್ಚಲು ಕತ್ತರಿಸಿದ ಅಮಾನವೀಯ ಕೃತ್ಯ ನಡೆದಿತ್ತು ತದನಂತರ ಹಿಂದುಗಳ ಆಕ್ರೋಶದ ನಂತರ ಈ ಕೃತ್ಯವನ್ನು ಒಬ್ಬ ಮಾನಸಿಕ ಅಸ್ವಸ್ಥ ಮಾಡಿದ್ದನೆಂದು ಪ್ರಕರಣವನ್ನು ಮುಚ್ಚಿ ಹಾಕಿದರು. ಅಲ್ಲಿ ಅಯ್ಯಪ್ಪ ಮಾಲಧಾರಿಗಳ ಮೇಲೆ ದಾಳಿ ಮತ್ತು ವ್ರತಾಚರಣೆಯ ಟೆಂಟ್‌ಗೆ ಬೆಂಕಿ ಹಚ್ಚುವ ಮೂಲಕ ಭಕ್ತರಲ್ಲಿ ಭಯ ಬಿತ್ತಲಾಗುತ್ತಿದೆ. ಅದಲ್ಲದೆ ಚಾಮರಾಜಪೇಟೆಯ ಆಟದ ಮೈದಾನ ಕಬಳಿಸುವ ಷಡ್ಯಂತ್ರ ನಡೆಯುತ್ತಿದೆ. ಧಾರ್ಮಿಕ ದತ್ತಿ ಇಲಾಖೆಯ ಅರುಣಾಚಲೇಶ್ವರ ದೇವಸ್ಥಾನದ ಸುತ್ತ ಕಾನೂನುಬಾಹಿರ ಮಾಂಸದ ಅಂಗಡಿಗಳ ಒಗ್ಗಟ್ಟುಗಳನ್ನು ಇದುವರೆಗೆ ತೆಳು ಮಾಡಿಲ್ಲ ಹಾಗೂ ಪಶುಸಂಗೋಪನೆ ಇಲಾಖೆಗೆ ಸೇರಿದ ಸುಮಾರು 100 ಕೋಟಿ ರೂ. ಮೌಲ್ಯದ ಜಾಗವನ್ನು ಅಲ್ಪಸಂಖ್ಯಾತ ಇಲಾಖೆಗೆ ಹಸ್ತಾಂತರಿಸುವ ಪ್ರಯತ್ನಗಳು ನಡೆದಿವೆ. ಮಾನ್ಯ ಉಚ್ಚ ನ್ಯಾಯಾಲಯವು ತಡೆಆಜ್ಞೆ ನೀಡದಿದ್ದರೆ ಸರ್ಕಾರಿ ಪ್ರಾಯೋಜಿತ ಭೂಮಿ ಕಬಳಿಕೆಯೂ ಪೂರ್ಣಗೊಳ್ಳುತ್ತಿತ್ತು ಎಂದು ಪ್ರಮೋದ್ ಮುತಾಲಿಕ್ ಅವರು ಆಕ್ರೋಶವನ್ನು ಹೊರಹಾಕಿದರು. ಈ ಎಲ್ಲಾ ದೌರ್ಜನ್ಯಗಳ ವಿರುದ್ಧ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯು ಬೃಹತ್ ಪ್ರತಿಭಟನೆಯನ್ನು ಆಯೋಜನೆ ಮಾಡಿದೆ.




ಉದಯವಾಹಿನಿ ಚಿತ್ರ

ಈ ಪ್ರತಿಭಟನೆಯು ಕೇವಲ ಆಕ್ರೋಶವಲ್ಲ, ಇದು ಹಿಂದೂಗಳ ಅಸ್ತಿತ್ವಕ್ಕಾಗಿ ನಡೆಯುವ ಎಚ್ಚರಿಕೆಯ ಗಂಟೆ. ಸರ್ಕಾರವು ಕೂಡಲೇ ಎಚ್ಚೆತ್ತು ಅಪರಾಧಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳದಿದ್ದರೆ, ಮುಂದಿನ ದಿನಗಳಲ್ಲಿ ತೀವ್ರ ಜನಾಂದೋಲನದ ಮೂಲಕ ಉತ್ತರ ನೀಡಲಾಗುವುದು ಎಂದು ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯು ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ನಡೆದ ಪತ್ರಿಕಾ ಪರಿಷತ್ತಿನಲ್ಲಿ ತಿಳಿಸಿದೆ. ಈ ಪತ್ರಿಕಾ ಪರಿಷತ್ತಿನಲ್ಲಿ ಶ್ರೀ ಪ್ರಮೋದ್ ಮುತಾಲಿಕ್, ರಾಷ್ಟ್ರೀಯ ಅಧ್ಯಕ್ಷರು, ಶ್ರೀರಾಮ ಸೇನೆ, ಮೋಹನ ಗೌಡ, ರಾಜ್ಯ ವಕ್ತಾರರು, ಹಿಂದೂ ಜನಜಾಗೃತಿ ಸಮಿತಿ, ಬಿ.ಎನ್. ಮಹೇಶ ಕುಮಾರ್, ಅಯ್ಯಪ್ಪ ದೇವಸ್ಥಾನ, ರಕ್ಷಿತಾ, ಕಾರ್ಯದರ್ಶಿ, ಓಂ ಶಕ್ತಿ ಸಂಘಟನೆ, ಸುಂದ್ರೇಶ್ ನರ್ಗಲ್, ಅಧ್ಯಕ್ಷರು, ಶ್ರೀ ರಾಮ ಸೇನೆ, ಕರ್ನಾಟಕ, ಮಂಜುನಾಥ, ಅಧ್ಯಕ್ಷರು, ಶ್ರೀ ರಾಮ ಸೇನೆ, ಬೆಂಗಳೂರು ನಗರ ಇವರು ಉಪಸ್ಥಿತರಿದ್ದರು.

## ಕಾನೂನು ಎಲ್ಲರಿಗೂ ಒಂದೇ: ಮನೆ ಊಟಕ್ಕೆ ಬೇಡಿದ್ದ ಪವಿತ್ರಾಗೆ ಶಾಕ್

• ಉದಯವಾಹಿನಿ, ಬೆಂಗಳೂರು

ಕಳೆದೊಂದು ತಿಂಗಳಿನಿಂದ ಮನೆ ಊಟಕ್ಕಾಗಿ ಹಂಬಲಿಸುತ್ತಿರುವ ಪವಿತ್ರ ಗೌಡಗೆ ಹೈಕೋರ್ಟ್ ಬಿಗ್ ಶಾಕ್ ನೀಡಿದೆ. ಕಾನೂನಿನಲ್ಲಿ ಮನೆ ಊಟಕ್ಕೆ ಅವಕಾಶ ಇಲ್ಲ. ಊಟ ನೀಡುವುದು ಸೂಕ್ತ ಅಲ್ಲ ಎಂದು ಅಭಿಪ್ರಾಯಪಟ್ಟು ಸೆಷನ್ಸ್ ಕೋರ್ಟ್ ಆದೇಶಕ್ಕೆ ತಡೆ ನೀಡಿದೆ.



ಕಳೆದ ನಾಲ್ಕು ತಿಂಗಳಿನಿಂದ ಜೈಲಿನ ಊಟ ತಿನ್ನುತ್ತಿದ್ದೇನೆ. ಜೈಲೂಟದಿಂದ ದಿನ ದಿನ ಆರೋಗ್ಯದಲ್ಲಿ ಸಮಸ್ಯೆ ಆಗುತ್ತಿದ್ದು ಮನೆಯೂಟ ನೀಡುವಂತೆ ಪವಿತ್ರಾ ಗೌಡ ನ್ಯಾಯಾಲಯಕ್ಕೆ ಅರ್ಜಿ ಹಾಕಿ ಊಟ ಪಡೆಯುವಲ್ಲಿ ಯಶಸ್ವಿಯಾಗಿದ್ದರು. ಮನೆ ಊಟ ನೀಡುವುದಕ್ಕೆ ಕಾರಾಗೃಹ ಇಲಾಖೆ ಬಿಲ್ ಕುಲ್ ಒಪ್ಪಿಗೆ ನೀಡಿರಲಿಲ್ಲ. ಒಬ್ಬರಿಗೆ ಊಟ ನೀಡಿದರೆ ಎಲ್ಲರೂ ಇದೇ ಆದೇಶ ಉಲ್ಲೇಖಿಸಿ ಊಟ ಪಡೆಯುತ್ತಾರೆ. ಆಗ ಊಟವನ್ನು ನೀಡುವುದೇ ದೊಡ್ಡ ಕೆಲಸ ಆಗಿ ಹೋಗುತ್ತದೆ.

ಆ ರೀತಿ ಊಟ ನೀಡಿದರೆ ಜೈಲಿನ ಊಟ ಕಳಪೆ ಎಂದು ನಾವೇ ಒಪ್ಪಿಕೊಂಡಂತೆ ಆಗುತ್ತದೆ. ಹಾಗಾಗಿ ಊಟ ನೀಡಲು ಸಾಧ್ಯವಿಲ್ಲ ಎಂದು ಹೇಳಿತ್ತು. ಕೋರ್ಟ್‌ವಾರಕ್ಕೆ ಒಮ್ಮೆ ಊಟ ನೀಡಿ ಎಂದಿತ್ತು. ಅದಕ್ಕೂ ಒಪ್ಪದ ಕಾರಾಗೃಹ ಇಲಾಖೆ ಹೈಕೋರ್ಟ್ ಮೊರೆ ಹೋಗಿತ್ತು.

ಹೈಕೋರ್ಟ್‌ನಲ್ಲಿ ತಮ್ಮ ವಾದ ಮಂಡಿಸಿದ ಎಸ್‌ಪಿಪಿ ಜಗದೀಶ್ ಜೈಲಿನ ಊಟ ಪ್ರಮಾಣೀಕರಿಸಲಾಗಿದ್ದು ಕಳಪೆ ಆಹಾರ ಅಲ್ಲ ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಈಗಾಗಲೇ 4 ಸ್ಟಾರ್ ನೀಡಿದೆ. ಇದೂವರೆಗೂ ಯಾವೊಬ್ಬ ಆರೋಪಿಯೂ ಊಟದ ಬಗ್ಗೆ ದೂರು ನೀಡಿಲ್ಲ ಎಂದು ಕೋರ್ಟ್ ಗಮನಕ್ಕೆ ತಂದರು.

ವಾದ ಆಲಿಸಿದ ನ್ಯಾ. ನಾಗಪ್ರಸನ್ನ ಅವರ ಪೀಠ ಕಾನೂನು ಎಲ್ಲರಿಗೂ ಒಂದೇ. ಯಾವುದೇ ವಿಶೇಷ ಸವಲತ್ತನ್ನು ನೀಡುವ ಹಾಗೇ ಇಲ್ಲ. ಈಗಾಗಲೇ ಸುಪ್ರೀಂ ಕೋರ್ಟ್ ವಿಶೇಷ ಸವಲತ್ತು ನೀಡಿದರೆ ಅಧಿಕಾರಿಗಳ ತಲೆದಂಡ ಮಾಡಲಾಗುವುದು ಎಂದು ಹೇಳಿದೆ ಎಂದು ಉಲ್ಲೇಖಿಸಿ ಸೆಷನ್ಸ್ ಕೋರ್ಟ್ ನೀಡಿದ ಆದೇಶಕ್ಕೆ ಬ್ರೇಕ್ ಹಾಕಿದೆ.

ಅಲ್ಲದೇ ಯಾವೊಬ್ಬ ಆರೋಪಿಗೂ ಮನೆ ಊಟ ನೀಡದಂತೆ ಸೂಚಿಸಿದೆ. ಒಟ್ಟಿನಲ್ಲಿ ಕಳೆದ 4 ತಿಂಗಳಿಂದ ಹಾಸಿಗೆ, ದಿಂಬು ಮನೆ ಊಟ, ಬ್ಲಾಂಕೇಟ್ ಅಂದುಕೊಂಡೇ ಕಾಲ ದೂಡಿದ್ದ ಪವಿತ್ರಗೌಡ ಅಂಡ್ ಗ್ಯಾಂಗ್ ಈಗ ಮತ್ತೊಂದು ಶಾಕ್ ಎದುರಾಗಿದೆ.

## ಪ್ರಸಿದ್ಧ ಇಸ್ಕಾನ್ ದೇವಾಲಯದ ಸ್ಕೈವಾಕ್ ಬಳಿ ಬೆಂಕಿ, ತಪ್ಪಿದ ಅನಾಹುತ!

• ಉದಯವಾಹಿನಿ, ಬೆಂಗಳೂರು

ಪ್ರಸಿದ್ಧ ಇಸ್ಕಾನ್ ದೇವಾಲಯದ ಸ್ಕೈವಾಕ್ ಬಳಿ ಕಳೆದ ರಾತ್ರಿ ಬೆಂಕಿ ಅವಘಡ ಸಂಭವಿಸಿದೆ. ಸ್ಕೈವಾಕ್‌ನಲ್ಲಿ ಹಾಕಿದ್ದ ಜಾಹಿರಾತು ಬ್ಯಾನರ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲಕಾಲ ಆತಂಕಕ್ಕೆ ಕಾರಣವಾಗಿತ್ತು. ಆದರೆ ಸುದ್ದಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದವರು ಕೂಡಲೇ ಸ್ಥಳಕ್ಕಾಗಮಿಸಿ ಬೆಂಕಿಯನ್ನು ನಂದಿಸಿದ್ದಾರೆ. ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ವರದಿಯಾಗಿದೆ. ಈ ಘಟನೆ ಕುರಿತು ಹಲವು ಸುದ್ದಿ ಸಂಸ್ಥೆಗಳು ಮತ್ತು ಸೋಶಿಯಲ್ ಮೀಡಿಯಾ ಪೋಸ್ಟ್‌ಗಳಲ್ಲಿ ಮಾಹಿತಿ ಹಂಚಿಕೊಳ್ಳಲಾಗಿದೆ. ಬೆಂಕಿ ಅವಘಡಕ್ಕೆ ಸೂಕ್ತ ಕಾರಣ ತಿಳಿದುಬಂದಿಲ್ಲ. ಆದರೆ, ಬ್ಯಾನರ್‌ಗೆ ಅಳವಡಿಸಿದ ಲೈಟ್‌ಗಳಿಂದ ಶಾರ್ಟ್ ಸರ್ಕಿಟ್ ಆಗಿದ್ದು, ಬೆಂಕಿ ಉಂಟಾಗಿದೆ ಎನ್ನಲಾಗುತ್ತಿದೆ. ಈ ಸಂಬಂಧ ಹೆಚ್ಚಿನ ತನಿಖೆ ನಡೆಯುತ್ತಿದೆ.

# ಮಹಿಳೆಯರ ಗುರುತು ಸಿಕ್ಕಿಲ್ಲ, ತನಿಖೆಗೆ ಆದೇಶ: ಡಾ ಜಿ ಪರಮೇಶ್ವರ್

### ರಾಜ್ಯ ಸರ್ಕಾರ ತಕ್ಷಣದಿಂದಲೇ ಜಾರಿಗೆ ಬರುವಂತೆ ನಾಗರಿಕ ಹಕ್ಕು ಜಾರಿ

• ಉದಯವಾಹಿನಿ, ಬೆಂಗಳೂರು

ಕಚೇರಿಯಲ್ಲಿ ಪೊಲೀಸ್ ಸಮವಸ್ತ್ರದಲ್ಲಿರುವಾಗಲೇ ಮಹಿಳೆಯರ ಜೊತೆ ರಾಸಲೀಲೆ ನಡೆಸಿದ ವಿಡಿಯೋ ವೈರಲ್ ಆದ ಬೆನ್ನಲ್ಲೇ ಕಠಿಣ ಕ್ರಮ ಕೈಗೊಳ್ಳಲಾಗಿದ್ದು, ರಾಜ್ಯ ಸರ್ಕಾರ ತಕ್ಷಣದಿಂದಲೇ ಜಾರಿಗೆ ಬರುವಂತೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಡಿಜಿಪಿ ರಾಮಚಂದ್ರ ರಾವ್ ಅವರನ್ನು ಹುದ್ದೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದೇವೆ ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಖಚಿತ ಪಡಿಸಿದ್ದಾರೆ.

ಬೆಳಗ್ಗೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾವು ತಕ್ಷಣ ಕ್ರಮ ಕೈಗೊಂಡಿದ್ದೇವೆ. ತನಿಖೆಯ ನಂತರ ಏನು ಬೇಕಾದರೂ ಆಗಬಹುದು. ಅವರನ್ನು ವಜಾಗೊಳಿಸಬಹುದು. ತಕ್ಷಣ ಕ್ರಮ ಕೈಗೊಳ್ಳಬೇಕಾಗಿದ್ದರಿಂದ ಈ ನಿರ್ಧಾರ ತೆಗೆದುಕೊಂಡಿದ್ದೇವೆ. ಅವರು ಹಿರಿಯ ಅಧಿಕಾರಿ ಎಂಬ ಅಂಶವನ್ನು ನೋಡದೆ, ಯಾವುದೇ ಹಿಂಜರಿಕೆಯಿಲ್ಲದೆ ಕ್ರಮ ಕೈಗೊಂಡಿದ್ದೇವೆ.

ತನಿಖೆಯಲ್ಲಿ ಏನಾಗುತ್ತದೆ ಎಂಬುದನ್ನು ನೋಡಿ ಮುಂದಿನ ಕ್ರಮ ಕೈಗೊಳ್ಳುತ್ತೇವೆ. ಪೊಲೀಸ್ ಇಲಾಖೆ ಮಾತ್ರವಲ್ಲ, ಯಾವುದೇ ಇಲಾಖೆಯೂ ಇಂತಹ ಘಟನೆಗಳನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಮತ್ತು ಅದಕ್ಕಾಗಿಯೇ ನಾವು ತಕ್ಷಣ ಕ್ರಮ ಕೈಗೊಂಡಿದ್ದೇವೆ. ಮುಖ್ಯಮಂತ್ರಿ ಕೂಡ ಅಸಮಾಧಾನಗೊಂಡಿದ್ದಾರೆ, ನನಗೂ ಅಸಮಾಧಾನವಿದೆ. ಇದು ಪೊಲೀಸ್ ಇಲಾಖೆಯಾಗಿರುವುದರಿಂದ ಖಂಡಿತಾ ಇಂತಹ ಕ್ರಮ ಒಪ್ಪಲು ಸಾಧ್ಯವಿಲ್ಲ ಎಂದರು.



ಉದಯವಾಹಿನಿ ಚಿತ್ರ

**ಕೃತಕ ವಿಡಿಯೋ ಎಂದ ಡಿಜಿಪಿ**

**ವಿಡಿಯೋ ವೈರಲ್ ಆಗುತ್ತಿದ್ದಂತೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ತಮ್ಮ ಕಚೇರಿಯನ್ನು ದಿಢೀರ್ ತೊರೆದ ರಾಮಚಂದ್ರರಾವ್, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಭೇಟಿಯಾಗಲು ಪ್ರಯತ್ನಿಸಿದರು. ಆದರೆ, ಗೃಹ ಸಚಿವರು ಅನಾರೋಗ್ಯದ ಕಾರಣ ಹೇಳಿ ಭೇಟಿಗೆ ಅವಕಾಶ ನೀಡಿಲ್ಲ. ಈ ವೇಳೆ ಸುದ್ದಿಗಾರರ ಜತೆ ಮಾತನಾಡಿದ ಡಿಜಿಪಿ ರಾಮಚಂದ್ರರಾವ್, ವಿಡಿಯೋ ಕಂಡು ಆಘಾತವಾಗಿದೆ. ವೈರಲ್ ಆದ ವಿಡಿಯೋ ಕೃತಕವಾಗಿ ಸೃಷ್ಟಿಸಲಾಗಿದೆ. ಈ ಬಗ್ಗೆ ತನಿಖೆಯಾಗಬೇಕಿದೆ ಎಂದರು.**

**ಭೇಟಿ ಮಾಡಿಲ್ಲ:** ನಿನ್ನೆ ವಿಡಿಯೊ ವೈರಲ್ ಆದ ಬೆನ್ನಲ್ಲೇ ತಮ್ಮನ್ನು ಭೇಟಿ ಮಾಡಲು ರಾಮಚಂದ್ರ ರಾವ್ ಬಂದಿದ್ದರು ಎಂದು ಆಮೇಲೆ ಗೊತ್ತಾಯಿತು. ಆದರೆ ಇಂತಹ ಪರಿಸ್ಥಿತಿಯಲ್ಲಿ ನಾನು ಖಂಡಿತಾ ಅವರನ್ನು ಭೇಟಿ ಮಾಡುತ್ತಿರಲಿಲ್ಲ. ಸರ್ಕಾರದ ಉನ್ನತ ಹುದ್ದೆಯಲ್ಲಿರುವ ಪೊಲೀಸ್ ಅಧಿಕಾರಿ ಇಂತಹ ನೀಚ ಕೆಲಸ ಮಾಡಿದ್ದರೆ ಅದನ್ನು ಖಂಡಿತಾ ಕ್ಷಮಿಸಲು ಸಾಧ್ಯವಿಲ್ಲ ಎಂದರು. ಡಿಜಿಪಿ ರಾಮಚಂದ್ರ ರಾವ್ ಅವರು ಇದೇ ವರ್ಷ ಮೇ ತಿಂಗಳಲ್ಲಿ ಸೇವೆಯಿಂದ ನಿವೃತ್ತರಾಗುವವರಿದ್ದರು. ನಿವೃತ್ತಿ ಅಂಚಿನಲ್ಲಿ ಅವರ ವಿಡಿಯೋ ಹೊರಬಿದ್ದಿದ್ದು, ಅವರಿಗೆ ಭಾರೀ ಸಂಕಷ್ಟ ಮತ್ತು ಮುಜುಗರ ಉಂಟಾಗಿದೆ.

> **ವೈರಲ್ ವಿಡಿಯೋದಲ್ಲಿ ರಾಮಚಂದ್ರ ರಾವ್ ಅವರ ಸಂಪರ್ಕದಲ್ಲಿದ್ದ ಮಹಿಳೆಯರು ಯಾರು ಎಂದು ಇದುವರೆಗೆ ಗೊತ್ತಾಗಿಲ್ಲ, ಯಾರೂ ಇದುವರೆಗೆ ದೂರು ನೀಡಿಲ್ಲ. ಆ ಬಗ್ಗೆ ಕೂಡ ತನಿಖೆ ಮಾಡುತ್ತಿದ್ದೇವೆ .**
>
> **-ಡಾ ಜಿ ಪರಮೇಶ್ವರ್**

ಷಡ್ಯಂತ್ರ ರೂಪಿಸಿ ನಕಲಿ ವಿಡಿಯೋ ಹರಿಬಿಡಲಾಗಿದೆ. ಈ ಬಗ್ಗೆ ವಕೀಲರ ಜತೆ ಚರ್ಚೆ ನಡೆಸಿ ಕಾನೂನು ಹೋರಾಟ ನಡೆಸುತ್ತೇನೆ, ಇದು ಹಳೆಯ ವಿಡಿಯೋ, ಎಂದ ರಾಮಚಂದ್ರ ರಾವ್, ಎಂಟು ವರ್ಷಗಳ ಹಿಂದೆ ಬೆಳಗಾವಿಯಲ್ಲಿ ಕೆಲಸ ಮಾಡಿದ್ದೆ, ಎಂದಷ್ಟೇ ಹೇಳಿ ಘಟನೆ ಬಗ್ಗೆ ಹೆಚ್ಚಿನ ವಿವರ ನೀಡಲು ನಿರಾಕರಿಸಿದರು.

# ಜಿಟಿಡಿ ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿದ್ದಾರೆ ಎಂದು ಆರೋಪ

• **ಉದಯವಾಹಿನಿ, ಮೈಸೂರು**

ಶಾಸಕ ಜಿ ಟಿ ದೇವೇಗೌಡ ವಿರುದ್ಧ ವಿಧಾನ ಪರಿಷತ್ ಸದಸ್ಯ ಸಿ ಎನ್ ಮಂಜೇಗೌಡ ಮೈಸೂರಿನಲ್ಲಿ ವಾಗ್ದಾಳಿ ನಡೆಸಿದರು.

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ ಟಿ ದೇವೇಗೌಡ ಪಕ್ಷ ವಿರೋಧಿ ಚಟುವಟಿಕೆ ಮಾಡಿಲ್ಲ, ಜೆಡಿಎಸ್ ನಲ್ಲಿದ್ದೇನೆ. ಜೆಡಿಎಸ್ ನಲ್ಲೇ ಇರುತ್ತೇನೆ ಎಂದು ಹೇಳಿದ್ದಾರೆ. ಆದರೆ ವಿಧಾನ ಪರಿಷತ್ ಚುನಾವಣೆಯಲ್ಲಿ ನನ್ನ ವಿರುದ್ಧವೇ ಜಿ ಟಿ ದೇವೇಗೌಡ ಕೆಲಸ ಮಾಡಿದರು. ರಿಜ್ವಾನ್ ಹರ್ಷದ್ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ಸ್ಪರ್ಧಿಸಿದ್ದಾಗಲೂ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದವು. ಆದರೆ ಜಿ ಟಿ ದೇವೇಗೌಡರು ಬಿಜೆಪಿ ಅಭ್ಯರ್ಥಿ ಲಕ್ಷ್ಮಣ್ ಸವದಿಗೆ ಬೆಂಬಲ ನೀಡಿದರು ಎಂದು ಆರೋಪಿಸಿದರು.

**ಜಿಟಿಡಿಗೆ ಸವಾಲು:** ಸಾ ರಾ ಮಹೇಶ್ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸಿದ ಮರುದಿನವೇ ನಾನು ಜೆಡಿಎಸ್ ನಲ್ಲೇ ಇದ್ದೇನೆ. ಮುಂದೆಯೂ ಜೆಡಿಎಸ್ ನಿಂದಲೇ ಸ್ಪರ್ಧಿಸುವುದಾಗಿ ಜಿಟಿಡಿ ಹೇಳಿದ್ದಾರೆ.

ಚಾಮುಂಡೇಶ್ವರಿ ಕ್ಷೇತ್ರದ ಜನರೇನು ಕಿವಿಗೆ ಹೂವು ಮುಡಿದುಕೊಂಡಿಲ್ಲ. ಜಿಟಿಡಿಗೆ ಸಾಮರ್ಥ್ಯ ಇದ್ದರೆ ಅವರ ಸ್ವಂತ ಶಕ್ತಿಯ ಮೇಲೆ ಗೆದ್ದು ತೋರಿಸಲಿ.

ಒಂದು ವೇಳೆ ಪಕ್ಷ ಅವಕಾಶ ನೀಡಿದರೆ ಚಾಮುಂಡೇಶ್ವರಿ ಕ್ಷೇತ್ರದಿಂದ ಕಣಕ್ಕಿಳಿಯಲು ನಾನು ಸಿದ್ದನಿದ್ದೇನೆ. ಮುಂದಿನ ದಿನಗಳಲ್ಲಿ ಸಾ ರಾ ಮಹೇಶ್ ನೇತೃತ್ವದಲ್ಲಿ ಚುನಾವಣೆ ಎದುರಿಸುವಂತೆ ಹೆಚ್ ಡಿ ದೇವೇಗೌಡರು ಸೂಚಿಸಿದ್ದಾರೆ. ಅದರಂತೆ ನಾವೆಲ್ಲರೂ ನಡೆಯುತ್ತೇವೆ ಎಂದಿದ್ದಾರೆ.



**ಜೆಡಿಎಸ್‌ನಲ್ಲಿ ಗೊಂದಲ**

**ಹುಣಸೂರು ಕ್ಷೇತ್ರದಲ್ಲಿ ಬಿಜೆಪಿಯಿಂದ ಸ್ಪರ್ಧಿಸಿ 3 ನೇ ಸ್ಥಾನಕ್ಕೆ ಹೋಗಿದ್ದ ಜಿ ಟಿ ದೇವೇಗೌಡರನ್ನು ಜೆಡಿಎಸ್‌ಗೆ ಕರೆ ತಂದು ಶಾಸಕರನ್ನಾಗಿ ಮಾಡಿದ್ದು ಹೆಚ್ ಡಿ ಕುಮಾರಸ್ವಾಮಿ ಮತ್ತು ಸಾ ರಾ ಮಹೇಶ್ ಅವರು. ಆದರೂ ಕೆ ಆರ್ ನಗರದಲ್ಲಿ ಸಾ ರಾ ಮಹೇಶ್ ಬಲ ಕುಗ್ಗಿಸುವ ಕಾರ್ಯಕ್ಕೆ ಜಿ ಟಿ ದೇವೇಗೌಡ ಮುಂದಾದರು. ಜಿ ಟಿ ದೇವೇಗೌಡ ನಿರಂತರವಾಗಿ ಪಕ್ಷದ ವಿರುದ್ಧ ಕೆಲಸ ಮಾಡಿಕೊಂಡು ಬಂದಿದ್ದಾರೆ. ಎಂಸಿಡಿಸಿಸಿ ಚುನಾವಣೆಯಲ್ಲಿ ಸ್ವಂತ ಮಗನಾಗಿರುವ ಜಿ ಡಿ ಹರೀಶ್ ಗೌಡ ವಿರುದ್ಧ ಜಿಟಿಡಿ ಕೆಲಸ ಮಾಡಿದ್ದಾರೆ. ದೊಡ್ಡಸ್ವಾಮೀಗೌಡ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಆಗಲು ಜಿ ಟಿ ದೇವೇಗೌಡ ಬೆಂಬಲ ನೀಡಿದ್ದಾರೆ. ಜಿಟಿಡಿಯವರು ಜೆಡಿಎಸ್‌ನಲ್ಲಿ ಅನಗತ್ಯವಾಗಿ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.**

# ಮಾಂಸ ಪ್ರಿಯರಿಗೆ ಶಾಕ್ ಕೊಟ್ಟ ತಮಿಳುನಾಡು ಕುಕ್ಕುಟೋದ್ಯಮ ಬಂದ್


## ಪ್ರತಿ ಕೆ.ಜಿ. ಕೋಳಿ ಮಾಂಸದ ಬೆಲೆ 200-240 ರಿಂದ ಈಗ 300 ರಿಂದ 320 ರೂ.ವರೆಗೂ ಏರಿಕೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಎತ್ತಿಗೆ ಜ್ವರ ಬಂದರೆ ಕೋಣಕ್ಕೆ ಬರೆ ಹಾಕಿದರು ಎನ್ನುವ ಹಾಗೆ ತಮಿಳುನಾಡಿನಲ್ಲಿ ನಡೆಯುತ್ತಿರುವ ಕೋಳಿ ಸಾಕಣೆದಾರರ ಬಂದ್‌ನಿಂದ ರಾಜ್ಯದಲ್ಲಿ ಕೋಳಿ ಮಾಂಸದ ಬೆಲೆ ಗಗನಕ್ಕೇರಿದ್ದು, ಮಾಂಸ ಪ್ರಿಯರು ಹೌಹಾರಿದ್ದಾರೆ. ದಿನೇದಿನೆ ಮಾಂಸದ ಬೆಲೆಯಲ್ಲಿ ಏರಿಕೆಯಾಗುತ್ತಿದ್ದು, ಸದ್ಯಕ್ಕೆ ಇದು ಸುಧಾರಿಸುವ ಪರಿಸ್ಥಿತಿ ಇಲ್ಲ.

ರಾಜ್ಯಕ್ಕೆ ಹೆಚ್ಚಿನ ಪ್ರಮಾಣದ ಕೋಳಿ ಮಾಂಸ ನೆರೆಯ ತಮಿಳುನಾಡಿನಿಂದಲೇ ಪೂರೈಕೆಯಾಗುತ್ತಿದೆ. ಆದರೆ ಜನವರಿ ಆರಂಭದಿಂದಲೇ ಅಲ್ಲಿನ ರೈತರು ನಾನಾ ಕಾರಣಗಳಿಂದ ಕೋಳಿ ಸಾಕಣೆ ಬಂದ್ ಮಾಡಿದ್ದಾರೆ. ಹೀಗಾಗಿ ರಾಜ್ಯದಲ್ಲಿಕೋಳಿ ಮಾಂಸಕ್ಕೆ ಭಾರಿ ಬೇಡಿಕೆ ಸೃಷ್ಟಿಯಾಗಿದ್ದು, ಬೆಲೆ ಏರಿಕೆಯಾಗುತ್ತಿದೆ.

**ಏಕೆ ಬಂದ್?:** ಕೋಳಿ ಸಾಕಣೆ ದರ ಹೆಚ್ಚಳ ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ತಮಿಳುನಾಡಿನಲ್ಲಿ ಕೋಳಿ ಸಾಕಣೆದಾರರು ಜ.1 ರಿಂದ ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಬಂದ್ ಆರಂಭಿಸಿದ್ದಾರೆ. ಕೋಳಿ ಮಾಂಸ ಮಾರಾಟ ಕಂಪನಿಗಳು ಕೋಳಿ ಸಾಕಣೆ ಮಾಡಲು ರೈತರಿಗೆ ಪ್ರತಿ ಕೆಜಿ ಕೋಳಿಗೆ ಸುಮಾರು 6.50 ರೂ. ನೀಡುತ್ತಿವೆ. ಆದರೆ, ರೈತರು ಇದನ್ನು ಕನಿಷ್ಠ 15ರಿಂದ 20ಕ್ಕೆ ಏರಿಸಬೇಕು. ವಿದ್ಯುತ್ ದರ, ಕಾರ್ಮಿಕರ ಕೂಲಿ, ಹಸಿ



ಮೇವು ಔಷಧಗಳ ಬೆಲೆ ಗಣನೀಯವಾಗಿ ಏರಿಕೆಯಾಗಿದೆ.

ಹೀಗಾಗಿ ಸಾಕಣೆ ದರ ಏರಿಕೆಗೆ ಪಟ್ಟು ಹಿಡಿದಿದ್ದಾರೆ. ವಿಶೇಷವಾಗಿ ತಮಿಳುನಾಡಿನ ಪಲ್ಲಡಂ, ಕೊಯಮತ್ತೂರು, ಈರೋಡ್ ನಮಕ್ಕಲ್ ಭಾಗಗಳಿಂದ ರಾಜ್ಯದ ಬೆಂಗಳೂರು ಮತ್ತು ಇತರ ಭಾಗಗಳಿಗೆ ಹೆಚ್ಚಿನ ಪ್ರಮಾಣದಲ್ಲಿಕೋಳಿ ಮಾಂಸ ಪೂರೈಕೆಯಾಗುತ್ತದೆ. ಹೀಗಾಗಿ ಸಾಕಣೆ ದರ ಏರಿಕೆಗೆ ಪಟ್ಟು ಹಿಡಿದಿದ್ದಾರೆ. ಇದರಿಂದ ಉತ್ಪಾದನೆ ಇಲ್ಲದೇ ತಮಿಳುನಾಡಿನಿಂದ ರಾಜ್ಯಕ್ಕೆ ಕೋಳಿ ಮಾಂಸ ಬರುತ್ತಿಲ್ಲ. ರಾಜ್ಯದಿಂದಲೇ ತಮಿಳುನಾಡಿಗೆ ಮಾಂಸ ರವಾನೆ ಆಗುತ್ತಿದೆ.

**ಮಾರುಕಟ್ಟೆಯಲ್ಲಿ ಕೋಳಿ ಮಾಂಸವೇ ಸಿಗುತ್ತಿಲ್ಲ. ನಮಗೂ ಹೆಚ್ಚಿನ ದರ ನಿಗದಿ ಮಾಡಿದ್ದಾರೆ. ಹಳೇ ದರಕ್ಕೆ ಕೋಳಿ ಮಾಂಸ ಮಾರಲು ಸಾಧ್ಯವೇ ಇಲ್ಲ. ತಮಿಳುನಾಡಲ್ಲಿನಡೆಯುತ್ತಿರುವ ಗಲಾಟೆ ನಿಲ್ಲುವವರೆಗೂ ಬೆಲೆ ಏರಿಕೆಯಾಗುತ್ತಲೇ ಇರುವ ಸಾಧ್ಯತೆ ಇದೆ.**
**- ಇಮಾಮ್, ಕೋಳಿ ಅಂಗಡಿ ವ್ಯಾಪಾರಿ**

**ಬೆಲೆ ಏರಿಕೆ ಶಾಕ್ :** ಇದರಿಂದ ಕಳೆದ ಡಿಸೆಂಬರ್‌ನಲ್ಲಿ ಇದ್ದ ಪ್ರತಿ ಕೆ.ಜಿ. ಕೋಳಿ ಮಾಂಸದ ಬೆಲೆ 200-240 ರಿಂದ ಈಗ 300 ರಿಂದ 320 ರೂ.ವರೆಗೂ ಏರಿಕೆಯಾಗಿದೆ. ವಿಶೇಷವಾಗಿ ತಮಿಳುನಾಡಿನ ಪಲ್ಲಡಂ, ಕೊಯಮತ್ತೂರು, ಈರೋಡ್ ಮತ್ತು ನಮಕ್ಕಲ್ ಭಾಗಗಳಿಂದ ರಾಜ್ಯದ ಬೆಂಗಳೂರು ಮತ್ತು ಇತರ ಭಾಗಗಳಿಗೆ ಹೆಚ್ಚಿನ ಪ್ರಮಾಣದಲ್ಲಿಕೋಳಿ ಮಾಂಸ ಪೂರೈಕೆಯಾಗುತ್ತದೆ. ತಮಿಳುನಾಡಲ್ಲಿಹೋರಾಟದ ಮುಂಚೂಣಿಯಲ್ಲಿದ್ದ 10ಕ್ಕೂ ಹೆಚ್ಚು ಮಂದಿಯನ್ನು ಬಂಧಿಸಿರುವ ಹಿನ್ನೆಲೆಯಲ್ಲಿ ಬಂದ್ ಇನ್ನಷ್ಟು ಗಂಭೀರ ಸ್ವರೂಪ ಪಡೆದಿದೆ.

**21ರ ಸಭೆ ಮೇಲೆ ಕಣ್ಣು:** ಕಂಪನಿಗಳಿಂದ ರೈತರು ಹೊಸ ಕೋಳಿ ಮರಿ ಪಡೆಯುತ್ತಿಲ್ಲ. ಈಗಾಗಲೇ ಫಾರಂನಲ್ಲಿ ಬೆಳೆದಿರುವ ಕೋಳಿಗಳನ್ನೂ ಕೊಡುತ್ತಿಲ್ಲ. ಹೀಗಾಗಿ ಜ.21 ರಂದು ಸರಕಾರ ತ್ರಿಪಕ್ಷೀಯ ಮಾತುಕತೆಗೆ ಆಹ್ವಾನ ನೀಡಿರುವ ಸಭೆಯ ಮೇಲೆ ಎಲ್ಲರ ಕಣ್ಣು ನೆಟ್ಟಿದೆ. ರಾಜ್ಯದಲ್ಲೂ ಇದೇ ಬೇಡಿಕೆ ಇಟ್ಟುಕೊಂಡು ಕೆಲವು ದಿನ ಪ್ರತಿಭಟನೆ ನಡೆದಿತ್ತು.

**ತಮಿಳುನಾಡಲ್ಲಿ ಕೆಲವು ತಿಂಗಳಿಂದ ಕೋಳಿ ಸಾಕಣೆದಾರರು ಕಂಪನಿಗಳ ಮೋಸದ ವಿರುದ್ಧ ಸಿಡಿದೆದ್ದಿದ್ದಾರೆ. ಹೋರಾಟದ ನೇತೃತ್ವ ವಹಿಸಿದ್ದವರನ್ನು ಬಂಧಿಸಿದ್ದು ಹೋರಾಟ ತೀವ್ರ ಸ್ವರೂಪ ಪಡೆದಿದೆ. ಹೀಗಾಗಿ ತಮಿಳುನಾಡಲ್ಲಿ ಹೊಸ ಕೋಳಿ ಸಾಕುತ್ತಿಲ್ಲ. ಮಾಂಸದ ಬೇಡಿಕೆ ಹೆಚ್ಚು ಸೃಷ್ಟಿಯಾಗಿದೆ. ರಾಜ್ಯದಲ್ಲಿ ಬೆಲೆ ಏರಿಕೆಯಾಗಿದೆ.**
**-ರವಿಕುಮಾರ್, ರಾಜ್ಯ ಖಜಾಂಚಿ, ಕೋಳಿ ಸಾಕಣೆದಾರರ ಸಂಘ**

ಆದರೆ ನಿರೀಕ್ಷಿತ ಫಲ ಸಿಕ್ಕಿರಲಿಲ್ಲ. ಈಗ ತಮಿಳುನಾಡಿನ ರೈತರು ತಾರ್ಕಿಕ ಅಂತ್ಯ ಕಾಣಿಸುವ ಪಣತೊಟ್ಟಿದ್ದು, ಕೋಳಿ ಮಾಂಸ ಪೂರೈಕೆಯಲ್ಲಿ ಭಾರೀ ವ್ಯತ್ಯಯವಾಗಿದೆ.

# ನೆನೆಗುದಿಗೆ ಬಿದ್ದ ರಸ್ತೆ ಕಾಮಗಾರಿ: ಗುತ್ತಿಗೆದಾರನ ವಿರುದ್ಧ ಸಾರ್ವಜನಿಕರ ಹಿಡಿಶಾಪ

• **ಉದಯವಾಹಿನಿ, ಗುಂಡ್ಲುಪೇಟೆ**

ತೆರಕಣಾಂಬಿಯ ತ್ರಿಯಂಬಕಪುರ ಗೇಟ್ನಿಂದ ಜೆ ಎಸ್ ಎಸ್ ಶಾಲೆಯವರೆಗೆ ಚಾಲ್ತಿಯಲ್ಲಿದ್ದ ರಸ್ತೆ ಕಾಮಗಾರಿಯು ಅರ್ಧಕ್ಕೆ ನಿಂತ ಪರಿಣಾಮ ವಾಹನ ಸವಾರರು, ಸಾರ್ವಜನಿಕರಿಗೆ ಪ್ರತಿನಿತ್ಯ ಕಿರಿಕಿರಿ ಉಂಟಾಗುತ್ತಿದ್ದು ಗುತ್ತಿಗೆದಾರನ ವಿರುದ್ಧ ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ.

ಲೋಕೋಪಯೋಗಿ ಇಲಾಖೆಯಡಿ ಸುಮಾರು ಎರಡೂವರೆ ಕೋಟಿ ವೆಚ್ಚದಲ್ಲಿ ಒಂದೂವರೆ ಕಿಲೋ ಮೀಟರ್ ರಸ್ತೆ ಕಾಮಗಾರಿ ಕೈಗೊಂಡು ತಿಂಗಳುಗಳೇ ಕಳೆದರೂ ಸಹ ರಸ್ತೆಯನ್ನ ಪೂರ್ಣಗೊಳಿಸದೆ ವಿಳಂಭ ನೀತಿ ಅನುಸರಿಸುತ್ತಿರುವ ಅಧಿಕಾರಿಗಳ ನಡೆಗೆ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ, ಪ್ರತಿನಿತ್ಯ ಸಂಚರಿಸುವ ನೂರಾರು ವಾಹನ ಸವಾರರು ಧೂಳಿನಾಭಿಷೇಕಕ್ಕೆ ತುತ್ತಾಗುತ್ತಿದ್ದಾರೆ.

ಕಾಮಗಾರಿ ಆರಂಭಗೊಳಿಸಿ ಆರು ತಿಂಗಳುಗಳೇ ಗತಿಸುತ್ತಲಿದೆ ಆದರೆ ರಸ್ತೆಗೆ ಮುಕ್ತಿ ನೀಡಬೇಕಿದ್ದ ಗುತ್ತಿಗೆದಾರ ನಾಪತ್ತೆಯಾಗಿದ್ದಾರೆ, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ



ಕೋಟ್ಯಾಂತರ ತೆರಿಗೆ ಹಣ ಪೋಲಾಗುತ್ತಿದೆ ಎಂದು ಸ್ಥಳೀಯರು ಕಿಡಿಕಾರಿದ್ದಾರೆ.

ಅರ್ಧಕ್ಕೆ ನಿಂತ ಕಾಮಗಾರಿಯನ್ನ ಮರು ಆರಂಭಿಸಲು ಇಲಾಖೆ ಕ್ರಮಕ್ಕೆ ಮುಂದಾಗುತ್ತಿಲ್ಲ ಇದರಿಂದ ಅಧಿಕಾರಿಗಳು ಮತ್ತು ಗುತ್ತಿಗೆದಾರನ ನಡುವಿನ ಬಾಂಧವ್ಯವೇ ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ. ಗ್ರಹಣ ಹಿಡಿದಿರುವ ರಸ್ತೆಗೆ ಮುಕ್ತಿ ನೀಡಲು ಆಸಕ್ತಿ ತೋರಬೇಕಿದ್ದವರ ಅಸಡ್ಡೆ ತನಕ್ಕೆ ಸಾರ್ವಜನಿಕರು ಉಪದ್ರ ಎದುರಿಸಬೇಕಿರುವುದು ವಿಪರ್ಯಾಸದ ಸಂಗತಿಯಾಗಿದೆ, ಕೂಡಲೇ ತ್ವರಿತಗತಿಯಲ್ಲಿ ಕಾಮಗಾರಿಯನ್ನ ಪೂರ್ಣಗೊಳಿಸಿ ಸಾರ್ವಜನಿಕರ ಹಿತ ಕಾಯದಿದ್ದಲ್ಲಿ ಚಳುವಳಿಗೆ ಮುಂದಾಗಬೇಕಾಗುತ್ತದೆ ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ಚಾಮರಾಜನಗರ ಜಿಲ್ಲಾಧ್ಯಕ್ಷ ಈಶ್ವರ್ ಎಚ್ಚರಿಸಿದ್ದಾರೆ.


**ರಸ್ತೆ ನಿರ್ಮಾಣ ಕಾಮಗಾರಿ ವಿಳಂಭವಾಗಿಲ್ಲ, ಈಗಾಗಲೇ ಜಲ್ಲಿಸಹಿತ ಮೆಟ್ಲಿಂಗ್ ರಸ್ತೆ ಪೂರ್ಣವಾಗಿದೆ, ರಸ್ತೆಗೆ ಹಾಕಲಾಗಿರುವ ಜಲ್ಲಿಯು ಭೂಮಿಗೆ ಹೊಂದಿಕೊಳ್ಳುವ ಉದ್ದೇಶದಿಂದ ಪ್ರತಿನಿತ್ಯ ನೀರು ಸಿಂಪಡಿಸಲಾಗುತ್ತಿದೆ ಇನ್ನು ಮೂರು ದಿನಗಳಲ್ಲಿ ಕಾಮಗಾರಿ ಆರಂಭಗೊಳ್ಳಲಿದೆ.**
**-ರವಿಕುಮಾರ್ ಎಇಇ ಲೋಕೋಪಯೋಗಿ ಇಲಾಖೆ**

# ಅಕ್ರಮವಾಗಿ ಮತದಾರರ ಪಟ್ಟಿಗೆ ಹೆಸರು

• **ಉದಯವಾಹಿನಿ, ಕೋಲಾರ**

ತಾಲ್ಲೂಕಿನ ನರಸಾಪುರ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರ ಸಂಘದಲ್ಲಿ ಆಡಳಿತ ಮಂಡಳಿಗೆ ಸಾಮಾನ್ಯ ಚುನಾವಣೆ ಸಂಬಂಧಿಸಿದಂತೆ ಅಕ್ರಮವಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲಾಗಿದೆ ಎಂಬ ಆರೋಪಿಸಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಸೊಸೈಟಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು. ಮಾಜಿ ಸಚಿವ ವರ್ತೂರು ಪ್ರಕಾಶ್, ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ, ಎಪಿಎಂಸಿ ಮಾಜಿ ಅಧ್ಯಕ್ಷೆ ಜೆಡಿಎಸ್‌ನ ಕುರ್ಕಿ ರಾಜೇಶ್ವರಿ ನೇತೃತ್ವದಲ್ಲಿ ಸಂಘದ ಕಚೇರಿಗೆ ಮುತ್ತಿಗೆ ಹಾಕಿ ಅಕ್ರಮಗಳ ಬಗ್ಗೆ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಘೋಷಣೆ ಕೂಗಿದರು. ಮತದಾರರ ಪಟ್ಟಿ ತಯಾರಿಕೆ ನಿಯಮ 13ಡಿ ಮತ್ತು ಪ್ರಕರಣ 20ರ ರೀತ್ಯ ಅನುಸರಿಸಿರುವ ಕ್ರಮಗಳ ಬಗ್ಗೆ ದೃಢೀಕರಣ ದಾಖಲೆಗಳನ್ನು ನೀಡದೆ ವಂಚಿಸಲಾಗುತ್ತಿದೆ ಎಂದು ದೂರಿದರು. ಕುರ್ಕಿ ರಾಜೇಶ್ವರಿ ಮಾತನಾಡಿ, ಜ.28 ರಂದು ಚುನಾವಣೆ ನಡೆಯಲಿದೆ. ಆದರೆ, ಸೊಸೈಟಿಯ ಅಧ್ಯಕ್ಷರು ಹಾಗೂ ಸೊಸೈಟಿಯ ಸಿಇಓ ಶಾಮೀಲಾಗಿ 200ಕ್ಕೂ ಹೆಚ್ಚು ಮಂದಿ ಕೈ ಸಾಲಗಾರರನ್ನು ಅಕ್ರಮವಾಗಿ ಮತಪಟ್ಟಿಗೆ ಸೇರ್ಪಡೆ ಮಾಡಿ ವೋಟ್ ಚೋರಿ ಮಾಡಿದ್ದಾರೆ ಎಂದು ಆರೋಪಿಸಿದರು.

# ವಿಜ್ಞಾನ ಶಿಕ್ಷಕನಿಗೆ ರಾಷ್ಟ್ರಮಟ್ಟದ ಪುರಸ್ಕಾರ



• **ಉದಯವಾಹಿನಿ, ಹಾರೋಹಳ್ಳಿ**

2025-26ನೇ ಸಾಲಿನಲ್ಲಿ ಭಾರತಿ ಏರ್‌ಟೆಲ್ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ನ್ಯಾಷನಲ್ ಟಿಎಲ್‌ಎಂ ಲೀಗ್ 2025ರ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಕಲ್ಲನಕುಪ್ಪೆ ಪ್ರೌಢಶಾಲೆ ಮಾದರಿ ವಿಜ್ಞಾನ ಶಿಕ್ಷಕ ಶಿವಶಂಕರಾಚಾರಿ.ಕೆ ಭಾಗವಹಿಸಿ ಮನ್ನಣೆಗೆ ಪಾತ್ರರಾಗಿದ್ದಾರೆ. ಅವರು ಮಂಡಿಸಿದ ಕೇಂದ್ರ ತ್ಯಾಗಿ ಬಲ ಹಾಗೂ ಅದರ ಅನ್ವಯಗಳ ಕುರಿತ ಕಡಿಮೆ ವೆಚ್ಚದ ಕಲಿಕೋಪಕರಣ ಪ್ರಸ್ತುತಿ ಕುರಿತಾದ ಆನ್‌ಲೈನ್ ಮೋಡ್ ಪ್ರದರ್ಶನದಲ್ಲಿ ಈ ಸಾಧನೆ ಮಾಡಿದ್ದಾರೆ.ದೇಶದ ವಿವಿಧ ರಾಜ್ಯಗಳ ನೂರಾರು ಶಿಕ್ಷಕರು ಈ ಪ್ರದರ್ಶನದಲ್ಲಿ ಭಾಗವಹಿಸಿ ತಮ್ಮ ಮಾದರಿಗಳನ್ನು ಪ್ರದರ್ಶಿಸಿದರು.

ಶಿವಶಂಕರ ಚಾರಿ ಅವರ ಮಾದರಿಯು ಉತ್ತಮ ಹಾಗೂ ಹೆಚ್ಚು ಉಪಯುಕ್ತ ಮಾದರಿಯಾಗಿದ್ದು ರಾಷ್ಟ್ರ ಮಟ್ಟದಲ್ಲಿ ಈ ಅಂಶ ತೀರ್ಪುಗಾರರ ಗಮನ ಸೆಳೆದು ಪ್ರಥಮ ಸ್ಥಾನ ಪಡೆದು ಪ್ರಶಸ್ತಿಗೆ ಆಯ್ಕೆಯಾಗಿತ್ತು.

ಜನವರಿ 16ರಂದು ದೆಹಲಿ ಭಾರತೀಯ ಸಂವಿಧಾನ ಕ್ಲಬ್‌ನಲ್ಲಿ ಭಾರತಿ ಏರ್‌ಟೆಲ್ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೇಂದ್ರ ನೀತಿ ಆಯೋಗದ ಶಿಕ್ಷಣ ಮತ್ತು ಕೌಶಲ ಅಭಿವೃದ್ಧಿ ವಿಭಾಗದ ವಿಶೇಷ ಅಧಿಕಾರಿಗಳಾದ ಲೆಫ್ಟಿನೆಂಟ್ ಕರ್ನಲ್ ಜಿತೇಂದ್ರ ವರ್ಮ ಹಾಗೂ ಸಿಬಿಎಸ್‌ಇ ಶಾಲೆಗಳ ತರಬೇತಿ ವಿಭಾಗದ ನಿರ್ದೇಶಕ ಮನೋಜ್ ಕುಮಾರ್ ಶ್ರೀವಾಸ್ತವ ಅವರು ಶಿಕ್ಷಕರಿಗೆ ಪ್ರಶಸ್ತಿ ಪತ್ರ ಮತ್ತು ಬಹುಮಾನ ವಿತರಿಸಿ ಗೌರವಿಸಿದರು. ಶಿಕ್ಷಕನ ಸಾಧನೆಯನ್ನು ಶಾಲೆ ಮುಖ್ಯ ಶಿಕ್ಷಕಿ ಸೌಭಾಗ್ಯ ಜಿ.ಎಸ್, ಎಸ್.ಡಿ.ಎಂ.ಸಿ ಅಧ್ಯಕ್ಷ ಮಹದೇವ್ ಡಿ.ಎಂ. ಹಾಗೂ ಸಿಂಹ ಎಸ್ಟೇಟ್‌ನ ಶ್ರೀನರಸಿಂಹ ಮೂರ್ತಿ ಅಭಿನಂದಿಸಿದ್ದಾರೆ.

# 49,521 ಇ-ಸ್ವತ್ತು ಅರ್ಜಿ ವಿಲೇವಾರಿಗೆ ಬಾಕಿ

• **ಉದಯವಾಹಿನಿ, ಕೊರಟಗೆರೆ**

ರಾಜ್ಯ ಸರ್ಕಾರ 'ಮನೆ ಬಾಗಿಲಿಗೆ ಸೇವೆ' ಎಂಬ ಘೋಷಣೆಯೊಂದಿಗೆ ಜಾರಿಗೊಳಿಸಿದ ಇ ಸ್ವತ್ತು ಯೋಜನೆ. ಆರಂಭವಾಗಿ ತಿಂಗಳು ಕಳೆದಿದ್ದರೂ ಇನ್ನೂ ನೆಲಮಟ್ಟದಲ್ಲಿ ಅನುಷ್ಠಾನ ಕಾಣದ ಗ್ರಾಮೀಣ ಜನರ ಪಾಲಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ತಾಂತ್ರಿಕ ಸಮಸ್ಯೆಗಳನ್ನೇ ನೆಪವನ್ನಾಗಿ ಮಾಡಿಕೊಂಡು ಪ್ರಕ್ರಿಯೆ ಅಸ್ತವ್ಯಸ್ತವಾಗಿದ್ದು, ಇದಕ್ಕೆ ಹೊಣೆಗಾರರಾದವರು ಯಾರು ಎಂಬ ಪ್ರಶ್ನೆ ದಿನೇದಿನೇ ತೀವ್ರವಾಗುತ್ತಿದೆ. ಇ ಸ್ವತ್ತು ನೋಂದಣಿಗೆ ಬಳಸಲಾಗುತ್ತಿರುವ ಸಾಫ್ಟ್‌ವೇರ್ ನಿರಂತರವಾಗಿ ಸರ್ವರ್ ಡೌನ್, ಡೇಟಾ ಅಪ್‌ಲೋಡ್ ವೈಫಲ್ಯ, ಜಿಯೋ ಮ್ಯಾಪಿಂಗ್ ದೋಷ, ಹಳೆಯ ದಾಖಲೆಗಳ ಹೊಂದಾಣಿಕೆ ಸಮಸ್ಯೆ ಎದುರಿಸುತ್ತಿದೆ. ಯೋಜನೆ ಜಾರಿಗೊಳಿಸುವ ಮುನ್ನ ಸಮರ್ಪಕ ಪರೀಕ್ಷೆ ನಡೆಸಲಾಗಿದೆಯೇ? ಗ್ರಾಮೀಣ ಪ್ರದೇಶದ ನೆಟ್‌ವರ್ಕ್ ಸಾಮರ್ಥ್ಯ ಪರಿಗಣಿಸಲಾಯಿತೇ ಎಂಬ ಅನುಮಾನಗಳು ಸಾರ್ವಜನಿಕರಲ್ಲಿ ಮೂಡಿವೆ.

ಗ್ರಾಮ ಪಂಚಾಯಿತಿ ಕಚೇರಿಗಳಿಗೆ ಬೆಳಗ್ಗೆಯಿಂದ ಸಂಜೆವರೆಗೆ ಜನ ಕಾದು ಕುಳಿತರೂ ಸಿಸ್ಟಂ ಇಲ್ಲ ಎಂಬ ಉತ್ತರವೇ ಸಿಗುತ್ತಿದೆ. ದಿನದ ಕೂಲಿ ಬಿಟ್ಟು ಬಂದ ರೈತರು, ಕೂಲಿ ಕಾರ್ಮಿಕರು, ವೃದ್ಧರು, ಮಹಿಳೆಯರು ನಿರಾಶರಾಗಿ ಮನೆಗೆ ಹಿಂತಿರುಗುವ ಸ್ಥಿತಿ ನಿರ್ಮಾಣವಾಗಿದೆ. ಕೆಲವರು ತಿಂಗಳಿನಿಂದ ಅರ್ಜಿ ಸಲ್ಲಿಸಿದ್ದರೂ ಇ ಸ್ವತ್ತು ದಾಖಲೆ ಇನ್ನೂ ಕೈ ಸೇರಿಲ್ಲ.




ಒಂದು ಕಡೆ ಮೇಲಧಿಕಾರಿಗಳಿಂದ ಗುರಿ ಒತ್ತಡ, ಮತ್ತೊಂದೆಡೆ ಸರಿಯಾಗಿ ಕಾರ್ಯನಿರ್ವಹಿಸದ ತಂತ್ರಜ್ಞಾನ. ಅಗತ್ಯ ತರಬೇತಿ, ತಾಂತ್ರಿಕ ಬೆಂಬಲವಿಲ್ಲದೆ ಪಂಚಾಯಿತಿ ಸಿಬ್ಬಂದಿಯೂ ಸಂಕಷ್ಟಕ್ಕೆ ಸಿಲುಕಿದ್ದಾರೆ. ತಪ್ಪು ತಮ್ಮದಲ್ಲವಾದರೂ ಸಾರ್ವಜನಿಕರ ಆಕ್ರೋಶ ಎದುರಿಸಬೇಕಾದ ಸ್ಥಿತಿ ಉಂಟಾಗಿದೆ. ಈ ಗಂಭೀರ ಸಮಸ್ಯೆ ಬಗ್ಗೆ ತಾಲ್ಲೂಕು, ಜಿಲ್ಲಾ ಮಟ್ಟದ ಜನಪ್ರತಿನಿಧಿಗಳು ಸ್ಪಷ್ಟ ನಿಲುವು ಪ್ರಕಟಿಸದೇ ಮೌನಕ್ಕೆ ಶರಣಾಗಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಚುನಾವಣೆ ಗ್ರಾಮೀಣ ಅಭಿವೃದ್ಧಿ, ಡಿಜಿಟಲ್ ಸೇವೆ ಎಂದು ಮಾತಾಡಿದವರು ಈಗ ಜನರ ಸಂಕಷ್ಟದ ಸಮಯದಲ್ಲಿ ಮೌನವಾಗಿರುವುದೇಕೆ ಎಂಬ ಪ್ರಶ್ನೆ ಎದ್ದಿದೆ. ಸ್ಥಳೀಯ ಸಂಸ್ಥೆಗಳ ಸಭೆಗಳಲ್ಲಿ ಈ ವಿಷಯ ಗಂಭೀರವಾಗಿ ಚರ್ಚೆಯಾಗುತ್ತಿಲ್ಲ. ಶಾಸಕರು, ಸಂಸದರು ಸರ್ಕಾರದ ಗಮನ ಸೆಳೆಯಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆಯೇ ಎಂಬುದೂ ಅನುಮಾನ.

ಇ-ಸ್ವತ್ತು ದಾಖಲೆ ಸಿಗದ ಕಾರಣದಿಂದಾಗಿ ಅನೇಕರು ತಮ್ಮ ಆಸ್ತಿಗಳನ್ನು ಸರ್ಕಾರದ ನಿಯಮಾನುಸಾರ ಭದ್ರಪಡಿಸಿಕೊಳ್ಳಲಾಗದೇ ಪರಿತಪಿಸುತ್ತಿದ್ದಾರೆ.

ಬ್ಯಾಂಕ್ ಸಾಲ, ಮನೆ ನಿರ್ಮಾಣ ಪರವಾನಗಿ, ಖಾತಾ ವರ್ಗಾವಣೆ, ವಾರಸುದಾರಿಕೆ ದಾಖಲಾತಿ ಸೇರಿದಂತೆ ಹಲವು ಪ್ರಕ್ರಿಯೆಗಳು ಸ್ಥಗಿತಗೊಂಡಿವೆ. ಇದು ಗ್ರಾಮೀಣ ಆರ್ಥಿಕ ಚಟುವಟಿಕೆಗಳ ಮೇಲೆ ನೇರ ಪರಿಣಾಮ ಬೀರುತ್ತಿದೆ. ಸರ್ಕಾರ ಇ-ಸ್ವತ್ತು ಯೋಜನೆಯನ್ನು ಘೋಷಣೆಗಷ್ಟೇ ಸೀಮಿತಗೊಳಿಸದೇ, ತಕ್ಷಣ ತಾಂತ್ರಿಕ ದೋಷಗಳನ್ನು ಸರಿಪಡಿಸಬೇಕು.

ಇಲ್ಲದಿದ್ದರೆ, ಜನರ ಆಸ್ತಿ ಭದ್ರತೆಗೆ ರಕ್ಷಣೆಯಾಗಿ ರೂಪಿಸಿದ ಇ ಸ್ವತ್ತು ಯೋಜನೆಯೇ ಗ್ರಾಮೀಣ ಜನರ ಪಾಲಿಗೆ ಶಾಶ್ವತ ಸಂಕಷ್ಟವಾಗುವ ಭೀತಿ ಎದುರಾಗಿದೆ. ತಾಲ್ಲೂಕಿನ 24 ಗ್ರಾಮ ಪಂಚಾಯಿತಿಗಳಲ್ಲಿ ಅಭಿಯಾನ ಪ್ರಾರಂಭವಾದ ಬಳಿಕ 234 ಅರ್ಜಿಗಳು ಮಾತ್ರ ವಿಲೇವಾರಿಯಾಗಿದೆ.

ಉಳಿದಂತೆ ವಿವಿಧ ತಾಂತ್ರಿಕ ತೊಂದರೆಯಿಂದಾಗಿ ಸುಮಾರು 49,521 ಇ-ಸ್ವತ್ತು ಅರ್ಜಿಗಳು ಬಾಕಿ ಇವೆ. ತೋವಿನಕೆರೆ, ಹೊಳವನಹಳ್ಳಿ ಗ್ರಾ.ಪಂ.ನಲ್ಲಿ ಅತಿ ಹೆಚ್ಚು ಅರ್ಜಿಗಳು ಬಾಕಿ ಉಳಿದಿವೆ.

# ಭಜನೆ ಹಾಡಿದವರಿಗೆ ಬಹುಮಾನದ ಪ್ರೋತ್ಸಾಹ

## ಶಿವರಾತ್ರೀಶ್ವರರ ಕರ್ತೃ ಗದ್ದುಗೆ ಆವರಣದಲ್ಲಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ ಸಮಾರಂಭ

• **ಉದಯವಾಹಿನಿ, ಸುತ್ತೂರು (ಮೈಸೂರು ಜಿಲ್ಲೆ)**

ಇಲ್ಲಿನ ವೀರಸಿಂಹಾಸನ ಮಹಾಸಂಸ್ಥಾನ ಮಠದಿಂದ ನಡೆಯುತ್ತಿರುವ ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವದಲ್ಲಿ ಆಯೋಜಿಸಿದ್ದ 32ನೇ ರಾಜ್ಯಮಟ್ಟದ ಭಜನಾ ಮೇಳದಲ್ಲಿ ವಿಜೇತರಾದ ತಂಡಗಳಿಗೆ ಬಹುಮಾನ ವಿತರಿಸಿ ಪ್ರೋತ್ಸಾಹಿಸಲಾಯಿತು. ಶಿವರಾತ್ರೀಶ್ವರರ ಕರ್ತೃ ಗದ್ದುಗೆ ಆವರಣದಲ್ಲಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ ಸಮಾರಂಭ ನಡೆಯಿತು.

ವಿವಿಧ ವಿಭಾಗಗಳಲ್ಲಿ ಜರುಗಿದ ಸ್ಪರ್ಧೆಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ 700ಕ್ಕೂ ಹೆಚ್ಚಿನ ತಂಡಗಳು ಭಾಗವಹಿಸಿ ಭಕ್ತಿಸುಧೆ ಹರಿಸಿದವು. ವಿಜೇತರ ವಿವರ ಇಂತಿದೆ.

**ಪುರುಷರ ವಿಭಾಗ:** ಗದಗದ ಹುಲಿಕೋಟೆಯ ಶ್ರೀರಾಮ ಭಜನಾ ಸಂಘ (ಪ್ರಥಮ), ಚಾಮರಾಜನಗರ ಜಿಲ್ಲೆ ಬೆಟ್ಟದ ಮಾದಹಳ್ಳಿಯ ಬಸವೇಶ್ವರ ಭಜನಾ ಸಂಘ (ದ್ವಿತೀಯ), ಮೈಸೂರಿನ ಜೆಎಸ್‌ಎಸ್ ಬಡಾವಣೆಯ ಶಿವರಾತ್ರಿ ರಾಜೇಂದ್ರ ಭಜನಾ ಕಲಾ ತಂಡ (ತೃತೀಯ), ನಂಜನಗೂಡು ತಾಲ್ಲೂಕು ದೇವನೂರಿನ ಗುರುಮಲ್ಲೇಶ್ವರ ಭಜನಾ ಸಂಘ (4ನೇ), ಧಾರವಾಡ ಜಿಲ್ಲೆ ಜಾವೂರದ ಶಿವಾನಂದ ಭಜನಾ ಸಂಘ (5ನೇ ಸ್ಥಾನ), ಐದು ಸಂಘಗಳಿಗೆ ಸಮಾಧಾನಕರ ಬಹುಮಾನ ನೀಡಲಾಯಿತು.

**ಗ್ರಾಮೀಣ ಮಹಿಳಾ ವಿಭಾಗ:** ಚಾಮರಾಜನಗರ ಕೆಲಸೂರುಪುರದ




ಶರಣೆ ಗಂಗಾಂಬಿಕಾ ಮಹಿಳಾ ಸಂಘ (ಪ್ರ), ನಂಜನಗೂಡು ತಾಲ್ಲೂಕು ಸೋನಹಳ್ಳಿಯ ಶಿವರಾತ್ರೀಶ್ವರ ಮಹಿಳಾ ಭಜನಾ ಸಂಘ (ದ್ವಿ), ತುಮಕೂರು ಜಿಲ್ಲೆ ಕೋಟೆನಾಯಕನಹಳ್ಳಿಯ ಬನಶಂಕರಿ ಮಹಿಳಾ ಕಲಾ ತಂಡ (ತೃ), ಮೈಸೂರು ಜಿಲ್ಲೆ ಯಾಚೇನಹಳ್ಳಿಯ ಸಿದ್ದೇಶ್ವರ ಕಲಾತಂಡ (4ನೇ) ಹಾಗೂ ತುಮಕೂರು ಜಿಲ್ಲೆ ಹರಚನಹಳ್ಳಿಯ ಸಿದ್ದಶ್ರೀ ಮಹಿಳಾ ಭಜನಾ ತಂಡ (5ನೇ) ಬಹುಮಾನ ಗಳಿಸಿತು. ಐದು ಸಂಘಗಳಿಗೆ ಸಮಾಧಾನಕರ ಬಹುಮಾನ ನೀಡಲಾಯಿತು.

**ನಗರ ಮಹಿಳಾ ವಿಭಾಗ:** ಮೈಸೂರಿನ ಬೋಗಾದಿ 2ನೇ ಹಂತದ ಅಮೃತ ವಿದ್ಯಾಲಯ (ಪ್ರ), ಶಿವಮೊಗ್ಗ ತೀರ್ಥಹಳ್ಳಿಯ ಮಾರುತಿ ಭಜನಾ ಮಂಡಳಿ (ದ್ವಿ), ಮೈಸೂರಿನ ಬಿಇಎಂಎಲ್ ಬಡಾವಣೆ ರಾಜರಾಜೇಶ್ವರಿ ನಗರದ ರಾಜರಾಜೇಶ್ವರಿ ಅಕ್ಕನ ಬಳಗ (ತೃ), ಮಂಡಿಮೊಹಲ್ಲಾ ಕಮಟಗೇರಿಯ ಹಂಸಧ್ವನಿ ಭಜನಾ ಮಂಡಳಿ (4ನೇ) ಹಾಗೂ ನಂಜನಗೂಡಿನ ಶ್ರೀಕಂಠಪುರಿ ಬಡಾವಣೆಯ ಚಾಮುಂಡೇಶ್ವರಿ ಭಜನಾ ತಂಡ (5ನೇ). ಐದು ತಂಡಗಳಿಗೆ ಸಮಾಧಾನಕರ ಬಹುಮಾನ ನೀಡಲಾಯಿತು.

**ಪುರುಷರ ಏಕತಾರಿ ವಿಭಾಗ:** ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮಲ್ಲಮ್ಮನ ಬೆಳವಡಿಯ ಕಾಳಿಕಾದೇವಿ ಏಕತಾರಿ ತಂಡ (ಪ್ರ), ಹಾಸನ ಜಿಲ್ಲೆ ರಾಂಪುರದ ನಿರ್ವಾಣ ಸಿದ್ದೇಶ್ವರ ಭಜನಾ ಸಂಘ (ದ್ವಿ), ಚಿಕ್ಕಮಗಳೂರು ಜಿಲ್ಲೆ ಬೆಳವಾಡಿಯ ಬಸವೇಶ್ವರ ಭಜನಾ ಸಂಘ (ತೃ), ಹಾಸನ ಜಿಲ್ಲೆ ರಾಂಪುರದ ರೇವಣಸಿದ್ದೇಶ್ವರ ಭಜನಾ ಮಂಡಳಿ (4ನೇ) ಹಾಗೂ ದೊಡ್ಡಹೊನ್ನೇನಹಳ್ಳಿಯ ಲಕ್ಷ್ಮಿ ಭಜನಾ ತಂಡ (5ನೇ) ಬಹುಮಾನ ಪಡೆದವು.

**ಮಹಿಳೆಯರ ಏಕತಾರಿ ವಿಭಾಗ:** ಹಾಸನ ಜಿಲ್ಲೆಯ ರೇವಣಸಿದ್ದೇಶ್ವರ ಭಜನಾ ಮಂಡಳಿ(ಪ್ರ), ಮಂಡ್ಯ ಜಿಲ್ಲೆ ಕಾಸರವಾಡಿಯ ಈಶ್ವರಮ್ಮ ಕಲಾ ಸಂಘ(ದ್ವಿ), ಪಾಂಡವಪುರ ತಾಲ್ಲೂಕು ಹಳೇಬೀಡು ಗ್ರಾಮದ ರೇವಣಸಿದ್ದೇಶ್ವರ ಭಜನಾ ಮಂಡಳಿ(ತೃ), ಮಂಡ್ಯ ಜಿಲ್ಲೆ ಹೊಸಳ್ಳಿ 3ನೇ ಅಡ್ಡ ರಸ್ತೆಯ ಜ್ಞಾನಾನಂದ ಕಲಾ ಬಳಗ (4ನೇ) ಹಾಗೂ ಕಾಸರವಾಡಿಯ ಶಾರದಾಂಬಾ ಕಲಾ ಬಳಗ (5ನೇ) ಬಹುಮಾನ ತಮ್ಮದಾಗಿಸಿಕೊಂಡವು.

**ಸುತ್ತೂರು ಮಠ ಆಧ್ಯಾತ್ಮಿಕ, ಶೈಕ್ಷಣಿಕ, ಆರೋಗ್ಯ, ಸಮಾಜ ಸುಧಾರಣೆ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ಅನನ್ಯವಾದ ಸೇವೆ ಮಾಡುತ್ತಲೇ ಬಂದಿದೆ. ಸಾವಿರಾರು ವರ್ಷಗಳ ಕಾಲ ಜೀವಂತವಾಗಿ ಇರುತ್ತದೆ. ನಮ್ಮಂತಹ ಭಕ್ತರಿಗೆ ಸೇವೆ ಮಾಡುತ್ತಿರುತ್ತದೆ.**
**ಶಾಸಕ ಜಿ.ಡಿ. ಹರೀಶ್‌ಗೌಡ**

### ಧ್ಯಾನದಿಂದ ಮನಸ್ಸಿನ ವಿಕಾಸ

**ಹೂವಿನಹಡಗಲಿಯ ಗವಿಸಿದ್ದೇಶ್ವರ ಶಾಖಾ ಮಠದ ಹಿರಿಶಾಂತವೀರ ಸ್ವಾಮೀಜಿ ಮಾತನಾಡಿ, ದಕ್ಷಿಣದ ಬಹುದೊಡ್ಡ ಜಾತ್ರಾ ಮಹೋತ್ಸವ ಇದಾಗಿದ್ದು, ಜ್ಞಾನದ ಜಾತ್ರೆಯೂ ಆಗಿದೆ. ಭಜನೆ ಎಂದರೆ ಧ್ಯಾನಾಸಕ್ತನಾಗುವುದು, ದೈವದಲ್ಲಿ ತಲ್ಲೀನತೆ ಹೊಂದುವುದು ಹಾಗೂ ಮನಸ್ಸನ್ನು ವಿಕಾಸಗೊಳಿಸುವಂಥದು ಎಂದು ಹೇಳಿದರು. ಗುರು ಕರುಣೆ ದೊರೆತರೆ ಎಲ್ಲಾ ಸಮೃದ್ಧಿಯೂ ದೊರೆಯುತ್ತದೆ. ಧ್ಯಾನದ ಸಂದರ್ಭದಲ್ಲಿ ಅಹಂಕಾರವನ್ನು ಮರೆತು ಮಮಕಾರವನ್ನು ಹೊಂದಬೇಕು. ಇಂತಹ ಸೇವಾ ಮನೋಭಾವವನ್ನು ಬೆಳೆಸುವ ಕೆಲಸವನ್ನು ಸುತ್ತೂರು ಮಠ ಮಾಡುತ್ತಿದೆ' ಎಂದರು.**

## ಮಿನಿ ನ್ಯೂಸ್

### ಕೆಂಗಲ್ ರಥೋತ್ಸವ ಸಂಪನ್ನ

• **ಉದಯವಾಹಿನಿ, ಚನ್ನಪಟ್ಟಣ**

ತಾಲ್ಲೂಕಿನ ಕೆಂಗಲ್ ಇತಿಹಾಸ, ಪುರಾಣ ಪ್ರಸಿದ್ಧ ಅಂಜನೇಯಸ್ವಾಮಿ ಜಾತ್ರಾ ಮಹೋತ್ಸವ ಲಕ್ಷ್ಮಿವೆಂಕಟೇಶ್ವರಸ್ವಾಮಿ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ರಥೋತ್ಸವ ಅಂಗವಾಗಿ ಬೆಳಗ್ಗೆಯಿಂದ ರಥಾಂಗ ಹೋಮ, ಯಾತ್ರಾದಾನ. ಮಂಟಪೋತ್ಸವ, ಬಲಿಪ್ರಧಾನ. ಗೋವು ಅಶ್ವಪೂಜೆ, ಪೂಜಾ ಕುಣಿತ, ತಮಟೆ, ಡೊಳ್ಳು ಕುಣಿತ, ತೋಮಾಲಸೇವೆ, ಯಾತ್ರಾದಾನ ಸೇವೆ ನಡೆಯಿತು.

ಬೆಳಗ್ಗೆ 11.45ರಿಂದ ಮಧ್ಯಾಹ್ನ 12.45ರೊಳಗೆ ಸಲ್ಲುವ ಶುಭ ಅಭಿಜಿನ್ ಲಗ್ನದಲ್ಲಿ ರಥೋತ್ಸವಕ್ಕೆ ತಹಶೀಲ್ದಾರ್ ಬಿ.ಎನ್.ನಾಗೇಶ್ ಚಾಲನೆ ನೀಡಿದರು. ದೇವಸ್ಥಾನ ಸಮಿತಿ ಸಂಚಾಲಕ ವಿ.ಬಿ.ಚಂದ್ರು, ಧಾರ್ಮಿಕ ದತ್ತಿ ಇಲಾಖೆ ಅಧಿಕಾರಿಗಳು, ತಾಲ್ಲೂಕಿನ ಹಲವು ಇಲಾಖೆಗಳ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಭಕ್ತರು ರಥವನ್ನು ದೇವಸ್ಥಾನ ಆವರಣ ಹಾಗೂ ಅಕ್ಕಪಕ್ಕದ ರಸ್ತೆಗಳಲ್ಲಿ ಎಳೆದು ಪುನೀತರಾದರು. ರಾಜ್ಯದ ಹಲವು ಭಾಗಗಳಿಂದ ಬಂದಿದ್ದ ಭಕ್ತರು ರಥೋತ್ಸದಲ್ಲಿ ಭಾಗವಹಿಸಿ ತಮ್ಮ ಇಷ್ಟಾರ್ಥ ಸಿದ್ದಿಗಾಗಿ ಹಣ್ಣು ಜವನ ಎಸೆದು ಭಕ್ತಿಭಾವ ಮೆರೆದರು. ಸಂಜೆ ಮುತ್ತಿನ ಪಲ್ಲಕ್ಕಿ ಉತ್ಸವ, ಹೂವಿನ ಪಲ್ಲಕ್ಕಿ ಉತ್ಸವ, ತಿರುಕಲ್ಯಾಣಿಯಲ್ಲಿ ವಸಂತೋತ್ಸವ ಹಾಗೂ ಅಶ್ವವಾಹನೋತ್ಸವ, ಪುಷ್ಪಮುಡಿ ಉತ್ಸವ, ಧ್ವಜಾರೋಹಣ, ಪೂರ್ಣಾಹುತಿ, ಅಶ್ವವಾಹನೋತ್ಸವ, ಪುಷ್ಪಯಾಗ ಕಾರ್ಯಕ್ರಮ ನಡೆಯಿತು. ರಥೋತ್ಸವ ಜತೆಗೆ ಇತಿಹಾಸ ಪ್ರಸಿದ್ಧ ಕೆಂಗಲ್ ದನಗಳ ಜಾತ್ರೆ, ತೆರೆ ಕಂಡಿತು. ಮಂಗಳವಾರ ಜನವರಿ 20ರಂದು ಅಷ್ಟೋತ್ತರ ಶತಕುಂಬಾಭಿಷೇಕ, ಶಾಂತ್ಯೋತ್ಸವ ನಡೆದಿದೆ .

### ಸುತ್ತೂರು ಶ್ರೀಮಠದಿಂದ ಅಕ್ಷರ ಕ್ರಾಂತಿ

• **ಉದಯವಾಹಿನಿ, ನಂಜನಗೂಡು**

ಸುತ್ತೂರು ಶ್ರೀಮಠ ರೈತರಿಗೆ ಆಧುನಿಕ ಕೃಷಿ, ಸಸ್ಯ ಸಂರಕ್ಷಣೆ, ಹೈನುಗಾರಿಕೆ ತರಬೇತಿ, ಆರೋಗ್ಯ ಕ್ಷೇತ್ರದಲ್ಲಿ ಸೇವೆ ನೀಡುವ ಮೂಲಕ ಈ ಭಾಗದ ರೈತರ ಬದುಕಿನ ಭಾಗವಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ತಾಲ್ಲೂಕಿನ ಸುತ್ತೂರು ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವದಲ್ಲಿ ಕೃಷಿ ಮೇಳ ಹಾಗೂ ದನಗಳ ಜಾತ್ರೆ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು. ದೇಶ ಸ್ವಾತಂತ್ರ್ಯಾನಂತರ ಆಹಾರೋತ್ಪಾದನೆಯಲ್ಲಿ ಸ್ವಾವಲಂಭನೆ ಸಾಧಿಸಿದ್ದರೂ ಬದಲಾದ ಸನ್ನಿವೇಶದಲ್ಲಿ ಆಹಾರೋತ್ಪಾದನೆಯಲ್ಲಿ ಹೊಸ ಸವಾಲುಗಳು ಎದುರಾಗುತ್ತಿವೆ. ಅವುಗಳನ್ನು ಸಮರ್ಥವಾಗಿ ಎದುರಿಸಲು ಕೃಷಿ ಕ್ಷೇತ್ರವನ್ನು ಶಕ್ತಿಯುತಗೊಳಿಸಬೇಕಿದೆ ಎಂದರು.

ಮಿತಿಮೀರಿದ ರಾಸಾಯನಿಕ ಬಳಕೆಯಿಂದಾಗಿ ಕೃಷಿ ಭೂಮಿ ವಿಷಯುಕ್ತವಾಗುತ್ತಿದೆ. ಹೀಗಾಗಿ ಭವಿಷ್ಯದಲ್ಲಿ ಸಾವಯವ ಕೃಷಿಗೆ ಒತ್ತು ನೀಡಬೇಕು. ಆ ಮೂಲಕ ಸುಸ್ಥಿರ ಕೃಷಿಯೊಂದಿಗೆ ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡಬೇಕು ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಶಾಸಕಿ ಲತಾ ಮಲ್ಲಿಕಾರ್ಜುನ್ ಮಾತನಾಡಿದರು. ಮಾಜಿ ಶಾಸಕ ನಿರಂಜನ್ ಕುಮಾರ್. ಕೆಪಿಸಿಸಿ ವಕ್ತಾರ ಎಚ್.ಎ. ವೆಂಕಟೇಶ್, ಮೂಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯ ಕಾರ್ಯನಿರ್ವಾಹಕ ಉಪಾಧ್ಯಕ್ಷ ವೇಲುಸ್ವಾಮಿ, ಶರವಣನ್, ಉಪಾಧ್ಯಕ್ಷ ಸತೀಶ್ ಉಪಸ್ಥಿತರಿದ್ದರು.

### ಅಂಗವಿಕಲರ ಸಂಘದ ಪದಾಧಿಕಾರಿಗಳು ಆಕ್ರೋಶ

• **ಉದಯವಾಹಿನಿ, ಶ್ರೀರಂಗಪಟ್ಟಣ**

ಗ್ರಾಮ ಪಂಚಾಯಿತಿಗಳು ಅಂಗವಿಕಲರ ಕಲ್ಯಾಣಕ್ಕೆ ಬಳಸಬೇಕಾದ ಹಣವನ್ನು ಕಾಮಗಾರಿಗೆ ಬಳಸುತ್ತಿದ್ದು, ಅಂಗವಿಕಲರಿಗೆ ಅನ್ಯಾಯ ಮಾಡಲಾಗುತ್ತಿದೆ ಎಂದು ಅಂಗವಿಕಲರ ಸಂಘದ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದರು. ಪಟ್ಟಣದ ಮಿನಿ ವಿಧಾನಸೌಧದಲ್ಲಿ ನಡೆದ ಅಂಗವಿಕಲರ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದ ವಿನಾಯಕ ಅಂಗವಿಕಲರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸಿ. ನಾಗರಾಜು, ತಾಲ್ಲೂಕು ಘಟಕದ ಅಧ್ಯಕ್ಷ ಎಚ್.ಆರ್. ಮಹದೇವು ಅಸಮಾಧಾನ ವ್ಯಕ್ತಪಡಿಸಿದರು. ಗ್ರಾಮ ಪಂಚಾಯಿತಿಗೆ ಬರುವ ಅನುದಾನದಲ್ಲಿ ಶೇ 5ರಷ್ಟನ್ನು ಅಂಗವಿಕಲರ ಕಲ್ಯಾಣಕ್ಕೆ ಮಾತ್ರ ಬಳಸಬೇಕು ಎಂಬ ನಿಯಮ ಇದೆ. ಆದರೆ ಅದನ್ನು ಉಲ್ಲಂಘಿಸಿ ಅನ್ಯ ಉದ್ದೇಶಗಳಿಗೆ ಬಳಸುತ್ತಿದ್ದಾರೆ' ಎಂದು ದೂರಿದರು. ರಾಜ್ಯ ಸಾರಿಗೆ ಸಂಸ್ಥೆಯ ಕೆಲವು ಬಸ್‌ಗಳಲ್ಲಿ ಅಂಗವಿಕಲರನ್ನು ಹತ್ತಿಸಿಕೊಳ್ಳುತ್ತಿಲ್ಲ. ಅವರಿಗೆ ಮೀಸಲಾದ ಸೀಟು ಬಿಡುತ್ತಿಲ್ಲ. ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು' ಎಂದು ಮರಳಾಗಾಲ ಮಂಜುನಾಥ್ ಮನವಿ ಮಾಡಿದರು. 'ದೈಹಿಕ ಮತ್ತು ಮಾನಸಿಕ ವೈಕಲ್ಯ ಹೊಂದಿರುವವರು ಸರತಿ ಸಾಲಿನಲ್ಲಿ ನಿಂತು ಪಡಿತರ ಪಡೆಯುವುದು ಕಷ್ಟ. ಹಾಗಾಗಿ ಅಂಗವಿಕಲರಿಗೆ ಆದ್ಯತೆಯ ಮೇಲೆ ಪಡಿತರ ವಿತರಿಸಬೇಕು. ಓಡಾಡಲು ಸಾಧ್ಯವಿಲ್ಲದ ಸ್ಥಿತಿಯಲ್ಲಿರುವ ಅಂಗವಿಕಲರು ಆಸ್ಪತ್ರೆಗೆ ಬಂದು ಗುರುತಿನ ಚೀಟಿ ಪಡೆಯಲು ಕಷ್ಟವಾಗುತ್ತಿದೆ. ಅವರ ಪೋಷಕರಿಂದ ವಿಡಿಯೋ ಕರೆ ಮಾಡಿಸಿ, ಪರಿಸ್ಥಿತಿ ಅವಲೋಕಿಸಿ ಗುರುತಿನ ಚೀಟಿ ವಿತರಿಸಬೇಕು ಎಂದು ಎಚ್.ಆರ್. ಮಹದೇವು ಕೋರಿದರು. ತಾಲ್ಲೂಕಿನ ಎಲ್ಲ ಪಡಿತರ ವಿತರಣಾ ಕೇಂದ್ರಗಳಲ್ಲಿ ಅಂಗವಿಕಲರಿಗೆ ಮೊದಲು ಪಡಿತರ ವಿತರಿಸಲು ಕ್ರಮ ವಹಿಸಬೇಕು ಎಂದು ಆಹಾರ ಇಲಾಖೆ ಶಿರಸ್ತೇದಾರ್ ಅವರಿಗೆ ತಹಶೀಲ್ದಾರ್ ಚೇತನಾ ಯಾದವ್ ಸೂಚಿಸಿದರು. ಅಂಗವಿಕಲರು ಕೈ ತೋರಿದಲ್ಲಿ ಬಸ್ ನಿಲ್ಲಿಸಿ ಹತ್ತಿಸಿಕೊಳ್ಳಬೇಕು. ಸೂಕ್ತ ಆಸನದ ವ್ಯವಸ್ಥೆ ಮಾಡಬೇಕು ಎಂದು ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ದೂರವಾಣಿ ಮೂಲಕ ತಿಳಿಸಿದರು.

### ಲಕ್ಷಾಂತರ ವಿದ್ಯಾರ್ಥಿಗಳಿಗೆ ದಾರಿ ದೀಪವಾಗಿದ್ದ ಬಾಲಗಂಗಾಧರನಾಥಸ್ವಾಮಿ

• **ಉದಯವಾಹಿನಿ, ಮದ್ದೂರು**

ಶಿಕ್ಷಣ ಸೇರಿದಂತೆ ತ್ರಿವಿಧ ದಾಸೋಹದ ಮೂಲಕ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳಿಗೆ ಹಾಗೂ ಜನರಿಗೆ ಬಾಲಗಂಗಾಧರನಾಥ ಸ್ವಾಮಿಜಿ ಅವರು ದಾರಿ ದೀಪವಾಗಿದ್ದರು ಎಂದು ಶಾಸಕ ಕೆ.ಎಂ. ಉದಯ್ ತಿಳಿಸಿದರು. ನಗರದ ಪೂರ್ಣಪ್ರಜ್ಞಾ ವಿದ್ಯಾಸಂಸ್ಥೆಯಲ್ಲಿ ಚುಂಚ ಶ್ರೀ ಗೆಳೆಯರ ಬಳಗ, ನಾಡಪ್ರಭು ಕೆಂಪೇಗೌಡರ ಬಳಗದ ವತಿಯಿಂದ ವತಿಯಿಂದ ನಡೆದ ಬಿ.ಜಿ.ಎಸ್.ಶಿಕ್ಷಣ ಶ್ರೀ ಸೇವಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹಸಿರು ಕ್ರಾಂತಿಯ ಹರಿಕಾರರೆಂದು ಹೆಸರು ಗಳಿಸಿದ್ದ ಶ್ರೀಗಳು, 5 ಕೋಟಿ ಗಿಡಗಳನ್ನು ನೆಡುವ ಮೂಲಕ ಹೊಸ ಕ್ರಾಂತಿಯನ್ನೇ ಸೃಷ್ಟಿಸಿದ್ದರು ಎಂದರು. ಚುಂಚಶ್ರೀ ಗೆಳೆಯರ ಬಳಗದ ಅಧ್ಯಕ್ಷ ಡಾ.ಬಿ.ಕೃಷ್ಣ ಮಾತನಾಡಿ, 'ಸ್ವಾಮೀಜಿ ಅವರ ಸ್ಮರಣೆ ಅಂಗವಾಗಿ ಚುಂಚಶ್ರೀ ಗೆಳೆಯರ ಬಳಗ ವತಿಯಿಂದ ಅವರ ಸ್ಮರಣೆ ಕಾರ್ಯಕ್ರಮವನ್ನು ಪ್ರತಿ ವರ್ಷ ಆಯೋಜಿಸಿಕೊಂಡು ಬರಲಾಗುತ್ತಿದೆ' ಎಂದರು.

ಅಂತರಾಳದಿಂದ.. EDITORIAL

# ಬಲಾಢ್ಯರ ಒತ್ತುವರಿಗೆ ವಿನಾಯಿತಿ ಏಕೆ?

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬಡವರಿಗೊಂದು, ಬಲಾಢ್ಯರಿಗೆ ಇನ್ನೊಂದು ಎಂಬ ಕಾನೂನು ಇರುವುದಿಲ್ಲ. ಸಂವಿಧಾನದ ಅನ್ವಯ ಕಾನೂನು ಎಲ್ಲರಿಗೂ ಒಂದೇ ಇರುತ್ತದೆ. ಯಾರೇ ತಪ್ಪು ಮಾಡಿರಲಿ ದಂಡನೆಗೆ ಗುರಿಯಾಗಬೇಕಾಗುತ್ತದೆ. ಆದರೆ ವಾಸ್ತವ ಸ್ಥಿತಿ ಬೇರೆಯಾಗಿದೆ. ಅಪರಾಧ ಎಸಗಿದವರು ಕಾನೂನಿನ ಬಲೆಗೆ ಸಿಗುವುದಿಲ್ಲ, ನಿರಪರಾಧಿಗಳು ಜೈಲು ಪಾಲಾಗುತ್ತಾರೆ.

ಈ ಕಾನೂನನ್ನು ಜಾರಿಗೆ ತರುವ ಸ್ಥಾನದಲ್ಲಿರುವವರು ಅನುಸರಿಸುವ ಪಕ್ಷಪಾತದ ನೀತಿ ಇದಕ್ಕೆ ಕಾರಣವಾಗಿದೆ.ಸಾವಿರಾರು ಎಕರೆ ಸರಕಾರಿ ಭೂಮಿಯನ್ನು ಕಬಳಿಸಿದವರು ಸುರಕ್ಷಿತವಾಗಿ ಇರುತ್ತಾರೆ. ಆದರೆ ಆಸರೆಗೆ ಸಣ್ಣಪುಟ್ಟ ಮನೆಗಳನ್ನು ಮಾಡಿಕೊಂಡವರು ಬುಲ್ಡೋಜರ್‌ಗೆ ಬಲಿಯಾಗುತ್ತಾರೆ. ಒತ್ತುವರಿ ಮಾಡಿಕೊಂಡ ಉಳ್ಳವರು ಯಾವುದೇ ಕ್ರಮಕ್ಕೆ ಒಳ ಗಾಗದೆ ನೆಮ್ಮದಿಯಿಂದ ಇದ್ದಾರೆ. ಆದರೆ ಬಡವರ ಮನೆಗಳು ಬುಲ್ಡೋಜರ್‌ಗೆ ಬಲಿಯಾಗುತ್ತಲೇ ಇವೆ.ಈ ದೇಶದಲ್ಲಿ ಹಣವಂತರಿಗೆ ಹಾಗೂ ಪ್ರಭಾವಿಗಳಿಗೆ ಯಾವ ಕಾನೂನೂ ಅನ್ವಯವಾಗುತ್ತಿಲ್ಲ. ಇಂಥ ಅಕ್ರಮಗಳನ್ನು ತಡೆಯಲು ಭೂಕಬಳಿಕೆ ಪ್ರತಿಬಂಧಕ ಕಾಯ್ದೆ ಇದೆ. ಆದರೆ ಅದು ಕಾಗದದಲ್ಲಿ ಮಾತ್ರ ಇದೆ ಸರಕಾರಿ ಭೂಮಿಯನ್ನು ಕಬಳಿಸುವ ದೊಡ್ಡ ಜಾಲವೇ ಇದೆ. ಬಡವರ ಗುಡಿಸಲುಗಳ ಮೇಲೆ ದಾಳಿ ಮಾಡುವ ಬುಲ್ಡೋಜರ್‌ಗಳು ಹಣವಂತ ಒತ್ತುವರಿದಾರರ ಮನೆಯ ಬಳಿ ಅಪ್ಪಿತಪ್ಪಿಯೂ ಚಲಿಸುವುದಿಲ್ಲ. ಹೀಗಾಗಿ ಭೂ ಕಬಳಿಕೆಯ ಮಾಫಿಯಾಗಳು ಆಡಿದ್ದೇ ಆಟವಾಗಿದೆ. ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಕೋಗಿಲು ಮತ್ತು ಥಣಿಸಂದ್ರ ಪ್ರದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಒತ್ತುವರಿ ಮಾಡಲಾಗಿದ್ದ ಸರಕಾರಿ ಜಮೀನನ್ನು ತೆರವುಗೊಳಿಸಿದೆ. ಸಾರ್ವಜನಿಕ ಜಾಗವನ್ನು ಯಾರೇ ಆಕ್ರಮಿಸಿದರೂ ತೆರವುಗೊಳಿಸುವ ಕ್ರಮ ಸ್ವಾಗತಾರ್ಹ. ಆದರೆ ಇಂಥ ಕಾರ್ಯಾಚರಣೆ ಕೈಗೊಳ್ಳುವ ಮುನ್ನ ಆಸರೆಗೆ ಒಂದಿಂಚೂ ಜಾಗ ಇಲ್ಲದವರ ಬಗ್ಗೆ ಸಹಾನುಭೂತಿ ಇರಲಿ, ಯಾವ ಆಸರೆಯೂ ಇಲ್ಲದವರನ್ನು ಬಲವಂತವಾಗಿ ಅವರ ಬಟ್ಟೆ ಪಾತ್ರೆ, ಸರಂಜಾಮುಗಳ ಸಹಿತ ಬೀದಿಗೆ ನೂಕುವುದು ಮಾನವೀಯತೆ ಅಲ್ಲ ಇಂಥ ಸಂದರ್ಭಗಳಲ್ಲಿ ನಿರಾಶ್ರಿತರಾದವರಿಗೆ ತಾತ್ಕಾಲಿಕ ವಸತಿ ಹಾಗೂ ಆಹಾರದ ವ್ಯವಸ್ಥೆಯನ್ನು ಮಾಡುವುದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕರ್ತವ್ಯವಾಗಿದೆ. ಸರಕಾರಿ ಭೂಮಿಯನ್ನು ಒತ್ತುವರಿ ಮಾಡಿಕೊಂಡ ಬಲಾಢ್ಯರಿಗೆ, ಪ್ರಭಾವಿಗಳಿಗೆ ರಿಯಾಯಿತಿ ನೀಡಿ, ಕೂಲಿ ಮಾಡಿ ಬದುಕುವ ಬಡವರ ಮೇಲೆ ಬಲ ಪ್ರಯೋಗ ಮಾಡುವುದು ಮನುಷ್ಯತ್ವವಲ್ಲ, ಇದರಿಂದ ಸರಕಾರಕ್ಕೆ ಕೆಟ್ಟ ಹೆಸರು ಬರುತ್ತದೆ. ವಲಸೆ ಬಂದು ಗುಡಿಸಲು ಹಾಕಿಕೊಂಡವರು ಬೇರೆ ರಾಜ್ಯದವರೆಂದು ಹಿಯಾಳಿಸುವುದು ಬೇಡ. ಹೀಗೆ ವಲಸೆ ಬಂದವರ ಬೆವರಿನಿಂದಲೇ ಬೆಂಗಳೂರು ನಗರ ಮಾತ್ರವಲ್ಲ ಇಡೀ ಕರ್ನಾಟಕ ರಾಜ್ಯದಲ್ಲಿ ಅಭಿವೃದ್ಧಿ ಯೋಜನೆಗಳು ಕಾರ್ಯಗತಗೊಂಡಿವೆ ಎಂಬುದನ್ನು ಮರೆಯಬಾರದು.ಬೆಂಗಳೂರು ಸೇರಿದಂತೆ ರಾಜ್ಯದ ದೊಡ್ಡ ನಗರಗಳಲ್ಲಿ ನಿರಾಶ್ರಿತರಿಗೆ ಆಸರೆ ಕಲ್ಪಿಸಿದ ಕೊಳಚೆ ಪ್ರದೇಶಗಳು ಬಡವರಿಗೆ ನೆಲೆ ಕಲ್ಪಿಸಿದ ಆಸರೆಯ ತಾಣಗಳು ಸ್ಥಳೀಯ ರಾಜಕಾರಣಿಗಳು, ಗೂಂಡಾಗಳು, ಭೂಗತ ಲೋಕದ ಖದೀಮರು ಹಣ ವಸೂಲಿ ಮಾಡುವ ಕೇಂದ್ರಗಳಾಗಿವೆ.

> **ಉತ್ತರ ಪ್ರದೇಶವಿರಲಿ, ಕರ್ನಾಟಕ ವಿರಲಿ ಇದೇ ಪರಿಸ್ಥಿತಿ. ಅಧಿಕಾರಿಗಳ ಶಾಮೀಲಿನೊಂದಿಗೆ ಪ್ರಭಾವಿಗಳು, ಶ್ರೀಮಂತರು ಸಾವಿರಾರು ಎಕರೆ ಸರಕಾರಿ ಭೂಮಿಯನ್ನು ನುಂಗಿದ್ದಾರೆಂದು ಎ.ಟಿ. ರಾಮಸ್ವಾಮಿ ನೇತೃತ್ವದ ಸಮಿತಿ ವರದಿ ನೀಡಿ ಇಪ್ಪತ್ತು ವರ್ಷಗಳಾಗುತ್ತ ಬಂತು ವರದಿಯೇನೋ ಬಹಿರಂಗವಾಯಿತು. ಆದರೆ ಪ್ರಭಾವಿಗಳು ಮಾಡಿದ ಒತ್ತುವರಿಯನ್ನು ತೆರವುಗೊಳಿಸಲು ಈ ವರೆಗೆ ರಾಜ್ಯವನ್ನಾಳಿದ ಯಾವ ಸರಕಾರಗಳೂ ಕ್ರಮ ಕೈಗೊಂಡಿಲ್ಲ.**

ಮನೆಮಾರು ಇಲ್ಲದೆ ಇಂಥಲ್ಲಿ ನೆಲೆ ಕಂಡುಕೊಂಡವರಿಂದ ಹಫ್ತಾ ವಸೂಲಿ ಮಾಡುವ ದೊಡ್ಡ ಜಾಲವೇ ಇದೆ. ಸರಕಾರಿ ಭೂಮಿ ಯಾವುದೆಂಬುದನ್ನು ಮೊದಲು ಪತ್ತೆ ಹಚ್ಚುತ್ತಾರೆ. ರಾತ್ರೋರಾತ್ರಿ ಅದನ್ನು ಅಕ್ರಮಿಸಿ ತಮ್ಮ ಕಬ್ಜಾಕ್ಕೆ ತೆಗೆದುಕೊಳ್ಳುತ್ತಾರೆ. ಇವು ರಾಜಕಾರಣಿಗಳ ಮತ ಬ್ಯಾಂಕ್‌ಗಳಾಗಿ ರೂಪಾಂತರಗೊಳ್ಳುತ್ತವೆ. ಇಂಥ ಪ್ರದೇಶಗಳಲ್ಲಿ ಅನಧಿಕೃತವಾಗಿ ಬಾಡಿಗೆ ವಸೂಲಿ ಮಾಡುತ್ತಾರೆ, ರಕ್ಷಣೆ ನೀಡುವ ಭರವಸೆಯನ್ನೂ ನೀಡುತ್ತಾರೆ.ಬೆಂಗಳೂರು ಸೇರಿದಂತೆ ರಾಜ್ಯದ ದೊಡ್ಡ ನಗರಗಳಲ್ಲಿ ನಿರಾಶ್ರಿತರಿಗೆ ಆಸರೆ ಕಲ್ಪಿಸಿದ ಕೊಳಚೆ ಪ್ರದೇಶಗಳು ಬಡವರಿಗೆ ನೆಲೆ ಕಲ್ಪಿಸಿದ ಆಸರೆಯ ತಾಣಗಳು ಸ್ಥಳೀಯ ರಾಜಕಾರಣಿಗಳು, ಗೂಂಡಾಗಳು, ಭೂಗತ ಲೋಕದ ಖದೀಮರು ಹಣ ವಸೂಲಿ ಮಾಡುವ ಕೇಂದ್ರಗಳಾಗಿವೆ. ಮನೆಮಾರು ಇಲ್ಲದೆ ಇಂಥಲ್ಲಿ ನೆಲೆ ಕಂಡುಕೊಂಡವರಿಂದ ಹಫ್ತಾ ವಸೂಲಿ ಮಾಡುವ ದೊಡ್ಡ ಜಾಲವೇ ಇದೆ. ಸರಕಾರಿ ಭೂಮಿ ಯಾವುದೆಂಬುದನ್ನು ಮೊದಲು ಪತ್ತೆ ಹಚ್ಚುತ್ತಾರೆ. ರಾತ್ರೋರಾತ್ರಿ ಅದನ್ನು ಅಕ್ರಮಿಸಿ ತಮ್ಮ ಕಬ್ಜಾಕ್ಕೆ ತೆಗೆದುಕೊಳ್ಳುತ್ತಾರೆ. ಇವು ರಾಜಕಾರಣಿಗಳ ಮತ ಬ್ಯಾಂಕ್‌ಗಳಾಗಿ ರೂಪಾಂತರಗೊಳ್ಳುತ್ತವೆ. ಇಂಥ ಪ್ರದೇಶಗಳಲ್ಲಿ ಅನಧಿಕೃತವಾಗಿ ಬಾಡಿಗೆ ವಸೂಲಿ ಮಾಡುತ್ತಾರೆ, ರಕ್ಷಣೆ ನೀಡುವ ಭರವಸೆಯನ್ನೂ ನೀಡುತ್ತಾರೆ.ಇಂಥ ಅಕ್ರಮ ವ್ಯವಹಾರಗಳಲ್ಲಿ ಸರಕಾರದ ಅಧಿಕಾರಿಗಳು ಶಾಮೀಲಾಗದೆ ನಡೆಯುವುದಿಲ್ಲ. ಬಾಡಿಗೆ ವಸೂಲಿ ಮಾಡುವ ವ್ಯಕ್ತಿ ತನ್ನದಲ್ಲದ ಭೂಮಿಯನ್ನು ಹೇಗೆ ಮಾರಾಟ ಮಾಡುತ್ತಾನೆ? ಕೆಲವು ಕಡೆ ಸದರಿ ಭೂಮಿ ನೋಂದಣಿಯಾದ ಉದಾಹರಣೆಗಳೂ ಇವೆ. ಹಲವಾರು ಕಡೆ ರಾಜ ಕಾಲುವೆ, ಕೆರೆಯ ಅಂಗಳ, ಉದ್ಯಾನಕ್ಕೆ ಮೀಸಲಾಗಿರಿಸಿದ ಜಾಗ ಇತ್ಯಾದಿಗಳು ಹೇಗೆ ನೋಂದಣಿಯಾಗುತ್ತವೆ? ಇಂಥ ವ್ಯವಹಾರಕ್ಕೆ ಸಬ್‌ರಿಜಿಸ್ಟ್ರಾರ್‌ಗಳು ಹೇಗೆ ಒಪ್ಪಿಗೆ ನೀಡುತ್ತಾರೆ? ಇವೆಲ್ಲ ಪರಸ್ಪರ ಒಪ್ಪಿಗೆ ಇಲ್ಲದೆ ನಡೆಯಲು ಹೇಗೆ ಸಾಧ್ಯ? ಇಂಥ ಪ್ರಶ್ನೆಗಳಿಗೆ ಉತ್ತರ ಬೇಕಾಗಿದೆ. ಬೆಂಗಳೂರಿನಂಥ ಬೃಹತ್ ನಗರಗಳಲ್ಲಿ ಒತ್ತುವರಿ ಸಮಸ್ಯೆ ಈ ಬಗೆಯದ್ದಾದರೆ, ಗ್ರಾಮೀಣ ಪ್ರದೇಶದಲ್ಲಿ ಹಾಗೂ ಅರಣ್ಯ ಪ್ರದೇಶದಲ್ಲಿ ನಡೆಯುವ ಒತ್ತುವರಿ ಇದಕ್ಕಿಂತ ವ್ಯಾಪಕವಾಗಿದೆ. ವಿಶೇಷವಾಗಿ ಮಲೆನಾಡಿನ ಜಿಲ್ಲೆಗಳಲ್ಲಿ ಕಾಫಿ ತೋಟಗಳ ಮಾಲಕರು ತಮ್ಮ ಜಮೀನಿನ ಅಕ್ಕಪಕ್ಕದಲ್ಲಿ ಇರುವ ಅರಣ್ಯ ಪ್ರದೇಶದ ಭೂಮಿಯನ್ನು ಸದ್ದಿಲ್ಲದೇ ಕಬಳಿಸುತ್ತಾರೆ.

## ರಾಮಾಯಣ



**ವಾಲಿಯನ್ನು ವಧಿಸುತ್ತೇನೆಂದು ಶ್ರೀ ರಾಮನ ಪ್ರತಿಜ್ಞೆ**

• ಹಿಂದಿನ ಸಂಚಿಕೆಯಿಂದ

### 120 ನೆಯ ಅಧ್ಯಾಯ

ಮಾಡುತ್ತಿದ್ದ ವಾಲಿಸುಗ್ರೀವರು ದೇವೇಂದ್ರ, ವೃತ್ರಾಸುರರಂತೆ ಒಬ್ಬರನೊಬ್ಬರು ಬೆದರಿಸುತ್ತ ಬೊಬ್ಬಿಟ್ಟು ಕೂಗುತ್ತ ಆತ್ಮದ್ಭುತವಾಗಿ ಮೆರೆಯುತ್ತಿದ್ದರು. ಕಡೆಯಲ್ಲಿ ಸುಗ್ರೀವನು ಸೋತು ಕಂಗೆಟ್ಟು ನಾನಾದಿಕ್ಕುಗಳನ್ನೂ ನೋಡುತ್ತ ಅಡಿಗಡಿಗೆ ಶ್ರೀರಾಮನನ್ನು ನೋಡುತ್ತಿದ್ದನು. ಶ್ರೀರಾಮನು ಸುಗ್ರೀವನು ಕಂಗೆಟ್ಟಿದ್ದನ್ನು ಕಂಡು ಆತನು ವಾಲಿಯೊಡನೆ ಸಮರದಲ್ಲಿ ನಿಲ್ಲಲಾರ ನೆಂದೂ ವಾಲಿಯನ್ನು ಕೊಲ್ಲದಿದ್ದರೆ ತನಗೆ ಅಪಕೀರ್ತಿ ಬರುವುದೆಂದೂ ಮನಸ್ಸಿನಲ್ಲೆಣಿಸಿ ಒಂದು ಬಾಣವನ್ನು ತೆಗೆದು ಜಿಲ್ಲಿಗೆ ಹೂಡಿ ಬಿಲ್ಲನಾರಿಯನ್ನು ಕಿವಿಯವರೆಗೂ ಸೆಳೆಯಲು ಆ ಧ್ವನಿಗೆ ಮೃಗಪಕ್ಷಿಗಳೆಲ್ಲವೂ ಹೆದರಿ ಓಡಿದವು. ಆಗ ಶ್ರೀರಾಮನು ಪ್ರಯೋಗಿಸಿದ ಆ ಬಾಣವು ವಜ್ರಾಯುಧದಂತೆ ಮೊರೆಯುತ್ತ ಪ್ರಜ್ವಲಿಸುವ ಅಗ್ನಿಗೆ ಸಮಾನವಾದ ಜ್ವಾಲೆಯುಳ್ಳದ್ದಾಗಿ ವಾಲಿಯ ಎದೆಯಲ್ಲಿ ತಾಕಿತು. ಅದರಿಂದ ಗಾಯಪಡೆದು ವಾಲಿಯು ಪರಾಕ್ರಮಗುಂದಿ ದೇವೇಂದ್ರನ ರಥದಲ್ಲಿರುವ ರೆಕ್ಕೆಯವು ಕತ್ತರಿಸಲ್ಪಟ್ಟು ಭೂಮಿಯಲ್ಲಿ ಬೀಳುವಂತೆ ಭೂಮಿಯ ಮೇಲೆ ಬಿದ್ದನು. ಈ ಪ್ರಕಾರ ಪುರುಷೋತ್ತಮನಾದ ಶ್ರೀರಾಮನು ಚಿನ್ನದ ಮುಲಾಮಿನಿಂದ ಅಲಂಕರಿಸಲ್ಪಟ್ಟು ಪ್ರಳಯಕಾಲದ ಯಮನಂತಿದ್ದ ತನ್ನ ಬಾಣವನ್ನು ಪರಮೇಶ್ವರನು ತನ್ನ ಹಣೆಯಲ್ಲಿರುವ ಪ್ರಳಯಕಾಲಾಗ್ನಿಯನ್ನು ಸಂಧಾನಮಾಡುವಂತೆ ವಾಲಿಯ ಮೇಲೆ ಸಂಧಾನ ಮಾಡಲು, ಆ ರಾಮಬಾಣದಿಂದ ಗಾಯಪಡೆದ ವಾಲಿಯ ಶರೀರವು ರಕ್ತದಿಂದ ನೆನೆದು, ವಾಯುವಿನಿಂದ ಕೊಡಹಲ್ಪಟ್ಟ ಪುಷ್ಪಗಳಿರುವ ಅಶೋಕಮರದಂತೆಯೂ ಭೂಲೋಕಕ್ಕೆ ಬಿದ್ದ ದೇವೇಂದ್ರನ ತೆಕ್ಕೆಯದಂತೆಯೂ ಕಂಗೆಟ್ಟು ಮೂರ್ಛಿತನಾಗಿ ಬಿದ್ದನು.

**ನಾಲಿಯು ಶ್ರೀರಾಮನನ್ನು ನಿಂದಿಸಿದ್ದು:**

ಹೀಗೆ ರಾಮಬಾಣದಿಂದ ಎದೆಯಲ್ಲಿ ಗಾಯಪಡೆದು ರಣಧೀರನೂ ಸರ್ವಾಭರಣಭೂಷಿತನ ಆದ ವಾಲಿಯು ಕತ್ತರಿಸಲ್ಪಟ್ಟ ಮರದಂತೆ ಭೂಮಿಯಲ್ಲಿ ಕೈಕಾಲುಗಳನ್ನು ನೀಡಿಕೊಂಡು ಬಿದ್ದನು. ಆಗ ಚಂದ್ರೋದಯವಿಲ್ಲದ ಆಕಾಶದಂತೆ ಆ ರಣಭೂಮಿಯು ಭಯಂಕರವಾಗಿ ತೋರುತ್ತಿತ್ತು. ಆತನ ಶರೀರವು ಭೂಮಿಯಲ್ಲಿ ಬಿದ್ದಿದ್ದರೂ ತೇಜಸ್ಸಿನಿಂದ ಒಪ್ಪುತ್ತಿತ್ತು. ಪೂರ್ವದಲ್ಲಿ ವಾಲಿಯ -ತಂದೆಯಾದ ದೇವೇಂದ್ರನು ಕೊಟ್ಟ ಸುವರ್ಣಮಯವಾದ ಕಂಪಸರವು ಆತನ ಪ್ರಾಣಗಳನ್ನು ತಡೆದುಕೊಂಡು ದೇಹಕ್ಕೆ ಮಹತ್ತರವಾದ ಕಾಂತಿಯನ್ನು ಕೊಡುತ್ತಿದ್ದಿತು. ವಾಲಿಯು ತನ್ನ ಕೊರಳಲ್ಲಿದ್ದ ಆ ಚಿನ್ನದ ಕಂಠಮಾಲೆಯಿಂದ ಸಂಧ್ಯಾಕಾಲದ ಕೆಂಪಿನಿಂದ ಸುತ್ತುವರಿಯಲ್ಪಟ್ಟ ಮೇಘಮಂಡಲದಂತೆ ತೋರುತ್ತಿದ್ದನು. ಗಾಯಪಡೆದು ಬಿದ್ದಿದ್ದ ಆತನ ಕೊರಳಲ್ಲಿದ್ದ ಕಾಂಚನಮಯವಾದ ಕಂಠಮಾಲೆ, ಆತನ ದೇಹಕಾಂತಿ, ಎದೆಯಲ್ಲಿ ನಾಟಿಕೊಂಡ ಸುವರ್ಣಮಯವಾದ ಬಾಣ ಇವು ಮೂರೂ ಆತನ ದೇಹಲಕ್ಷ್ಮಿಯೇ ಮೂರು ಪ್ರಕಾರವಾಗಿ ಆದಂತೆ ಶೋಭಿಸುತ್ತಿದ್ದವು. ಶ್ರೀರಾಮನಿಂದ ಪ್ರಯೋಗಿಸಲ್ಪಟ್ಟ ಆ ಬಾಣವು ಎದೆಯಲ್ಲಿ ತಾಕಿ ಆತನಿಗೆ ಸ್ವರ್ಗದ ದಾರಿಯನ್ನು ತೋರಿಸುತ್ತಿತ್ತೋ ಎಂಬಂತೆ ಒಪ್ಪುತ್ತಿತ್ತು.

ಮುಂದುವರಿಯುವುದು...

# ಈ ಕೆಳಗಿನ ಆಹಾರಗಳನ್ನು ಒಟ್ಟಿಗೆ ಸೇವಿಸಬೇಡಿ



☛ ವಿಶ್ವಾಸ್.ಡಿ.ಗೌಡ

1) ಹಾಲಿನೊಂದಿಗೆ ಹುಳಿ ಪದಾರ್ಥಗಳು. ಕರೆದ ಆಹಾರಗಳು ಹಣ್ಣುಗಳು ಹಾನಿಕಾರಕ. ಹಾಲಿನೊಂದಿಗೆ ಮೊಸರು, ಉಪ್ಪು, ಹುಣಸೆಹಣ್ಣು, ಕಲ್ಲಂಗಡಿ, ಮಸಾಲೆಯುಕ್ತ, ಹುಳಿ ಆಹಾರವನ್ನು ಸೇವಿಸಬೇಡಿ.

2) ಮೊಸರು ಜೊತೆಗೆ ಪಾಯಸ, ಪನೀರ್, ಹಾಲು, ಕಲ್ಲಂಗಡಿ, ಬಾಳೆಹಣ್ಣು, ಮೂಲಂಗಿ, ಬಿಸಿ ಆಹಾರ ಅಥವಾ ಬಿಸಿ ಊಟ ಹಾನಿಕಾರಕ

3) ಮೂಲಂಗಿ, ಕಲ್ಲಂಗಡಿ, ದ್ರಾಕ್ಷಿ, ಮಳೆನೀರು, ಬಿಸಿನೀರು, ಇವು ಜೇನುತುಪ್ಪದ ಜೊತೆಗೆ ಹಾನಿಕಾರಕ. ತುಪ್ಪ ಮತ್ತು ಜೇನುತುಪ್ಪವನ್ನು ಎಂದಿಗೂ ಸಮಾನ ಪ್ರಮಾಣದಲ್ಲಿ ಸೇವಿಸಬಾರದು.

4) ಪಾಯಸದೊಂದಿಗೆ ಖಿಚಡಿ, ಹುಳಿ ಆಹಾರ, ಹಲಸಿನ ಹಣ್ಣು, ಸಾತು, ಮದ್ಯ, ಇತ್ಯಾದಿಗಳನ್ನು ತೆಗೆದುಕೊಳ್ಳಬೇಡಿ.

5) ಬೆಳ್ಳುಳ್ಳಿಯೊಂದಿಗೆ ಕಲ್ಲಂಗಡಿ, ಮೂಲಂಗಿ, ಮೂಲಂಗಿ ಎಲೆಗಳು, ಹಾಲು, ಮೊಸರು ಹಾನಿಕಾರಕ.

6) ಕಲ್ಲಂಗಡಿ ಜೊತೆ ಪುದೀನ, ತಣ್ಣೀರು ಕುಡಿಯಬೇಡಿ.

7) ತಣ್ಣೀರಿನ ಜೊತೆ ಕಡಲೆಕಾಯಿ, ತುಪ್ಪ, ಎಣ್ಣೆ, ಕಲ್ಲಂಗಡಿ, ಸಿಬೆ, ನೇರಳೆ, ಸೌತೆಕಾಯಿ ಅಥವಾ ಬಿಸಿ ಆಹಾರವನ್ನು ಸೇವಿಸಬೇಡಿ.

8) ಚಹಾದೊಂದಿಗೆ ಸೌತೆಕಾಯಿ, ಸೆಲರಿ, ತಿನ್ನಬೇಡಿ.

9) ಮೂಲಂಗಿಗಳೊಂದಿಗೆ ಬೆಲ್ಲ ಹಾನಿಕಾರಕವಾಗಿದೆ.

10) ಅಕ್ಕಿಯೊಂದಿಗೆ ವಿನೆಗರ್ ಹಾನಿ ಮಾಡುತ್ತದೆ.

ಆ) ಸೊಂಟ ನೋವು ಅಥವಾ ಕೀಲು ನೋವು ಇದ್ದಲ್ಲಿ ಬಾಳೆಹಣ್ಣು, ಪಾಲಕ್, ಟೊಮೆಟೊ, ಅಕ್ಕಿ, ಮೊಸರು, ಇತ್ಯಾದಿ ಮತ್ತು ಹುಳಿ ಆಹಾರವನ್ನು ಸೇವಿಸಬೇಡಿ. ಅವು ರೋಗವನ್ನು ಹೆಚ್ಚಿಸುತ್ತವೆ.

ಇ) ಚೈತ್ರ ಮಾಸದಲ್ಲಿ ಬೆಲ್ಲ, ವೈಶಾಖ ತಿಂಗಳಲ್ಲಿ ತೈಲ, ಸೇವಿಸಬೇಡಿ. ಜ್ಯೇಷ್ಠ ಮಾಸದಲ್ಲಿ ಸೂರ್ಯನ ಪ್ರಕಾಶದಲ್ಲಿ ನಡೆಯುವುದು, ಆಷಾಢ ಮಾಸದಲ್ಲಿ ಬಿಲ್ವ ಫಲ ತಿನ್ನಬಾರದು, ಶ್ರಾವಣ ಮಾಸದಲ್ಲಿ ಎಲೆ ತರಕಾರಿ ಸೇವನೆ ಕಾರ್ತಿಕ ಮಾಸದಲ್ಲಿ ಮೊಸರು ಸೇವಿಸಬಾರದು ಭಾದ್ರಪದ ಮತ್ತು ಅಶ್ವಿನ ಮಾಸದಲ್ಲಿ ಹಾಗಲಕಾಯಿ ಸೇವಿಸಬಾರದು, ಮಾರ್ಗಶೀರ್ಷ ಮಾಸದಲ್ಲಿ ಜೀರಿಗೆಯನ್ನು ಸೇವಿಸಬಾರದು.

ಪೌಷ ಮಾಸದಲ್ಲಿ ಸ್ತ್ರೀಯೊಂದಿಗೆ ಒಡನಾಟ, ಫಾಲ್ಗುಣ ಮಾಸದಲ್ಲಿ ಕಡಲೆಯ ಸೇವನೆಯು ಹಾನಿಕಾರಕವಾಗಿದೆ.

ಈ) ಪ್ಲಾಸ್ಟಿಕ್ ಪಾತ್ರೆಗಳಲ್ಲಿ ದ್ರವಗಳನ್ನು ಇಡುವುದು ಅದರಲ್ಲಿ ಕುದಿಸುವುದು ಮತ್ತು ಅದರಲ್ಲಿಟ್ಟ ಆಹಾರ ಮತ್ತು ಪಾನೀಯಗಳನ್ನು ಸೇವಿಸುವುದರಿಂದ ರೋಗಗಳು ಉಂಟಾಗುತ್ತವೆ. ಆಹಾರ ಪದಾರ್ಥಗಳಿಗಾಗಿ ಪ್ಲಾಸ್ಟಿಕ್ ಗಳನ್ನು ಬಳಸಬಾರದು.

ಉ) ಕಂಚು, ತಾಮ್ರ, ಅಲ್ಯುಮಿನಿಯಂ ಅಥವಾ ಹಿತ್ತಾಳೆಯ ಪಾತ್ರೆಗಳಲ್ಲಿ ಇರಿಸಲಾದ ವಸ್ತುಗಳು ತುಪ್ಪ, ಎಣ್ಣೆ, ಹುಳಿ, ಮೊಸರು, ಮಜ್ಜಿಗೆ, ಹಾಲು, ಬೆಣ್ಣೆ, ಬೇಯಿಸಿದ ಬೇಳೆ, ತರಕಾರಿಗಳು ಇತ್ಯಾದಿ ವಿಷವಾಗುತ್ತದೆ. ಇಂಥ ಪಾತ್ರೆಗಳಲ್ಲಿ ಆಹಾರ ಪದಾರ್ಥಗಳನ್ನು ತುಂಬ ಹೊತ್ತು ಇಡಬಾರದು.

# ತೂಕ ಇಳಿಸಬೇಕಾದರೆ ನೀವು ಎಷ್ಟು ದಿನ ಕೊತ್ತಂಬರಿ ನೀರು ಕುಡಿಯಬೇಕು?



ಕೊತ್ತಂಬರಿ ನೀರಿನ ಸೇವನೆ ಆರೋಗ್ಯಕ್ಕೆ ಉತ್ತಮವಾಗಿದ್ದು, ಇದನ್ನು ನಿಯಮಿತವಾಗಿ ಕುಡಿಯೋದ್ರಿಂದ ತೂಕವನ್ನು ಇಳಿಸಬಹುದು ಹಾಗೆಯೇ ಗ್ಯಾಸ್ಟ್ರಿಕ್ ಸಮಸ್ಯೆಯಿಂದಲೂ ಪಾರಾಗಬಹುದು. ಕೊತ್ತಂಬರಿ ನೀರು ನಿಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸುವ ಮತ್ತು ತೂಕ ಇಳಿಸಿಕೊಳ್ಳಲು ಸಹಾಯ ಮಾಡುವ ಒಂದು ಪಾನೀಯವಾಗಿದೆ. ಇದು ದೇಹದಿಂದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಆದಾಗ್ಯೂ, ಜನರು ಸಾಮಾನ್ಯವಾಗಿ ಕೊತ್ತಂಬರಿ ಬೀಜದ ನೀರನ್ನು ಎಷ್ಟು ಸಮಯ ಕುಡಿಯಬೇಕು ಎಂಬ ಗೊಂದಲದಲ್ಲಿರುತ್ತಾರೆ. ಆಯುರ್ವೇದ ವೈದ್ಯೆ ಚಂಚಲ್ ಶರ್ಮಾ ಕೊತ್ತಂಬರಿ ನೀರನ್ನು ಯಾವಾಗ ಮತ್ತು ಎಷ್ಟು ಸಮಯ ಕುಡಿಯಬೇಕು ಎನ್ನುವುದನ್ನು ವಿವರಿಸಿದ್ದಾರೆ.

ಕೊತ್ತಂಬರಿ ನೀರು ಎಂದರೇನು ಮತ್ತು ಅದರಲ್ಲಿ ಏನಿದೆ?: ನೀವು ಕೊತ್ತಂಬರಿ ನೀರನ್ನು ಕುಡಿಯಲು ಬಯಸಿದರೆ, ನೀವು ಮೊದಲು ಅದನ್ನು ಹೇಗೆ ತಯಾರಿಸಬೇಕು ಎನ್ನುವುದನ್ನು ಕಲಿಯಬೇಕು. ನೀವು ಕೊತ್ತಂಬರಿ ಬೀಜಗಳನ್ನು ನೀರಿನಲ್ಲಿ ಕುದಿಸಿ ಅಥವಾ ನೆನೆಸಿ ನಂತರ ಅದನ್ನು ಗಾಜಿನೊಳಗೆ ಸೋಸುವ ಮೂಲಕ ತಯಾರಿಸಬಹುದು.

ತಜ್ಞರ ಪ್ರಕಾರ, ನಿಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸಲು ನೀವು ಇದನ್ನು ಬಳಸುತ್ತಿದ್ದರೆ, ನೀವು ಎರಡು ವಾರಗಳವರೆಗೆ ನಿರಂತರವಾಗಿ ಕುಡಿಯಬಹುದು. ನೀವು ಗ್ಯಾಸ್ಟ್ರಿಕ್ ಸಮಸ್ಯೆಗಳಿಂದ ಅಥವಾ ಅತಿಯಾದ ಉಬ್ಬುವಿಕೆಯಿಂದ ಬಳಲುತ್ತಿದ್ದರೆ, ನೀವು ಎರಡು ವಾರಗಳವರೆಗೆ ನಿರಂತರವಾಗಿ ಸೇವಿಸಬಹುದು.

ಕೊತ್ತಂಬರಿ ನೀರಿನಿಂದ ತೂಕ ಇಳಿಸುವುದು ಅಥವಾ ನಿಮ್ಮ ಚಯಾಪಚಯ ಕ್ರಿಯೆಯನ್ನು ಸುಧಾರಿಸುವುದು ನಿಮ್ಮ ಗುರಿಯಾಗಿದ್ದರೆ, ನೀವು ಅದನ್ನು ಒಂದು ತಿಂಗಳು ನಿರಂತರವಾಗಿ ಕುಡಿಯಬಹುದು. ನೀವು ಬಯಸಿದರೆ, 15 ದಿನಗಳು ಅಥವಾ ಒಂದು ತಿಂಗಳು ಕೊತ್ತಂಬರಿ ನೀರನ್ನು ಕುಡಿದ ನಂತರ ನೀವು ಸುಮಾರು ಒಂದು ವಾರ ವಿರಾಮ ತೆಗೆದುಕೊಳ್ಳಬಹುದು. ಇದು ನಿಮ್ಮ ದೇಹವು ಯಾವುದೇ ಒಂದು ಅಂಶದ ಮೇಲೆ ಅವಲಂಬನೆಯನ್ನು ಕಡಿಮೆ ಮಾಡುತ್ತದೆ.

**ಕೊತ್ತಂಬರಿ ನೀರು ಕುಡಿಯುವುದರಿಂದ ಯಾವ ಹಾನಿ ಉಂಟಾಗುತ್ತದೆ?:** ಆಯುರ್ವೇದದ ಪ್ರಕಾರ, ಕೊತ್ತಂಬರಿ ನೀರು ತುಂಬಾ ಪ್ರಯೋಜನಕಾರಿ ಪಾನೀಯವಾಗಿದೆ ಮತ್ತು ಯಾವುದೇ ಅಡ್ಡಪರಿಣಾಮಗಳನ್ನು ಹೊಂದಿಲ್ಲ, ಆದರೆ ಅತಿಯಾದ ಸೇವನೆಯು ನಕಾರಾತ್ಮಕ ಪರಿಣಾಮಗಳಿಗೆ ಕಾರಣವಾಗಬಹುದು. ನೀವು ಸತತವಾಗಿ ಹಲವಾರು ದಿನಗಳವರೆಗೆ ಹೆಚ್ಚಿನ ಪ್ರಮಾಣದಲ್ಲಿ ಕೊತ್ತಂಬರಿ ನೀರನ್ನು ಸೇವಿಸಿದರೆ, ನಿಮ್ಮ ರಕ್ತದಲ್ಲಿನ ಸಕ್ಕರೆ ಮಟ್ಟವು ಗಮನಾರ್ಹವಾಗಿ ಇಳಿಯಬಹುದು. ಈಗಾಗಲೇ ಕಡಿಮೆ ರಕ್ತದೊತ್ತಡ ಇರುವವರು ತಲೆತಿರುಗುವಿಕೆ ಅನುಭವಿಸಬಹುದು. ಕೊತ್ತಂಬರಿ ಅಲರ್ಜಿ ಇರುವವರು ಈ ಪಾನೀಯವನ್ನು ತಪ್ಪಿಸುವುದು ಉತ್ತಮ. ಆದ್ದರಿಂದ, ತಜ್ಞರು ಕೊತ್ತಂಬರಿ ನೀರನ್ನು ಸತತವಾಗಿ ಹಲವಾರು ದಿನಗಳವರೆಗೆ ಸೇವಿಸಬಾರದು, ಬದಲಿಗೆ ಮಧ್ಯದಲ್ಲಿ ವಿರಾಮಗಳನ್ನು ತೆಗೆದುಕೊಳ್ಳಬೇಕು ಎಂದು ಶಿಫಾರಸು ಮಾಡುತ್ತಾರೆ.

**ಕೊತ್ತಂಬರಿ ನೀರನ್ನು ಕುಡಿಯುವ ಸರಿಯಾದ ವಿಧಾನ ಯಾವುದು?:** ಕೊತ್ತಂಬರಿ ನೀರನ್ನು ತಯಾರಿಸಲು, ಮೊದಲು 1 ಟೀಚಮಚ ಕೊತ್ತಂಬರಿ ಬೀಜಗಳನ್ನು ಒಂದು ಲೋಟ ನೀರಿನಲ್ಲಿ ಬೆರೆಸಿ ರಾತ್ರಿಯಿಡೀ ನೆನೆಸಿಡಿ. ಬೆಳಿಗ್ಗೆ 5 ರಿಂದ 7 ನಿಮಿಷಗಳ ಕಾಲ ಕುದಿಸಿ, ನಂತರ ಸೋಸಿ ಸ್ವಲ್ಪ ತಣ್ಣಗಾಗಲು ಬಿಡಿ. ನಂತರ ಅದನ್ನು ಒಂದು ಲೋಟಕ್ಕೆ ಸೋಸಿ ಕುಡಿಯಿರಿ. ಉತ್ತಮ ಫಲಿತಾಂಶಗಳಿಗಾಗಿ, ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಇದನ್ನು ಕುಡಿಯಿರಿ ಇದರಿಂದ ಅದರ ಜೈವಿಕ ಸಕ್ರಿಯ ಸಂಯುಕ್ತಗಳು ಉತ್ತಮವಾಗಿ ಹೀರಲ್ಪಡುತ್ತವೆ.

**ಕೊತ್ತಂಬರಿ ನೀರಿನಲ್ಲಿರುವ ಪೋಷಕಾಂಶಗಳು**

- ಪೊಟ್ಯಾಸಿಯಮ್
- ಆಂಟಿಆಕ್ಸಿಡೆಂಟ್‌ಗಳು
- ನಾರು
- ಫ್ಲೇವನಾಯ್ಡ್‌ಗಳು
- ವಿಟಮಿನ್ ಸಿ ಮತ್ತು ವಿಟಮಿನ್ ಕೆ
- ಕಬ್ಬಿಣ

ಈ ಎಲ್ಲಾ ಪೋಷಕಾಂಶಗಳು ನಿಮ್ಮ ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.



**ಈ ಫೇಸ್ ಮಾಸ್ಕ್ ಏಕೆ ಪ್ರಯೋಜನಕಾರಿ?**

**ಬೇವಿನ ಎಲೆಗಳು ಬ್ಯಾಕ್ಟೀರಿಯಾ ವಿರೋಧಿ, ಶಿಲೀಂಧ್ರ ವಿರೋಧಿ ಮತ್ತು ಉತ್ಕರ್ಷಣ ನಿರೋಧಕ ಗುಣಗಳನ್ನು ಹೊಂದಿದ್ದು ಅದು ಚರ್ಮದ ಉರಿಯೂತ, ಮೊಡವೆಗಳು, ಮೊಡವೆಗಳು ಮತ್ತು ಕಪ್ಪು ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಚರ್ಮಕ್ಕೆ ನೈಸರ್ಗಿಕ ಹೊಳಪನ್ನು ನೀಡುವಲ್ಲಿ ಇದು ತುಂಬಾ ಸಹಾಯಕವಾಗಿದೆ ಎಂದು ಸಾಬೀತಾಗಿದೆ.**

# ಮೊಡವೆ, ಕಪ್ಪು ಕಲೆಗಳನ್ನು ನಿವಾರಿಸುತ್ತದೆ ಬೇವಿನ ಎಲೆಯ ಫೇಸ್‌ಮಾಸ್ಕ್



ಮುಖದಲ್ಲಿನ ಮೊಡವೆಗಳು ಹಾಗೂ ಕಲೆಗಳನ್ನು ನಿವಾರಿಸಲು ಬೇವಿನ ಎಲೆಯ ಫೇಸ್‌ಮಾಸ್ಕ್ ಅತ್ಯುತ್ತಮ ಆಯ್ಕೆ ಎನ್ನಲಾಗುತ್ತದೆ. ಇದನ್ನು ಹೇಗೆ ತಯಾರಿಸುವುದು ತಿಳಿಯೋಣ. ಇತ್ತೀಚಿನ ದಿನಗಳಲ್ಲಿ ಅನೇಕರಲ್ಲಿ ಮೊಡವೆ, ಕಪ್ಪು ಕಲೆಗಳು ಮತ್ತು ತೆರೆದ ರಂಧ್ರಗಳಂತಹ ಚರ್ಮದ ಸಮಸ್ಯೆಗಳು ಹೆಚ್ಚಾಗಿ ಕಂಡುಬರುತ್ತಿವೆ. ಮಾಲಿನ್ಯ, ಕಳಪೆ ಜೀವನಶೈಲಿ ಮತ್ತು ಕಳಪೆ ಆಹಾರ ಪದ್ಧತಿಗಳು ಚರ್ಮದ ನೈಸರ್ಗಿಕ ಹೊಳಪನ್ನು ಕಸಿದುಕೊಳ್ಳಬಹುದು. ಜನರು ಅದನ್ನು ಪುನಃಸ್ಥಾಪಿಸಲು ವಿವಿಧ ಉತ್ಪನ್ನಗಳನ್ನು ಪ್ರಯತ್ನಿಸುತ್ತಾರೆ, ಆದರೆ ಕೆಲವೊಮ್ಮೆ ಅವು ಅಪೇಕ್ಷಿತ ಫಲಿತಾಂಶಗಳನ್ನು ನೀಡುವುದಿಲ್ಲ. ಅದರ ಬದಲು ಆಯುರ್ವೇದಿಕ್ ಮನೆಮದ್ದನ್ನು ಬಳಸುವುದು ಹೆಚ್ಚು ಪ್ರಯೋಜನಕಾರಿಯಾಗಬಲ್ಲದು.

**ಚರ್ಮದ ಸಮಸ್ಯೆಗೆ ಮನೆಮದ್ದು :** ಮೊಡವೆಗಳನ್ನು ನಿವಾರಿಸಲು ಹಾಗೂ ಇನ್ನಿತರ ಚರ್ಮದ ಸಮಸ್ಯೆಗಳಿಗೆ ಮನೆಮದ್ದುಗಳು ಅತ್ಯಂತ ಪರಿಣಾಮಕಾರಿ ಎನ್ನಲಾಗುತ್ತವೆ. ನೀವು ಮನೆಯಲ್ಲಿ ತಯಾರಿಸಬಹುದಾದ ಬೇವಿನ ಎಲೆಯ ಫೇಸ್ ಮಾಸ್ಕ್ ಬಗ್ಗೆ ಯೋಗ ಗುರು ಕೈಲಾಶ್ ಬಿಷ್ಣೋಯ್ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಇದು ನಿಮ್ಮ ಚರ್ಮದ ಸಮಸ್ಯೆಗಳನ್ನು ನಿವಾರಿಸಲು ಸಹಾಯಮಾಡುತ್ತದೆ.

**ಬೇವಿನ ಫೇಸ್ ಮಾಸ್ಕ್‌ಗೆ ಬೇಕಾಗುವ ಪದಾರ್ಥಗಳು**

ಬೇವಿನ ಎಲೆಗಳು
ದಾಲ್ಚಿನ್ನಿ ಹಿಟ್ಟು
ಅರಿಶಿನ


**ಮನೆಯಲ್ಲಿ ಫೇಸ್ ಮಾಸ್ಕ್ ತಯಾರಿಸುವುದು ಹೇಗೆ?** ಯೋಗ ಗುರು ಕೈಲಾಶ್ ಈ ಫೇಸ್ ಮಾಸ್ಕ್ ತಯಾರಿಸುವು ತುಂಬಾ ಸುಲಭ ಎಂದು ವಿವರಿಸುತ್ತಾರೆ. ಕೆಲವು ಬೇವಿನ ಎಲೆಗಳು, ನೀರನ್ನು ಪೇಸ್ಟ್ ಆಗಿ ಪುಡಿಮಾಡಿ.

ಈ ಪೇಸ್ಟ್ ಅನ್ನು ಒಂದು ಬಟ್ಟಲಿಗೆ ವರ್ಗಾಯಿಸಿ ಮತ್ತು 2 ಟೀ ಚಮಚ ಕಡಲೆ ಹಿಟ್ಟು ಮತ್ತು ಒಂದು ಚಿಟಿಕೆ ಅರಿಶಿನವನ್ನು ಸೇರಿಸಿ. ಇದರ ನಂತರ, ಈ ಎಲ್ಲಾ ಪದಾರ್ಥಗಳನ್ನು ಚೆನ್ನಾಗಿ ಮಿಶ್ರಣ ಮಾಡಿದ್ರೆ, ನಿಮ್ಮ ಫೇಸ್ ಮಾಸ್ಕ್ ಸಿದ್ಧವಾಗಿದೆ.

**ಅದನ್ನು ಹೇಗೆ ಬಳಸುವುದು?:** ಈ ಬೇವಿನ ಫೇಸ್ ಪ್ಯಾಕ್ ಅನ್ನು ನಿಮ್ಮ ಮುಖಕ್ಕೆ ಚೆನ್ನಾಗಿ ಹಚ್ಚಿ 15 ರಿಂದ 20 ನಿಮಿಷಗಳ ಕಾಲ ಬಿಡಿ. ನಂತರ, ನಿಮ್ಮ ಮುಖವನ್ನು ಶುದ್ಧ ನೀರಿನಿಂದ ತೊಳೆಯಿರಿ. ಕೆಲವು ದಿನಗಳವರೆಗೆ ಇದನ್ನು ಮಾಡುವುದರಿಂದ ಮೊಡವೆಗಳು, ಕಪ್ಪು ಕಲೆಗಳು ಮತ್ತು ನಿಮ್ಮ ಮುಖದ ಮೇಲಿನ ತೆರೆದ ರಂಧ್ರಗಳ ಸಮಸ್ಯೆ ಕಡಿಮೆಯಾಗುತ್ತದೆ.

# ಸಂಪಿಗೆ ರಸ್ತೆ ದುಬಾರಿ: ಪೇ ಆ್ಯಂಡ್ ಪಾರ್ಕಿಂಗ್ ವ್ಯವಸ್ಥೆ ಜಾರಿ

• **ಉದಯವಾಹಿನಿ, ಬೆಂಗಳೂರು,**



ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಗರದ ಕೇಂದ್ರ ಭಾಗದಲ್ಲಿ ರಸ್ತೆಬದಿ ಪಾರ್ಕಿಂಗ್ ವ್ಯವಸ್ಥೆಯನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಪೇ ಆಯಂಡ್ ಪಾರ್ಕ್ ಯೋಜನೆಯನ್ನು ನಗರದಾದ್ಯಂತ ವಿಸ್ತರಿಸಲು ಮುಂದಾಗಿದೆ. ಹಾಗಾಗಿ ಇದೀಗ ಶಾಪಿಂಗ್ ಪ್ರಿಯರ ಹಾಟ್ ಸ್ಪಾಟ್ ಮಲ್ಲೇಶ್ವರನ ಸಂಪಿಗೆ ರಸ್ತೆಯಲ್ಲಿ ಪೇ ಅಂಡ್ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಮಲ್ಲೇಶ್ವರನ ಸಂಪಿಗೆ ರಸ್ತೆ ಶಾಪಿಂಗ್ ಪ್ರಿಯರ ಹಾಟ್ ಸ್ಪಾಟ್. ಸಂಪಿಗೆ ರಸ್ತೆ ಹಾಗೂ ಸುತ್ತಮುತ್ತಲಿನ ರಸ್ತೆಗಳು ಸದಾ ವಿವಿಧ ಚಟುವಟಿಕೆಗಳಿಂದ ಗಿಜುಗುಡುತ್ತಿರುತ್ತವೆ. ಆದರೆ ಶಾಪಿಂಗ್ ಅಂತಾ ಕಾರು, ಬೈಕ್ ಗಳಲ್ಲಿ ಬರುವ ಜನರು ಮಾತ್ರ ಶೀಘ್ರದಲ್ಲೇ ಪಾರ್ಕಿಂಗ್ ಅಂತಲೇ ಹೆಚ್ಚುವರಿ ಹಣ ತೆರಬೇಕು.

ಪೇ ಅಂಡ್ ಪಾರ್ಕಿಂಗ್ ವ್ಯವಸ್ಥೆ ಬೆಂಗಳೂರಿನ ಮಲ್ಲೇಶ್ವರಂ ಐಕಾನಿಕ್ ಸ್ಥಳಗಳಲ್ಲಿ ಒಂದಾಗಿದ್ದು, ಇಲ್ಲಿನ ಸಂಪಿಗೆ ರಸ್ತೆ ಶಾಪಿಂಗ್ ಪ್ರಿಯರಿಗೆ ಅಚ್ಚುಮೆಚ್ಚು. ಕಾರು, ಬೈಕ್‌ಗಳಲ್ಲಿ ಶಾಪಿಂಗ್ ಅಂತಾ ಇಲ್ಲಿಗೆ ಬರುತ್ತಿದ್ದ ಗ್ರಾಹಕರು ಉಚಿತವಾಗಿ ವಾಹನಗಳನ್ನ ಪಾರ್ಕಿಂಗ್ ಮಾಡಿ ಹೋಗುತ್ತಿದ್ದರು. ಆದರೆ ಈ ರಸ್ತೆಯಲ್ಲಿ ಪೇ ಆಯಂಡ್ ಪಾರ್ಕಿಂಗ್ ವ್ಯವಸ್ಥೆ ಜಾರಿ ಮಾಡುವುದಕ್ಕೆ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಮುಂದಾಗಿದೆ. ಇನ್ನು ಪಶ್ಚಿಮ ನಗರ ಪಾಲಿಕೆ ಟೆಂಡರ್ ಆಹ್ವಾನ ಮಾಡಿದ್ದು, ಸಂಪಿಗೆ ರಸ್ತೆ, 11,15 ಹಾಗೂ 18ನೇ ಅಡ್ಡರಸ್ತೆಗಳಲ್ಲಿ ಪಾರ್ಕಿಂಗ್‌ಗೆ ಶುಲ್ಕ ಸಂಗ್ರಹಿಸಲಿದೆ. ವಾರ್ಷಿಕ ಪರವಾನಿಗೆ ಪಡೆಯಲು ಬಯಸುವ ಏಜೆನ್ಸಿಗಳಿಗೆ 2.20 ಕೋಟಿ ರೂಪಾಯಿಗಳ ಶುಲ್ಕವನ್ನ ನಿಗದಿ ಮಾಡಿದೆ. ಆದರೆ ಪಾಲಿಕೆ ನಿರ್ಧಾರದ ವಿರುದ್ಧ ಗ್ರಾಹಕರು ಅಸಮಾಧಾನ ಹೊರಹಾಕಿದ್ದಾರೆ.

# ಇಂದಿನಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರೀ ಆದಿಶಕ್ತಿ ದೇವಾಲಯ ನವೀಕರಣ, ಜೀರ್ಣೋದ್ಧಾರ ದೇವತಾ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು,**



☛ ಉದಯವಾಹಿನಿ ಚಿತ್ರ

ಉದ್ಯಾನನಗರಿ ಬೆಂಗಳೂರಿನ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕೇಂದ್ರ ಕಚೇರಿಯಲ್ಲಿರುವ ಏಳು ಸುತ್ತಿನ ಕೋಟೆ ಸಪ್ತಮಾತೃಕಾ ಸಹಿತ ಶ್ರೀ ಆದಿಶಕ್ತಿ ದೇವಾಲಯವು ತಿಗರಳ ಪೇಟೆಯಲ್ಲಿರುವ ಪ್ರಾಚೀನ ಬೆಂಗಳೂರು ವಿಶ್ವವಿಖ್ಯಾತ ಕರಗದ ಶ್ರೀ ಧರ್ಮರಾಯಸ್ವಾಮಿ ಮತ್ತು ದ್ರೌಪದಮ್ಮ ದೇವಿ ದೇವಾಲಯಗಳ ಮೂಲ ನೆಲೆಯಾಗಿದೆ ಎಂಬ ಐತಿಹ್ಯ ಇದೆ. ಶ್ರೀ ಆದಿಶಕ್ತಿ ದೇವಾಲಯ ಸರಿ ಸಮಾರು 800 ವರ್ಷಗಳ ಸುದೀರ್ಘ ಇತಿಹಾಸ ಹೊಂದಿದ್ದು, ಬೆಂಗಳೂರಿನ ಅತ್ಯಂತ ಪುರಾತನ ದೇವಸ್ಥಾನಗಳಲ್ಲಿ ಒಂದೆಂದು ಪ್ರಸಿದ್ಧಿ ಪಡೆದಿದೆ.

ಈ ದೇವಾಲಯದ ಆವರಣದಲ್ಲಿ ಶ್ರೀ ಮಹಾಗಣಪತಿ, ಸಪ್ತಮಾತೃಕೆಯರು, ಕಾಶಿವಿಶ್ವನಾಥ ದಂಪತಿ ಸಮೇತ ಪೋತುರಾಜಸ್ವಾಮಿ, ವಲ್ಲಿ ದೇವಸೇನಾ ಸಮೇತ ಕಾರ್ತಿಕೇಯ, ಶ್ರೀ ಅಂಜನೇಯ, ಅದಿ ದೇವಾನುದೇವತೆಗಳು, ಅಷ್ಟ ದಿಕ್ಪಾಲಕರೊಂದಿಗೆ ನವಗ್ರಹ ದೇವರುಗಳು, ಶ್ರೀ ಶನಿಮಹಾತ್ಮ, ಹಾಗೂ ನೂತನವಾಗಿ ಸೂರ್ಯ ಭಗವಾನರು ಮತ್ತು ಕಾಲಭೈರವ ದೇವರನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ಪುರಾತನ ಐತಿಹ್ಯದ ಭವ್ಯ ಇತಿಹಾಸವಿರುವ ಶ್ರೀ ಆದಿಶಕ್ತಿ ದೇವಾಲಯ ಶಿಥಿಲಾವಸ್ಥೆಯಾಗಿ ದೇವಸ್ಥಾನ ಅವರಣ ಹಾಳಾಗಿತ್ತು. ಇಲ್ಲಿಗೆ ಪ್ರತಿದಿನ ಬರು ಭಕ್ತರಿಗೆ ಸೂಕ್ತ ಸ್ಥಳಾವಕಾಶ ಮತ್ತು ಸುಸಜ್ಜಿತ ವ್ಯವಸ್ಥೆ ಮತ್ತು ಪ್ರಸಾದ ವಿನಿಯೋಗ ಸ್ಥಳವಿಲ್ಲದೇ ತೊಂದರೆಯಾಗಿತ್ತು. ಈ ಸಮಸ್ಯೆಗಳ ಕುರಿತು ದೇವಸ್ಥಾನ ಆಡಳಿತ ಮಂಡಳಿಯವರು ಜಿಬಿಎ ಅಧಿಕಾರಿ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಶ್ರೀ ಎ.ಅಮೃತ್ ರಾಜ್ ಮತ್ತು ಪದಾಧಿಕಾರಿಗಳ ಜೊತೆಯಲ್ಲಿ ದೇವಾಲಯ ಜೀರ್ಣೋದ್ಧಾರ ಕುರಿತು ಸಮಾಲೋಚಿಸಿ ಸಹಕಾರ ನೀಡಬೇಕು ಎಂಬ ಮನವಿ ಮಾಡಿದರು. ದೇವಾಲಯದ ಜೀರ್ಣೋದ್ಧಾರದ ಮಹತ್ಕಾರ್ಯಕ್ಕಾಗಿ ಸಂಘದ ವತಿಯಿಂದ ಪ್ರತಿ ನೌಕರರಿಂದ ತಲಾ ಒಂದು ಸಾವಿರ ರೂ.ಕಟಾವಣೆ ಮಾಡಲಾಯಿತು ಮತ್ತು ಆರ್ಥಿಕವಾಗಿ ಸಹಾಯ ನೀಡಿ ಅಂದಾಜು 1 ಕೋಟಿ 60 ಲಕ್ಷ ರೂ.ಗಳನ್ನು ಜೀರ್ಣೋದ್ಧಾರಕ್ಕೆ ನೌಕರರ ವರ್ಗದಿಂದ ದೇಣಿಗೆ ನೀಡಲಾಗಿದೆ. ಜೊತೆಗೆ ಬಿಬಿಎಂಪಿ ನೌಕರರ ಸಹಕಾರ ಸಂಘದಿಂದ 20ಲಕ್ಷ ರೂ.ಗಳ ಉದಾರ ದೇಣಿಗೆ ನೀಡಿ ದೇವಸ್ಥಾನದ ನವೀಕರಣಕ್ಕೆ ಕೈಜೋಡಿಸಲಾಗಿದೆ.

ನಾಡಿನ ಖ್ಯಾತ ಜ್ಯೋತಿಷಿಗಳು ಮತ್ತು ಆಗಮ ಶಾಸ್ತ್ರಜ್ಞರೂ ಆದ ಡಾ.ಭಾನು ಪ್ರಕಾಶ್ ಶರ್ಮಾ ಅವರ ನೇತೃತ್ವದಲ್ಲಿ ದೇವತಾ ಕಾರ್ಯಗಳು, ಪೂಜಾ ಕೈಂಕರ್ಯಗಳು ನೆರವೇರಲಿದೆ.

ತುಮಕೂರು ಜಿಲ್ಲೆ ತಿಪಟೂರು ತಾಲ್ಲೂಕು ನೊಣವಿನಕರೆಯ ಶ್ರೀ ಕಾಡಸಿದ್ದೇಶ್ವರ ಮಠ ಟ್ರಸ್ಟ್‌ನ ಶ್ರೀ ಸೋಮೇಕಟ್ಟೆ ಕಾಡಸಿದ್ದೇಶ್ವರ ಮಠ ಹಾಗೂ ಹಾವೇರಿ ಜಿಲ್ಲೆ ರಾಣಿಬೆನ್ನೂರು ತಾಲ್ಲೂಕು ಐರಣಿಯ ಐರಣಿ ಹೊಳೆಮಠ ಮಹಾ ಸಂಸ್ಥಾನದ ಶ್ರೀ ದತ್ತಾತ್ರೇಯ ಅವಧೂತ ಗುರುಪೀಠದಿಂದ ಈ ಅದ್ದೂರಿ ದೇವತಾ ಕಾರ್ಯಕ್ಕೆ ಎರಡು ಆನೆಗಳನ್ನು ಕರೆಸಲಾಗುತ್ತದೆ. 21-1-2026ರಿಂದ 23-1-2026 ರವರೆಗೆ ನಡೆಯಲಿರುವ ದೇವತಾ ಪೂಜಾಕಾರ್ಯ. ದಿನಾಂಕ 22-1-2026 ರಂದು ಬೆಳಗ್ಗೆ 11 ಗಂಟೆಗೆ ಪೂಜಾ ಕಾರ್ಯಕ್ರಮಗಳು ನಡೆಯಲಿದ್ದು, ಸಾರಿಗೆ ಮತ್ತು ಮುಜರಾಯಿ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ ಅವರು ಉದ್ಘಾಟನೆ ನೇರವೆರಿಸುವರು, ಮತ್ತು ಮುಖ್ಯ ಅತಿಥಿಗಳಾಗಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ರಿಜ್ವಾನ್ ಅರ್ಷದ್ ರವರು ಮುಖ್ಯ ಆಯುಕ್ತರಾದ ಶ್ರೀ ಮಹೇಶ್ವರರಾವ್ ರವರು, ಪ್ರಧಾನ ಅಭಿಯಂತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪ್ರಧಾನ ಎಂಜಿನಿಯರ್ ಮತ್ತು ಬೆಂಗಳೂರು ಸ್ಮಾರ್ಟ್ ಇನ್‌ಫ್ರಾಸ್ಟ್ರಕ್ಚರ್ ನಿರ್ದೇಶಕರಾದ (ತಾಂತ್ರಿಕ) ಶ್ರೀ ಡಾ ಬಿ.ಎಸ್.ಪ್ರಹ್ಲಾದ್‌ರವರು ಹಾಗೂ ಜಿಬಿಎನ ಅಪರ ಮುಖ್ಯ ನಗರ ಯೋಜಕರಾದ ಶ್ರೀಡಾ.ಬಿ.ಎನ್.ಗಿರೀಶ್ ಮತ್ತಿತರ ಗಣ್ಯರು ವಿಶೇಷ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ದಿನಾಂಕ 23ನೇ ಜನವರಿ, 2026ರಂದು ಮಧ್ಯಾಹ್ನ 12-30ಕ್ಕೆ ಪ್ರಸಾದ ವಿನಿಯೋಗ ಮಾಡಲಾಗುವುದು.

**ವೇದಿಕೆ ಸಕಲ ರೀತಿಯಲ್ಲಿ ಸಜ್ಜು**

**ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಹಾಯ, ಸಹಕಾರ ಮತ್ತು ಬೆಂಬಲಗಳಿಂದ ಜೀರ್ಣೋದ್ಧಾರಗೊಂಡಿರುವ ಏಳು ಸುತ್ತಿನಕೋಟೆ ಸಪ್ತಮಾತೃಕಾ ಸಹಿತ ಶ್ರೀ ಆದಿಶಕ್ತಿ ದೇವಾಲಯದ ಉದ್ಘಾಟನೆ ಮತ್ತು ದೇವತಾ ಪೂಜಾ ಕಾರ್ಯಕ್ರಮಕ್ಕೆ ಈಗ ವೇದಿಕೆ ಸಕಲ ರೀತಿಯಲ್ಲಿ ಸಜ್ಜುಗೊಂಡಿದೆ. ದಿನಾಂಕ ಜನವರಿ 21ರಿಂದ ಜನವರಿ 23 ರವರೆಗೆ ಮೂರು ದಿನಗಳ ಕಾಲ ಈ ಕಾರ್ಯಕ್ರಮಗಳು ವಿಧಿಬದ್ಧವಾಗಿ ನಡೆಯಲಿದೆ.**

## ಜಿಲ್ಲೆಯ 24 ಸಾವಿರ ಮಂದಿಗೆ ಹಕ್ಕುಪತ್ರ: ಸಚಿವ ಕೃಷ್ಣ ಬೈರೇಗೌಡ


ಉದಯವಾಹಿನಿ ಚಿತ್ರ

• ಉದಯವಾಹಿನಿ ಹಾವೇರಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಅವಧಿಯಲ್ಲಿ 1.11 ಲಕ್ಷ ಮಂದಿಗೆ ಹಕ್ಕು ಪತ್ರ ನೀಡಲಾಗಿದೆ. ಹಾವೇರಿ ಜಿಲ್ಲೆಯಲ್ಲಿಯೂ 28 ಸಾವಿರ ಜನರಿಗೆ ಹಕ್ಕುಪತ್ರ ಕೊಟ್ಟಿದ್ದೇನೆ. ಫೆ.13ರಂದು ಹಾವೇರಿಯಲ್ಲಿ ನಡೆಯುವ ಸರ್ಕಾರದ ಸಾಧನಾ ಸಮಾವೇಶದಲ್ಲಿಯೂ ಹೊಸದಾಗಿ 1 ಲಕ್ಷ ಜನರಿಗೆ ಹಕ್ಕುಪತ್ರ ನೀಡಲಾಗುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ನಗರದ ಹೊರವಲಯದಲ್ಲಿರುವ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಕಂದಾಯ ಇಲಾಖೆ ಹಕ್ಕುಪತ್ರ ವಿತರಣಾ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡಿದ್ದ ಅವರು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು. ದಾಖಲೆ ರಹಿತರಿಗೆ ಕಂದಾಯ ಗ್ರಾಮ ಮಾಡುವುದು ಬಹಳ ದಿನಗಳ ಹೋರಾಟವಾಗಿತ್ತು. ನಮ್ಮ ಸರ್ಕಾರ ಬಂದ ನಂತರ, ಅರ್ಹರನ್ನು ಗುರುತಿಸಿ ಹಕ್ಕುಪತ್ರ ವಿತರಿಸಲಾಗುತ್ತಿದೆ. ಹಾಡಿ. ಹಟ್ಟಿ, ತಾಂಡಾ... ಹೀಗೆ ಬೇರೆ ಬೇರೆ ಹೆಸರಿನಿಂದ ದಾಖಲೆ ರಹಿತವಾಗಿ ವಾಸಿಸುತ್ತಿದ್ದ ಜನರು ಅತಂತ್ರ ಸ್ಥಿತಿಯಲ್ಲಿದ್ದರು. ಅವರಿಗೆ ಮುಕ್ತಿ ನೀಡಿ, ನೆಮ್ಮದಿ ಬದುಕು ನಡೆಸಲು ಹಕ್ಕುಪತ್ರ ನೀಡಲಾಗುತ್ತಿದೆ' ಎಂದರು. ದೊಡ್ಡಮಟ್ಟದಲ್ಲಿ ಹಕ್ಕುಪತ್ರಗಳ ತಯಾರಿಗೆ ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಗಳ ಶ್ರಮವಿದೆ. ನಿಮ್ಮ ಕೆಲಸದ ಸಾರ್ಥಕತೆಯಾಗಲು ಹಕ್ಕು ಪತ್ರ ವಿತರಣೆ ಸಮಾವೇಶ ಹಾವೇರಿಯಲ್ಲಿ ಮಾಡಲು ತೀರ್ಮಾನಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಆರ್‌ಟಿಸಿ ತಿದ್ದುಪಡಿ, ದರಖಾಸ್ತ ಕೆಲಸ, ಪೋತಿ ಖಾತೆ ಸೇರಿದಂತೆ ವಿವಿಧ ಕೆಲಸಗಳು ಅತ್ಯಂತ ಉತ್ತಮವಾಗಿ ಆಗಿವೆ. ಈ ಮೊದಲು ಹದ್ದುಬಸ್ತಿಗೆ 6 ರಿಂದ 12 ತಿಂಗಳು ಆಗುತ್ತಿತ್ತು. ಈಗ ಒಂದು ತಿಂಗಳಲ್ಲಿ ಕೆಲಸ ಆಗುತ್ತಿದೆ. ಎಲ್ಲರೂ ಸೇರಿ ಬದಲಾವಣೆ ತಂದಿದ್ದೀರಿ. ಆಗಿರುವ ಕೆಲಸ ಜನರಿಗೆ ಕಾಣಬೇಕು. ಕೆಲಸ ಮಾಡಿದವರನ್ನು ಗುರುತಿಸುವ ಕೆಲಸವಾಗಬೇಕು. ಕೆಲಸ ಮಾಡಲು ಪ್ರೋತ್ಸಾಹ ಸಿಗುವಂತಾಗಬೇಕು ಎಂದರು.

2 3 + 1 ಮನೆ ಸಿಗದೇ ಸುಡುಗಾಡು ಸಿದ್ದರ ಕುಟುಂಬಗಳು ಕಂಗಾಲು: ಗುತ್ತಿಗೆದಾರರ ನಿರ್ಲಕ್ಷ್ಯ

# 33 ಲಕ್ಷ ರೂ. ಕೊಟ್ಟರೂ ಸಿಗದ ಸೂರು

• ಉದಯವಾಹಿನಿ ಹಾವೇರಿ

ಇಲ್ಲಿಯ ನಾಗೇಂದ್ರನಮಟ್ಟಿಯ ಶಾಂತಿನಗರದಲ್ಲಿ ನಿರ್ಮಿಸುತ್ತಿರುವ 2 3 + 1 ಮನೆಗಳ ಕಾಮಗಾರಿ ನಿಧಾನಗತಿಯಲ್ಲಿ ಸಾಗಿದ್ದು, ಗುಡಿಸಲಿನಲ್ಲಿ ವಾಸವಿರುವ ಸುಡುಗಾಡು ಸಿದ್ಧರ ಕುಟುಂಬಗಳು ಸ್ವಂತ ಸೂರು ಸಿಗದೇ ಕಂಗಾಲಾಗಿದ್ದಾರೆ. ಬಯಲು ಪ್ರದೇಶದ ಖಾಸಗಿ ಜಾಗಗಳಲ್ಲಿ ಜೋಪಡಿಗಳಲ್ಲಿ ವಾಸವಿರುವ ಸುಡುಗಾಡು ಸಿದ್ಧರ ಕುಟುಂಬಗಳಿಗೆ ಜಿ + 1 ಮನೆ ನೀಡಲು ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಈಗಾಗಲೇ ರೂ.33 ಲಕ್ಷ ನೀಡಿದೆ.

### ಮೂಲ ಸೌಕರ್ಯ ಕಲ್ಪಿಸುವ ಕೆಲಸ

**ನಾಗೇಂದ್ರನಮಟ್ಟಿಯ ಶಾಂತಿನಗರದಲ್ಲಿ ಜಿ + 1 ಮನೆಗಳ ನಿರ್ಮಾಣ ಪ್ರಗತಿಯಲ್ಲಿದೆ. ಕೆಲ ಭಾಗದ ಮನೆಗಳನ್ನು ಶೀಘ್ರದಲ್ಲೇ ಪೂರ್ಣ ಪ್ರಮಾಣದಲ್ಲಿ ನಿರ್ಮಿಸಿ ಕೊಡುವಂತೆ ಗುತ್ತಿಗೆದಾರರಿಗೆ ತಿಳಿಸಲಾಗಿದೆ. ರಸ್ತೆ ಶೌಚಾಲಯ ಕುಡಿಯುವ ನೀರು ಸೇರಿ ಇತರೆ ಮೂಲ ಸೌಕರ್ಯ ಕಲ್ಪಿಸುವ ಕೆಲಸ ನಡೆಯುತ್ತಿದೆ. ಅದು ಮುಗಿಯುತ್ತಿದ್ದಂತೆ ಸುಡುಗಾಡು ಸಿದ್ದರ ಕುಟುಂಬಗಳಿಗೆ ಮೊದಲ ಆದ್ಯತೆಯಾಗಿ ಮನೆಗಳನ್ನು ಹಸ್ತಾಂತರಿಸಲಾಗುವುದು ಎಂದು ನಗರಸಭೆ ಪೌರಾಯುಕ್ತ ಎಚ್. ಕಾಂತರಾಜು ತಿಳಿಸಿದರು. ಜೊತೆ ಮಾತನಾಡಿದ ಅವರು ಸುಡುಗಾಡು ಸಿದ್ದರ ಕುಟುಂಬದವರು ವೈಯಕ್ತಿಕವಾಗಿ ಸರ್ಕಾರದ ನಿಗದಿಪಡಿಸಿದ್ದ ಹಣ ಭರಿಸಬೇಕಿತ್ತು. ಅವರ ಪರವಾಗಿ ನಿಗಮವು ಹಣ ನೀಡಿದೆ. ಈ ಹಣವನ್ನು ನಿಯಮಾವಳಿ ಪ್ರಕಾರ ನಾವು ಪುನಃ ಸರ್ಕಾರಕ್ಕೆ ಪಾವತಿ ಮಾಡುತ್ತೇವೆ. ತ್ವರಿತವಾಗಿ ಮನೆ ಹಸ್ತಾಂತರಿಸಲು ಕ್ರಮ ಕೈಗೊಳ್ಳುತ್ತೇವೆ' ಎಂದರು.**

ಆದರೆ, ನಿಗಮದಿಂದ ಬಂದ ಹಣವನ್ನು ಪಡೆದುಕೊಂಡಿರುವ ನಗರಸಭೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಇದುವರೆಗೂ ಮನೆಗಳನ್ನು ಹಸ್ತಾಂತರ ಮಾಡಿಲ್ಲ. ಶಾಂತಿನಗರದಲ್ಲಿ ರಾಜೀವ ಗಾಂಧಿ ವಸತಿ ನಿಗಮದಿಂದ 2 9 + 1 ಮಾದರಿಯಲ್ಲಿ 480 ಮನೆಗಳನ್ನು ನಿರ್ಮಿಸಲು ಉದ್ದೇಶಿಸಿ ಕಾಮಗಾರಿ ಆರಂಭಿಸಲಾಗಿದೆ.


ಉದಯವಾಹಿನಿ ಚಿತ್ರ

ಕಾಮಗಾರಿ ಶುರುವಾದಾಗಿನಿಂದ ನಿಧಾನಗತಿಯಲ್ಲಿ ಸಾಗಿದೆ. ಗುತ್ತಿಗೆದಾರರ ಬದಲಾವಣೆಯೂ ಆಗಿದೆ. ಕಳಪೆ ಕಾಮಗಾರಿ ಆರೋಪದಡಿ ಲೋಕಾಯುಕ್ತರ ತನಿಖೆಯೂ ನಡೆಯುತ್ತಿದೆ. ಇದರ ನಡುವೆಯೇ, ಅನಕ್ಷರಸ್ಥರಾಗಿರುವ ಸುಡುಗಾಡು ಸಿದ್ಧರ ಕುಟುಂಬಗಳು ತಮಗೆ ಮನೆಗಳು ಸಿಗಬಹುದೆಂಬ ನಿರೀಕ್ಷೆಯಲ್ಲಿಯೇ ದಿನ ದೂಡುತ್ತಿದ್ದಾರೆ. ರೂ. 33 ಲಕ್ಷ ಕೊಟ್ಟರೂ ಮನೆ ನೀಡದ ನಗರಸಭೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ನಡೆಯಿಂದ ಬೇಸತ್ತಿರುವ ಸುಡುಗಾಡು ಸಿದ್ದರ ಕುಟುಂಬದವರು, ನಮ್ಮ ಹೆಸರಿನಲ್ಲಿ ಬಂದಿರುವ ಹಣವನ್ನು ಇಟ್ಟುಕೊಂಡು ಏನು ಮಾಡುತ್ತೀರಾ. ಮನೆಗಳಿಗಾಗಿ ವರ್ಷಗಟ್ಟಲೇ ಕಾಯುತ್ತಿದ್ದೇವೆ. ಮನೆಗಳು ಸಿಗದೇ, ಮಕ್ಕಳು ಹಾಗೂ ವೃದ್ಧರ ಜೊತೆ ಜೋಪಡಿಯಲ್ಲಿ ಬದುಕುತ್ತಿದ್ದೇವೆ. ಕೂಡಲೇ ನಮಗೆ ಮನೆಗಳನ್ನು ಹಸ್ತಾಂತರ ಮಾಡಬೇಕು ಎಂದು ಒತ್ತಾಯಿಸುತ್ತಿದ್ದಾರೆ.

**ಫಲಾನುಭವಿಗಳ ಪಾಲು ತುಂಬಿದ ನಿಗಮ:** ಶಾಂತಿನಗರದಲ್ಲಿರುವ ಸರ್ಕಾರಿ ಜಾಗದಲ್ಲಿ ಜೋಪಡಿ ನಿರ್ಮಿಸಿಕೊಂಡು ಸುಮಾರು ವರ್ಷಗಳಿಂದ ವಾಸವಿದ್ದ ಸುಡುಗಾಡು ಸಿದ್ದರ 33 ಕುಟುಂಬಗಳನ್ನು, ಪುನರ್ ವಸತಿ ಭರವಸೆ ನೀಡಿ ಎರಡೂವರೆ ವರ್ಷದ ಹಿಂದೆ ತೆರವು ಮಾಡಲಾಗಿತ್ತು. ಅದೇ ಸ್ಥಳದಲ್ಲಿ ಜಿ + 1 ಮನೆಗಳ ನಿರ್ಮಾಣ ಕೆಲಸ ಆರಂಭವಾಗಿದೆ. ವಸತಿ ಸಮುಚ್ಚಯ ರೀತಿಯಲ್ಲಿ ಜಿ + 1 ಮಾದರಿಯಲ್ಲಿ 430 ಮನೆಗಳನ್ನು ನಿರ್ಮಿಸಲಾಗುತ್ತಿದೆ. ಈ ಪೈಕಿ ಸುಡುಗಾಡು ಸಿದ್ದರ ಕುಟುಂಬಗಳಿಗೆ ಮೊದಲ ಆದ್ಯತೆಯಾಗಿ 33 ಮನೆಗಳನ್ನು ಹಸ್ತಾಂತರಿಸಲು ತೀರ್ಮಾನಿಸಲಾಗಿತ್ತು. ಇದಕ್ಕಾಗಿ ಸುಡುಗಾಡು ಸಿದ್ದರ ಕುಟುಂಬದವರಿಂದ ತಲಾ ರೂ 1 ಲಕ್ಷ ನಗದು ಹಾಗೂ ಬ್ಯಾಂಕ್ ಸಾಲದಿಂದ ರೂ.2.20 ಲಕ್ಷ ಸಂಗ್ರಹಿಸಲು ಯೋಚಿಸಲಾಗಿತ್ತು. ಆದರೆ, ತಮ್ಮ ಬಳಿ ರೂ 1 ಲಕ್ಷ ಇಲ್ಲವೆಂದು ಫಲಾನುಭವಿಗಳು ಅಳಲು ತೋಡಿಕೊಂಡರು. ಇದಕ್ಕೆ ಸ್ಪಂದಿಸಿದ ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ, ಫಲಾನುಭವಿಗಳ ಪರವಾಗಿ ರೂ 33 ಲಕ್ಷವನ್ನು ಚೆಕ್ ಮೂಲಕ ಈಗಾಗಲೇ ಹಸ್ತಾಂತರಿಸಿದೆ.

### ಮಳೆಗಾಲಕ್ಕೂ ಮುನ್ನ ಮನೆ ನೀಡಿ

**ನಾವೆಲ್ಲ ಬಯಲು ಪ್ರದೇಶದಲ್ಲಿ ಜೋಪಡಿಯಲ್ಲಿದ್ದೇವೆ. ಮಳೆಗಾಲದ ಸಂದರ್ಭದಲ್ಲಿ ಜೋಪಡಿಯೊಳಗೆ ನೀರು ನುಗ್ಗುತ್ತದೆ. ಹಾವು ಚೇಳು ಎಲ್ಲವೂ ಜೋಪಡಿಯೊಳಗೆ ಬರುತ್ತವೆ. ಕಳೆದ ಮಳೆಗಾಲದಲ್ಲಿ ಸಾಕಷ್ಟು ಯಾತನೆ ಅನುಭವಿಸುತ್ತಿದ್ದೇವೆ. ಈ ಬಾರಿ ಮಳೆಗಾಲಕ್ಕೂ ಮುನ್ನವೇ ನಮಗೆ ಮನೆ ನೀಡಬೇಕು. ಇಲ್ಲದಿದ್ದರೆ ಮತ್ತೆ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಹೇಳಿದರು.**

ನಾವು ದುಡಿಮೆ ನಂಬಿ ಬದುಕುವ ಜನ. ಹಣ ಕೂಡಿ ಇಡುವಷ್ಟು ಶ್ರೀಮಂತರಲ್ಲ. ನಮ್ಮ ಬಳಿ ರೂ.1 ಲಕ್ಷ ಇರಲಿಲ್ಲ. ನಿಗಮದವರು ನಮ್ಮ ಪರವಾಗಿ ಹಣ ಕೊಟ್ಟಿದ್ದಾರೆ.

ಆದರೆ, ಹಣ ಕೊಟ್ಟರೂ ಮನೆಗಳ ಹಸ್ತಾಂತರವಾಗದಿರುವುದು ನೋವು ತರಿಸಿದೆ. ನಾವು ಇಂದಿಗೂ ಜೋಪಡಿಯಲ್ಲಿಯೇ ಉಳಿದುಕೊಳ್ಳುವಂತಾಗಿದೆ ಎಂದು ಫಲಾನುಭವಿ ಗಂಗಾಧರ ಬಾದಗಿ ಅಳಲು ತೋಡಿಕೊಂಡರು.

**ಜಾಗ ಖಾಲಿ ಮಾಡಲು ಒತ್ತಾಯ:** ಸರ್ಕಾರಿ ಜಾಗದಿಂದ ತೆರವು ಮಾಡುತ್ತಿದ್ದಂತೆ ನಾಗೇಂದ್ರಮಟ್ಟಿಯಲ್ಲಿಯೇ ಖಾಸಗಿ ವ್ಯಕ್ತಿಗಳ ಜಾಗದಲ್ಲಿ ಸೀರೆ-ತಗಡಿನಿಂದ ಜೋಪಡಿ ನಿರ್ಮಿಸಿಕೊಂಡು ಸುಡುಗಾಡು ಸಿದ್ದರು ವಾಸವಿದ್ದಾರೆ. ಈಗ ಜಾಗ ಖಾಲಿ ಮಾಡುವಂತೆ ಮಾಲೀಕರು ಒತ್ತಾಯಿಸುತ್ತಿದ್ದು, ಸುಡುಗಾಡು ಸಿದ್ದರ ಬದುಕು ಅತಂತ್ರವಾಗಿದೆ.

ಅಂದಿನ ಶಾಸಕ ಬಸವರಾಜ ಶಿವಣ್ಣನವರ ಮಾತಿನಂತೆ ಸರ್ಕಾರಿ ಜಾಗದಲ್ಲಿ ವಾಸವಿದ್ದೆವು. ಅದೇ ಜಾಗದಲ್ಲಿ ಆಶ್ರಯ ಮನೆಗಳನ್ನು ನಿರ್ಮಿಸುವುದಾಗಿ ಹೇಳಿದ್ದರಿಂದ, ಅಲ್ಲಿಂದ ಹೊರಬಂದು ಖಾಸಗಿ ವ್ಯಕ್ತಿಗಳ ಜಾಗದಲ್ಲಿ ಜೋಪಡಿಯಲ್ಲಿ ವಾಸವಿದ್ದೇವೆ. ಇದುವರೆಗೂ ನಮಗೆ ಜಿ + 1 ಮನೆ ಸಿಕ್ಕಿಲ್ಲ. ಜಾಗ ಖಾಲಿ ಮಾಡುವಂತೆ ಮಾಲೀಕರು ಹೇಳುತ್ತಿದ್ದಾರೆ. ನಾವು ಎಲ್ಲಿಗೆ ಹೋಗಬೇಕು ಎಂದು ಫಲಾನುಭವಿಗಳು ಅಳಲು ತೋಡಿಕೊಂಡರು.

## ಮಿನಿ ನ್ಯೂಸ್

### ಅದಿರು ಅಕ್ರಮ ಸಾಗಣೆ: ಎಲ್ಲಾ ಆಯಾಮಗಳಿಂದ ತನಿಖೆ-ಎಸ್‌ಪಿ

• ಉದಯವಾಹಿನಿ ಬಳ್ಳಾರಿ

ಸಂಡೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿರುವ ಅದಿರು ಅಕ್ರಮ ಸಾಗಣೆ ಪ್ರಕರಣವನ್ನು ಎಲ್ಲಾ ಆಯಾಮಗಳಿಂದ ತನಿಖೆ ನಡೆಸಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮನ್ ಪೆನ್ನೇಕರ್ ತಿಳಿಸಿದ್ದಾರೆ. ಯಾವುದೇ ಪರ್ಮಿಟ್ ಇಲ್ಲದೇ, ದಾಖಲೆಗಳಿಲ್ಲದೇ ಟ್ರಕ್‌ವೊಂದರಲ್ಲಿ ಕಬ್ಬಿಣದ ಅದಿರು ಸಾಗಣೆ ಮಾಡುತ್ತಿರುವ ಬಗ್ಗೆ ಸಂಡೂರು ಠಾಣೆಗೆ ಜ.16ರಂದು ಮಾಹಿತಿ ಬಂದಿತ್ತು. ಲಾರಿಯನ್ನು ವಶಕ್ಕೆ ಪಡೆದು ಪರಿಶೀಲಿಸಲಾಯಿತು. ಜ.17ರಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳನ್ನು ಕರೆಸಿಕೊಂಡು ಭೂವಿಜ್ಞಾನಿಯಿಂದ ದೂರು ಪಡೆದು ಪ್ರಕರಣ ದಾಖಲಿಸಿದ್ದೇವೆ ಎಂದು ಸುಮನ್ ಹೇಳಿದರು.

ತಿಪ್ಪೆಸ್ವಾಮಿ ಎಂಬ ಚಾಲಕ ಯಾವುದೇ ಪರ್ಮಿಟ್ ಇಲ್ಲದೇ 20 ಟನ್ ಅದಿರನ್ನು ಲಾರಿಯಲ್ಲಿ ತುಂಬಿಕೊಂಡು ಹೋಗುತ್ತಿದ್ದದ್ದು ಪ್ರಾಥಮಿಕ ವಿಚಾರಣೆಯಿಂದ ಗೊತ್ತಾಗಿದೆ. ಚಾಲಕನ ಸಂಪರ್ಕದಲ್ಲಿ ಯಾರಿರಬಹುದು ಎಂಬುದನ್ನು ತನಿಖೆ ಮಾಡುತ್ತಿದ್ದೇವೆ ಎಂದರು.

ಎನ್‌ಎಂಡಿಸಿ ಗಣಿಯಿಂದ ಅಂಧ್ರಕ್ಕೆ ಅದಿರು ಸಾಗಣೆಯಾಗುತ್ತಿತ್ತು ಎಂದು ಗೊತ್ತಾಗಿದೆ. ಇದರಲ್ಲಿ ಯಾರಾರು ಇದ್ದಾರೆ. ಈ ಮೊದಲು ಇಂಥ ಘಟನೆಗಳು ನಡೆದಿದ್ದವೇ ಎಂಬುದೂ ಸೇರಿದಂತೆ ಎಲ್ಲಾ ಆಯಾಮಗಳಿಂದ ತನಿಖೆ ನಡೆಸಲಾಗುತ್ತಿದೆ. ಜಿಪಿಎಸ್ ಇರುವ ಲಾರಿಯಾಗಿದ್ದರಿಂದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಂದಲೂ ಒಂದಷ್ಟು ಮಾಹಿತಿ ಕೇಳಿದ್ದೇವೆ. ಲಾರಿ ಹೇಗೆ ಗಣಿಯಿಂದ ಹೊರಬಂದಿತು ಎಂಬುದರ ಮಾಹಿತಿ ಕೇಳುತ್ತಿದ್ದೇವೆ' ಎಂದು ತಿಳಿಸಿದರು.

### ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಿ: ನ್ಯಾಯಾಧೀಶ ಮಹಾಂತೇಶ ದರಗದ

• ಉದಯವಾಹಿನಿ ಗಂಗಾವತಿ

ತಾಲ್ಲೂಕಿನ ಚಿಕ್ಕಜಂತಕಲ್ ಗ್ರಾಮದ ಅಂಬೇಡ್ಕರ್ ಏರಿಯಾದಲ್ಲಿರುವ ಸಮುದಾಯ ಶೌಚಾಲಯ ದುರಸ್ತಿ ಕಾರ್ಯ ಸ್ಥಳಕ್ಕೆ ಕೊಪ್ಪಳದ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾಂತೇಶ ದರಗದ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಏರಿಯಾದ ದ್ಯಾಮವ್ವ ದೇವಸ್ಥಾನದ ಬಳಿ ಗ್ರಾಮಸ್ಥರೊಂದಿಗೆ ಸಭೆ ನಡೆಸಿ, ಏರಿಯಾದಲ್ಲಿನ ಸಮುದಾಯ ಶೌಚಾಲಯ ನಿರ್ಮಾಣ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ. ಬೇಗ ಶೌಚಾಲಯ ಬಳಕೆಗೆ ಲಭ್ಯವಾಗಲಿದೆ. ಮಹಿಳೆಯರು ಬಯಲು ಬಹಿರ್ದೆಸೆಗೆ ಹೋಗಬಾರದು. ಇದರಿಂದ ಪರಿಸರ ಮಲಿನವಾಗಲಿದೆ. ಎಲ್ಲರೂ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ನಂತರ ಗ್ರಾಮಸ್ಥರು, ನಿವೇಶನಗಳು ಬಂದಿಲ್ಲ. ಕೆಲ ನಿವೇಶನಗಳಿಗೆ ಕಂತಿನ ಹಣ ಬಂದಿಲ್ಲ. ಶೌಚಾಲಯಗಳಿಗೆ ಅರ್ಜಿ ಸಲ್ಲಿಸಿದರೂ ಈವರೆಗೆ ಅನುಮೋದನೆ ಆಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ನಂತರ ಅಧಿಕಾರಿಗಳು 21 ಮಹಿಳಾ ಫಲಾನುಭವಿಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು ಕಾಮಗಾರಿ ಮಂಜೂರಾತಿ ಆದೇಶ ಪತ್ರ ನೀಡಿದರು.

### ಬೀದಿ ನಾಯಿ ಹಾವಳಿ ನಿವಾರಿಸಲು ಸೂಚನೆ

• ಉದಯವಾಹಿನಿ ಹೊಳೆನರಸೀಪುರ

ಪಟ್ಟಣದಲ್ಲಿ ಸಮಸ್ಯೆಗಳು ಬಹಳಷ್ಟಿದ್ದು, ತಿಂಗಳಿಗೆ 2 ಸಲ ಭೇಟಿ ನೀಡುತ್ತೇನೆ. ಇಂದಿನ ಸಭೆಯಲ್ಲಿ ನೀಡಿರುವ ಸಲಹೆ ಹಾಗೂ ಸಮಸ್ಯೆ ಕುರಿತಂತೆ ಅಧಿಕಾರಿಗಳಿಗೆ ಸಲಹೆ ನೀಡಲಾಗಿದೆ. ಮುಂದಿನ ಸಭೆಯಲ್ಲಿ ಕೈಗೊಂಡ ಕ್ರಮದ ಸಂಪೂರ್ಣ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚನೆ ನೀಡಿದರು. ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ಆಯೋಜಿಸಿದ್ದ ಕುಂದುಕೊರತೆ ಅಹವಾಲು ಸ್ವೀಕಾರ ಸಭೆಯಲ್ಲಿ ಅವರು ಮಾತನಾಡಿದರು. ಪುರಸಭೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಸಮಸ್ಯೆ ನಿವಾರಣೆಗೆ ಆದ್ಯತೆ ನೀಡಬೇಕು. ಒಳಚರಂಡಿ ವ್ಯವಸ್ಥೆ ಹದಗೆಟ್ಟಿದೆ. ಚರಂಡಿಗಳಿಗೆ ಸ್ಲಾಬ್ ಅಳವಡಿಸದ ಕಾರಣದಿಂದ ರಸ್ತೆಯಲ್ಲಿನ ಪ್ಲಾಸ್ಟಿಕ್ ಹಾಗೂ ಇತರೆ ವಸ್ತುಗಳು ಚರಂಡಿ ಸೇರಿ, ಸಮಸ್ಯೆ ಉಂಟಾಗಿದೆ. ಇದನ್ನು ನಿವಾರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು. ರಸ್ತೆಗಳು ಗುಂಡಿ ಬಿದ್ದಿದ್ದು, ಗುಂಡಿಗಳಿಂದಾಗಿ ಅಪಘಾತಗಳು ನಡೆಯುತ್ತಿದೆ, ಪುರಸಭೆ ವ್ಯಾಪ್ತಿಯಲ್ಲಿ ರಸ್ತೆಗಳ ಗುಂಡಿ ಮುಚ್ಚುವ ಕೆಲಸ ಆಗಬೇಕು. ಬಡಾವಣೆಗಳಲ್ಲಿ ಎಷ್ಟು ಉದ್ಯಾನಗಳಿವೆ ಅವುಗಳು ಅಭಿವೃದ್ಧಿ ಆಗಿದೆಯಾ ಎಂದು ಪ್ರಶ್ನಿಸಿದ ಜಿಲ್ಲಾಧಿಕಾರಿ, ದೊಡ್ಡವರು ಕ್ರೀಡಾಂಗಣಕ್ಕೆ ಹೋಗುತ್ತಾರೆ. ಮಕ್ಕಳು ಆಟವಾಡಲು ಎಲ್ಲಿ ಹೋಗುತ್ತಾರೆ ಉದ್ಯಾನಗಳ ಅಭಿವೃದ್ಧಿಗೂ ಆದ್ಯತೆ ನೀಡಿ ಎಂದರು.

### ದಾದಾಗಿರಿಗೆ ಬಗ್ಗುವುದಿಲ್ಲ: ಸಚಿವ

• ಉದಯವಾಹಿನಿ ದಾವಣಗೆರೆ

ತಂದೆ ಶಾಮನೂರು ಶಿವಶಂಕರಪ್ಪ ಅವರ ನುಡಿನಮನ ಕಾರ್ಯಕ್ರಮದ ಸ್ಥಳ ಸಮತಟ್ಟು ಮಾಡಲು ಗುತ್ತಿಗೆ ನೀಡಲಾಗಿತ್ತು. ಮಣ್ಣು ಅಕ್ರಮವಾಗಿ ಸಾಗಣೆ ಮಾಡಿದ್ದರೆ ತನಿಖೆ ಎದುರಿಸಲು ಸಿದ್ಧನಿದ್ದೇನೆ' ಎಂದು ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಸಚಿವರು ಅಕ್ರಮವಾಗಿ ಮಣ್ಣು ಗಣಿಗಾರಿಕೆ ನಡೆಸಿ ಸಾಗಣೆ ಮಾಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ನಡೆಸಿದ ಪ್ರತಿಭಟನೆಗೆ ಅವರು ಪ್ರತಿಕ್ರಿಯೆ ನೀಡಿದರು. ಕಾರ್ಯಕ್ರಮ ಸ್ಥಳ ನಮಗಷ್ಟೇ ಸೇರಿದ್ದಲ್ಲ. ಜಮೀನು ಮಾಲೀಕರಾದ ಅನೇಕ ರೈತರು ಕೂಡ ಮಣ್ಣು ತಂದಿದ್ದಾರೆ. ಗುತ್ತಿಗೆ ಪಡೆದವರನ್ನು ಹಿಡಿದು ಕೇಳಿದರೆ ಸತ್ಯ ಗೊತ್ತಾಗುತ್ತದೆ. ತಪ್ಪು ಮಾಡಿದ್ದರೆ ಕಾನೂನು ಕ್ರಮ ಎದುರಿಸಲು ನಾನು ಸಿದ್ಧನಿದ್ದೇನೆ. ಆದರೆ, ದಾದಾಗಿರಿಗೆ ಬಗ್ಗುವುದಿಲ್ಲ ಎಂದು ತಿರುಗೇಟು ನೀಡಿದರು.

ಶಾಸಕ ಬಿ.ಪಿ. ಹರೀಶ್ ಬಹಿರಂಗವಾಗಿ ವ್ಯಕ್ತಿಯೊಬ್ಬರನ್ನು ನಿಂದನೆ ಮಾಡಿದ್ದು, ಕ್ಯಾಮೆರಾದಲ್ಲಿ ಸೆರೆಯಾಗಿದೆ. ಇದನ್ನು ಆಧರಿಸಿ ಸಂತ್ರಸ್ತರು ದೂರು ಕೊಟ್ಟಿದ್ದಾರೆ. ಹರೀಶ್ ವಿರುದ್ಧ ದಾಖಲಾಗಿರುವ ಜಾತಿ ನಿಂದನೆ ಪ್ರಕರಣಕ್ಕೂ ನನಗೂ ಸಂಬಂಧವಿಲ್ಲ. ಬಂಧಿಸುವಂತೆ ಯಾರಿಗೂ ಸೂಚನೆ ಕೊಟ್ಟಿಲ್ಲ. ಮೂರು ಬಾರಿ ಸಚಿವರಾದರೂ ಕಪ್ಪುಚುಕ್ಕೆ ಅಂಟಿಸಿಕೊಂಡಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಅಧಿಕಾರಿಗಳು ಕಾನೂನು ಪ್ರಕಾರ ನಡೆದುಕೊಳ್ಳುತ್ತಿದ್ದಾರೆ. ಅವರನ್ನು ಏಕವಚನದಲ್ಲಿ ನಿಂದಿಸುವುದು ಸರಿಯಲ್ಲ. ಉತ್ತಮ ರಾಜಕಾರಣಿಯ ಲಕ್ಷಣವೂ ಅಲ್ಲ. ಬಿ.ಪಿ. ಹರೀಶ್ ಸಂಸ್ಕಾರ ಕಲಿಯಬೇಕು. ಚಿಕ್ಕಂದಿನಲ್ಲಿ ನಮ್ಮೊಂದಿಗೆ ಕ್ರಿಕೆಟ್ ಆಡುವಾಗಲೂ ಹರೀಶ್ ಹೀಗೆಯೇ ನಡೆದುಕೊಳ್ಳುತ್ತಿದ್ದರು ಎಂದು ಕುಟುಕಿದರು. ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಎದುರಾಗಿರುವ ಉಪಚುನಾವಣೆಯಲ್ಲಿ ಅನುಕಂಪ ಗಿಟ್ಟಿಸಿಕೊಳ್ಳಲು ಬಿಜೆಪಿ ಹವಣಿಸುತ್ತಿದೆ.

ಚಿಕ್ಕಬಿದರೆ ಪ್ರಕರಣದ ತನಿಖೆ ಶೀಘ್ರದಲ್ಲಿ ಹೊರಬರಲಿದ್ದು, ರಾಜಕೀಯ ಬೇಳೆ ಬೇಯಿಸಿಕೊಳ್ಳುವವರ ಹುನ್ನಾರವೂ ಬಯಲಾಗಲಿದೆ' ಎಂದು ಸಚಿವ ಮಲ್ಲಿಕಾರ್ಜುನ್ ಹೇಳಿದರು. ಕೇಂದ್ರದ ಮಾಜಿ ಸಚಿವರನ್ನು ಲೋಕಸಭಾ ಚುನಾವಣೆಯಲ್ಲಿ ಊರಿಗೆ (ಭೀಮಸಮುದ್ರ) ಕಳುಹಿಸಲಾಗಿತ್ತು. ಅವರು ಈವರೆಗೆ ಬಹಿರಂಗವಾಗಿ ಕಾಣಿಸಿಕೊಂಡಿರಲಿಲ್ಲ. ವಿಧಾನಸಭಾ ಉಪಚುನಾವಣೆ ಸಮೀಪಿಸುತ್ತಿದ್ದಂತೆ ಗರಿಗರಿ ಬಟ್ಟೆ ಹಾಕಿಕೊಂಡು ಹೊರಬರುತ್ತಿದ್ದಾರೆ ಎಂದು ಜಿ.ಎಂ. ಸಿದ್ದೇಶ್ವರ ಹೆಸರು ಉಲ್ಲೇಖಿಸದೇ ವಾಗ್ದಾಳಿ ನಡೆಸಿದರು.

## ದ್ವಿ ಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೇಟ್ ಧರಿಸಿ ವಾಹನ ಚಲಾಯಿಸಬೇಕು

• ಉದಯವಾಹಿನಿ ಬೀದರ

ವಿದ್ಯಾರ್ಥಿಗಳು ವಾಹನ ಚಲಾಸುವಾಗ ಬಹಳ ಎಚ್ಚರಿಕ್ಕೆಯಿಂದ ವಾಹಾನ ಚಲಾಯಿಸಬೇಕೆಂದು ಬೀದರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಜಿ.ಕೆ ಬಿರಾದರ ಅವರು ನುಡಿದರು. ಅವರು ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿ ..ಜಿಲ್ಲಾ ಪೋಲಿಸ್. ಇಲಾಖೆ. ಶ್ರೀ ಸ್ವಾಮಿ ನರೇಂದ್ರ ಪಿ.ಯು.ಕಾಲೇಜ. ಹಾಗು ಬೀದರ ಮೋಟಾರ ವಾಹಾನ ತರಬೇತಿ ಶಾಲೆಯ ಸಹಯೋಗದಲಿ 37 ನೇ ರಾಷ್ಟ್ರಿಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮವನು ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು.

ಮುಂದುವರಿದು ಮಾತನಾಡುತ್ತಾ. ರಸ್ತೆ ಅಪಘಾತಕ್ಕೆ ಒಳಗಾದರೆ ಮೊದಲು ಏಟು ಬಿಳುವುದು ತಲೆಗೆ, ಹಾಗಾಗಿ ಎಲ್ಲರು ಕಡ್ಡಾಯವಾಗಿ ಹೆಲ್ಮೇಟ ಧರಿಸಿ ವಾಹನ ಚಲಾಯಿಸಬೇಕು. ಅಪಘಾತದಲ್ಲಿ ವಳಗಾದ ವ್ಯಕ್ತಿಯ ಕೈ ಕಾಲು ಹಾಗು ಇನತರ ಗಾಯಗಳಾದರೆ ಬದುಕಬಹುದು. ತಲೆಗೆ ಪೆಟಾದರೆ ಬದುಕಲ್ಲು ಸಾಧ್ಯವಿಲ ಎಂದರು. ಹೆಚ್ಚಿನ ಸಂಖ್ಯೆಯಲ್ಲಿ ಯುವಕರೆ ಅಪಘಾತಕ್ಕೆ ವಳಗಾಗುತ್ತಿದ್ದಾರೆ. ಹಾಗಾಗಿ ಎಲ್ಲರು ಕಡ್ಡಾಯವಾಗಿ ಸಂಚಾರಿ ನಿಯಮ ಪಾಲನೆ ವಮಾಡುವುದರಿಂದ ಅಪಘಾತ ಕಡಿಮೆ ಮಾಡಲು ಸಾಧ್ಯ ಎಂದು ನುಡಿದ್ದರು.


ಉದಯವಾಹಿನಿ ಚಿತ್ರ

**ದ್ವಿ ಚಕ್ರ ವಾಹನ ಸವಾರರು ಹೆಲ್ಮೇಟ ಧರಸಿದ ನಂತರ ಹೆಲೇಟ ವಳಗಡ ಫೋನ ಇಟ್ಟು ಮಾತನಾಡುತ್ತಾ ವಾಹಾನ ಚಲಾಯಿಸಬಾರದು ಒಂದು ವೇಳೆ ಚಾಲಾಯಿಸಿದ್ದರೆ ಅಪಘಾತಕ್ಕೆ ವಳಗಾದರೆ ನಿಮ್ಮ ತ್ತೆಲೆಗೆ ತಿವ್ರ ಪೇಟಾಗುತ್ತದೆ ನಿಮ್ಮ ಜೀವಕ್ಕೆ ಅಪಾಯವಾಗಲು ಖಚಿತ. -ರೆವಣ್ಣಸಿದ್ದಪ್ಪಾ ವಾಲಿ.**

ಸಂಚಾರಿ ಪೋಲಿಸ ಠಾಣೆಯ ಪಿ.ಐ.ರಮೇಶ ಮೈಲುರಕರ ಅವರು ಮಾತನಾಡಿ ವಾಹನದ ಮೇಲೆ ಇಬ್ಬರಿಗಿಂತ ಹೆಚ್ಚು ಜನರು ಪಯಾಣ ಮಾಡಬಾರದು. ವಾಹಾನ ಚಲಾಯಿಸುವಾಗ ಮೊಬೈಲ್ ಹೇಡ ಫೋನ್ ಉಪಯೋಗಿಸಬಾರದು.ಮದ್ಯ ಪಾನ ಮಾಡಿ ವಾಹಾನ ಚಲಾಯಿಸಬಾರದು. ಕಾರ ಚಾಲಕರು ಸೀಟ ಬೆಲ್ಟ್ ಕಡ್ಡಾಯವಾಗಿ ಧರಿಸಬೇಕು. ವಿದ್ಯಾರ್ಥಿಗಳು ಅಟೋದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಯಾಣ ಮಾಡಬಾರದು. ವಿದ್ಯಾರ್ಥಿಗಳು ಸಣ್ಣ ಪುಟ ಕೇಲಸಕ್ಕೆ ವಾಹಾನ ಉಪಯೋಗಿಸಬಾರದು ಎಂದು ನುಡಿದ್ದರು.

## ಬೀದಿ ನಾಯಿಗಳು ಹಾಗೂ ಬಿಡಾಡಿ ದನಗಳನ್ನು ಸ್ಥಳಾಂತರಿಸಲು ಅಧಿಕಾರಿಗಳಿಗೆ ಮನವಿ ಸಲ್ಲಿಸಿದ ಸಾರ್ವಜನಿಕರು

• ಉದಯವಾಹಿನಿ ಜಮಖಂಡಿ

ನಗರದಲ್ಲಿ ಬೀದಿ ನಾಯಿಗಳ ಹಾಗೂ ಬಿಡಾಡಿ ದನಗಳ ಹಾವಳಿ ಹೆಚ್ಚಾಗಿದ್ದು ಅವುಗಳ ನಿಯಂತ್ರಿಸಲು ಕರ್ನಾಟಕ ರಾಜ್ಯ ನಿವೃತ ನೌಕರರ ಸಂಘ ಹಾಗೂ ಸೀಮಿ ಲಕ್ಷ್ಮೀ ಭಕ್ತ ಮಂಡಳಿಯವರು ಉಪ ವಿಭಾಗಾಧಿಕಾರಿ ಶ್ವೇತಾ ಬೀಡಿಕರ ಹಾಗೂ ನಗರ ಸಭೆ ಪೌರಾಯುಕ್ತ ಜ್ಯೋತಿಗಿರೀಶ ಅವರಿಗೆ ಮನವಿ ಸಲ್ಲಿಸಿದರು.

ದಿನದಿಂದ ದಿನಕ್ಕೆ ಬೀದಿನಾಯಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಸಣ್ಣ ಮಕ್ಕಳು ಹಾಗೂ ವಯೋವೃದ್ದರು ತಿರುಗಾಡಲು ಕಷ್ಟಕರವಾಗಿದೆ. ಪ್ರತಿ ನಿತ್ಯ ಭಯದಿಂದ ತಿರುಗಾಡುವಂತಾಗಿದೆ. ಶಾಲಾ ಮಕ್ಕಳು, ವಯೋವೃದ್ಧರು ನಾಗರದ ಸಾರ್ವಜನಿಕರು ತಮ್ಮ ಜೀವವನ್ನು ಕೈಯಲ್ಲಿ ಹಿಡಿದುಕೊಂಡು ತಿರುಗಾಡುವಂತಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ. ನಿಯಂತ್ರಣಕ್ಕೆ ಪ್ರಾಣಿ ದಯಾ ಕೇಂದ್ರಗಳ ಹಾಗೂ ಪ್ರಾಣಿ ದಯಾ ಕಾರ್ಯಕರ್ತರ ಚಟುವಟಿಕೆಗಳು ಪರಿಣಾಮಕಾರಿಯಾಗಿ ಸಕಾರಾತ್ಮಕವಾಗಿರಲು ಸಾರ್ವಜನಿಕರಿಗೆ ಕಂಡು ಬರುವಂತೆ ಕ್ರಮ ವಹಿಸಬೇಕು. ಬೀದಿ ನಾಯಿಗಳ ಹಾಗೂ ಬಿಡಾಡಿ ದನಗಳನ್ನು ಗೋಶಾಲೆಗಳಲ್ಲಿ ಸ್ಥಳಾಂತರಿಸುವ ಕೇಲಸವಾಗಬೇಕು. ಬೀದಿ ನಾಯಿಗಳ ಹಾಗೂ ಬಿಡಾಡಿ ದನಗಳಿಂದ ಹಾನಿಗೊಳಗಾದ ವ್ಯಕ್ತಿಗಳಿಗೆ ತಕ್ಷಣ ವೈದ್ಯಕೀಯ ಉಪಚಾರ ಮತ್ತು ಪರಿಹಾರ ದೊರಕುವಂತಾಗಬೇಕು.


ಉದಯವಾಹಿನಿ ಚಿತ್ರ

ಬೀದಿ ನಾಯಿಗಳ ಸಂತಾನಹರಣ ಕಾರ್ಯವನ್ನು ಸತತವಾಗಿ ಮತ್ತು ಪರಿಹಾರ ದೊರಕುವಂತಾಗಬೇಕು. ನಾಯಿಗಳಿಗೆ ಅನ್ನ ಆಹಾರ ಹಾಕಿ ಸಾಕುವವರಿಗೆ ಆಗುವ ಅನಾಹುತಗಳಿಗೆ ಜವಾಬ್ದಾರನನ್ನಾಗಿ ಮಾಡುವ ಬಗ್ಗೆ ತಿಳುವಳಿಕೆ ಕೊಡುವ ವ್ಯವಸ್ಥೆಯಾಗಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

## ರಸ್ತೆ ನಿಯಮ ಅರಿತುಕೊಂಡು ವಾಹನ ಚಲಾಯಿಸಿ

• ಉದಯವಾಹಿನಿ ತಾಳಿಕೋಟೆ

ಪಟ್ಟಣದ ಶ್ರೀ ಘನಮಠೇಶ್ವರ ಶಿಕ್ಷಣಸಂಸ್ಥೆಯಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ಪೊಲೀಸ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಮುದ್ದೇಬಿಹಾಳ ಹಾಗೂ ಎಲ್ಲಾ ಸರಕಾರಿ ಇಲಾಖೆಗಳ ಸಯುಕ್ತ ಆಶ್ರಯದಲ್ಲಿ ರಸ್ತೆ ಸುರಕ್ಷತಾ ಜಾಗೃತಿ ಸಪ್ತಾಹ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಒಂದು ರಸ್ತೆ ಸುರಕ್ಷತೆ ಜಾಗೃತಿಯನ್ನು ಕುರಿತು ಮಾತನಾಡಿದ ಮುದ್ದೇಬಿಹಾಳ ಸಿಪಿಐ ಮಹ್ಮದ ಪಸೀಉದ್ದೀನ ಅವರು ಮಾತನಾಡಿ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತೆಯ ಬಗ್ಗೆ ಹಾಗೂ ಅಪರಾಧ ತಡೆಯ ಕ್ರಮಗಳ ಬಗ್ಗೆ ಹಾಗೂ ಮಾದಕ ವಸ್ತುಗಳಿಂದ ವ್ಯಸನಿಗಳಾಗದೇ ಇರುವಂತೆ ಅನೇಕ ವಿಚಾರಧಾರೆಗಳನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ದುಶ್ಚಟಗಳಿಗೆ ದಾಸರಾಗದೆ ದೂರವಿರಬೇಕು ಮತ್ತು ಬೈಕ್ ಓಡಿಸುವಾಗ ಕಾರು ಚಲಾಯಿಸುವಾಗ ರಸ್ತೆಯ ನಿಯಮಗಳನ್ನು ಪಾಲಿಸಿ ನಮ್ಮ ಜೀವನಕ್ಕೂ ಮತ್ತು ನಮ್ಮ ಅವಲಂಬಿತರಿಗೂ ಯಾವುದೇ ರೀತಿಯ ಸಂಕಷ್ಟಕ್ಕೆ ಈಡು ಮಾಡದೆ ಸರಿಯಾದ ರಸ್ತೆ ನಿಯಮಗಳನ್ನು ಪಾಲಿಸಿ ರಸ್ತೆಯಲ್ಲಿ ಸಂಚರಿಸಬೇಕು ಎಂದು ಹೇಳಿದರು


ಉದಯವಾಹಿನಿ ಚಿತ್ರ

ಈ ಸಮಯದಲ್ಲಿ ಸಂಸ್ಥೆಯ ಕಾರ್ಯದರ್ಶಿಗಳಾದ ವಿವೇಕಾನಂದ ಸಜ್ಜನ, ಮುಖ್ಯಗುರುಗಳಾದ ಬಿ.ಜಿ.ಸಜ್ಜನ, ಶ್ರೀಮತಿ ಆರ್.ಎಸ್.ದೇಸಾಯಿ, ದೈಹಿಕ ಶಿಕ್ಷಕ ಶಿವಾನಂದ ಸುಣಧೋಳಿ, ಸಿಬಿಎಸ್‌ಇ ಪ್ರಾಚಾರ್ಯ ಜಯಚಂದ್ರ ಉಪಸ್ಥಿತರಿದ್ದರು.

## ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿದರೆ ಲೈಸನ್ಸ್ ರದ್ದು: ಡಿ.ಸಿ ಸೂಚನೆ

• ಉದಯವಾಹಿನಿ ಮಂಗಳೂರು

18 ವರ್ಷದೊಳಗಿನ ಮಕ್ಕಳನ್ನು ಬಾಲಕಾರ್ಮಿಕರು ಅಥವಾ ಕಿಶೋರ ಕಾರ್ಮಿಕರನ್ನಾಗಿ ಕೆಲಸಕ್ಕೆ ನೇಮಿಸಿಕೊಂಡಲ್ಲಿ ಸಂಸ್ಥೆಯ ಪರವಾನಿಗೆಯನ್ನು ರದ್ದುಗೊಳಿಸಲು ಮಹಾನಗರಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ ಸೂಚಿಸಿದ್ದಾರೆ.

ಅವರು ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಕಾರ್ಯಕಾರಿ ಸಮಿತಿ ಸಭೆ, ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆ ಹಾಗೂ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಮಿಕ ಇಲಾಖೆ ವತಿಯಿಂದ ಬಾಲಕಾರ್ಮಿಕರು ಅಥವಾ ಕಿಶೋರ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ, ಬಾಲಕಾರ್ಮಿಕ ನಿಷೇಧದ ಬಗ್ಗೆ ಲೋಗೋವನ್ನು ರಚಿಸಿ ಎಲ್ಲಾ ಸಂಸ್ಥೆಗಳಲ್ಲಿ ಸಾರ್ವಜನಿಕವಾಗಿ ಪ್ರದರ್ಶಿಸಲು ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.


ಉದಯವಾಹಿನಿ ಚಿತ್ರ

ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಮತ್ತು ಪುನರ್ವಸತಿ ಸಮಿತಿ ಸಭೆ ಹಾಗೂ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯನ್ನು ಪ್ರತಿ 3 ತಿಂಗಳಿಗೊಮ್ಮೆ ನಡೆಸಬೇಕು. ಎಲ್ಲಾ ಕಾರ್ಖಾನೆ, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಕಾಯ್ದೆಯ ಸಾರಾಂಶವನ್ನು ಕಡ್ಡಾಯವಾಗಿ ಪ್ರದರ್ಶಿಸಲು ಕ್ರಮ ಕೈಗೊಳ್ಳಬೇಕು ಎಂದು ಕಾರ್ಮಿಕ ಇಲಾಖೆಯ ನಿರೀಕ್ಷಕರಿಗೆ ಸೂಚಿಸಿದರು.

**ಕಾರ್ಮಿಕ ಇಲಾಖೆಯ ನಿರೀಕ್ಷಕರಿಗೆ ಸೂಚನೆ**

ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಚೈಲ್ಡ್ ಹೆಲ್ಸ್ ಲೈನ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ಸಹಯೋಗದೊಂದಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಸ್ಟೆಲ್, ಕಾಲೊನಿ ಮತ್ತು ಕಾಲೇಜುಗಳಲ್ಲಿ ಜನಜಾಗೃತಿ, ಕಾನೂನು ಅರಿವು ಕಾರ್ಯಾಗಾರವನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಕಾಯ್ದೆಯ ಸಾರಾಂಶವನ್ನು ಪ್ರದರ್ಶಿಸದ 84 ಸಂಸ್ಥೆಗಳಿಗೆ ಮೊಕದ್ದಮೆ ಹೂಡಲಾಗಿದ್ದು, 22 ಸಂಸ್ಥೆಗಳಿಗೆ ರೂ. 1,64000 ದಂಡ ಸಂಗ್ರಹವಾಗಿದೆ. 62 ಪ್ರಕರಣಗಳು ವಿಚಾರಣಾ ಹಂತದಲ್ಲಿದೆ ಎಂದು ಕಾರ್ಮಿಕ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಾಜು ಕೆ, ಹಿರಿಯ ಸಿವಿಲ್ ನ್ಯಾಯಾಧೀಶೆ ಜೈಬುನ್ನೀಸಾ, ಸಹಾಯಕ ಕಾರ್ಮಿಕ ಆಯುಕ್ತೆ ನಾಜಿಯಾ ಸುಲ್ತಾನಾ ಮತ್ತಿತರರು ಉಪಸ್ಥಿತರಿದ್ದರು.

## ಸಫಾಯಿ ಕರ್ಮಚಾರಿಗಳಿಗೆ ವಸತಿ ವ್ಯವಸ್ಥೆ ಮಾಡಿ: ಎನ್.ವಿ.ನಟೇಶ್

• ಉದಯವಾಹಿನಿ ತರೀಕೆರೆ

ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳಿಗೆ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವಸತಿ ನಿರ್ಮಿಸಿ ಹಕ್ಕುಪತ್ರ ನೀಡಬೇಕು ಎಂದು ಉಪವಿಭಾಗಾಧಿಕಾರಿ ಎನ್.ವಿ.ನಟೇಶ್ ಸೂಚಿಸಿದರು.

ಪಟ್ಟಣದ ಉಪ ವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಉಪವಿಭಾಗ ಮಟ್ಟದ ಸಫಾಯಿ ಕರ್ಮಚಾರಿಗಳ ಪುನರ್ವಸತಿ ತ್ರೈಮಾಸಿಕ ಸಭೆಯಲ್ಲಿ ಮಾತನಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ತರೀಕೆರೆ ಎನ್. ವೆಂಕಟೇಶ್ ಮಾತನಾಡಿ, ಪೌರಕಾರ್ಮಿಕರಿಗೆ ಹಾಗೂ ಸಫಾಯಿ ಕರ್ಮಚಾರಿಗಳು ವಾಸವಾಗಿರುವ ಕೊಳಚೆ ಪ್ರದೇಶಗಳಲ್ಲಿ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವಸತಿ ವ್ಯವಸ್ಥೆ ಮಾಡಿಲ್ಲ ಎಂದು ದೂರಿದರು. ಈ ಕುರಿತು ಪ್ರತಿಕ್ರಿಯಿಸಿದ ಉಪ ವಿಭಾಗಾಧಿಕಾರಿ ನ್.ವಿ.ನಟೇಶ್, ಪಟ್ಟಣದ ಅಂಬೇಡ್ಕರ್ ನಗರ, ಬಾಪೂಜಿ ಕಾಲೊನಿ, ಕಡೂರು ಅಂಬೇಡ್ಕರ್ ನಗರ ಮತ್ತು ಸುಭಾಷ್ ನಗರ ಹಾಗೂ ಅಜ್ಜಂಪುರ, ಎನ್.ಆರ್.ಪುರ, ಬೀರೂರು ಪೌರಕಾರ್ಮಿಕರಿಗೆ ವಸತಿ ವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ಕೊಳಚೆ ಅಭಿವೃದ್ಧಿ ಮಂಡಳಿಯ ಎಂಜಿನಿಯರ್ ಯಶವಂತ್ ಅವರಿಗೆ ಸೂಚಿಸಿದರು. ಉಪ ವಿಭಾಗ ಮಟ್ಟದ ಆಸ್ಪತ್ರೆಯ ಸ್ವಚ್ಛತಾ ಕರ್ಮಚಾರಿಗಳಿಗೆ ಸುರಕ್ಷತಾ ಪರಿಕರ ನೀಡಬೇಕು. ವಿಶ್ರಾಂತಿ ಗೃಹ ವ್ಯವಸ್ಥೆ ಮತ್ತು ಪ್ರತಿ ತಿಂಗಳು ಐದನೇ ತಾರೀಖಿನೊಳಗೆ ವೇತನ ಪಾವತಿಸಬೇಕು. ಎಲ್ಲಾ ಸರ್ಕಾರಿ ರಜೆಗಳನ್ನು ನೀಡಬೇಕು ಎಂದು ವೆಂಕಟೇಶ್ ಒತ್ತಾಯಿಸಿದರು.

# ವೇಮನರ ತತ್ವ, ಸಿದ್ಧಾಂತ ಇನ್ನಷ್ಟು ಪ್ರಚುರವಾಗಲಿ: ಎಚ್.ಕೆ. ಪಾಟೀಲ

### ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ವೇಮನ ಪೀಠ ಸ್ಥಾಪನೆಯಾಗಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ

• ಉದಯವಾಹಿನಿ ಗದಗ

ಮಹಾಯೋಗಿ ವೇಮನರ ತತ್ವ ಸಿದ್ಧಾಂತಗಳು ಇಂದಿನ ಸಮಾಜಕ್ಕೆ ಹೆಚ್ಚು ಪ್ರಸ್ತುತವಾಗಿವೆ. ಅವುಗಳನ್ನು ಇನ್ನಷ್ಟು ಪ್ರಚುರಪಡಿಸಿ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ, ಮಹಾಯೋಗಿ ವೇಮನ ಮತ್ತು ಗದಗ ಜಿಲ್ಲಾ ರೆಡ್ಡಿ ಸಮಾಜ ಸಂಘದ ಸಹಯೋಗದಲ್ಲಿ ಜಿಲ್ಲಾಡಳಿತ ಭವನದಲ್ಲಿ ನಡೆದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡ ನಾಡಿಗೆ ಮಹಾಯೋಗಿ ವೇಮನರನ್ನು ಪರಿಚಯಿಸಿದವರುಎಸ್.ಆರ್.ಪಾಟೀಲರು. ಬಾಯಿಂದ ಬಾಯಿಗೆ ಹರಿದಾಡುತ್ತಿದ್ದ ವೇಮನರ ಸಾಹಿತ್ಯವನ್ನು ಸಿ.ಪಿ.ಬ್ರೌನ್ ಅವರು ಇಂಗ್ಲಿಷ್ ಭಾಷೆಗೆ ಅನುವಾದಿಸಿ ವಿಶ್ವಕ್ಕೆ ಪರಿಚಯಿಸಿದ್ದಾರೆ. ವೇಮನರ 20 ಸಾವಿರಕ್ಕೂ ಅಧಿಕ ಪ್ರತಿಗಳನ್ನು ಮುದ್ರಿಸಿ ಹಂಚಿಕೆ ಮಾಡಲಾಗಿದೆ. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ವೇಮನ ಪೀಠ ಸ್ಥಾಪನೆಯಾಗಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ರೆಡ್ಡಿ ಸಮಾಜ ಅನೇಕ ಶ್ರೇಷ್ಠ ವ್ಯಕ್ತಿಗಳನ್ನು ಸಮಾಜಕ್ಕೆ ನೀಡಿದೆ. ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರಂತಹ ಸಮಾಜದ ಮಹಾನ್ ವ್ಯಕ್ತಿತ್ವಗಳು -ಎಚ್.ಕೆ. ಪಾಟೀಲ**

ಸಾರಸ್ವತ ಲೋಕಕ್ಕೆ ವೇಮನರ ವಿಚಾರಧಾರೆಯನ್ನು ಪರಿಚಯಿಸುವ ಉದ್ದೇಶದಿಂದ ಅವರ ಕುರಿತಾದ ಪುಸ್ತಕಗಳನ್ನು ಲೋಕಾರ್ಪಣೆ ಮಾಡಲಾಗಿದೆ. ಮುಂದಿನ 15 ದಿನಗಳೊಳಗೆ ರೆಡ್ಡಿ ಸಮಾಜದ ಸಮುದಾಯ ಭವನಕ್ಕೆ ಜಾಗ ದೊರೆಯಲಿದೆ. ಮುಂದಿನ ವರ್ಷ ಅಲ್ಲಿಯೇ ಮಹಾಯೋಗಿ ವೇಮನ ಜಯಂತಿ ಆಚರಿಸಲಾಗುವುದು ಎಂದು ಹೇಳಿದರು.

### ಸಮಾಜಕ್ಕಾಗಿ ಬದುಕಿದ ವೇಮನರು

**ತಮಗಾಗಿ ಬದುಕದೇ ಸಮಾಜಕ್ಕಾಗಿ ಶ್ರಮಿಸಿದ ಮಹಾನ್ ವ್ಯಕ್ತಿಗಳ ಜಯಂತಿಗಳನ್ನು ನಾವು ಆಚರಿಸುತ್ತೇವೆ. ಅಂತಹ ಮಹಾನ್ ವ್ಯಕ್ತಿಗಳಲ್ಲಿ ಮಹಾಯೋಗಿ ವೇಮನರು ಒಬ್ಬರು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಹೇಳಿದರು. ವೇಮನರು ಸಾಕಷ್ಟು ಕವನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ. ಅವರ ಕವನಗಳು ಸರಿಯಾಗಿ ದಾಖಲೀಕರಣವಾಗಿರಲಿಲ್ಲ. ಅನೇಕ ಕವನಗಳು ತಾಳೆಗರಿಗಳಲ್ಲಿ ಇದ್ದು ಅವುಗಳನ್ನು ಸಂರಕ್ಷಿಸಲು ಬ್ರಿಟಿಷ್ ಸರ್ಕಾರವೇ ಮುಂದಾಯಿತು ಎಂದರೆ ವೇಮನರ ಕವಿತೆಗಳ ಶಕ್ತಿ ಎಷ್ಟಿತ್ತು ಎಂಬುದನ್ನು ಅರಿಯಬಹುದು ಎಂದರು. ಈ ಶತಮಾನ ಜ್ಞಾನದ ಯುಗ ಪಾಂಡಿತ್ಯದ ಯುಗ. ಸಮಾಜದ ಎಲ್ಲಾ ಮಕ್ಕಳಿಗೂ ಸಮರ್ಪಕ ಜ್ಞಾನ ಹಾಗೂ ಶಿಕ್ಷಣ ನೀಡಬೇಕು. ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.10 ಲಕ್ಷ ಅನುದಾನ ನೀಡಲಾಗುವುದು ಎಂದು ತಿಳಿಸಿದರು.**

ಪ್ರೊ.ಅನಿಲ ವೈದ್ಯ ಉಪನ್ಯಾಸ ನೀಡಿ, ಮಹಾಯೋಗಿ ವೇಮನರು ತಮ್ಮ ವಚನಗಳಲ್ಲಿ ನಿಜವನರಿತವನು ನೀತಿವಂತನು ಎಂದು ಹೇಳಿದ್ದಾರೆ. ಆಸೆಗಳನ್ನು ತ್ಯಜಿಸಿ ಸತ್ಯವನರಿತು ನಿಜಮಾನವರಾಗಬೇಕು. ವೇಮನರು ವಿಶ್ವಮಾನವರಾಗಿ ಧರ್ಮ ಜಾಗೃತಿ ಮಾಡಿದರು. ವೇಮನರ ಚರಿತ್ರೆಗಳನ್ನು ಶಾಲೆ ಕಾಲೇಜುಗಳ ವಿದ್ಯಾರ್ಥಿಗಳಿಗೆ ತಿಳಿಸಿಕೊಡಬೇಕು ಎಂದರು.

ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವೇಮನರ ಕುರಿತು 4 ಪುಸ್ತಕಗಳನ್ನು ಬಿಡುಗಡೆ ಮಾಡಲಾಯಿತು.

# ತಿಲಕ ಹಚ್ಚಿದ್ದಕ್ಕೆ ಲಂಡನ್ ಶಾಲೆಯಲ್ಲಿ ಹಿಂದೂ ಬಾಲಕನಿಗೆ ತಾರತಮ್ಯ

**ಲಂಡನ್:** ಲಂಡನ್‌ನ ಶಾಲೆಯೊಂದರಲ್ಲಿ 8 ವರ್ಷದ ಹಿಂದೂ ವಿದ್ಯಾರ್ಥಿಯೊಬ್ಬ ತಿಲಕ ಧರಿಸಿದ್ದಕ್ಕಾಗಿ ತಾರತಮ್ಯ ಎದುರಿಸಿದ್ದು, ಶಾಲೆಯನ್ನೇ ಬಿಟ್ಟು ತೆರಳಬೇಕಾಗಿ ಬಂದಿದೆ. ಈ ತಾರತಮ್ಯ ಅಲ್ಲಿರುವ ಮಕ್ಕಳಿಂದ ನಡೆದಿಲ್ಲ, ಬದಲಾಗಿ ಎಲ್ಲವನ್ನು ಅರಿತ ಮುಖ್ಯೋಪಾಧ್ಯಾಯರಿಂದಲೇ ಈ ತಾರತಮ್ಯ ನಡೆದಿದೆ.

**ತಿಲಕ ಹಚ್ಚಿದ್ದಕ್ಕಾಗಿ ಲಂಡನ್ ಶಾಲೆಯಲ್ಲಿ ಬಾಲಕನಿಗೆ ತಾರತಮ್ಯ:** 8 ವರ್ಷದ ಬಾಲಕ ಶಾಲೆಯಲ್ಲಿ ಬಿಡುವಿನ ಸಮಯದಲ್ಲಿ ಆಟವಾಡುವಾಗ ಆ ಶಾಲೆಯ ಮುಖ್ಯೋಪಾಧ್ಯಾಯರು ಆತನ ಬೆನ್ನುಬಿದ್ದು, ನಿರಂತರವಾಗಿ ಆತನನ್ನು ಮುಜುಗರಕ್ಕೊಳಗಾಗುವಂತೆ ಮೇಲ್ವಿಚಾರಣೆ ಮಾಡುತ್ತಾ ಇರುವುದರಿಂದ ಆ ಬಾಲಕ ಗೆಳೆಯರೊಂದಿಗೆ ಆಟವನ್ನು ಸಹ ಆಡದೇ ಒಂಟಿಯಾಗಿ ಇರುವಂತಹ ಪರಿಸ್ಥಿತಿ ಉಂಟಾಗಿದ್ದು, ಕೊನೆಗೆ ಆ ಬಾಲಕ ಶಾಲೆಯನ್ನೇ ಬಿಟ್ಟು ಬೇರೆ ಶಾಲೆಗೆ ಸೇರಿರುವ ಘಟನೆ ನಡೆದಿದೆ. ಈ ಘಟನೆ ಕುರಿತು ಬ್ರಿಟಿಷ್ ಹಿಂದೂ ಮತ್ತು ಭಾರತೀಯ ಸಮುದಾಯವನ್ನು ಪ್ರತಿನಿಧಿಸುವ ಸಾಮಾಜಿಕ ಚಳುವಳಿ ಮತ್ತು ವಕಾಲತ್ತು ಸಂಸ್ಥೆಯಾದ ಇನ್‌ಸೈಟ್ ಯುಕೆ ಆಕ್ರೋಶ ವ್ಯಕ್ತಪಡಿಸಿದೆ. ಇವರ ಪ್ರಕಾರ, ಲಂಡನ್ ನಲ್ಲಿರುವ ವಿಕಾರ್ಸ್ ಗ್ರೀನ್ ಪ್ರೈಮರಿ ಶಾಲೆಯ ಈ ಬಾಲಕ ವ್ಯಾಸಂಗ ಮಾಡುತ್ತಿದ್ದನು. ಈ ವೇಳೆ ಆ ಬಾಲಕ ಹಿಂದೂ ಧರ್ಮದ ಧಾರ್ಮಿಕ ಸಂಕೇತವಾಗಿರುವ ತಿಲಕವನ್ನು ಧರಿಸಿದ್ದಕ್ಕಾಗಿ ಅಲ್ಲಿನ ಸಿಬ್ಬಂದಿಗಳು ಆತನನ್ನು ಇದರ ಬಗ್ಗೆ ವಿವರಣೆ ನೀಡಲು ಒತ್ತಾಯ ಮಾಡಿದ್ದಾರೆ. ಅಲ್ಲದೆ, ಶಾಲೆಯ ಮುಖ್ಯೋಪಾಧ್ಯಾಯರು ಮಗುವನ್ನು ವಿರಾಮದ ಸಮಯದಲ್ಲಿ ಬೆದರಿಸುವ ರೀತಿಯಲ್ಲಿ ಗಮನಿಸುತ್ತಿದ್ದರು. ಇದರಿಂದ ಮಗು



ಆಟಗಳಲ್ಲಿ ಭಾಗವಹಿಸುವುದನ್ನು ನಿಲ್ಲಿಸಿ, ತನ್ನ ಸಹಪಾಠಿಗಳಿಂದ ದೂರ ಉಳಿಯುವಂತಾಯಿತು ಎಂದು ಆರೋಪಿಸಿದ್ದಾರೆ. ಅಷ್ಟೇ ಅಲ್ಲದೆ, ಬಾಲಕನ ಪೋಷಕರು ಸೇರಿದಂತೆ ಉಳಿದ ಹಿಂದೂ ವಿದ್ಯಾರ್ಥಿಗಳ ಪೋಷಕರು ಮುಖ್ಯೋಪಾಧ್ಯಾಯರು ಮತ್ತು ಶಾಲಾ ಆಡಳಿತ ಮಂಡಳಿಗೆ ಹಿಂದೂ ಆಚರಣೆಗಳ, ತಿಲಕ-ಚಂದಲೋ ಧಾರ್ಮಿಕ ಮಹತ್ವದ ಬಗ್ಗೆ ತಿಳುವಳಿಕೆ ನೀಡುವ ಮೂಲಕ ವಿವರಣೆ ನೀಡಲು ಮುಂದಾದರೂ ಸಹ ಶಾಲಾ ಆಡಳಿತ ಮತ್ತು ಹಿಂದೂ ಧಾರ್ಮಿಕ ಆಚರಣೆಗಳನ್ನು ಗುರುತಿಸುವುದಾಗಲಿ ಅಥವಾ ಅರ್ಥ ಮಾಡಿಕೊಳ್ಳುವುದಾಗಲಿ ಮಾಡದೇ ಏಕಪಕ್ಷೀಯ ವಿವರಣೆಗಳನ್ನು ತಿರಸ್ಕರಿಸಿದ್ದಾರೆ ಎಂದು ತಿಳಿದು ಬಂದಿದೆ.

## ಭಾರತೀಯರ ಬಗ್ಗೆ ಟೀಕೆ ಮಾಡಿದ ಜಪಾನ್ ಯುಟ್ಯೂಬರ್: ಖಂಡನೆ

**ಟೋಕಿಯೋ:** ಜಪಾನಿನ ಯೂಟ್ಯೂಬರ್ 'ಇಕೆಚಾನ್' ಅವರು ಏರ್ ಇಂಡಿಯಾ ವಿಮಾನದ ಬಗ್ಗೆ ಮಾಡಿದ್ದ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ಭಾರೀ ವಿವಾದಕ್ಕೆ ಕಾರಣವಾಗಿದೆ. ಭಾರತೀಯರಿಂದ ತುಂಬಿ ತುಳುಕುತ್ತಿದೆ' ಎಂಬ ಪದಬಳಕೆ ಮಾಡಿದ್ದಾರೆ ಹಾಗೂ ಕೆಟ್ಟ ಏರ್ ಇಂಡಿಯಾ ಎಂದು ಕರೆದಿದ್ದಾರೆ. ಇದಕ್ಕೆ ಆನ್ ಲೈನ್‌ನಲ್ಲಿ ಭಾರೀ ಆಕ್ರೋಶ ವ್ಯಕ್ತವಾಗಿದೆ. ಕೆಟ್ಟ ಏರ್ ಇಂಡಿಯಾ ಎಂಬ ಪದ ಬಳಕೆ, ಕಳೆದ ವರ್ಷದ ಏರ್ ಇಂಡಿಯಾ ವಿಮಾನ ದುರಂತವನ್ನು ನೆನಪಿಸುತ್ತಿದೆ ಎಂದಿದ್ದಾರೆ.

ಈ ಯುಟ್ಯೂಬರ್ ಹೆಸರು ಇಕೆಚಾನ್. ಆಕೆ ವ್ಲಾಗರ್ ಆಗಿದ್ದು ಅನೇಕ ಪ್ರವಾಸಿ ವಿಡಿಯೋಗಳನ್ನು ಯುಟ್ಯೂಬ್ ನಲ್ಲಿ ಹಾಕುತ್ತಿರುತ್ತಾರೆ. ಇತ್ತೀಚೆಗೆ, ಏರ್ ಇಂಡಿಯಾ ವಿಮಾನದಲ್ಲಿ ಪ್ರಯಾಣಿಸುವ ಬಗ್ಗೆ ಒಂದು ವ್ಲಾಗ್ ಮಾಡಿ ಅದನ್ನು ಯೂಟ್ಯೂಬ್ ಮತ್ತು ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದರು. **ಆ ವ್ಲಾಗ್‌ನ ಶೀರ್ಷಿಕೆ ಹೀಗಿತ್ತು:** ನಾನು ಇದೇ ಮೊದಲ ಬಾರಿಗೆ ಭಾರತಕ್ಕೆ ಪ್ರಯಾಣಿಸುತ್ತಿದ್ದೇನೆ. ಆದರೆ, ಕೆಟ್ಟ ಹೆಸರು ಪಡೆದಿರುವ ಏರ್ ಇಂಡಿಯಾದಲ್ಲಿ ನಾನು ಪ್ರಯಾಣಿಸುತ್ತಿದ್ದೇನೆ. ಈ ವಿಮಾನವಂತೂ ಭಾರತೀಯರಿಂದ ತುಂಬಿ ತುಳುಕುತ್ತಿದೆ... ಎಂಬ ಸಾಲುಗಳನ್ನು ತಮ್ಮ ವಿಡಿಯೋದ ಥಂಬ್ ನೇಲ್‌ನಲ್ಲಿ ಬಳಸಿದ್ದಾರೆ.

ಕೆಟ್ಟ ಹೆಸರು ಪಡೆದಿರುವ ಏರ್ ಲೈನ್ ಎಂದಿರುವುದು ಹಾಗೂ ಭಾರತೀಯರೇ ತುಂಬಿರುವ ವಿಮಾನ ಎಂಬ ಎರಡು ವಾಕ್ಯಗಳು, ಕಳೆದ ವರ್ಷ ಅಹ್ಮದಾಬಾದ್ ನಲ್ಲಿ ಸಂಭವಿಸಿದ ಏರ್ ಇಂಡಿಯಾ ಅಪಘಾತದಲ್ಲಿ ಮಡಿದವರ ಆತ್ಮಗಳಿಗೆ ಅಗೌರವ ತೋರಿದಂತೆ ಇದೆ ಎಂದು ಟೀಕಿಸಿದ್ದಾರೆ.

**ಭಾರತೀಯರ ನೋವಿಗೆ ಸ್ಪಂದಿಸಿದ ಜಪಾನ್ ಯುಟ್ಯೂಬರ್‌ಗಳು:** ಇತರ ಜಪಾನಿನ ಕ್ರಿಯೇಟರ್‌ಗಳು ಕೂಡ ಇಕೆಚಾನ್‌ಳ ಪೋಸ್ಟ್‌ಗೆ ಪ್ರತಿಕ್ರಿಯಿಸಿ ಬೇಸರ ವ್ಯಕ್ತಪಡಿಸಿದ್ದಾರೆ. ಇತರ ದೇಶಗಳ ಕೀಳಾಗಿ ನೋಡುವ ಧೋರಣೆಯನ್ನು ಬಳಸುವುದು ಅತ್ಯಂತ ಅಸಭ್ಯತೆ ಎಂದು ಅವರು ಹೇಳಿದ್ದಾರೆ. ಮತ್ತೊಬ್ಬರು ಪ್ರತಿಕ್ರಿಯಿಸಿ, ಕಂಟೆಂಟ್ ಕ್ರಿಯೇಟರ್‌ಗಳು ಸ್ವಲ್ಪ ಎಚ್ಚರಿಕೆಯಿಂದ ಕಂಟೆಂಟ್‌ಗಳನ್ನು ತಯಾರಿಸಬೇಕು. ಸ್ವಲ್ಪವಾದರೂ ಹೊಣೆಗಾರಿಕೆ ಇರಬೇಕು ಎಂದು ಇಕೆಚಾನ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಮತ್ತೊಬ್ಬರು ಪ್ರತಿಕ್ರಿಯಿಸಿ, ವೈಯಕ್ತಿಕ ಲಾಭಕ್ಕಾಗಿ ಜಪಾನ್‌ನ ಗೌರವವನ್ನು ಹಾಳು ಮಾಡುವುದನ್ನು ಸಹಿಸಲಾಗದು ಹೇಳಿದ್ದಾರೆ. ಈ ಟೀಕೆಗಳಿಗೆ ಪ್ರತಿಕ್ರಿಯಿಸಿದ ಇಕೆಚಾನ್, ತಮ್ಮ ಥಂಬ್‌ನೇಲ್‌ನಲ್ಲಿ ಯಾವುದೇ ಕೆಟ್ಟ ಉದ್ದೇಶ ಇರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸಮಸ್ಯೆ ಎದ್ದ ನಂತರ, ಥಂಬ್‌ನೇಲ್‌ನಲ್ಲಿನ ಪಠ್ಯವನ್ನು ಸ್ವಲ್ಪ ಬದಲಾಯಿಸಿರುವುದಾಗಿ ತಿಳಿಸಿದ್ದಾರೆ.

## ● ಗಾಜಾ ಶಾಂತಿ ಮಂಡಳಿಯನ್ನು ಸೇರಲು ಒಪ್ಪದ ಫ್ರಾನ್ಸ್ ವಿರುದ್ಧ ಸೇಡು
# ಫ್ರಾನ್ಸ್ ಮೇಲೆ ಶೇ. 200ರಷ್ಟು ಸುಂಕ ವಿಧಿಸುವ ಬೆದರಿಕೆ

**ವಾಷಿಂಗ್ಟನ್ ಡಿಸಿ:** ತಮ್ಮ ಮಹತ್ವಾಕಾಂಕ್ಷಿ ಗಾಜಾ ಶಾಂತಿ ಮಂಡಳಿಯನ್ನು ಸೇರಲು ಒಪ್ಪದ ಫ್ರಾನ್ಸ್ ವಿರುದ್ಧ ಸೇಡು ತೀರಿಸಿಕೊಳ್ಳಲು ಮುಂದಾಗಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಫ್ರೆಂಚ್ ವೈನ್ ಮತ್ತು ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕ ವಿಧಿಸುವ ಬೆದರಿಕೆ ಹಾಕಿದ್ದಾರೆ. ಡೊನಾಲ್ಡ್ ಟ್ರಂಪ್ ಗಾಜಾ ಶಾಂತಿ ಮಂಡಳಿ ಸೇರುವಂತೆ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೂ ಆಹ್ವಾನ ನೀಡಿದ್ದಾರೆ.

- ಡೊನಾಲ್ಡ್ ಟ್ರಂಪ್ ಗಾಜಾ ಶಾಂತಿ ಮಂಡಳಿ ಸೇರಲು ಫ್ರಾನ್ಸ್ ನಕಾರ.
- ಫ್ರೆಂಚ್ ವೈನ್ ಮತ್ತು ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕದ ಬೆದರಿಕೆ.
- ಗ್ರೀನ್‌ಲ್ಯಾಂಡ್ ಕುರಿತ ಇಮ್ಯಾನ್ಯುಯೆಲ್ ಮ್ಯಾಕ್ರನ್ ಖಾಸಗಿ ಮೆಸೇಜ್ ಹಂಚಿಕೊಂಡ ಯುಎಸ್ ಅಧ್ಯಕ್ಷ.

ಫ್ರಾನ್ಸ್ ತೀರ್ಮಾನದಿಂದ ಸಿಡಿದೆದ್ದಿರುವ ಡೊನಾಲ್ಡ್ ಟ್ರಂಪ್, ಫ್ರಾನ್ಸ್‌ನಿಂದ ಅಮೆರಿಕಕ್ಕೆ ರಫ್ತಾಗುವ ಫ್ರೆಂಚ್ ವೈನ್ ಮತ್ತು ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕ ವಿಧಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಇಷ್ಟೇ ಅಲ್ಲದೇ ಗ್ರೀನ್‌ಲ್ಯಾಂಡ್ ಕುರಿತು ಫ್ರೆಂಚ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಅವರಿಂದ ಸ್ವೀಕರಿಸಿದ ಖಾಸಗಿ ಸಂದೇಶವನ್ನು, ತಮ್ಮ ಅಧಿಕೃತ ಟ್ರೂತ್ ಸೋಶಿಯಲ್‌ನಲ್ಲಿ ಡೊನಾಲ್ಡ್ ಟ್ರಂಪ್ ಪೋಸ್ಟ್ ಮಾಡಿದ್ದಾರೆ.

ಡೆನ್ಮಾರ್ಕ್‌ನ ಭಾಗವಾಗಿರುವ ಆರ್ಕ್ಟಿಕ್ ಪ್ರದೇಶದ ಮೇಲೆ ಡೊನಾಲ್ಡ್ ಟ್ರಂಪ್ ಏಕೆ ಸ್ಥಿರವಾಗಿದ್ದಾರೆ ಎಂಬ ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಅವರ ಸಮರ್ಥನೆಯನ್ನು ಪ್ಯಾರಿಸ್ ಅಣಕಿಸಿದ್ದು, ವಾಷಿಂಗ್ಟನ್ ನಿರ್ಣಯಗಳನ್ನು ಅಪಹಾಸ್ಯ ಮಾಡಿದೆ. ಇದರಿಂದ ಕೋಪಗೊಂಡಿರುವ ಡೊನಾಲ್ಡ್ ಟ್ರಂಪ್, ಫ್ರೆಂಚ್ ವೈನ್ ಮತ್ತು ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕ ವಿಧಿಸುವುದಾಗಿ ಬೆದರಿಕೆ ಹಾಕಿರುವುದಲ್ಲದೇ, ಗ್ರೀನ್ ಲ್ಯಾಂಡ್ ಬಗ್ಗೆ ಈ ಹಿಂದೆ ಫ್ರಾನ್ಸ್ ಅಧ್ಯಕ್ಷರು ತಮಗೆ ಕಳುಹಿಸಿದ್ದ ಖಾಸಗಿ ಮೆಸೇಜ್‌ನ್ನು ಬಹಿರಂಗಪಡಿಸಿದ್ದಾರೆ.

ಇದಾದ ಕೆಲವೇ ಕ್ಷಣಗಳ ಬಳಿಕ ತಮ್ಮ ಅಧಿಕೃತ ಟ್ರೂತ್ ಸೋಶಿಯಲ್‌ನಲ್ಲಿ, ಗ್ರೀನ್ ಲ್ಯಾಂಡ್ ಕುರಿತು ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯೆಲ್ ಮ್ಯಾಕ್ರನ್ ಕಳುಹಿಸಿದ ಖಾಸಗಿ ಮೆಸೇಜ್‌ನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಂಚಿಕೊಂಡರು. ಇದರಲ್ಲಿ ಮ್ಯಾಕ್ರನ್ ಅವರು ಇರಾನ್ ಮತ್ತು ಸಿರಿಯಾಗೆ ಸಂಬಂಧಿಸಿದಂತೆ ಟ್ರಂಪ್ ಅವರ ನಿಲುವನ್ನು ಒಪ್ಪುವುದಾಗಿಯೂ, ಆದರೆ ಗ್ರೀನ್‌ಲ್ಯಾಂಡ್‌ನಲ್ಲಿ ಅವರು ಏನು ಮಾಡಲು ಬಯಸಿದ್ದಾರೆ ಎಂಬುದು ಅರ್ಥವಾಗುತ್ತಿಲ್ಲ ಎಂದೂ ಬರೆದಿದ್ದಾರೆ.



**ವೈನ್ ಮತ್ತು ಶಾಂಪೇನ್ ಮೇಲೆ ಶೇ. 200ರಷ್ಟು ಸುಂಕದ ಬೆದರಿಕೆ**

**ಟ್ರಂಪ್ ಹೇಳಿದ್ದೇನು?**
ಗಾಜಾ ಶಾಂತಿ ಮಂಡಳಿಯನ್ನು ಸೇರಲು ಫ್ರಾನ್ಸ್ ನಿರಾಕರಿಸಿದೆ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸುತ್ತಾ, ನಾನು ಅವರ ವೈನ್‌ಗಳು ಮತ್ತು ಶಾಂಪೇನ್ ಗಳ ಮೇಲೆ ಶೇ. 200ರಷ್ಟು ಸುಂಕ ವಿಧಿಸಿದರೆ, ಕೂಡಲೇ ಇಮ್ಯಾನ್ಯುಯೆಲ್ ಮ್ಯಾಕ್ರನ್ ಶಾಂತಿ ಮಂಡಳಿಯನ್ನು ಸೇರುತ್ತಾರೆ. ಆದರೆ ಫ್ರಾನ್ಸ್ ಶಾಂತಿ ಮಂಡಳಿ ಸೇರುವುದರಿಂದ ಅಥವಾ ಸೇರದೇ ಇರುವುದರಿಂದ ಯಾವ ಪರಿಣಾಮವೂ ಬೀರುವುದಿಲ್ಲ ಎಂದು ಟ್ರಂಪ್ ಗುಡುಗಿದರು.

ದಾವೋಸ್‌ನಲ್ಲಿ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯ ಸಂದರ್ಭದಲ್ಲಿ, ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಲು ಉದ್ದೇಶಿಸಿರುವ ಇಮ್ಯಾನ್ಯುಯೆಲ್ ಮ್ಯಾಕ್ರನ್, ಇತರ ಉ-7 ನಾಯಕರೊಂದಿಗೂ ಮಾತುಕತೆ ನಡೆಸಲು ಉತ್ಸುಕರಾಗಿದ್ದಾರೆ. ಆದರೆ ಗಾಜಾ ಶಾಂತಿ ಮಂಡಳಿಗೆ ಸೇರದಿರುವ ಅವರ ನಿರ್ಧಾರ ಈ ಯೋಜನೆಗಳನ್ನು ತಲೆಕೆಳಗಾಗಿಸುವ ಸಾಧ್ಯತೆ ದಟ್ಟವಾಗಿದೆ. ಟ್ರಂಪ್ ಅವರ ಸುಂಕ ಬೆದರಿಕೆಗಳು ಇದರ ಮುನ್ಸೂಚನೆ ನೀಡುತ್ತಿದೆ. ಗಾಜಾ ಶಾಂತಿ ಮಂಡಳಿಗೆ ಸೇರುವಂತೆ ಪಾಕಿಸ್ತಾನಕ್ಕೂ ಆಹ್ವಾನ ನೀಡಿರುವುದು ಇಸ್ರೇಲ್‌ನ್ನು ಕೆರಳಿಸಿದೆ. ಕಳೆದ ವರ್ಷದ ನಡೆದ ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಪ್ಯಾಲೆಸ್ಟೈನ್ ರಾಷ್ಟ್ರವನ್ನು ಗುರುತಿಸುವ ನಿರ್ಣಯಕ್ಕೆ ಫ್ರಾನ್ಸ್ ಬೆಂಬಲ ಸೂಚಿಸಿತ್ತು. ಇದೂ ಕೂಡ ಅಮೆರಿಕ ಮತ್ತು ಇಸ್ರೇಲ್‌ಗೆ ನುಂಗಲಾರದ ತುತ್ತಾಗಿ ಪರಿಣಮಿಸಿತ್ತು. ಫ್ರಾನ್ಸ್ ಜಾಗತಿಕ ವೇದಿಕೆಗಳಲ್ಲಿ ಅಮೆರಿಕದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿರುವುದು, ಡೊನಾಲ್ಡ್ ಟ್ರಂಪ್ ಅವರನ್ನು ಕೆರಳಿಸಿದೆ .

ಡೊನಾಲ್ಡ್ ಟ್ರಂಪ್ ಅವರ ಗ್ರೀನ್‌ಲ್ಯಾಂಡ್ ಯೋಜನೆಯನ್ನ ಅಪಹಾಸ್ಯ ಮಾಡಿರುವ ಫ್ರಾನ್ಸ್, ಭವಿಷ್ಯದ ಕಾಲ್ಪನಿಕ ಬಿಕ್ಕಟ್ಟನ್ನು ತಡೆಗಟ್ಟಲು ವರ್ತಮಾನದಲ್ಲಿ ಉದ್ದೇಶಪೂರ್ವಕವಾಗಿ ಹಾನಿಯನ್ನುಂಟು ಮಾಡುವುದಕ್ಕೆ ಅರ್ಥವಿಲ್ಲ ಎಂದು ಹೇಳಿದೆ. ಈ ಕುರಿತು ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಯುರೋಪ್ ಮತ್ತು ವಿದೇಶಾಂಗ ವ್ಯವಹಾರಗಳ ಫ್ರೆಂಚ್ ಸಚಿವಾಲಯ, ಭವಿಷ್ಯದಲ್ಲಿ ಅಪಘಾತ ಸಂಭವಿಸುತ್ತದೆ ಎಂಬ ಕಾರಣಕ್ಕೆ ಕಾರನ್ನು ಜಖಂ ಮಾಡಿದಂತೆ ವ್ಯಂಗ್ಯವಾಡಿದೆ. ಗ್ರೀನ್‌ಲ್ಯಾಂಡ್‌ನ್ನು ವಶಪಡಿಸಿಕೊಳ್ಳುವ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಳ್ಳುತ್ತಾ, ಭವಿಷ್ಯದಲ್ಲಿ ಆರ್ಕ್ಟಿಕ್‌ಗಾಗಿ ಹೋರಾಟ ನಡೆಯುವುದು ಶತಸಿದ್ಧ. ಗ್ರೀನ್‌ಲ್ಯಾಂಡ್ ಮೇಲೆ ರಷ್ಯಾ ಇಂದಲ್ಲ ನಾಳೆ ಹಕ್ಕು ಸ್ಥಾಪನೆ ಮಾಡಲಿದ್ದು, ಇದನ್ನು ತಪ್ಪಿಸಲು ಈಗಾಗಲೇ ಕ್ರಮ ಕೈಗೊಳ್ಳುವುದು ಸೂಕ್ತ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದರು. ಆದರೆ ಟ್ರಂಪ್ ಅವರ ಉದ್ದೇಶಗಳಿಗೆ ನ್ಯಾಟೋ ಸದಸ್ಯ ರಾಷ್ಟ್ರಗಳು ಕೂಡ ವಿರೋಧ ವ್ಯಕ್ತಪಡಿಸಿವೆ.

**ಫ್ರಾನ್ಸ್‌ನ ಪ್ರತಿಕ್ರಿಯೆ:** ಫ್ರೆಂಚ್ ವೈನ್ ಮತ್ತು ಶಾಂಪೇನ್ ಮೇಲೆ ಶೇ. 200 ರಷ್ಟು ಸುಂಕ ವಿಧಿಸುವ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಗಳು ಸ್ವೀಕಾರಾರ್ಹವಲ್ಲ ಎಂದು ಗುಡುಗಿರುವ ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯೆಲ್ ಮ್ಯಾಕ್ರನ್, ಈ ನಿರ್ಧಾರವನ್ನು ನಿಷ್ಪ್ರಯೋಜಕ ಎಂದು ಕರೆದಿದ್ದಾರೆ. ನಮ್ಮ ವಿದೇಶಾಂಗ ನೀತಿಯ ಮೇಲೆ ಪ್ರಭಾವ ಬೀರುವ ಸುಂಕದ ಬೆದರಿಕೆಗಳು ಸ್ವೀಕಾರಾರ್ಹವಲ್ಲ. ನಾವು ಇಂತಹ ಸುಂಕದ ಬೆದರಿಕೆಗಳಿಗೆ ಬಗ್ಗುವುದೂ ಇಲ್ಲ ಮತ್ತು ಅದನ್ನು ಅನುಮೋದಿಸುವುದೂ ಇಲ್ಲ ಎಂದು ಮ್ಯಾಕ್ರನ್ ಸ್ಪಷ್ಟಪಡಿಸಿದ್ದಾರೆ.

## ರಾಷ್ಟ್ರಗೀತೆಗೆ ಅಪಮಾನ ಸಹಿಸದೆ ಭಾಷಣ ಮಾಡಿಲ್ಲ; ರಾಜ್ಯಪಾಲ

**ಚೆನ್ನೈ:** ತಮಿಳುನಾಡು ವಿಧಾನಸಭೆಯಲ್ಲಿ ರಾಷ್ಟ್ರಗೀತೆಯನ್ನು ಅವಮಾನಿಸಿದ ಕಾರಣ ನಾನು ಭಾಷಣ ಮಾಡದೆ ಹೊರ ಬರಬೇಕಾಯಿತು ಎಂದು ರಾಜ್ಯಪಾಲ ಆರ್. ಎನ್.ರವಿ ಸಮಜಾಯಿಷಿ ನೀಡಿದ್ದಾರೆ. ರಾಜ್ಯಪಾಲರು ಅಧಿವೇಶನದ ಆರಂಭದಲ್ಲಿ ರಾಷ್ಟ್ರಗೀತೆ ನುಡಿಸಿದ ನಂತರ ರಾಷ್ಟ್ರಗೀತೆಯನ್ನು ಅವಮಾನಿಸಲಾಗಿದೆ ಎಂದು ಘೋಷಿಸಿ, ಸದನವನ್ನು ಉದ್ದೇಶಿಸಿ ತಮ್ಮ ವಾಡಿಕೆಯಂತೆ ಮಾಡಬೇಕಾದ ಭಾಷಣ ಮಾಡದೆ ಹೊರ ನಡೆದಿದ್ದರು.

ಅವರು ಸಭಾತ್ಯಾಗ ಮಾಡಿದ ಸ್ವಲ್ಪ ಸಮಯದ ನಂತರ, ರಾಜ್ಯಪಾಲರ ಕಚೇರಿ ಹೇಳಿಕೆಯನ್ನು ಬಿಡುಗಡೆ ಮಾಡಿತು. ರಾಜ್ಯ ಸರ್ಕಾರವು ವಾಡಿಕೆಯಂತೆ ಸಿದ್ಧಪಡಿಸಿದ ಭಾಷಣದಲ್ಲಿ ಹಲವಾರು ಆಧಾರರಹಿತ ಹೇಳಿಕೆಗಳು ಮತ್ತು ದಾರಿತಪ್ಪಿಸುವ ಹೇಳಿಕೆಗಳನ್ನು ಹೊಂದಿದೆ ಎಂದು ಆರೋಪಿಸಿ ಹೇಳಿಕೆ ನೀಡಿತು. ಜನರನ್ನು ತೊಂದರೆಗೊಳಿಸುವ ನಿರ್ಣಾಯಕ ಸಮಸ್ಯೆಗಳನ್ನು ನಿರ್ಲಕ್ಷಿಸಲಾಗಿದೆ ಎಂದು ರವಿ ಅವರ ಕಚೇರಿ ಘೋಷಿಸಿತು, ಹೂಡಿಕೆ ಮತ್ತು ಮಹಿಳಾ ಸುರಕ್ಷತೆಯಲ್ಲಿ 12 ಲಕ್ಷ ಕೋಟಿ ರೂ.ಗಳ ಬಗ್ಗೆ ಹೇಳಿಕೆಯನ್ನು ನೀಡಿತು.ಆಡಳಿತಾರೂಢ ಡಿಎಂಕೆಯಿಂದ ಪ್ರತಿಕ್ರಿಯೆ ತ್ವರಿತವಾಗಿತ್ತು. ರಾಜ್ಯಪಾಲರ ಕ್ರಮಗಳು 100 ವರ್ಷಗಳಷ್ಟು ಹಳೆಯದಾದ ಸದನದ



ಸಂಪ್ರದಾಯಗಳನ್ನು ಅಗೌರವಗೊಳಿಸಿವೆ ಮತ್ತು ಅವಮಾನಿಸಿವೆ ಎಂದು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಹೇಳಿದರು ಮತ್ತು ಡಿಎಂಕೆ ಸಂಸ್ಥಾಪಕ ಸಿ.ಎನ್. ಅಣ್ಣಾದೊರೈ ಅವರ ಆಡಿಗೆ ಗಡ್ಡ ಏಕೆ ಬೇಕು? ಮತ್ತು ರಾಜ್ಯಕ್ಕೆ ರಾಜ್ಯಪಾಲರು ಏಕೆ ಬೇಕು? ಎಂಬ ಕ್ಷುಲ್ಲಕ ಹೇಳಿಕೆಯನ್ನು ಅವರು ಪ್ರತಿಬಿಂಬಿಸಿದರು. ತಮ್ಮ ಆಡಳಿತವು ಯಾವುದೇ ರೀತಿಯಲ್ಲಿ ರಾಜ್ಯಪಾಲರನ್ನು ಅಥವಾ ಅವರ ಕಚೇರಿಯನ್ನು ಅಗೌರವಗೊಳಿಸಿಲ್ಲ ಮತ್ತು ತಮಿಳು ಜನರನ್ನು ಗೌರವಿಸಲು ರಾಜ್ಯಪಾಲರು ವಿಫಲರಾಗಿದ್ದಾರೆ ಎಂದು ಸ್ಟಾಲಿನ್ ಹೇಳಿದರು.

ಸದನವು ಬೆಳಿಗ್ಗೆ 9.30 ಕ್ಕೆ ಸಭೆ ಸೇರಿತು ಮತ್ತು ಶಿಷ್ಟಾಚಾರದ ಪ್ರಕಾರ, ರಾಜ್ಯಪಾಲರು ಆರಂಭಿಕ ಹೇಳಿಕೆಗಳನ್ನು ನೀಡಬೇಕಾಗಿತ್ತು. ಆದಾಗ್ಯೂ, ತಮಿಳುನಾಡು ಗೀತೆಯನ್ನು ನುಡಿಸಿದ ನಂತರ ಅಧಿವೇಶನವು ಗೊಂದಲದಲ್ಲಿ ಸಿಲುಕಿತು. ನಂತರ ರವಿ ಸತತ ಎರಡನೇ ವರ್ಷವೂ ಇದೇ ವಿಷಯದ ಬಗ್ಗೆ ತಮಿಳಿನಲ್ಲಿ ಸಂಕ್ಷಿಪ್ತ ಶುಭಾಶಯ ಕೋರಿದ ನಂತರ ಸದನದಿಂದ ಹೊರನಡೆದರು.

**ರಾಜ್ಯ ಸರ್ಕಾರವು ಇದರಿಂದ ವಿಚಲಿತರಾಗಲಿಲ್ಲ**

ಸ್ಪೀಕರ್ ಎಂ. ಅಪ್ಪಾವು ಸದನಕ್ಕೆ ರಾಜ್ಯಪಾಲರಿಗೆ ಶಿಷ್ಟಾಚಾರದ ಬಗ್ಗೆ ಔಪಚಾರಿಕವಾಗಿ ತಿಳಿಸಲಾಗಿದೆ ಎಂದು ಹೇಳಿದರು ಮತ್ತು ನಂತರ ಮುಖ್ಯಮಂತ್ರಿಗಳು ರಾಜ್ಯಪಾಲರ ಭಾಷಣವನ್ನು ದಾಖಲೆಯಲ್ಲಿ ಇರಿಸಲು ನಿರ್ಣಯವನ್ನು ಮಂಡಿಸಿದರು, ಆದರೆ ಅವರು ಹೊರನಡೆದರು.ಆದಾಗ್ಯೂ, ಭಾಷಣವನ್ನು ದಾಖಲಿಸಿಕೊಳ್ಳಲಾಗಿದ್ದರೂ, ಈ ಹೊರನಡೆಯು ರಾಜ್ಯಪಾಲರು ಮತ್ತು ತಮಿಳುನಾಡಿನ ಆಡಳಿತಾರೂಢ ಡಿಎಂಕೆ ನಡುವಿನ ನಿರಂತರ ಘರ್ಷಣೆಯನ್ನು ಒತ್ತಿಹೇಳುತ್ತದೆ.

## ಕಾಶ್ಮೀರದಲ್ಲಿ ಮುಂದುವರೆದ ಉಗ್ರರ ಬೇಟೆ

**ಜಮ್ಮು :** ಜಮ್ಮು ಮತ್ತು ಕಾಶ್ಮೀರದ ಕಿಶಾತ್ವರ್ ಜಿಲ್ಲೆಯ ಮೇಲ್ಭಾಗದಲ್ಲಿ ಭಯೋತ್ಪಾದಕರನ್ನು ಸದೆಬಡಿಯಲು ನಡೆಸಲಾಗುತ್ತಿರುವ ಬೃಹತ್ ಶೋಧ ಕಾರ್ಯಾಚರಣೆ ಇಂದಿಗೆ ಮೂರನೇ ದಿನಕ್ಕೆ ಕಾಲಿಟ್ಟಿದ್ದು, ಹಲವಾರು ವ್ಯಕ್ತಿಗಳನ್ನು ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಛತ್ರೂ ಪಟ್ಟಿಯ ಮಂದ್ರಲ್-ಸಿಂಗ್‌ಪೋರಾ ಬಳಿಯ ಸೊನ್ನಾರ್ ಗ್ರಾಮದಲ್ಲಿ ಭಾನುವಾರದಿಂದ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು, ಗುಂಡಿನ ಚಕಮಕಿಯಲ್ಲಿ ಒಬ್ಬ ಪ್ಯಾರಾಟ್ರೂಪರ್ ಸಾವನ್ನಪ್ಪಿದರು ಮತ್ತು ಏಳು ಮಂದಿ ಗಾಯಗೊಂಡರು, ಮುಖ್ಯವಾಗಿ ಅಡಗಿಕೊಂಡಿದ್ದ ಭಯೋತ್ಪಾದಕರ ಹಠಾತ್ ಗ್ರೆನೇಡ್ ದಾಳಿಯಿಂದ ಉಂಟಾದ ತುಣುಕುಗಳ ಗಾಯಗಳಿಂದಾಗಿ. ಭಯೋತ್ಪಾದಕರು ಅರಣ್ಯ ಪ್ರದೇಶದ ಆಳಕ್ಕೆ ಪರಾರಿಯಾಗಿದ್ದರು, ಆದರೆ ಅವರ ಸುಸಜ್ಜಿತ ಅಡಗುತಾಣವು, ತಿನ್ನಬಹುದಾದ ವಸ್ತುಗಳು, ಕಂಬಳಿಗಳು ಮತ್ತು ಪಾತ್ರೆಗಳು ಸೇರಿದಂತೆ ದೊಡ್ಡ ಪ್ರಮಾಣದ ಚಳಿಗಾಲದ ದಾಸ್ತಾನುಗಳಿಂದ ತುಂಬಿತ್ತು, ಅದನ್ನು ಪತ್ತೆಹಚ್ಚಲಾಯಿತು. ಜಮ್ಮು ವಲಯದ ಪೊಲೀಸ್ ಮಹಾನಿರ್ದೇಶಕ ಭೀಮ್ ಸೇನ್ ಟುಟಿ ಮತ್ತು ಜಮ್ಮುವಿನ ಸಿಆರ್‌ಪಿಎಫ್‌ನ ಮಹಾನಿರ್ದೇಶಕ ಆರ್ ಗೋಪಾಲ ಕೃಷ್ಣ ರಾವ್ ಸೇರಿದಂತೆ ಹಿರಿಯ



ಅಧಿಕಾರಿಗಳು ಸಹ ಎನ್‌ಕೌಂಟರ್ ಸ್ಥಳಕ್ಕೆ ತಲುಪಿದರು ಮತ್ತು ಪ್ರಸ್ತುತ ಕಾರ್ಯಾಚರಣೆಯ ಮೇಲ್ವಿಚಾರಣೆಗಾಗಿ ಹಲವಾರು ಸೇನಾ ಅಧಿಕಾರಿಗಳೊಂದಿಗೆ ಅಲ್ಲಿ ಮೊಕ್ಕಾಂ ಹೂಡಿದ್ದಾರೆ. ಏತನ್ಮಧ್ಯೆ, ಬೆಳಿಗ್ಗೆ ಜಮ್ಮುವಿನಲ್ಲಿ ಹುತಾತ್ಮರಾದ ವಿಶೇಷ ಪಡೆ ಕಮಾಂಡೋ, ಹವಿಲ್ದಾರ್ ಗಜೇಂದ್ರ ಸಿಂಗ್ ಅವರಿಗೆ ಗೌರವ ಸಲ್ಲಿಸಲು ಇಲ್ಲಿ ಗಂಭೀರವಾದ ಮಾಲಾರ್ಪಣೆ ಸಮಾರಂಭ ನಡೆಯಿತು.

ವೈಟ್ ನೈಟ್ ಕಾರ್ಪ್ಸ್‌ನ ಕಾರ್ಯಕಾರಿ ಮುಖ್ಯಸ್ಥ ಬ್ರಿಗೇಡಿಯರ್ ಯುಧ್ವೀರ್ ಸಿಂಗ್ ಸೆಖೋನ್ ಅವರ ನೇತೃತ್ವದಲ್ಲಿ ಸತ್ವಾರಿಯಲ್ಲಿ ಮಾಲಾರ್ಪಣೆ ಸಮಾರಂಭ ನಡೆಯಿತು ಮತ್ತು ನಂತರ, ಮೃತರ ಪಾರ್ಥಿವ ಶರೀರವನ್ನು ಅಂತಿಮ ವಿಧಿವಿಧಾನಗಳಿಗಾಗಿ ಉತ್ತರಾಖಂಡದಲ್ಲಿರುವ ಅವರ ಹುಟ್ಟೂರಿಗೆ ರವಾನಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## 24000 ಕೋಟಿ ರೂ. ತಲುಪಿದ ರಕ್ಷಣಾ ರಫ್ತು

**ನವದೆಹಲಿ:** ದೇಶದಲ್ಲಿ ಕಳೆದ 10 ವರ್ಷಗಳ ಅವಧಿಯಲ್ಲಿ ರಕ್ಷಣಾ ರಫ್ತು ದಾಖಲೆಯ 24,000 ಕೋಟಿ ರೂ.ಗಳನ್ನು ತಲುಪಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. 2014 ರಲ್ಲಿ ಕೇವಲ 46,425 ಕೋಟಿ ರೂ. ಇದ್ದ ದೇಶೀಯ ರಕ್ಷಣಾ ಉತ್ಪಾದನೆಯು ಈಗ ದಾಖಲೆಯ 1.51 ಲಕ್ಷ ಕೋಟಿ ರೂ.ಗೆ ಬೆಳೆದಿದೆ. ಇದರಿಂದ ಭಾರತ ಇನ್ನು ಮುಂದೆ ಕೇವಲ ಅಮುದು ರಾಷ್ಟ್ರ ಮಾತ್ರವಲ್ಲ ರಫ್ತುದಾರ ರಾಷ್ಟ್ರ ಎಂದು ತಿಳಿಸಿದ್ದಾರೆ

ಮಹಾರಾಷ್ಟ್ರದ ನಾಗ್ಪುರದಲ್ಲಿ ಭಾರತದ ಶಸ್ತ್ರಾಸ್ತ್ರ ರಫ್ತಿಗೆ ದೊಡ್ಡ ಉತ್ತೇಜನ ನೀಡುವ ಸಲುವಾಗಿ, ಪಿನಾಕಾ ರಾಕೆಟ್ ವ್ಯವಸ್ಥೆಯ ಮೊದಲ ಬ್ಯಾಚ್‌ಗೆ ಚಾಲನೆ ನೀಡಿ ಮಾತನಾಡಿದ ಅವರು ನಿಖರತೆ ಮತ್ತು ವಿಸ್ತೃತ ವ್ಯಾಪ್ತಿಗೆ ಹೆಸರುವಾಸಿಯಾದ ಮಲ್ಟಿ-ಬ್ಯಾರೆಲ್ ರಾಕೆಟ್ ಲಾಂಚರ್ ನ ರಫ್ತು, ಅತ್ಯಾಧುನಿಕ ರಕ್ಷಣಾ ತಂತ್ರಜ್ಞಾನದ ವಿಶ್ವಾಸಾರ್ಹ ಪೂರೈಕೆದಾರನಾಗಿ ಹೊರಹೊಮ್ಮಲು ಸಹಕಾರಿಯಾಗಿದೆ ಎಂದಿದ್ದಾರೆ. ಪಿನಾಕಾದ ಇತ್ತೀಚಿನ ಪ್ರಾಯೋಗಿಕ ಆವೃತ್ತಿಯು 120 ಕಿಮೀ ಅಂಚರ್ಗಳ ವ್ಯಾಪ್ತಿ ಸಹ ಮುಟ್ಟಬಲ್ಲದು, 75 ಕಿಮೀ ವರೆಗಿನ ಗುರಿ ಹೊಡೆಯುವ ರೂಪಾಂತರಗಳೊಂದಿಗೆ ಹೆಚ್ಚು ಸಾಮರ್ಥ್ಯವಿರುವ ಶಸ್ತ್ರಾಸ್ತ್ರ ವ್ಯವಸ್ಥೆಗಳಾಗಿವೆ, ಬೆಳೆಯುತ್ತಿರುವ ಶಸ್ತ್ರಾಸ್ತ್ರ ರಫ್ತಿಗೆ ಪೂರಕವಾಗಿದೆ ಎಂದು ತಿಳಿಸಿದ್ದಾರೆ. ಸೌರ ರಕ್ಷಣಾ ಮತ್ತು ಏರೋಸ್ಪೇಸ್ ಸೌಲಭ್ಯದಲ್ಲಿ ಅಭಿವೃದ್ಧಿಪಡಿಸಲಾದ ಪಿನಾಕಾ ಕ್ಷಿಪಣಿಗಳ ರಫ್ತು ಪ್ರಾರಂಭವಾಗಿದೆ ರಕ್ಷಣಾ ಉದ್ಯಮದ ಸಾಮರ್ಥ್ಯಗಳನ್ನು ಪ್ರದರ್ಶಿಸುವ ಜೊತೆಗೆ ಉತ್ತೇಜನಕ್ಕೂ ಸಹಕಾರಿಯಾಗಲಿದೆ ಎಂದಿದ್ದಾರೆ. ಭಾರತ ಇನ್ನು ಮುಂದೆ ಕೇವಲ ಆಮದುದಾರನಲ್ಲ, ಬದಲಾಗಿ ರಫ್ತುದಾರನಾಗುವತ್ತ ವೇಗವಾಗಿ ಸಾಗುತ್ತಿದೆ ಎಂದು ಹೇಳಿದ ಅವರು ಖಾಸಗಿ ವಲಯದ ಹೆಚ್ಚುತ್ತಿರುವ ಭಾಗವಹಿಸುವಿಕೆಯಿಂದಾಗಿ ರಫ್ತು ಹೆಚ್ಚಳವಾಗಲಿದೆ ಎಂದು ಮಾಹಿತಿ ನಿಡಿದ್ದಾರೆ. ಏಪ್ರಿಲ್ 2022 ರಲ್ಲಿ ಯಶಸ್ವಿಯಾಗಿ ಪ್ರಯೋಗಗಳನ್ನು ಪೂರ್ಣಗೊಳಿಸಿದ ನಂತರ ಭಾರತೀಯ ಸೇನೆಯು ಈಗಾಗಲೇ ರೂಪಾಂತರ ಅನ್ನು ಸೇರ್ಪಡೆಗೊಳಿಸಿದೆ.

# ಗ್ರೀನ್‌ಲ್ಯಾಂಡ್ ಒಳಗೊಂಡ ನವೀಕೃತ ಯುಎಸ್ ನಕ್ಷೆ ಬಿಡುಗಡೆ
## ● ಆರ್ಕ್ಟಿಕ್ ದ್ವೀಪ, ಕೆನಡಾ ಮತ್ತು ವೆನೆಜುವೆಲಾವನ್ನು ಅಮೆರಿಕದ ಪ್ರದೇಶಗಳಾಗಿ ತೋರಿಸಿರುವ ಟ್ರಂಪ್

**ವಾಷಿಂಗ್ಟನ್ ಡಿಸಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗ್ರೀನ್‌ಲ್ಯಾಂಡ್ ಮೇಲಿನ ಹಕ್ಕೊತ್ತಾಯ ಮತ್ತೊಮ್ಮೆ ಮಂಡಿಸಿದ್ದು, ಆರ್ಕ್ಟಿಕ್ ದ್ವೀಪ, ಕೆನಡಾ ಮತ್ತು ವೆನೆಜುವೆಲಾವನ್ನು ಅಮೆರಿಕದ ಪ್ರದೇಶಗಳಾಗಿ ತೋರಿಸುವ ಅಮೆರಿಕದ ನವೀಕೃತ ನಕ್ಷೆಯನ್ನು ತಮ್ಮ ಟ್ರೂತ್ ಸೋಶಿಯಲ್‌ನಲ್ಲಿ ಹಂಚಿಕೊಂಡಿದ್ದಾರೆ.

ಡೊನಲ್ಡ್ ಟ್ರಂಪ್ ಅವರು ಪೋಸ್ಟ್ ಮಾಡಿರುವ ಎರಡು ಫೋಟೋಗಳಲ್ಲಿ ಮೊದಲನೇಯದ್ದು ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಹಾಗೂ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರೊಂದಿಗೆ, ಡೊನಾಲ್ಡ್ ಟ್ರಂಪ್ ಅವರೇ ಖುದ್ದು ಗ್ರೀನ್‌ಲ್ಯಾಂಡ್‌ನಲ್ಲಿ ಅಮೆರಿಕದ ಧ್ವಜ ಹಾರಿಸುತ್ತಿದ್ದಾರೆ. ಈ ಫೋಟೋದಲ್ಲಿ ಗ್ರೀನ್ ಲ್ಯಾಂಡ್ ಯುಎಸ್ ಟೆರಿಟರಿ ಎಸ್ಟಾಬ್ಲಿಷ್ಡ್ 2026 ಎಂಬ ಫಲಕ ಕೂಡ ಇದೆ.

ಅದೇ ರೀತಿ ಮತ್ತೊಂದು ಫೋಟೋದಲ್ಲಿ ಫ್ರೆಂಚ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್, ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ, ಬ್ರಿಟಿಷ್ ಪ್ರೀಮಿಯರ್ ಕೀರ್ ಸ್ಟಾರ್ಮರ್ ಮತ್ತು ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಸೇರಿದಂತೆ ನ್ಯಾಟೋ ಮಿತ್ರರಾಷ್ಟ್ರಗಳನ್ನು ಅಪಹಾಸ್ಯ ಮಾಡುವ ಫೋಟೋವನ್ನು, ಡೊನಾಲ್ಡ್ ಟ್ರಂಪ್ ಹಂಚಿಕೊಂಡಿದ್ದಾರೆ.




**ನ್ಯಾಟೋ ಮಿತ್ರರಾಷ್ಟ್ರಗಳು ವಿರೋಧ**

ಈ ಫೋಟೋದಲ್ಲಿ ಮೇಲೆ ಉಲ್ಲೇಖಿಸಿದ ಎಲ್ಲಾ ನಾಯಕರೊಂದಿಗೆ ಓವಲ್ ಕಚೇರಿಯಲ್ಲಿ ಡೊನಾಲ್ಡ್ ಟ್ರಂಪ್ ಚರ್ಚೆ ಮಾಡುತ್ತಿದ್ದು, ಹಿನ್ನೆಲೆಯಲ್ಲಿ ಅಮೆರಿಕದ ಬದಲಾದ ನಕ್ಷೆಯನ್ನು ತೋರಿಸಲಾಗಿದೆ. ಇದರಲ್ಲಿ ಗ್ರೀನ್‌ಲ್ಯಾಂಡ್, ಕೆನಡಾ ಮತ್ತು ವೆನೆಜುವೆಲಾವನ್ನು ಅಮೆರಿಕದ ಭಾಗಗಳಂತೆ ತೋರಿಸಲಾಗಿದೆ. ಗ್ರೀನ್ ಲ್ಯಾಂಡ್ ಮೇಲೆ ರಷ್ಯಾ ಮತ್ತು ಚೀನಾದ ಪ್ರಭಾವ ಕುಗ್ಗಿಸಲು ದ್ವೀಪವನ್ನು ಅಮೆರಿಕದ ರಾಷ್ಟ್ರೀಯ ಭದ್ರತಾ ಅಗತ್ಯ ಎಂದು ಪರಿಗಣಿಸಬೇಕು ಎಂದು ಒತ್ತಾಯಿಸಿರುವ ಡೊನಾಲ್ಡ್ ಟ್ರಂಪ್, ರಷ್ಯಾ ಮತ್ತು ಚೀನಾದ ವಿರುದ್ಧ ಡೆನ್ಮಾರ್ಕ್ ಇಂತಹ ರಕ್ಷಣಾತ್ಮಕ ಸಾಮರ್ಥ್ಯವನ್ನು ಹೊಂದಿಲ್ಲ ಎಂದು ಎಚ್ಚರಿಸಿದ್ದಾರೆ. ಹೇಳಿಕೊಂಡರು.

- ನಕ್ಷೆಯಲ್ಲಿ ಗ್ರೀನ್‌ಲ್ಯಾಂಡ್‌ನ್ನು ಅಮೆರಿಕಕ್ಕೆ ಸೇರಿಸಿದ ಡೊನಾಲ್ಡ್ ಟ್ರಂಪ್.
- ಗ್ರೀನ್‌ಲ್ಯಾಂಡ್ ಮೇಲೆ ಅಮೆರಿಕದ ಧ್ವಜ ಹಾರಿಸಿದ ಡೊನಾಲ್ಡ್ ಟ್ರಂಪ್.
- ನ್ಯಾಟೋ ಮಿತ್ರರಾಷ್ಟ್ರಗಳಿಗೆ ಟಾಂಗ್ ಕೊಟ್ಟ ಅಮೆರಿಕದ ಅಧ್ಯಕ್ಷ.

ತಮ್ಮ ಗ್ರೀನ್‌ಲ್ಯಾಂಡ್ ವಶ ಯೋಜನೆಗೆ ನ್ಯಾಟೋ ಮಿತ್ರರಾಷ್ಟ್ರಗಳು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ, ಡೊನಾಲ್ಡ್ ಟ್ರಂಪ್ ಆ ದೇಶಗಳನ್ನೇ ಟಾರ್ಗೆಟ್ ಮಾಡಿದ್ದಾರೆ. ಗಾಜಾ ಶಾಂತಿ ಮಂಡಳಿ ಸೇರಲು ಒಪ್ಪದ ಫ್ರಾನ್ಸ್‌ಗೆ ಸುಂಕ ಬೆದರಿಕೆ ಹಾಕಿರುವ ಅವರು, ಅಧ್ಯಕ್ಷ ಇಮ್ಯಾನ್ಯುಯೆಲ್ ಮ್ಯಾಕ್ರನ್ ಗ್ರೀನ್‌ಲ್ಯಾಂಡ್ ಬಗ್ಗೆ ತಮಗೆ ಕಳುಹಿಸಿದ್ದ ಖಾಸಗಿ ಸಂದೇಶಗಳನ್ನು ಬಹಿರಂಗಪಡಿಸಿದ್ದಾರೆ.

**ಜಾಗತಿಕ ಆತಂಕ**

ಒಟ್ಟಿನಲ್ಲಿ ಡೊನಾಲ್ಡ್ ಟ್ರಂಪ್ ಅವರ ಗ್ರೀನ್ ಲ್ಯಾಂಡ್ ಬಿಡ್ಡಿಂಗ್ ಜಾಗತಿಕ ಆತಂಕವನ್ನು ಹೆಚ್ಚಿಸುತ್ತಿದೆ. ಒಂದು ಕಡೆ ಅಮೆರಿ ಅಧ್ಯಕ್ಷರ ಭೂಕಬಳಿಕೆ ಮತ್ತೊಂದೆಡೆ ಯುರೋಪ್‌ನಲ್ಲಿ ಯುದ್ಧ ಆರಂಭವಾಗುವ ಭೀತಿ ಈ ಆತಂಕಕ್ಕೆ ಕಾರಣವಾಗಿದೆ. ಗ್ರೀನ್‌ಲ್ಯಾಂಡ್ ವಿವಾದ ಮುಂದಿನ ದಿನಗಳಲ್ಲಿ ಯಾವ ಸ್ವರೂಪ ಪಡೆಯಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಗ್ರೀನ್‌ಲ್ಯಾಂಡ್‌ನಲ್ಲಿ ಯುಎಸ್ ಯುದ್ಧ ವಿಮಾನಗಳ ನಿಯೋಜನೆ ಮೂಲಕ ಉದ್ವಿಗ್ನತೆಯನ್ನು ಹೆಚ್ಚಿಸಿರುವ ಡೊನಾಲ್ಡ್ ಟ್ರಂಪ್, ಗ್ರೀನ್‌ಲ್ಯಾಂಡ್‌ಗಾಗಿ ನ್ಯಾಟೋ ಮಿತ್ರರಾಷ್ಟ್ರಗಳನ್ನೂ ಎದುರು ಹಾಕಿಕೊಳ್ಳಲು ಸಜ್ಜಾಗಿದ್ದಾರೆ. ಆರ್ಕ್ಟಿಕ್ ಪ್ರದೇಶದ ಈ ಡ್ಯಾನಿಶ್ ಪ್ರದೇಶವು ಕಾರ್ಯತಂತ್ರದ ಸ್ಥಾನದಲ್ಲಿರುವುದರಿಂದ, ಅದನ್ನು ಅಮೆರಿಕದ ಭಾಗವಾಗಿಸುವುದು ರಾಷ್ಟ್ರೀಯ ಭದ್ರತಾ ಹಿತಾಸಕ್ತಿಗಳನ್ನು ಪೂರೈಸುತ್ತದೆ ಎಂದು ಟ್ರಂಪ್ ಪ್ರತಿಪಾದಿಸುತ್ತಿದ್ದಾರೆ.

# ಮಿನಿ ನ್ಯೂಸ್

## 1.78 ಕೋಟಿ ರೂ.ಮೌಲ್ಯದ ಬೆಳ್ಳಿ ಹೊಂದಿದ್ದ ವ್ಯಕ್ತಿ ಬಂಧನ

**ರಾಂಚಿ:** ಜಾರ್ಖಂಡ್‌ನ ಗಿರಿದಿಹ್ ಜಿಲ್ಲೆಯಲ್ಲಿ 25 ವರ್ಷದ ವ್ಯಕ್ತಿಯೊಬ್ಬನ ಬಳಿ 1.78 ಕೋಟಿ ರೂ. ಮೌಲ್ಯದ ಬೆಳ್ಳಿಯನ್ನು ವಶಪಡಿಸಿಕೊಂಡ ನಂತರ ಆತನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಜಧನ್ವಾರ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಾಹನ ತಪಾಸಣೆ ನಡೆಸುತ್ತಿದ್ದಾಗ ಪೊಲೀಸರು ಆ ವ್ಯಕ್ತಿಯನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಪೊಲೀಸ್ ವರಿಷ್ಠಾಧಿಕಾರಿ ವಿಮಲ್ ಕುಮಾರ್ ಮಾತನಾಡಿ, ಕ್ರಿಮಿನಲ್ ಗ್ಯಾಂಗ್ ಒಂದು ಸರಕು ಸಾಗಣೆ ಮಾಡಲು ಪ್ರಯತ್ನಿಸುತ್ತಿದೆ ಎಂಬ ಸುಳಿವು ನಮಗೆ ಸಿಕ್ಕಿತು. ವಾಹನ ತಪಾಸಣೆ ನಡೆಸುತ್ತಿದ್ದಾಗ, ಪೊಲೀಸರು ಹಜರತ್ ಅನ್ಸಾರಿ ಎಂಬ ವ್ಯಕ್ತಿಯನ್ನು ಸರಕು ಸಾಗಣೆಯೊಂದಿಗೆ ಬಂಧಿಸಲಾಯಿತು ಎಂದು ತಿಳಿಸಿದ್ದಾರೆ. ನಾಲ್ಕು ಚಕ್ರದ ವಾಹನದಲ್ಲಿ ಸಾಗಿಸುತ್ತಿದ್ದ ಎರಡು ಚೀಲಗಳಿಂದ 32.5 ಕೆಜಿ ತೂಕದ ಆರು ಕರಗಿದ ಬೆಳ್ಳಿ ಬಾರ್‌ಗಳು ಮತ್ತು ಸುಮಾರು 3 ಕೆಜಿ ತೂಕದ ಇತರ ಬೆಳ್ಳಿ ಆಭರಣಗಳನ್ನು ವಶಪಡಿಸಿಕೊಂಡಿದ್ದೇವೆ. ವಶಪಡಿಸಿಕೊಳ್ಳಲಾದ ಬೆಳ್ಳಿ ವಸ್ತುಗಳ ಅಂದಾಜು ಮಾರುಕಟ್ಟೆ ಮೌಲ್ಯ ಸುಮಾರು 1.78 ಕೋಟಿ ರೂ. ಎಂದು ಪೊಲೀಸರು ತಿಳಿಸಿದ್ದಾರೆ. ರಾಜಧನ್ವಾರ್ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ನ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅವರು ಹೇಳಿದರು.

## ಅಪ್ರಾಪ್ತ ಬಾಲಕಿಯ ರುಂಡ ಪತ್ತೆ

**ಪಾಟ್ನಾ:** ಬಿಹಾರದ ರಾಜಧಾನಿ ಪಾಟ್ನಾದಲ್ಲಿ ಅಪ್ರಾಪ್ತ ಬಾಲಕಿಯನ್ನು ಭೀಕರವಾಗಿ ಕೊಲೆ ಮಾಡಿ ರುಂಡವನ್ನು ಬೀದಿಯಲ್ಲಿ ಎಸೆದಿರುವ ಘಟನೆ ನಡೆದಿದೆ.ಇದು ರಾಜಧಾನಿಯಲ್ಲಿ ಎಲ್ಲರಲ್ಲೂ ಆತಂಕ ಮೂಡಿಸಿದೆ. ರಾತ್ರಿ ರಾಜಧಾನಿಯ ನಾಡಿ ಪೊಲೀಸ್ ಠಾಣೆ ಪ್ರದೇಶದ ಬೀದಿಯಲ್ಲಿ ಅಪ್ರಾಪ್ತ ಬಾಲಕಿಯ ಕತ್ತರಿಸಿದ ತಲೆ ಪತ್ತೆಯಾಗಿದೆ. ಪೊಲೀಸರು ರುಂಡ ವಶಕ್ಕೆ ಪಡೆದಿದ್ದು, ಈ ಬಗ್ಗೆ ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.ಬಾಲಕಿಯ ತಲೆಯನ್ನು ಕತ್ತರಿಸಿದ ರೀತಿ ನೋಡಿದರೆ, ಆ ಬಾಲಕಿಯನ್ನು ಅಪರಾಧಿಗಳು ಎಷ್ಟು ಭಯಾನಕವಾಗಿ ಕೊಲೆ ಮಾಡಿರಬಹುದು ಎಂಬುದು ತಿಳಿಯುತ್ತದೆ. ಈ ಕೊಲೆಯಿಂದ ಗ್ರಾಮಸ್ಥರು ಭಯಭೀತರಾಗಿದ್ದಾರೆ. ಅಪ್ರಾಪ್ತ ಬಾಲಕಿಯನ್ನು ಬಲಿ ನೀಡಿರಬಹುದು, ಎಲ್ಲೋ ಮಾಟ ಮಂತ್ರ ನಡೆದಿರಬಹುದು ಎನ್ನುವ ಶಂಕೆಯನ್ನು ಜನರು ವ್ಯಕ್ತಪಡಿಸಿದ್ದಾರೆ. ಸ್ಥಳೀಯ ಪೊಲೀಸ್ ತಂಡ ಸ್ಥಳಕ್ಕೆ ಆಗಮಿಸಿ, ಕತ್ತರಿಸಿದ ತಲೆಯನ್ನು ವಶಪಡಿಸಿಕೊಂಡು, ಪರೀಕ್ಷೆಗಾಗಿ ನಳಂದ ವೈದ್ಯಕೀಯ ಕಾಲೇಜಿಗೆ ಕಳುಹಿದೆ.ಮಗುವನ್ನು ಹರಿತವಾದ ಆಯುಧದಿಂದ ಕೊಲೆ ಮಾಡಿರಬಹುದು ಎಂದು ಹೆಚ್ಚುವರಿ ಪೊಲೀಸ್ ಠಾಣಾಧಿಕಾರಿ ವಿವೇಕ್ ಕುಮಾರ್ ಹೇಳಿದ್ದಾರೆ.

## ಲಿವ್-ಇನ್ ಸಂಬಂಧದಲ್ಲಿರುವ ಮಹಿಳೆಯರಿಗೆ ಪತ್ನಿಯರ ಸ್ಥಾನಮಾನ ನೀಡಬೇಕು: ಹೈಕೋರ್ಟ್

**ನವದೆಹಲಿ:** ಲಿವ್-ಇನ್ ಸಂಬಂಧಗಳಲ್ಲಿ ವಾಸಿಸುವ ಮಹಿಳೆಯರಿಗೆ ಪತ್ನಿಯರ ಸ್ಥಾನಮಾನ ನೀಡಬೇಕು ಮತ್ತು ಅವರನ್ನು ರಕ್ಷಿಸಬೇಕು ಎಂದು ಮದ್ರಾಸ್ ಹೈಕೋರ್ಟ್ ತನ್ನ ತೀರ್ಪಿನಲ್ಲಿ ಹೇಳಿದೆ. ಲಿವ್-ಇನ್ ಸಂಬಂಧಗಳನ್ನು ಸಾಂಸ್ಕೃತಿಕ ಆಘಾತ ಎಂದು ಕರೆದ ನ್ಯಾಯಾಲಯವು ಈ ಕುರಿತು ತನ್ನ ತೀವ್ರ ಕಳವಳ ವ್ಯಕ್ತಪಡಿಸಿದೆ, ಅಂತಹ ಸಂಬಂಧಗಳಲ್ಲಿ ವಾಸಿಸುವ ಮಹಿಳೆಯರಿಗೆ ಪತ್ನಿಯರ ಸ್ಥಾನಮಾನ ನೀಡಬೇಕು ಮತ್ತು ಅವರನ್ನು ರಕ್ಷಿಸಬೇಕು ಸ್ಪಷ್ಟಪಡಿಸಿದೆ. ನ್ಯಾಯಮೂರ್ತಿ ಎಸ್. ಸ್ಮೃತಿ ತಮ್ಮ ತೀರ್ಪಿನಲ್ಲಿ, ಲಿವ್-ಇನ್ ಸಂಬಂಧಗಳು ಭಾರತೀಯ ಸಮಾಜಕ್ಕೆ ಸಾಂಸ್ಕೃತಿಕ ಆಘಾತವಾಗಿದೆ, ಆದರೆ ಅವು ಎಲ್ಲೆಡೆ ದೊಡ್ಡ ಪ್ರಮಾಣದಲ್ಲಿ ನಡೆಯುತ್ತಿವೆ. ಹುಡುಗಿಯರು ತಾವು ಆಧುನಿಕರು ಎಂದು ಭಾವಿಸುತ್ತಾರೆ ಮತ್ತು ಲಿವ್-ಇನ್ ಸಂಬಂಧಗಳಲ್ಲಿ ಉಳಿಯಲು ನಿರ್ಧರಿಸುತ್ತಾರೆ. ಆದರೆ ಸ್ವಲ್ಪ ಸಮಯದ ನಂತರ, ಈ ಸಂಬಂಧವು ವಿವಾಹದ ರಕ್ಷಣೆಯನ್ನು ಒದಗಿಸುವುದಿಲ್ಲ ಎಂದು ಅವರು ಅರಿತುಕೊಳ್ಳುತ್ತಾರೆ ಎಂದು ಹೇಳಿದ್ದಾರೆ.

ಲಿವ್-ಇನ್ ಸಂಬಂಧಗಳಲ್ಲಿ ವಾಸಿಸುವ ಮಹಿಳೆಯರಿಗೆ ಪತ್ನಿಯರ ಸ್ಥಾನಮಾನವನ್ನು ನೀಡಬೇಕು ಮತ್ತು ಅವರನ್ನು ರಕ್ಷಿಸಬೇಕು ಎಂದು ನ್ಯಾಯಾಧೀಶರು ಹೇಳಿಕೆಯಿಂದ ಸಂಬಂಧದಲ್ಲಿನ ಕಷ್ಟದ ಸಮಯದಲ್ಲೂ ಅವರು ಹೆಂಡತಿಯ ಹಕ್ಕುಗಳನ್ನು ಪಡೆಯಬಹುದು.

ಲಿವ್-ಇನ್ ಸಂಬಂಧಗಳಲ್ಲಿ ಮಹಿಳೆಯರಿಗೆ ಕಾನೂನು ರಕ್ಷಣೆ ಸಿಗುತ್ತಿಲ್ಲ ಎಂದು ಅರಿತಿರುವ ನ್ಯಾಯಾಧೀಶರು, ಮಹಿಳೆಯರ ಒಂದು ವರ್ಗವು ಈ ಪರಿಕಲ್ಪನೆಯ ದೌರ್ಬಲ್ಯಕ್ಕೆ ಬಲಿಯಾಗುತ್ತಿದೆ ''ಲಿವ್-ಇನ್ ಸಂಬಂಧಗಳಿಂದಾಗಿ ಅವರು ಮಾನಸಿಕ ಆಘಾತವನ್ನು ಸಹ ಅನುಭವಿಸುತ್ತಿದ್ದಾರೆ'' ಎಂದು ಅವರು ಹೇಳಿದ್ದಾರೆ.

## ಡೆನ್ಮಾರ್ಕ್‌ನಲ್ಲಿ ಉಗ್ರ ಪ್ರತಿಭಟನೆ


**ನೂಕ್:** ಗ್ರೀನ್‌ಲ್ಯಾಂಡ್‌ನ ರಾಜಧಾನಿ ನೂಕ್‌ನ ಬರ್ಫ ಮತ್ತು ಮಂಜುಗಡ್ಡೆಯ ರಸ್ತೆಗಳ ಮೇಲೆ ಸಾವಿರಾರು ಜನರು ಮೆರವಣಿಗೆ ನಡೆಸಿ, ಅಮೆರಿಕಾದ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರು ಗ್ರೀನ್‌ಲ್ಯಾಂಡ್‌ನ್ನು ಕೊಳ್ಳೆಹೊಡೆಯಲು ಮಾಡುತ್ತಿರುವ ಪ್ರಯತ್ನಗಳಿಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಗ್ರೀನ್ ಲ್ಯಾಂಡ್ ಮಾರಾಟಕ್ಕೆ ಇಲ್ಲ ಎಂದು ಘೋಷಣೆಗಳನ್ನು ಕೂಗುತ್ತಾ ತಮ್ಮ ಸ್ವಾಯತ್ತತೆ ಮತ್ತು ಸ್ವಾತಂತ್ರ್ಯದ ಹಕ್ಕುಗಳನ್ನು ರಕ್ಷಿಸಿಕೊಳ್ಳಲು ಜಗತ್ತಿನ ಇತರೆ ದೇಶಗಳು ನಮಗೆ ಸಹಕರಿಸಬೇಕೆಂದು ಮನವಿ ಮಾಡಿದರು. ಇದು ಗ್ರೀನ್‌ಲ್ಯಾಂಡ್‌ನ ಇತ್ತೀಚಿನ ಇತಿಹಾಸದಲ್ಲೇ ಅತಿ ದೊಡ್ಡ ಪ್ರತಿಭಟನೆ ಎನ್ನಲಾಗಿದೆ. ನೂಕ್‌ನ ಒಟ್ಟು ಜನಸಂಖ್ಯೆಯಲ್ಲಿ ಸುಮಾರು ಕಾಲು ಭಾಗದಷ್ಟು ಜನರು ಈ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಗ್ರೀನ್‌ಲ್ಯಾಂಡ್‌ನ ಪ್ರಧಾನ ಮಂತ್ರಿ ಕಿಮ್ ಕಿಲ್ಸೆನ್ ಸೇರಿದಂತೆ ಎಲ್ಲಾ ವಯೋಮಾನದ ನಾಗರಿಕರು ಈ ಮೆರವಣಿಗೆಯಲ್ಲಿ ಪಾಲ್ಗೊಂಡು, ತಮ್ಮ ಸಂಸ್ಕೃತಿ ಮತ್ತು ಸ್ವಯಂ ಆಡಳಿತವನ್ನು ಕಾಪಾಡಿಕೊಳ್ಳುವ ಪ್ರಾಮುಖ್ಯತೆಯನ್ನು ಒತ್ತಿಹೇಳಿದರು.

## ಬಾಲಕಿ ಮೇಲೆ ಆಸಿಡ್ ದಾಳಿ: ಫೋಟೋಗ್ರಾಫರ್ ಅರೆಸ್ಟ್

**ಜೈಪುರ:** ಅಪರಿಚಿತರೊಂದಿಗೆ ಮಾತನಾಡಲ್ಲ ಎಂದಿದ್ದಕ್ಕೆ ಫೋಟೋಗ್ರಾಫರ್ ಬಾಲಕಿ ಮೇಲೆ ಆಸಿಡ್ ದಾಳಿ ನಡೆಸಿದ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ಓಂಪ್ರಕಾಶ್ ಅಲಿಯಾಸ್ ಜಾನಿ (19) ಕೃತ್ಯ ಎಸಗಿದ ಫೋಟೋಗ್ರಾಫರ್. ಓಂಪ್ರಕಾಶ್ ಮದುವೆಯೊಂದರಲ್ಲಿ ಫೋಟೋಗ್ರಾಫರ್ ಆಗಿ ಹೋಗಿದ್ದ ವೇಳೆ ಬಾಲಕಿಯನ್ನು ನೋಡಿದ್ದಾನೆ. ಬಳಿಕ ಆಕೆಯನ್ನು ಮಾತನಾಡಿಸುವ ಪ್ರಯತ್ನ ಮಾಡಿದ್ದಾನೆ. ಈ ವೇಳೆ ಬಾಲಕಿ ತಾನು ಅಪರಿಚಿತರೊಂದಿಗೆ ಮಾತನಾಡುವುದಿಲ್ಲ ಎಂದು ಆತನಿಗೆ ಬೈದಿದ್ದಾಳೆ. ಇದರಿಂದ ಕೋಪಗೊಂಡ ಫೋಟೋಗ್ರಾಫರ್ ಆಕೆಯ ಮೇಲೆ ಆಸಿಡ್ ದಾಳಿ ಮಾಡಲು ಮುಂದಾಗಿದ್ದಾನೆ. ಈ ಘಟನೆಯ ಬಳಿಕ ಬಾಲಕಿ ಶ್ರೀ ಗಂಗಾನಗರ ಜಿಲ್ಲೆಯ ಸುಭಾಷ್ ಪಾರ್ಕ್ ಪ್ರದೇಶದಲ್ಲಿ ತನ್ನ ಶಾಲೆಯ ಕಡೆಗೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಓಂಪ್ರಕಾಶ್ ಬೈಕ್‌ನಲ್ಲಿ ತೆರಳಿ ಆಕೆಯ ಮೇಲೆ ಆಸಿಡ್ ಬಾಟಲಿ ಎಸೆದಿದ್ದಾನೆ. ಇದರ ಪರಿಣಾಮ ಬಾಲಕಿಯ ಬಟ್ಟೆ ಮತ್ತು ಬೆರಳಿಗೆ ಸುಟ್ಟ ಗಾಯಗಳಾಗಿದೆ. ಇನ್ನು ಆರೋಪಿ ಓಂಪ್ರಕಾಶ್ ಪೊಲೀಸರ ಕೈಗೆ ಸಿಕ್ಕಿ ಬೀಳಬಾರದೆಂದು ತಾನು ಬಂದಿದ್ದ ಬೈಕಿನ ನಂಬರ್ ಪ್ಲೇಟ್ ಅನ್ನು ಬಟ್ಟೆಯಿಂದ ಮರೆಮಾಚಿದ್ದು, ಮುಖವನ್ನು ಬಟ್ಟೆ ಮತ್ತು ಹೆಲ್ಮೆಟ್‌ನಿಂದ ಮುಚ್ಚಿಕೊಂಡು ಅಲ್ಲಿಂದ ಪರಾರಿಯಾಗಿದ್ದಾನೆ.

# ಚಿರಂಜೀವಿ ಕ್ರೇಜ್: ಒಂದೇ ಕುಟುಂಬದ 140 ಮಂದಿಯಿಂದ ಸಿನಿಮಾ ವೀಕ್ಷಣೆ

ಚಿರಂಜೀವಿ ನಟಿಸಿದ ಸಿನಿಮಾಗಳು ಒಂದರ ಹಿಂದೊಂದರಂತೆ ಫ್ಲಾಪ್ ಆಗಿದ್ದವು. ಚಿರಂಜೀವಿ ಎಂದರೆ ಕಲೆಕ್ಷನ್ ಇಲ್ಲದ ನಟ ಎಂಬ ಅಭಿಪ್ರಾಯ ಹೊಸ ತೆಲುಗು ಸಿನಿಮಾ ವೀಕ್ಷಕರಲ್ಲಿ ಮೂಡಿಬಿಟ್ಟಿತ್ತು. ಆದರೆ ನಿಜಕ್ಕೂ ಚಿರಂಜೀವಿಯ ಕ್ರೇಜ್ ಎಂಬುದನ್ನು ಮತ್ತೆ ತೋರಿಸಿದೆ ಅವರ ನಟನೆಯ 'ಮನ ಶಂಕರ ವರ ಪ್ರಸಾದ್ ಗಾರು' ಸಿನಿಮಾ. ಇದಕ್ಕೆ ಸಾಕ್ಷಿ ಎಂಬಂತೆ ಒಂದೇ ಕುಟುಂಬದ 140 ಮಂದಿ ಒಟ್ಟಿಗೆ ಚಿತ್ರಮಂದಿರಕ್ಕೆ ಬಂದು 'ಮನ ಶಂಕರ ವರ ಪ್ರಸಾದ್ ಗಾರು' ಸಿನಿಮಾ ವೀಕ್ಷಿಸಿದ್ದಾರೆ. ಮೆಗಾಸ್ಟಾರ್ ಚಿರಂಜೀವಿ , ತೆಲುಗು ಚಿತ್ರರಂಗದ ಸೂಪರ್ ಸ್ಟಾರ್ ನಟ.



ಆದರೆ ಕಳೆದ ಐದಾರು ವರ್ಷಗಳಿಂದ ಅವರಿಗೆ ಸೂಕ್ತ ಗೆಲುವು ಸಿಕ್ಕಿರಲೇ ಇಲ್ಲ. ನಟಿಸಿದ ಸಿನಿಮಾಗಳು ಒಂದರ ಹಿಂದೊಂದರಂತೆ ಫ್ಲಾಪ್ ಆಗಿದ್ದವು. ಚಿರಂಜೀವಿ ಎಂದರೆ ಕಲೆಕ್ಷನ್ ಇಲ್ಲದ ನಟ ಎಂಬ ಅಭಿಪ್ರಾಯ ಹೊಸ ತೆಲುಗು ಸಿನಿಮಾ ವೀಕ್ಷಕರಲ್ಲಿ ಮೂಡಿಬಿಟ್ಟಿತ್ತು. ಆದರೆ ನಿಜಕ್ಕೂ ಚಿರಂಜೀವಿಯ ಕ್ರೇಜ್ ಎಂಬುದನ್ನು ಮತ್ತೆ ತೋರಿಸಿದೆ ಅವರ ನಟನೆಯ 'ಮನ ಶಂಕರ ವರ ಪ್ರಸಾದ್ ಗಾರು' ಸಿನಿಮಾ. ಇದಕ್ಕೆ ಸಾಕ್ಷಿ ಎಂಬಂತೆ ಒಂದೇ ಕುಟುಂಬದ 140 ಮಂದಿ ಒಟ್ಟಿಗೆ ಚಿತ್ರಮಂದಿರಕ್ಕೆ ಬಂದು 'ಮನ ಶಂಕರ ವರ ಪ್ರಸಾದ್ ಗಾರು' ಸಿನಿಮಾ ವೀಕ್ಷಿಸಿದ್ದಾರೆ. ಇದೀಗ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ವೈರಲ್ ಆಗಿದ್ದು ಒಂದೇ ಕುಟುಂಬಕ್ಕೆ ಸೇರಿದ 140 ಮಂದಿ ಒಟ್ಟಿಗೆ ಚಿತ್ರಮಂದಿರಕ್ಕೆ ತೆರಳಿ ಮೆಗಾಸ್ಟಾರ್ ಚಿರಂಜೀವಿ ನಟನೆಯ 'ಮನ ಶಂಕರ ವರ ಪ್ರಸಾದ್ ಗಾರು' ಸಿನಿಮಾ ವೀಕ್ಷಿಸಿದ್ದಾರೆ. ಟ್ರ್ಯಾಕ್ಟರ್, ಕಾರು, ಬಸ್ಸುಗಳಲ್ಲಿ ಒಂದೇ ಕುಟುಂಬದ ಮಂದಿ ಚಿತ್ರಮಂದಿರಕ್ಕೆ ಹೋಗುತ್ತಿರುವ ವಿಡಿಯೋ ಇದೀಗ ವೈರಲ್ ಆಗುತ್ತಿದೆ. ಇದಲ್ಲವೇ 'ಬಾಸ್ ಕ್ರೇಜು' ಎಂದು ಅಭಿಮಾನಿಗಳು ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುತ್ತಿದ್ದಾರೆ.

# ಗಿಲ್ಲಿನ ಗಗನಾ ಅವಾಯ್ಡ್ ಮಾಡಿದ್ದು ಯಾಕೆ




'ಬಿಗ್ ಬಾಸ್ ಕನ್ನಡ ಸೀಸನ್ 12' ವಿನ್ನರ್ ಆಗಿರುವ ಗಿಲ್ಲಿ ನಟ ಅವರ ಬಗ್ಗೆ ಎಲ್ಲ ಕಡೆ ಚರ್ಚೆ ಆಗುತ್ತಿದೆ. ಬಿಗ್ ಬಾಸ್ ಮನೆಯಲ್ಲಿ ಗಿಲ್ಲಿ ನಟ ಮತ್ತು ಕಾವ್ಯಾ ಶೈವ ಅವರು ಕ್ಲೋಸ್ ಆಗಿದ್ದರು. ಅದರಿಂದ ಕಾವ್ಯಾ ಅವರಿಗೆ ಹಲವು ಬಾರಿ ಕಿರಿಕಿರಿ ಆಗಿದ್ದು ಕೂಡ ಉಂಟು. ಯಾವಾಗಲೂ ಗಿಲ್ಲಿ ತಮಾಷೆ ಮಾಡುತ್ತಾರೆ. ಆದರೆ ಅದು ಕೆಲವೊಮ್ಮೆ ಅತಿಯಾಗುತ್ತದೆ. ಇದರಿಂದಾಗಿ ಕಾವ್ಯಾ ಟ್ರೋಲ್ ಆಗುವ ಸನ್ನಿವೇಶ ಕೂಡ ಎದುರಾಗುತ್ತದೆ. ಈ ಮೊದಲು ಗಿಲ್ಲಿ ಜೊತೆ ರಿಯಾಲಿಟಿ ಶೋಗಳಲ್ಲಿ ಕಾಣಿಸಿಕೊಂಡಿದ್ದ ಗಗನಾ ಅವರನ್ನೂ ಜನರು ಟ್ರೋಲ್ ಮಾಡಿದ್ದರು. ಆ ಬಗ್ಗೆ ಈಗ ಕಾವ್ಯಾ ಶೈವ ಅವರು ಪ್ರತಿಕ್ರಿಯೆ ನೀಡಿದ್ದಾರೆ.

'ಇದರ ಬಗ್ಗೆ ನಾನು ಮತ್ತು ಗಿಲ್ಲಿ ಬಿಗ್ ಬಾಸ್ ಮನೆಯೊಳಗೆ ಮಾತನಾಡಿದ್ದೆವು. ಅದು ಪ್ರಸಾರ ಆಗಿದೆಯೋ ಇಲ್ಲವೋ ಗೊತ್ತಿಲ್ಲ. ಪ್ರಾಯಶಃ ಗಗನಾ ಈಗ ಗಿಲ್ಲಿಯನ್ನು ಯಾಕೆ ಅವಾಯ್ಡ್ ಮಾಡಿರಬಹುದು ಒಂದು ಸ್ನೇಹ ಜನರಿಗೆ ಇಷ್ಟ ಆಗಿರುತ್ತದೆ. ಅದು ಬೇರೆ ರೀತಿ ಬಿಂಬಿತ ಆಗುತ್ತಿದೆ ಎಂದಾಗ ಹುಡುಗಿಯಾಗಿ ಗಗನಾ ತನ್ನ ನಿರ್ಧಾರ ತೆಗೆದುಕೊಂಡಿದ್ದಾಳೆ ಅಂತ ಹೇಳಲು ನಾನು ಇಷ್ಟಪಡುತ್ತೇನೆ' ಎಂದಿದ್ದಾರೆ ಕಾವ್ಯಾ ಶೈವ.

'ಹಾಗಂತ, ನನಗೆ ನೀವು ಪದೇಪದೇ ಏನೋ ಹೇಳಿದರೆ ನಾನು ಅವಾಯ್ಡ್ ಮಾಡುತ್ತೇನೆ ಅಂತೇನಿಲ್ಲ. ನಾನು ಗಿಲ್ಲಿ ನಂಬರ್ ಬ್ಲಾಕ್ ಮಾಡುತ್ತೇನೆ ಅಂತ ಹೇಳಿದ್ದನ್ನು ಕೂಡ ಜನರು ಸೀರಿಯಸ್ ಆಗಿ ತೆಗೆದುಕೊಂಡಿದ್ದಾರೆ. ಸ್ನೇಹದಲ್ಲಿ ನಾವು ಜಗಳ ಆಡುತ್ತಿದ್ವಿ, ಇಷ್ಟಪಡುತ್ತಿದ್ವಿ. ರೇಗಿಸಿದರೆ ಬ್ಲಾಕ್ ಮಾಡುತ್ತೇನೆ ಎಂಬುದನ್ನು ನಾನು ಯಾವ ಉದ್ದೇಶದಲ್ಲಿ ಹೇಳಿದ್ದೇನೆ ಅಂತ ನಿಮಗೆ ಗೊತ್ತಿದೆ. ಅದನ್ನು ನೀವು ಸೀರಿಯಸ್ ಆಗಿ ತೆಗೆದುಕೊಂಡರೆ, ಅದಕ್ಕೆ ನಾನು ಏನು ಹೇಳಬೇಕು ಎಂಬುದು ಗೊತ್ತಿಲ್ಲ' ಎಂದಿದ್ದಾರೆ ಕಾವ್ಯಾ.

# ಹ್ಯಾಟ್ರಿಕ್ ಹೀರೋ ಜೊತೆ ಶ್ರೀಲೀಲಾ

ಕನ್ನಡದ ನಟಿ ಶ್ರೀಲೀಲಾ, ಟಾಲಿವುಡ್‌ನ ಟಾಪ್ ನಟಿಯಾದ ಬಳಿಕ ಇದೀಗ ಬಾಲಿವುಡ್ ಹಾಗೂ ತಮಿಳು ಚಿತ್ರರಂಗಕ್ಕೂ ಕಾಲಿಟ್ಟಿದ್ದೂ ಎರಡೂ ಕಡೆ ಒಂದರ ಹಿಂದೊಂದು ದೊಡ್ಡ ಸಿನಿಮಾ ಅವಕಾಶಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಈಗಂತೂ ಅವರು 'ಹ್ಯಾಟ್ರಿಕ್ ಹೀರೋ' ಜೊತೆಗೆ ಹೊಸ ಸಿನಿಮಾನಲ್ಲಿ ನಟಿಸುತ್ತಿದ್ದಾರೆ! ಶ್ರೀಲೀಲಾ ಕನ್ನಡದ ನಟಿ ಆದರೆ ಈಗ ಪರ ಭಾಷೆಗಳಲ್ಲಿ ಹೆಚ್ಚು ಮಿಂಚುತ್ತಿದ್ದಾರೆ. ಕನ್ನಡದ 'ಕಿಸ್' ಸಿನಿಮಾ ಮೂಲಕ ನಾಯಕಿಯಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟ ಶ್ರೀಲೀಲಾ, 2022 ರ ಸಿನಿಮಾ 'ಧಮಾಕ' ಮೂಲಕ ತೆಲುಗು ಚಿತ್ರರಂಗದಲ್ಲಿ ನೆಲೆ ಕಂಡುಕೊಂಡರು. 'ಧಮಾಕ' ಸಿನಿಮಾದ ಬಳಿಕ ಬಲು ಬೇಗನೇ ತೆಲುಗು ಚಿತ್ರರಂಗದ ಟಾಪ್ ನಟಿಯಾದ ಶ್ರೀಲೀಲಾ, ಇದೀಗ ಬಾಲಿವುಡ್ ಹಾಗೂ ತಮಿಳು ಚಿತ್ರರಂಗಕ್ಕೂ ಕಾಲಿಟ್ಟಿದ್ದೂ ಎರಡೂ ಕಡೆ ಒಂದರ ಹಿಂದೊಂದು ದೊಡ್ಡ ಸಿನಿಮಾ ಅವಕಾಶಗಳನ್ನು ಪಡೆದುಕೊಳ್ಳುತ್ತಿದ್ದಾರೆ.



ಈಗಂತೂ ಅವರು 'ಹ್ಯಾಟ್ರಿಕ್ ಹೀರೋ' ಜೊತೆಗೆ ಹೊಸ ಸಿನಿಮಾನಲ್ಲಿ ನಟಿಸುತ್ತಿದ್ದಾರೆ! 'ಹ್ಯಾಟ್ರಿಕ್ ಹೀರೋ' ಎಂದೊಡೆ ಶಿವರಾಜ್ ಕುಮಾರ್ ಜೊತೆಗೆ ನಟಿಸುತ್ತಿದ್ದಾರೆ ಎಂದಲ್ಲ. ಬದಲಿಗೆ ಶ್ರೀಲೀಲಾ ನಟಿಸುತ್ತಿರುವುದು ತಮಿಳಿನ ಹ್ಯಾಟ್ರಿಕ್ ಹೀರೋ ಜೊತೆಗೆ. ಅದುವೇ ಪ್ರದೀಪ್ ರಂಗನಾಥನ್. ಸ್ವಂತ ಬಲದ ಮೇಲೆ ತಮಿಳು ಚಿತ್ರರಂಗಕ್ಕೆ ಎಂಟ್ರಿ ಕೊಟ್ಟ ಪ್ರದೀಪ್ ರಂಗನಾಥ್, ಹಲವು ಅಡೆ-ತಡೆ, ಕುಹುಕ, ವ್ಯಂಗ್ಯ, ಅನುಮಾನ, ಅವಮಾನಗಳನ್ನು ದಾಟಿ ಇದೀಗ ಯಶಸ್ವಿ ನಟ ಎನಿಸಿಕೊಂಡಿದ್ದಾರೆ. ಪ್ರದೀಪ್ ರಂಗನಾಥನ್ ನಾಯಕನಾಗಿ ನಟಿಸಿರುವ ಸತತ ಮೂರು ಸಿನಿಮಾಗಳು 100 ಕೋಟಿಗೂ ಹೆಚ್ಚು ಹಣ ಗಳಿಸಿದ್ದು, ಇದೀಗ ಪ್ರದೀಪ್ ಅವರ ನಾಲ್ಕನೇ ಸಿನಿಮಾಕ್ಕೆ ಕನ್ನಡತಿ ಶ್ರೀಲೀಲಾ ನಾಯಕಿ. ಶ್ರೀಲೀಲಾ ನಟಿಸಿರುವ ಮೊದಲ ತಮಿಳು ಸಿನಿಮಾ 'ಪರಾಶಕ್ತಿ' ಇತ್ತೀಚೆಗಷ್ಟೆ ಬಿಡುಗಡೆ ಆಗಿ ಯಶಸ್ಸು ಗಳಿಸಿದೆ. ಅದರ ಬೆನ್ನಲ್ಲೆ ಇದೀಗ ಶ್ರೀಲೀಲಾಗೆ ಎರಡನೇ ತಮಿಳು ಸಿನಿಮಾ ಆಫರ್ ಬಂದಿದ್ದು, ಸಿನಿಮಾದ ನಾಯಕ ಪ್ರದೀಪ್ ರಂಗನಾಥನ್. ವಿಶೇಷವೆಂದರೆ ಈ ಸಿನಿಮಾ ಸಾಮಾನ್ಯಾ ರಾಮ್-ಕಾಮ್ ಸಿನಿಮಾ ಅಲ್ಲ ಬದಲಿಗೆ ಇದೊಂದು ಸೈ-ಫೈ ಸಿನಿಮಾ ಆಗಿದೆ. ಭವಿಷ್ಯದ ಕತೆಯನ್ನು ಸಿನಿಮಾ ಒಳಗೊಂಡಿದೆ. ಸಿನಿಮಾಕ್ಕೆ ಇನ್ನೂ ಹೆಸರಿಟ್ಟಿಲ್ಲ ಆದರೆ ಈ ಸಿನಿಮಾನಲ್ಲಿ ಶ್ರೀಲೀಲಾ ಮಾತ್ರವೇ ಅಲ್ಲದೆ ಮತ್ತೊಬ್ಬ ಖ್ಯಾತ ಯುವನಟಿ ಮೀನಾಕ್ಷಿ ಚೌಧರಿ ಸಹ ನಾಯಕಿ ಆಗಿದ್ದಾರೆ. ಈ ಸಿನಿಮಾಕ್ಕೆ ಕತೆ, ಚಿತ್ರಕತೆಯನ್ನು ಪ್ರದೀಪ್ ಅವರೇ ರಚಿಸಿದ್ದು, ನಿರ್ದೇಶನವನ್ನೂ ಅವರೇ ಮಾಡಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ.

# ಜಯತೀರ್ಥ ಮೆಚ್ಚಿದ ವಿಕಲ್ಪ

ಜನವರಿ 30ರಂದು ಬಿಡುಗಡೆ ಆಗಲಿರುವ 'ವಿಕಲ್ಪ' ಸಿನಿಮಾದ ಟ್ರೇಲರ್ ಡಿಫರೆಂಟ್ ಆಗಿದೆ. ಪೃಥ್ವಿರಾಜ್ ಪಾಟೀಲ್, ನಾಗಶ್ರೀ ಹೆಬ್ಬಾರ್, ಹರಿಣಿ ಶ್ರೀಕಾಂತ್ ಮುಂತಾದವರು ಈ ಚಿತ್ರದಲ್ಲಿ ನಟಿಸಿದ್ದಾರೆ. ಪೋಸ್ಟ್ ಟ್ರಾಮಾಟಿಕ್ ಸ್ಟ್ರೆಸ್ ಡಿಸಾರ್ಡರ್ ಕುರಿತು ಈ ಸಿನಿಮಾದಲ್ಲಿ ತೋರಿಸಲಾಗುತ್ತಿದೆ. ಖ್ಯಾತ ನಿರ್ದೇಶಕ ಜಯತೀರ್ಥ ಅವರು 'ವಿಕಲ್ಪ' ಸಿನಿಮಾದ ಟ್ರೇಲರ್ ಬಿಡುಗಡೆ ಮಾಡಿದ್ದಾರೆ. ಪೃಥ್ವಿರಾಜ್ ಪಾಟೀಲ್ ಅವರು ಈ ಸಿನಿಮಾಗೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಅಲ್ಲದೇ, ಮುಖ್ಯಪಾತ್ರದಲ್ಲಿ ಅಭಿನಯಿಸಿದ್ದಾರೆ. ನಾಗಶ್ರೀ ಹೆಬ್ಬಾರ್ , ಸಂಧ್ಯಾ ವಿನಾಯಕ್, ಹರಿಣಿ ಶ್ರೀಕಾಂತ್, ಗಣಪತಿ ವಡ್ಡಿನಗದ್ದೆ, ಸ್ವರೂಪ್ ಬಚ್ಚ್, ಜಯಂತ್ ಡೇವಿಡ್, ಪೂಜಾ ಬಚ್ಚ್, ಡಾ. ಪ್ರಕೃತಿ, ಗಿರೀಶ್ ಹೆಗಡೆ, ಮಾಸ್ಟರ್ ಆಯುಷ್ ಸಂತೋಷ್ ಕೂಡ ಈ ಸಿನಿಮಾದಲ್ಲಿ ನಟಿಸಿದ್ದಾರೆ. ಜನವರಿ 30ರಂದು 'ವಿಕಲ್ಪ' ಸಿನಿಮಾ ಬಿಡುಗಡೆ ಆಗಲಿದೆ. 'ವಿಕಲ್ಪ' ಸಿನಿಮಾದ ಟ್ರೇಲರ್ ಗಮನ ಸೆಳೆಯುವಂತಿದೆ. ಸಿನಿಮಾದ ಥೀಮ್ ಏನು ಎಂಬುದು ಟ್ರೇಲರ್‌ನಲ್ಲಿ ಕಾಣಿಸಿದೆ. ಪೋಸ್ಟ್ ಟ್ರಾಮಾಟಿಕ್ ಸ್ಟ್ರೆಸ್ ಡಿಸಾರ್ಡರ್ ಎಂಬ ಮಾನಸಿಕ ಸಮಸ್ಯೆಯ ಎಳೆಯನ್ನು ಆಧರಿಸಿ ಈ ಸಿನಿಮಾ ಸಿದ್ಧವಾಗಿದೆ. ಇದು ಸೈಕಾಲಜಿಕಲ್, ಥ್ರಿಲ್ಲರ್ ಕಥಾಹಂದರ ಇರುವ ಸಿನಿಮಾ. 'ಸುರೂಸ್ ಟಾಕೀಸ್' ಬ್ಯಾನರ್ ಮೂಲಕ ಇಂದಿರಾ ಶಿವಸ್ವಾಮಿ ಅವರು ಈ ಸಿನಿಮಾವನ್ನು ನಿರ್ಮಿಸಿದ್ದಾರೆ. ಟ್ರೇಲರ್ ಬಿಡುಗಡೆ ಮಾಡಿ ಜಯತೀರ್ಥ ಅವರು ಮಾತನಾಡಿದರು. 'ಕನ್ನಡ ಚಿತ್ರರಂಗಕ್ಕೆ ಹೊಸ ಪ್ರತಿಭೆಗಳು ಬರುತ್ತಿರುವುದು ಖುಷಿಯ ವಿಷಯ.



ಹೊಸಬರ ಮೂಲಕ ಹೊಸ ಕಲ್ಪನೆ, ಆಲೋಚನೆಗಳು ಸಿನಿಮಾವಾಗಿ ತೆರೆಮೇಲೆ ಅನಾವರಣ ಆಗುತ್ತದೆ. ಹೊಸಬರು ಯಾವಾಗಲೂ ಚಿತ್ರರಂಗಕ್ಕೆ ಜೀವಂತಿಕೆಯನ್ನು ತರುತ್ತಾರೆ. ಈ ಸಿನಿಮಾದ ಕಲಾವಿದರು, ತಂತ್ರಜ್ಞರು ಯಾರೂ ನನಗೆ ಮೊದಲಿನಿಂದ ಪರಿಚಿತರಲ್ಲ. ಆದರೆ ಒಳ್ಳೆಯ ಕಂಟೆಂಟ್ ಇರುವ ಸಿನಿಮಾ ಮಾಡುವ ಅವರ ಪ್ರಾಮಾಣಿಕ ಪ್ರಯತ್ನ ನನಗೆ ಇಷ್ಟ ಆಗಿದ್ದರಿಂದ ಟ್ರೇಲರ್ ಬಿಡುಗಡೆ ಮಾಡಲು ಒಪ್ಪಿಕೊಂಡೆ.

# ಸೀಟ್ ಎಡ್ಜ್ ಟ್ರೇಲರ್ ನೋಡಿದ್ರಾ

ಸಿದ್ದು ಮೂಲಿಮನಿ ನಟನೆಯ 'ಸೀಟ್ ಎಡ್ಜ್' ಸಿನಿಮಾದಲ್ಲಿ ವ್ಲಾಗರ್ ಹುಡುಗನೊಬ್ಬನ ಕಥೆ ಇದೆ. ಘೋಸ್ಟ್ ಹಂಟಿಂಗ್ ಕುರಿತ ಕಥೆಯನ್ನು ಈ ಸಿನಿಮಾದಲ್ಲಿ ತೋರಿಸಲಾಗುತ್ತಿದೆ. ಹಾಗಾಗಿ ಕನ್ನಡದ ಪ್ರಮುಖ ವ್ಲಾಗರ್‌ಗಳ ಕೈಯಿಂದಲೇ ಈ ಸಿನಿಮಾದ ಟ್ರೇಲರ್ ಬಿಡುಗಡೆ ಮಾಡಿಸಲಾಗಿದೆ.

ಈ ಚಿತ್ರದಲ್ಲಿ ಸಿದ್ದು ಮೂಲಿಮನಿ ಅವರು ಹೀರೋ ಆಗಿ ನಟಿಸಿದ್ದು, ರವೀಕ್ಷಾ ಶೆಟ್ಟಿ ನಾಯಕಿ ಆಗಿದ್ದಾರೆ. ರಘು ರಾಮನಕೊಪ್ಪ, ಮಿಮಿಕ್ರಿ ಗೋಪಿ, ಲಕ್ಷ್ಮಿ ಸಿದ್ದಯ್ಯ, ಗಿರೀಶ್ ಶಿವಣ್ಣ, ಕಿರಣ್, ತೇಜು ಪೊನ್ನಪ್ಪ, ಪುನೀತ್ ಬಾಬು, ಮನಮೋಹನ್ ರೈ ಮುಂತಾದವರು ಪಾತ್ರವರ್ಗದಲ್ಲಿ ಇದ್ದಾರೆ. ಜನವರಿ 30ರಂದು 'ಸೀಟ್ ಎಡ್ಜ್' ಸಿನಿಮಾ ರಿಲೀಸ್ ಆಗಲಿದೆ.



ಜನವರಿ 30ರಂದು ಸಿನಿಮಾ ರಿಲೀಸ್

'ಸೀಟ್ ಎಡ್ಜ್' ಸಿನಿಮಾದಲ್ಲಿ ಡಾರ್ಕ್ ಕಾಮಿಡಿ ಕಥೆಯ ಜೊತೆಗೆ ಹಾರರ್ ಮತ್ತು ಥ್ರಿಲ್ಲರ್ ಅಂಶಗಳು ಇರಲಿವೆ. ಈ ಮೊದಲು 'ಕೆಮಿಸ್ಟ್ರೀ ಆಫ್ ಕರಿಯಪ್ಪ', 'ಕ್ರಿಟಿಕಲ್ ಕೀರ್ತನೆಗಳು' ಸಿನಿಮಾಗಳಿಗೆ ಸಹ-ನಿರ್ದೇಶಕನಾಗಿ ಕೆಲಸ ಮಾಡಿದ ಚೇತನ್ ಶೆಟ್ಟಿ ಅವರು ಈಗ 'ಸೀಟ್ ಎಡ್ಜ್' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಕಥೆ, ಚಿತ್ರಕಥೆ ಕೂಡ ಅವರದ್ದೇ. 'ಎನ್.ಆರ್. ಸಿನಿಮಾ ಪ್ರೊಡಕ್ಷನ್ಸ್' ಮೂಲಕ ಗಿರಿಧರ ಟಿ. ವಸಂತಪುರ ಅವರು ನಿರ್ಮಾಣ ಮಾಡಿದ್ದಾರೆ. ಟ್ರೇಲರ್ ಬಿಡುಗಡೆ ವೇಳೆ ಸಿದ್ದು ಮೂಲಿಮನಿ ಮಾತಾಡಿದರು. 'ಇದು ಸಸ್ಪೆನ್ಸ್-ಥ್ರಿಲ್ಲರ್ ಶೈಲಿಯ ಸಿನಿಮಾ. ಮೊದಲ ಬಾರಿಗೆ ನಾನು ಯೂಟ್ಯೂಬ್ ವ್ಲಾಗರ್ ಪಾತ್ರ ಮಾಡಿದ್ದೇನೆ ಎಂದರು.

# ಐರ್ಲೆಂಡ್ ಗ್ರೂಪ್ ಬದಲಿಸಿ ಬಾಂಗ್ಲಾದೇಶ್ ತಂಡದ ಹೊಸ ಬೇಡಿಕೆ!

ಬಾಂಗ್ಲಾದೇಶ ತಂಡವು ಮುಂಬರುವ ಟಿ20 ವಿಶ್ವಕಪ್‌ನ ಮೊದಲ ಸುತ್ತಿನಲ್ಲಿ ಒಟ್ಟು 4 ಪಂದ್ಯಗಳನ್ನಾಡಲಿದೆ. ಮೊದಲ ಮೂರು ಪಂದ್ಯಗಳು ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಿಗದಿಯಾದರೆ, ಕೊನೆಯ ಪಂದ್ಯವನ್ನು ಮುಂಬೈನಲ್ಲಿ ಆಡಬೇಕಿದೆ. ಆದರೆ ಆಟಗಾರರ ಸುರಕ್ಷತೆಯ ದೃಷ್ಟಿಯಿಂದ ಈ ಪಂದ್ಯಗಳನ್ನು ಭಾರತದಿಂದ ಶ್ರೀಲಂಕಾಗೆ ಸ್ಥಳಾಂತರಿಸುವಂತೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ಗೆ ಐಸಿಸಿಗೆ ಮನವಿ ಮಾಡಿದೆ.




ಟಿ20 ವಿಶ್ವಕಪ್ ಆರಂಭಕ್ಕೆ ಇನ್ನು ಉಳಿದಿರುವುದು ಕೆಲವೇ ದಿನಗಳು ಮಾತ್ರ. ಇದಾಗ್ಯೂ ಬಾಂಗ್ಲಾದೇಶ್ ತಂಡ ಈ ಟೂರ್ನಿಯಲ್ಲಿ ಕಣಕ್ಕಿಳಿಯಲಿದೆಯಾ ಎಂಬುದು ಖಚಿತವಾಗಿಲ್ಲ. ಏಕೆಂದರೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ತನ್ನ ಪಂದ್ಯಗಳನ್ನು ಸ್ಥಳಾಂತರ ಮಾಡುವಂತೆ ಐಸಿಸಿಗೆ ಮನವಿ ಮಾಡಿದೆ. ಐಸಿಸಿ ಈ ಮನವಿಯನ್ನು ತಿರಸ್ಕರಿಸಿದರೂ ಬಿಸಿಬಿ ತನ್ನ ನಿಲುವನ್ನು ಬದಲಿಸಿಲ್ಲ. ಇದೀಗ ಐರ್ಲೆಂಡ್ ತಂಡದ ಗ್ರೂಪ್ ಬದಲಿಸಿ ಪಂದ್ಯವಾಡಲು ಅವಕಾಶ ಮಾಡಿಕೊಡುವಂತೆ ಬಾಂಗ್ಲಾದೇಶ್ ಕ್ರಿಕೆಟ್ ಮಂಡಳಿ ಹೊಸ ಬೇಡಿಕೆಯನ್ನಿಟ್ಟಿದೆ. ಮುಂಬರುವ ಟಿ20 ವಿಶ್ವಕಪ್‌ನಲ್ಲಿ ಐರ್ಲೆಂಡ್ ತಂಡವು ಗ್ರೂಪ್-2 ನಲ್ಲಿ ಕಾಣಿಸಿಕೊಂಡಿದೆ. ಅತ್ತ ಬಾಂಗ್ಲಾದೇಶ್ ತಂಡವಿರುವುದು ಗ್ರೂಪ್-3 ನಲ್ಲಿ. ಇದೀಗ ನಮ್ಮನ್ನು ಗ್ರೂಪ್-2 ಕ್ಕೆ ಸೇರಿಸಿ ಐರ್ಲೆಂಡ್ ತಂಡವನ್ನು ಗ್ರೂಪ್-3 ನಲ್ಲಿ ಕಣಕ್ಕಿಳಿಯುವಂತೆ ಮಾಡಬೇಕೆಂದು ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಐಸಿಸಿಗೆ ಮನವಿ ಮಾಡಿದೆ. ಭಾರತದಲ್ಲಿನ ತನ್ನ ಪಂದ್ಯಗಳನ್ನು ಶ್ರೀಲಂಕಾಗೆ ಸ್ಥಳಾಂತರಿಸುವಂತೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಆಗ್ರಹಿಸುತ್ತಿದೆ. ಬಾಂಗ್ಲಾ ಬೇಡಿಕೆಗೆ ಐಸಿಸಿ ಸಮ್ಮತಿ ಸೂಚಿಸಿಲ್ಲ. ಇದೀಗ ಗ್ರೂಪ್ ಸ್ವಾಪ್ ಮಾಡುವಂತೆ ಬಿಸಿಬಿ ಹೊಸ ಬೇಡಿಕೆಯನ್ನಿಟ್ಟಿದೆ.

ಈ ಬೇಡಿಕೆಗೆ ಮುಖ್ಯ ಕಾರಣ, ಗ್ರೂಪ್-2 ನಲ್ಲಿರುವ ಐರ್ಲೆಂಡ್ ತಂಡವು ತನ್ನೆಲ್ಲಾ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡುತ್ತಿರುವುದು. ಐರ್ಲೆಂಡ್ ಲೀಗ್ ಹಂತದಲ್ಲಿ ಆಡಲಿರುವ 4 ಪಂದ್ಯಗಳನ್ನೂ ಶ್ರೀಲಂಕಾದ ಆರ್. ಪ್ರೇಮದಾಸ ಹಾಗೂ ಪಲ್ಲೆಕೆಲೆ ಸ್ಟೇಡಿಯಂಗಳಲ್ಲಿ ಆಡಲಿದೆ. ಇತ್ತ ಗ್ರೂಪ್ ಸ್ವಾಪ್ ಮಾಡುವುದರಿಂದ ಬಾಂಗ್ಲಾದೇಶ್ ತಂಡವು ಲೀಗ್ ಹಂತದ ಎಲ್ಲಾ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಬಹುದು. ಈ ಮೂಲಕ ಪಂದ್ಯಗಳ ಸ್ಥಳಾಂತರದ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದು.

ಇದೇ ಪ್ಲ್ಯಾನಿಂಗ್‌ನೊಂದಿಗೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಇದೀಗ ಗ್ರೂಪ್ ಸ್ವಾಪ್‌ಗಾಗಿ ಬೇಡಿಕೆಯನ್ನಿಟ್ಟಿದೆ. ಅದರಂತೆ ಗ್ರೂಪ್-2 ನಲ್ಲಿರುವ ಐರ್ಲೆಂಡ್ ತಂಡವು ಗ್ರೂಪ್-3 ನಲ್ಲಿ, ಗ್ರೂಪ್-3 ನಲ್ಲಿರುವ ಬಾಂಗ್ಲಾದೇಶ್ ಗ್ರೂಪ್-2 ನಲ್ಲಿ ಕಣಕ್ಕಿಳಿಯಲಿದೆಯಾ ಕಾದು ನೋಡಬೇಕಿದೆ.

# 329 ರನ್‌ಗಳ ವಿಶ್ವ ದಾಖಲೆಯ ವಿಜಯ



101 ಎಸೆತಗಳಲ್ಲಿ 125 ರನ್

ಸೌತ್ ಆಫ್ರಿಕಾ ತಂಡದ ಈ ಅಮೋಘ ಗೆಲುವು ಅಂಡರ್-19 ವಿಶ್ವಕಪ್‌ನಲ್ಲಿ ಮೂಡಿಬಂದ 2ನೇ ದಾಖಲೆಯ ವಿಜಯ. ಅಂದರೆ ಕಿರಿಯರ ವಿಶ್ವಕಪ್‌ನಲ್ಲಿ ಅತ್ಯಧಿಕ ರನ್‌ಗಳ ಅಂತರದಿಂದ ಗೆದ್ದ 2ನೇ ತಂಡವೆಂಬ ಹೆಗ್ಗಳಿಕೆಯನ್ನು ಸೌತ್ ಆಫ್ರಿಕಾ ತಂಡ ತನ್ನದಾಗಿಸಿಕೊಂಡಿದೆ. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಆಸ್ಟ್ರೇಲಿಯಾ.

ಅಂಡರ್-19 ವಿಶ್ವಕಪ್‌ನ 14ನೇ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡ ಅಮೋಘ ಜಯ ಸಾಧಿಸಿದೆ. ಅದು ಕೂಡ ಬರೋಬ್ಬರಿ 329 ರನ್‌ಗಳ ಅಂತರದಿಂದ ಎಂಬುದು ವಿಶೇಷ. ನಮೀಬಿಯಾದ ಹೈ ಫರ್ಫಾರ್ಮೆನ್ಸ್ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಸೌತ್ ಆಫ್ರಿಕಾ ಹಾಗೂ ತಂಝಾನಿಯಾ ತಂಡಗಳು ಮುಖಾಮುಖಿಯಾಗಿದ್ದವು.

ಈ ಮ್ಯಾಚ್‌ನಲ್ಲಿ ಟಾಸ್ ಗೆದ್ದ ತಂಝಾನಿಯಾ ತಂಡದ ನಾಯಕ ಲಕ್ಷ್ ಬಕ್ರಾನಿಯಾ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ ತಂಡಕ್ಕೆ ಜೋರಿಚ್ ವ್ಯಾನ್ (47) ಹಾಗೂ ಅದ್ನಾನ್ (32) ಉತ್ತಮ ಆರಂಭ ಒದಗಿಸಿದ್ದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ನಾಯಕ ಮುಹಮ್ಮದ್ ಬುಲ್ಬುಲಿಯಾ 108 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 108 ರನ್ ಬಾರಿಸಿದರು.ಹಾಗೆಯೇ ನಾಲ್ಕನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಜೇಸನ್ ರೌಲ್ಸ್ 5 ಭರ್ಜರಿ ಸಿಕ್ಸ್ ಹಾಗೂ 10 ಫೋರ್‌ಗಳನ್ನು ಒಳಗೊಂಡಂತೆ 101 ಎಸೆತಗಳಲ್ಲಿ 125 ರನ್ ಸಿಡಿಸಿದರು. ಇನ್ನು ಅಂತಿಮ ಹಂತದಲ್ಲಿ ಬ್ಯಾಟ್ ಬೀಸಿದ ಪೌಲ್ ಜೇಮ್ಸ್ 18 ಎಸೆತಗಳಲ್ಲಿ 46 ರನ್ ಚಚ್ಚಿದರು. ಈ ಮೂಲಕ ಸೌತ್ ಆಫ್ರಿಕಾ ತಂಡವು 50 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು ಬರೋಬ್ಬರಿ 397 ರನ್ ಕಲೆಹಾಕಿತು.

**398 ರನ್‌ಗಳ ಕಠಿಣ ಗುರಿ:** 300 ಎಸೆತಗಳಲ್ಲಿ 398 ರನ್‌ಗಳ ಗುರಿ ಪಡೆದ ತಂಝಾನಿಯಾ ತಂಡವು ಕೇವಲ 13 ರನ್‌ಗಳಿಸುವಷ್ಟರಲ್ಲಿ 4 ವಿಕೆಟ್ ಕಳೆದುಕೊಂಡಿತು. ಅಲ್ಲದೆ 20 ಓವರ್ ಪೂರ್ಣಗೊಳ್ಳುವ ಮೂಲಕ ತಂಝಾನಿಯಾದ 6 ಬ್ಯಾಟರ್‌ಗಳು ಪೆವಿಲಿಯನ್‌ಗೆ ಮರಳಿದ್ದರು. ಇದಾದ ಬಳಿಕ 9 ರನ್‌ಗಳಿಸುಷ್ಟರಲ್ಲಿ ಉಳಿದ 4 ಬ್ಯಾಟರ್‌ಗಳು ಕೂಡ ಔಟಾದರು. ಪರಿಣಾಮ ತಂಝಾನಿಯಾ ತಂಡವು ಕೇವಲ 68 ರನ್‌ಗಳಿಗೆ ಸರ್ವಪತನ ಕಂಡಿತು. ಈ ಮೂಲಕ ಸೌತ್ ಆಫ್ರಿಕಾ ತಂಡ 329 ರನ್‌ಗಳ ಅಮೋಘ ಜಯ ಸಾಧಿಸಿದೆ.

**ವಿಶ್ವ ದಾಖಲೆ:** ಸೌತ್ ಆಫ್ರಿಕಾ ತಂಡದ ಈ ಅಮೋಘ ಗೆಲುವು ಅಂಡರ್-19 ವಿಶ್ವಕಪ್‌ನಲ್ಲಿ ಮೂಡಿಬಂದ 2ನೇ ದಾಖಲೆಯ ವಿಜಯ. ಅಂದರೆ ಕಿರಿಯರ ವಿಶ್ವಕಪ್‌ನಲ್ಲಿ ಅತ್ಯಧಿಕ ರನ್‌ಗಳ ಅಂತರದಿಂದ ಗೆದ್ದ 2ನೇ ತಂಡವೆಂಬ ಹೆಗ್ಗಳಿಕೆಯನ್ನು ಸೌತ್ ಆಫ್ರಿಕಾ ತಂಡ ತನ್ನದಾಗಿಸಿಕೊಂಡಿದೆ. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಆಸ್ಟ್ರೇಲಿಯಾ ತಂಡ. 2002ರ ಅಂಡರ್-19 ವಿಶ್ವಕಪ್‌ನಲ್ಲಿ ಫಿಜಿ ವಿರುದ್ಧ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡವು 50 ಓವರ್‌ಗಳಲ್ಲಿ ಕಲೆಹಾಕಿದ್ದು ಬರೋಬ್ಬರಿ 480 ರನ್‌ಗಳು. ಈ ಗುರಿಯನ್ನು ಬೆನ್ನತ್ತಿದ ಫಿಜಿ ತಂಡ ಕೇವಲ 50 ರನ್‌ಗಳಿಗೆ ಆಲೌಟ್ ಆಗಿದ್ದರು. ಈ ಮೂಲಕ ಅಂಡರ್-19 ವಿಶ್ವಕಪ್‌ನಲ್ಲಿ 430 ರನ್‌ಗಳ ಅಂತರದ ಗೆಲುವು ದಾಖಲಿಸಿ ಆಸ್ಟ್ರೇಲಿಯಾ ತಂಡ ಹೊಸ ಇತಿಹಾಸ ಬರೆದಿದ್ದರು. ಇದೀಗ ಸೌತ್ ಆಫ್ರಿಕಾ ತಂಡ 329 ರನ್‌ಗಳ ಗೆಲುವಿನೊಂದಿಗೆ ಈ ಪಟ್ಟಿಯಲ್ಲಿ ದ್ವಿತೀಯ ಸ್ಥಾನವನ್ನು ಅಲಂಕರಿಸಿದೆ.

# ಸರಣಿ ಆರಂಭಕ್ಕೂ ಮುನ್ನವೇ ಆಘಾತ

ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಟಿ20 ಸರಣಿಯು ಜನವರಿ 21 ರಿಂದ ಶುರುವಾಗಲಿದೆ. ಈ ಸರಣಿಯಲ್ಲಿ ಉಭಯ ತಂಡಗಳು ಒಟ್ಟು 5 ಪಂದ್ಯಗಳನ್ನಾಡಲಿದೆ. ಈ ಸರಣಿಯ ಮುಕ್ತಾಯದ ಬೆನ್ನಲ್ಲೇ ಎರಡೂ ತಂಡಗಳು ಟಿ20 ವಿಶ್ವಕಪ್‌ನಲ್ಲಿ ಕಣಕ್ಕಿಳಿಯಲಿವೆ. ಭಾರತ ಮತ್ತು ನ್ಯೂಝಿಲೆಂಡ್ ನಡುವಣ 5 ಪಂದ್ಯಗಳ ಟಿ20 ಸರಣಿಯು ಶುರುವಾಗಲಿದೆ.



ಈ ಸರಣಿ ಆರಂಭಕ್ಕೂ ಮುನ್ನವೇ ಕಿವೀಸ್ ಪಡೆಗೆ ಆಘಾತ ಎದುರಾಗಿದೆ. ತಂಡದ ಪ್ರಮುಖ ಆಟಗಾರ ಮೈಕೆಲ್ ಬ್ರೇಸ್‌ವೆಲ್ ಇಡೀ ಸರಣಿಯಿಂದ ಹೊರಗುಳಿಯಲಿದ್ದಾರೆ ಎಂದು ವರದಿಯಾಗಿದೆ. ಇಂದೋರ್‌ನಲ್ಲಿ ನಡೆದ ಭಾರತದ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ಕಣಕ್ಕಿಳಿದಿದ್ದ ಮೈಕೆಲ್ ಬ್ರೇಸ್‌ವೆಲ್ ಕಾಲು ನೋವಿಗೆ ಒಳಗಾಗಿ ಮೈದಾನ ತೊರೆದಿದ್ದರು. ಇದೀಗ ಈ ಗಾಯದ ಕಾರಣ ಸಂಪೂರ್ಣ ಟೂರ್ನಿಯಿಂದ ಹೊರಗುಳಿಯಲು ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ. ಮೈಕೆಲ್ ಬ್ರೇಸ್‌ವೆಲ್ ಅಲಭ್ಯತೆಯು ನ್ಯೂಝಿಲೆಂಡ್ ಪಾಲಿಗೆ ಹಿನ್ನಡೆಯಾಗುವುದರಲ್ಲಿ ಡೌಟೇ ಇಲ್ಲ ಏಕೆಂದರೆ ಭಾರತದ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ನಾಯಕನಾಗಿ ಕಣಕ್ಕಿಳಿದಿದ್ದೇ ಬ್ರೇಸ್‌ವೆಲ್. ಭಾರತೀಯ ಬ್ಯಾಟರ್‌ಗಳ ವಿರುದ್ಧ ರಣತಂತ್ರ ಹೆಣೆಯುವಲ್ಲಿ ಯಶಸ್ವಿಯಾಗಿದ್ದ ಬ್ರೇಸ್‌ವೆಲ್ ಟಿ20 ಸರಣಿಯಲ್ಲಿ ನ್ಯೂಝಿಲೆಂಡ್ ಪಾಲಿಗೆ ಅನಿವಾರ್ಯವಾಗಿತ್ತು. ಆದರೀಗ ಸರಣಿ ಆರಂಭಕ್ಕೆ ದಿನಗಳಿರುವಾಗ ಅವರು ಐದೂ ಮ್ಯಾಚ್‌ಗಳಿಂದಲೂ ಹೊರಗುಳಿಯಲಿದ್ದಾರೆ ಎಂದು ತಿಳಿದು ಬಂದಿದೆ. ಇನ್ನು ಮೈಕೆಲ್ ಬ್ರೇಸ್‌ವೆಲ್ ಹೊರಗುಳಿದರೆ ನ್ಯೂಝಿಲೆಂಡ್ ಪರ ಮಧ್ಯಮ ಕ್ರಮಾಂಕದಲ್ಲಿ ಹೇಮ್ಸ್ ನೀಶಮ್ ಕಣಕ್ಕಿಳಿಯುವ ಸಾಧ್ಯತೆಯಿದೆ. ಏಕೆಂದರೆ ನೀಶಮ್ ಕೂಡ ಆಲ್‌ರೌಂಡರ್ ಆಟಗಾರ. ಅದರಲ್ಲೂ ಅನುಭವಿ ಆಟಗಾರ. ಹೀಗಾಗಿ ಮೊದಲ ಟಿ20 ಪಂದ್ಯದಲ್ಲಿ ಬ್ರೇಸ್‌ವೆಲ್ ಬದಲಿಗೆ ಜೇಮ್ಸ್ ನೀಶಮ್‌ಗೆ ಅವಕಾಶ ಸಿಗುವ ಸಾಧ್ಯತೆ ಹೆಚ್ಚಿದೆ.



**ನ್ಯೂಝಿಲೆಂಡ್ ಟಿ20 ತಂಡ:** ಮಿಚೆಲ್ ಸ್ಯಾಂಟ್ನರ್ (ನಾಯಕ), ಮಾರ್ಕ್ ಚಾಪ್ಮನ್, ಡೆವೊನ್ ಕಾನ್ವೆ (ವಿಕೆಟ್ ಕೀಪರ್), ಜೇಕಬ್ ಡಫಿ, ಝ್ಯಾಕ್ ಫೌಲ್ಕ್ಸ್, ಮ್ಯಾಟ್ ಹೆನ್ರಿ, ಕೈಲ್ ಜೇಮಿಸನ್, ಬೆವೊನ್ ಜೇಕಬ್ಸ್, ಡೇರಿಲ್ ಮಿಚೆಲ್, ಜೇಮ್ಸ್ ನೀಶಮ್, ಗ್ಲೆನ್ ಫಿಲಿಪ್ಸ್, ರಚಿನ್ ರವೀಂದ್ರ, ಟಿಮ್ ರಾಬಿನ್ಸನ್, ಇಶ್ ಸೋಧಿ, ಮೈಕೆಲ್ ಬ್ರೇಸ್‌ವೆಲ್ (ಡೌಟ್).

# ನೇರವಾಗಿ ಫೈನಲ್‌ಗೇರಲು ಇನ್ನೆಷ್ಟು ಪಂದ್ಯ ಗೆಲ್ಲಬೇಕು



ಮೂರು ಮ್ಯಾಚ್‌ಗಳಲ್ಲಿ ಒಂದು ಗೆಲುವು

ವುಮೆನ್ಸ್ ಪ್ರೀಮಿಯರ್ ಲೀಗ್ ಸೀಸನ್-4 ರಲ್ಲಿ ಕೇವಲ 5 ಪಂದ್ಯಗಳ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪ್ಲೇಆಫ್‌ಗೆ ಪ್ರವೇಶಿಸಿದೆ. ಆಡಿರುವ ಐದು ಮ್ಯಾಚ್‌ಗಳಲ್ಲೂ ಗೆಲ್ಲುವ ಮೂಲಕ ಆರ್‌ಸಿಬಿ ಪಡೆ ಒಟ್ಟು 10 ಅಂಕಗಳನ್ನು ಪಡೆದಿದ್ದು, ಈ ಮೂಲಕ ಟಾಪ್-3 ನಲ್ಲಿ ತನ್ನ ಸ್ಥಾನವನ್ನು ಭದ್ರಪಡಿಸಿಕೊಂಡಿದೆ.

ಇತ್ತ ಪ್ಲೇಆಫ್ ಆಡುವುದನ್ನು ಖಚಿತಪಡಿಸಿಕೊಂಡಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ನೇರವಾಗಿ ಫೈನಲ್‌ಗೇರಲು ಉತ್ತಮ ಅವಕಾಶವಿದೆ. ಅಂದರೆ ವುಮೆನ್ಸ್ ಪ್ರೀಮಿಯರ್ ಲೀಗ್‌ನಲ್ಲಿ ಪ್ಲೇಆಫ್ ಆಡಲಿರುವುದು ಅಂಕ ಪಟ್ಟಿಯಲ್ಲಿ ಟಾಪ್-3 ಸ್ಥಾನಗಳನ್ನು ಪಡೆದಿರುವ ತಂಡಗಳು. ಅದರಲ್ಲೂ ಲೀಗ್ ಹಂತದ ಮುಕ್ತಾಯದ ವೇಳೆ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನ ಅಲಂಕರಿಸುವ ತಂಡವು ನೇರವಾಗಿ ಫೈನಲ್‌ಗೆ ಅರ್ಹತೆ ಪಡೆಯುತ್ತದೆ. ಇನ್ನುಳಿದ ಎರಡು ತಂಡಗಳು ಎಲಿಮಿನೇಟರ್ ಪಂದ್ಯವಾಡಲಿದೆ ಇದರಲ್ಲಿ ಗೆಲ್ಲುವ ತಂಡವು ಫೈನಲ್‌ಗೆ ಪ್ರವೇಶಿಸುತ್ತದೆ. ಇದೀಗ ಅಂಕ ಪಟ್ಟಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಮೊದಲ ಸ್ಥಾನದಲ್ಲಿದೆ.

ಹೀಗಾಗಿ ಇನ್ನುಳಿದ ಮೂರು ಮ್ಯಾಚ್‌ಗಳಲ್ಲಿ ಒಂದು ಗೆಲುವು ದಾಖಲಿಸಿದರೆ ಫೈನಲ್ ಆಡುವುದು ಖಚಿತವಾಗಲಿದೆ. ಏಕೆಂದರೆ ಆರ್‌ಸಿಬಿ ತಂಡವನ್ನು ಹೊರತುಪಡಿಸಿ ಯಾವುದೇ ತಂಡಕ್ಕೆ 12 ಅಂಕಗಳನ್ನು ಗಳಿಸಲು ಅವಕಾಶವಿಲ್ಲ. ಎಲ್ಲಾ ತಂಡಗಳು ಈಗಾಗಲೇ ಐದು ಮ್ಯಾಚ್‌ಗಳನ್ನಾಡಿದ್ದು, ಇದರಲ್ಲಿ ಮುಂಬೈ ಇಂಡಿಯನ್ಸ್, ಗುಜರಾತ್ ಜೈಂಟ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ತಲಾ 2 ಗೆಲುವು ದಾಖಲಿಸಿ ಒಟ್ಟು 4 ಅಂಕಗಳನ್ನು ಪಡೆದುಕೊಂಡಿದೆ. ಇನ್ನುಳಿದ ಮೂರು ಮ್ಯಾಚ್‌ಗಳಲ್ಲಿ ಗೆದ್ದರೂ ಈ ತಂಡಗಳ ಒಟ್ಟು 10 ಅಂಕಗಳ ನ್ನು ಮಾತ್ರ ಪಡೆಯಲಿದೆ. ಆದರೆ ಈಗಾಗಲೇ 10 ಅಂಕಗಳನ್ನು ಪಡೆದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಮುಂದಿನ ಮೂರು ಮ್ಯಾಚ್‌ಗಳಲ್ಲಿ ಒಂದು ಗೆಲುವು ದಾಖಲಿಸಿದರೆ ಒಟ್ಟು 12 ಅಂಕಗಳನ್ನು ತನ್ನದಾಗಿಸಿಕೊಳ್ಳಬಹುದು. ಈ ಮೂಲಕ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನವನ್ನು ಅಲಂಕರಿಸಿ ಫೈನಲ್‌ಗೆ ಅರ್ಹತೆ ಪಡೆಯಬಹುದು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966